ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಫೆಬ್ರವರಿ 17 ಸೋಮವಾರ 2025

₹4

ಸಂಪುಟ: 45 | ಸಂಚಿಕೆ: 300 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*



ಮೈಸೂರು ಮಿತ್ರ

ಸೋಮವಾರ 17 ಫೆಬ್ರವರಿ 2025

ನಮ್ಮ ಮೈಸೂರು ನಗರವನ್ನು ನಂಬರ್ ಒನ್ ಮಾಡೋಣ

ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ನಡೆದ ಸ್ವಚ್ಛತಾ ಅಭಿಯಾನದಲ್ಲಿ 700 ಕೆಜಿ ಕಸ ಸಂಗ್ರಹ

ಮೈಸೂರು, ಫೆ.16(ಜಿಎ)–ನಮ್ಮ ಮೈಸೂರು ನಗರವನ್ನು ಸ್ವಚ್ಛತೆಯಲ್ಲಿ ನಂಬರ್ ಒನ್ ಮಾಡೋಣ ಎಂಬ ಘೋಷವಾಕ್ಯದೊಂದಿಗೆ ಮೈಸೂರಿನ ಪಾಲಿಕೆ ಅಧಿಕಾರಿಗಳು, ವಿವಿಧ ಸಂಘ–ಸಂಸ್ಥೆ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾನುವಾರ ಬೆಳಗ್ಗೆ ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ಸ್ವಚ್ಛತಾ ಅಭಿಯಾನ ನಡೆಸಿ, 700 ಕೆಜಿ ಕಸ ಸಂಗ್ರಹಿಸಿದರು.

ಸ್ವಚ್ಛ ಸರ್ವೇಕ್ಷಣ್ ಅಂಗವಾಗಿ ಮೈಸೂರು ಮಹಾನಗರಪಾಲಿಕೆ ವತಿಯಿಂದ ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ಭಾನುವಾರ ಸ್ವಚ್ಛತಾ ಅಭಿಯಾನ ನಡೆಸಲಾಯಿತು. ಮೈಸೂರು ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸೀಫ್ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದರು.



ಸ್ವಚ್ಛ ಸರ್ವೇಕ್ಷಣ್ ಅಂಗವಾಗಿ ಮೈಸೂರು ಪಾಲಿಕೆ ವತಿಯಿಂದ ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ಸ್ವಚ್ಛತಾ ಅಭಿಯಾನ ನಡೆಯಿತು.

ಈ ವೇಳೆ ಮಹಾರಾಜ ಕಾಲೇಜು, ಯುವರಾಜ ಕಾಲೇಜು, ಜೆಎಸ್ಎಸ್ ಕಾಲೇಜು ಸೇರಿದಂತೆ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು, ಸ್ವಯಂಸೇವಕರು, ಗ್ರಾಹಕ ಪರಿಷತ್, ಯೂತ್ ಫಾರ್ ಸೇವಾ ಸೇರಿದಂತೆ ವಾಯುವಿಹಾರಿಗಳು ಸ್ವಚ್ಛತಾ ಅಭಿಯಾನಕ್ಕೆ ಸಾಥ್ ನೀಡಿದರು.

ಒಂದು ಗಂಟೆಗೂ ಹೆಚ್ಚು ಕಾಲ ಕುಕ್ಕರಹಳ್ಳಿ ಕೆರೆ ಏರಿ, ಸುತ್ತಮುತ್ತ ಇರುವ ಪ್ಲಾಸ್ಟಿಕ್ ಬಾಟಲ್, ಕವರ್ ಸೇರಿದಂತೆ ಇತರೆ 700 ಕೆಜಿಯಷ್ಟು ಕಸವನ್ನು ಸಂಗ್ರಹಿಸಿ, ನಂತರ ಚೀಲದಲ್ಲಿ ತುಂಬಿ ಪಾಲಿಕೆ ವಾಹನದ ಮೂಲಕ ಕಸ ಸಂಸ್ಕರಣ ಘಟಕಕ್ಕೆ ರವಾನಿಸಲಾಯಿತು.

ವಿಶೇಷವಾಗಿ ಸ್ವಚ್ಛತೆಯ ಸಾರವನ್ನು ಸಾರಲು ಪಾಲಿಕೆ ಅಧಿಕಾರಿಗಳು ಮುಖದ ಮೇಲೆ ಕಲಾವಿದರಿಂದ ಪರಿಸರ ಉಳಿಸಿ, ಬೆಳಸಿ, ಕಾಡು ನಾಶ ಮಾಡಬಾರದು, ಕಂಡ ಕಂಡಲ್ಲಿ ಕಸ ಹಾಕಬಾರದು, ಸಾರ್ವಜನಿಕ ಸ್ಥಳದಲ್ಲಿ ಸ್ವಚ್ಛತೆ ಕಾಪಾಡಿ, ಪ್ಲಾಸ್ಟಿಕ್ ತ್ಯಜಿಸಿ ಎಂಬ ಅನೇಕ ಪದಗಳನ್ನು ಚಿತ್ರಿಸಿಕೊಂಡು ಪ್ರದರ್ಶಿಸಿ, ಪಾಲಿಕೆ ವತಿಯಿಂದ ನಿರ್ಮಿಸಿದ್ದ ಸೆಲ್ಫಿ ಪಾಯಿಂಟ್ ಮುಂದೆ ನಿಂತು ಫೋಟೋ ಕ್ಲಿಕ್ಕಿಸಿಕೊಂಡರು. ಸ್ವಚ್ಛತಾ ಅಭಿಯಾನದಲ್ಲಿ ವಿದ್ಯಾಸಂಸ್ಥೆ, ಸಂಘ ಸಂಸ್ಥೆಗಳು ಹಾಗೂ ಪಾಲಿಕೆಯ ಅಧಿಕಾರಿ, ಸಿಬ್ಬಂದಿಗಳು ಪಾಲ್ಗೊಳ್ಳುತ್ತಿದ್ದು ಸ್ವಯಂಸೇವಕರು, ಗ್ರಾಹಕ ಪರಿಷತ್, ಯೂತ್ ಫಾರ್ ಸೇವಾ ಸೇರಿದಂತೆ ವಾಯುವಿಹಾರಿಗಳಿಗೆ ಪಾಲಿಕೆ ವತಿಯಿಂದ ಪ್ರಮಾಣ ಪತ್ರವನ್ನು ಆಯುಕ್ತರು ವಿತರಿಸಿದರು.

ಮೈಸೂರಿನ ರಾಮಕೃಷ್ಣ ಪರಮಹಂಸ ವೃತ್ತದಲ್ಲಿ ನಾಳೆ ರಾಮಕೃಷ್ಣ ಪರಮಹಂಸ ಜಾತ್ರಾ ಮಹೋತ್ಸವ



ಮೈಸೂರು, ಫೆ.16(ಜಿಎ)–ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನದಿಂದ ಮೈಸೂರಿನ ರಾಮಕೃಷ್ಣ ಪರಮಹಂಸ ವೃತ್ತದಲ್ಲಿ ಫೆ.18ರಂದು ರಾಮಕೃಷ್ಣ ಪರಮಹಂಸ ಜಾತ್ರಾ ಮಹೋತ್ಸವ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮ ಸಂಚಾಲಕ ಎಂ.ಕೆ.ಯಶವಂತ್‌ಕುಮಾರ್ ಈ ವಿಷಯ ತಿಳಿಸಿ, ಜಾತ್ರಾ ಮಹೋತ್ಸವದಲ್ಲಿ ಸಂಜೆ 5ಕ್ಕೆ ಯೋಗ ಪ್ರದರ್ಶನ, ಸ್ವಾಮೀಜಿಯ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದ ಅವರು ಸಾನ್ನಿಧ್ಯ ವಹಿಸುವರು. ವಾಗ್ಮಿಗಳಾದ ಕನ್ನಡದ ಪೂಜಾರಿ ಹೀರೆಮಗಳೂರು ಕಣ್ಣನ್, ಚಕ್ರವರ್ತಿ ಸೂಲಿಬೆಲೆ ಅತಿಥಿಗಳಾಗಿ ಭಾಗವಹಿಸುವರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಜಿ.ಟಿ.ದೇವೇಗೌಡ ಉಪಸ್ಥಿತರಿರುವರು ಎಂದರು. ಪ್ರತಿಷ್ಠಾನ ಕಾರ್ಯಾಧ್ಯಕ್ಷ ಎಸ್.ಪಿ.ರಿಯೋಗಣ್ಣ ವಾತನಾಡಿ, ಉತ್ಸವದ ಪ್ರಯುಕ್ತ ಫೆ.18ರವರೆಗೆ ಸುಯೋಗ್ ಆಸ್ಪತ್ರೆಯಲ್ಲಿ ಬಿಪಿಎಲ್ ಕಾರ್ಡ್‌ದಾರರಿಗೆ ಉಚಿತ ಆರೋಗ್ಯ ತಪಾಸಣೆ ಆಯೋಜಿಸಲಾಗಿದೆ ಎಂದರು. ಗೋಷ್ಠಿಯಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಡಿ.ಮಾದೇಗೌಡ, ಪ್ರಧಾನ ಕಾರ್ಯದರ್ಶಿ ಕೆಂಪಲಿಂಗರಾಜು, ಖಜಾಂಚಿ ಎಚ್.ಜೆಬಸವಲಿಂಗಪ್ಪ ಉಪಾಧ್ಯಕ್ಷ ಎಂ.ಬಸವಣ್ಣ, ಜಂಟಿ ಕಾರ್ಯದರ್ಶಿ ಎಸ್.ಪುರುಷೋತ್ತಮ್ ಇದ್ದರು.

ಹೆಸರು ಬದಲಾವಣೆ: ಜನನ ಪ್ರಮಾಣಪತ್ರಕ್ಕೆ ಕಾರ್ಯವಿಧಾನ ರೂಪಿಸಿದ ಹೈಕೋರ್ಟ್



ಬೆಂಗಳೂರು,ಫೆ.16–ಹೆಸರು ಬದಲಾವಣೆ ಮಾಡಲು ಬಯಸುವ ಪೋಷಕರು ಅಥವಾ ಮಕ್ಕಳು ಎದುರಿಸುತ್ತಿರುವ ತೊಂದರೆಗಳನ್ನು ಗಮನದಲ್ಲಿಟ್ಟುಕೊಂಡು, ಜನನ ಮತ್ತು ಮರಣ ನೋಂದಣಿ ಕಾಯ್ದೆ ಅಥವಾ ನಿಯಮಗಳಿಗೆ ತಿದ್ದುಪಡಿ ತರುವವರೆಗೆ ಹೈಕೋರ್ಟ್, ಜನನ ಪ್ರಮಾಣಪತ್ರಗಳಲ್ಲಿ ಅದಕ್ಕಾಗಿ ಒಂದು ಕಾರ್ಯವಿಧಾನವನ್ನು ರೂಪಿಸಿದೆ.

ಉಡುಪಿ ಜಿಲ್ಲೆಯ ಅಂಬಲಪಾಡಿಯ ಎರಡು ವರ್ಷದ ಅದ್ವಿತ್ ಭಟ್ ಅವರ ತಾಯಿ ದೀಪಿಕಾ ಭಟ್ ಅವರು ಸಲ್ಲಿಸಿದ ಅರ್ಜಿಯನ್ನು ಮಾನ್ಯ ಮಾಡುವ ಮೂಲಕ ನ್ಯಾಯಮೂರ್ತಿ ಎನ್.ಎಸ್.ಸಂಜಯ್ ಗೌಡ ಈ ಆದೇಶವನ್ನು ಹೊರಡಿಸಿದರು. ಉಡುಪಿ ನಗರ ಪುರಸಭೆಯ ಜನನ ಮತ್ತು ಮರಣ ನೋಂದಣಿ ಅಧಿಕಾರಿಗಳು ಜನನ ಪ್ರಮಾಣಪತ್ರದಲ್ಲಿ ಶ್ರೀಜಿತ್ ಭಟ್ ಎಂದು ಹೆಸರನ್ನು ಬದಲಾಯಿಸಲು ನಿರಾಕರಿಸಿ, ನವೆಂಬರ್ 4, 2023ರಂದು ಹೊರಡಿಸಿದ ಅನುಮೋದನೆಯನ್ನು ಪ್ರಶ್ನಿಸಿ ಅವರು ಅರ್ಜಿ ಸಲ್ಲಿಸಿದ್ದರು.

ವಾಸ್ತವವಾಗಿ, ಕಾನೂನು ಆಯೋಗವು ಜುಲೈ 20, 2013 ರಂದು ಸಲ್ಲಿಸಲಾದ ಹೆಸರು ಬದಲಾವಣೆಗೆ ಸಂಬಂಧಿಸಿದ ತನ್ನ 24ನೇ ವರದಿಯಲ್ಲಿ ಕಾಯ್ದೆ ಮತ್ತು ನಿಯಮಗಳಿಗೆ ತಿದ್ದುಪಡಿಗಳನ್ನು ಬೆಂಬಲಿಸಿದೆ ಎಂದು ಕೋರ್ಟ್ ಹೇಳಿದೆ.

ಆದರೆ ಆಡಳಿತ, ಈ ವಿಷಯವನ್ನು ಮುಂದಕ್ಕೆ ತೆಗೆದುಕೊಂಡಿಲ್ಲ. ಹೆಸರು ಬದಲಾವಣೆ ಬಯಸುವವರಿಗೆ ಯಾವುದೇ ತೊಂದರೆಯಾಗದಂತೆ ಸರ್ಕಾರ ಖಚಿತಪಡಿಸಬೇಕು ಮತ್ತು ಅದಕ್ಕೆ ಅನುಗುಣವಾಗಿ ಅವರ ದಾಖಲೆಗಳನ್ನು ಬದಲಾಯಿಸುವ ಕಾರ್ಯವಿಧಾನವನ್ನು ರೂಪಿಸಬೇಕು ಎಂದು ಹೈಕೋರ್ಟ್ ಹೇಳಿದೆ.

ಎಸಿಸಿಇ(ಐ) ಮೈಸೂರು ಕೇಂದ್ರದಿಂದ ಕೆಪಿಸಿಇಎ ಸ್ಟೀರಿಂಗ್ ಕನ್ಸೋರ್ಟಿಯಂ ಪದಾಧಿಕಾರಿಗಳಿಗೆ ಸನ್ಮಾನ



ಕನ್ಸಲ್ಟಿಂಗ್ ಸಿವಿಲ್ ಎಂಜಿನಿಯರ್‌ಗಳ ಸಂಘದ ಮೈಸೂರು ಕೇಂದ್ರದ ವತಿಯಿಂದ ಕೆಪಿಸಿಇಎ ಸ್ಟೀರಿಂಗ್ ಕನ್ಸೋರ್ಟಿಯಂ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.

ಮೈಸೂರು, ಫೆ.16–ಕನ್ಸಲ್ಟಿಂಗ್ ಸಿವಿಲ್ ಎಂಜಿನಿಯರ್‌ಗಳ ಸಂಘ, ಮೈಸೂರು ಕೇಂದ್ರದ ವತಿಯಿಂದ ಕರ್ನಾಟಕ ವೃತ್ತಿಪರ ಸಿವಿಲ್ ಎಂಜಿನಿಯರ್‌ಗಳ ಕಾಯ್ದೆ ಜಾಗೃತಿ ಸಭೆ ಮತ್ತು ಕೆಪಿಸಿಇಎ ಸ್ಟೀರಿಂಗ್ ಕನ್ಸೋರ್ಟಿಯಂ ಪದಾಧಿಕಾರಿಗಳಿಗೆ ಸನ್ಮಾನ ಸಮಾರಂಭವನ್ನು ಮೈಸೂರಿನ ಎನ್‌ಐಇ ಕಾಲೇಜಿನ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.


ಕಾರ್ಯಕ್ರಮವನ್ನು ಎನ್‌ಐಇ ಉಪಪ್ರಾಂಶುಪಾಲ ಡಾ.ಕೆ.ಸಿ.ಮಂಜುನಾಥ್ ಮತ್ತು ಕೆಪಿಸಿಇಎ–ಎಸ್‌ಸಿ ಅಧ್ಯಕ್ಷ ಶ್ರೀಕಾಂತ್ ಎಸ್.ಚನ್ನಲ್ ಉದ್ಘಾಟಿಸಿದರು. ಕರ್ನಾಟಕದಲ್ಲಿ ಸಿವಿಲ್ ಎಂಜಿನಿಯರಿಂಗ್ ವೃತ್ತಿಯನ್ನು ನಿಯಂತ್ರಿಸುವ ಅಗತ್ಯವನ್ನು ಡಾ.ಮಂಜುನಾಥ್ ಒತ್ತಿ ಹೇಳಿದರು. ಕಾರ್ಯಕ್ರಮದಲ್ಲಿ ಡಾ.ಮನಮೋಹನ್ ಆರ್.ಕಲ್ಗಲ್, ಶ್ರೀಕಾಂತ್ ಎಸ್.ಚನ್ನಲ್, ವೃತ್ತಿಪರ ಎಂಜಿನಿಯರ್‌ಗಳು, ಸಲಹೆಗಾರರು, ಅಧ್ಯಾಪಕರು, ವಿದ್ಯಾರ್ಥಿಗಳು ಮತ್ತು ಕೆಪಿಸಿಇಎ–ಎಸ್‌ಸಿ ಪದಾಧಿಕಾರಿಗಳಾದ ಡಿ.ರಂಗನಾಥ್, ಟಿ.ಎಸ್.ರಾಜಗೋಪಾಲನ್, ಡಾ.ಎಂ.ಯು.ಅಶ್ವತ್, ಡಾ.ಸನತ್ ಕುಮಾರ್ ರಾಜಮನೆ, ರಾಜೇಶ್ ಕಣ್ಣನ್ ಸೇರಿದಂತೆ ಹಲವರು ಭಾಗವಹಿಸಿದ್ದರು. ಕೆಪಿಸಿಇವಿ ಯಶಸ್ವಿ ಅನುಷ್ಠಾನಕ್ಕಾಗಿ ಕಾರ್ಯತಂತ್ರದ ಮಾರ್ಗಸೂಚಿ ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿದ್ದವು. ಎಸಿಸಿಇ (ಐ) ಅಧ್ಯಕ್ಷ ಡಾ.ಎಸ್. ರವಿರಾಜ್, ಕಾರ್ಯದರ್ಶಿ ಡಾ.ಜಿ.ಪಿ. ಚಂದ್ರಧರ ಮತ್ತು ಇತರ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮೈಸೂರು ಪಾಲಿಕೆ ವ್ಯಾಪ್ತಿಯಲ್ಲಿ ಇ–ಆಸ್ತಿ ಕರಡು ದಾಖಲೆ ಪರಿಶೀಲನೆ, ತಿದ್ದುಪಡಿಗೆ ಅವಕಾಶ

ಮೈಸೂರು, ಫೆ.16(ಎಸ್‌ಬಿಡಿ)– ಇ–ಆಸ್ತಿ ಕರಡು ದಾಖಲೆ ಪರಿಶೀಲಿಸಿ, ತಿದ್ದುಪಡಿ ಅಥವಾ ಮಾರ್ಪಾಡುಗಳಿದ್ದಲ್ಲಿ ಫೆ.25ರೊಳಗೆ ಸರಿಪಡಿಸಿಕೊಳ್ಳುವಂತೆ ಮೈಸೂರು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಇ–ಆಸ್ತಿ ತಂತ್ರಾಂಶದ ಮೂಲಕ ಆಸ್ತಿಗಳ ಮಾಲೀಕರಿಗೆ ನಮೂನೆ–2/3 ನೀಡಲು ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಸೂಚನೆ ನೀಡಿದೆ. ಅದರಂತೆ ಮೈಸೂರು ನಗರದ ಸಾರ್ವಜನಿಕರಿಗೆ ಪಾಲಿಕೆಯಿಂದ ಇ–ಆಸ್ತಿ ತಂತ್ರಾಂಶದ ಮೂಲಕ ನಮೂನೆ–2/3 ನೀಡಲಾಗುತ್ತಿದ್ದು, ಈ ಸಂಬಂಧ ವೆಬ್‌ಸೈಟ್ ಮೂಲಕ ಆಸ್ತಿ ಮಾಲೀಕರಿಗೆ ಮಾಹಿತಿ ಪರಿಶೀಲನೆಗೆ ಅವಕಾಶ ಕಲ್ಪಿಸಲಾಗಿದೆ. ಅಧಿಕೃತ ಆಸ್ತಿ ಮಾಲೀಕರು ಹಾಗೂ ನಾಗರಿಕರು http://aasthikanaja.karnatakasmartcity.in/kmf24/ ಜಾಲಕ್ಕೆ ಭೇಟಿ ನೀಡಿ, ತಮ್ಮ ಆಸ್ತಿ ಸಂಖ್ಯೆಯನ್ನು ನಮೂದಿಸಿದರೆ ಇ–ಆಸ್ತಿಯ ಕರಡು ಪ್ರತಿಯನ್ನು ವೀಕ್ಷಿಸಬಹುದು. ಅಗತ್ಯವಿದ್ದರೆ ಆ ಪ್ರತಿಯನ್ನು ಡೌನಲೋಡ್ ಮಾಡಿಕೊಳ್ಳಲು ಅವಕಾಶವಿದೆ. ಅದರಲ್ಲಿ ಯಾವುದೇ ಮಾರ್ಪಾಡು ಅಥವಾ ತಿದ್ದುಪಡಿಗಳು ಇದ್ದಲ್ಲಿ ಸಂಬಂಧಪಟ್ಟ ವಲಯ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಫೆ.25ರೊಳಗೆ ಅರ್ಜಿ ಸಲ್ಲಿಸಿ, ದಾಖಲೆಗಳನ್ನು ಸರಿಪಡಿಸಿಕೊಳ್ಳಬಹುದು ಎಂದು ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಫೆ.16–ಫೆಬ್ರವರಿ 18ರಂದು ಬೆಳಗ್ಗೆ 10ರಿಂದ ಸಂಜೆ 6ವರೆಗೆ 66/11 ಕೆ.ವಿ ಎಫ್.ಟಿ.ಎಸ್ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ರಾಜೇಂದ್ರ ಫೀಡರ್‌ನ ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ ರಾಜೇಂದ್ರನಗರ, ಸುಭಾಷ್‌ನಗರ, ಓ.ಡಿ ಬ್ಲಾಕ್, ಕುರಿಮಂಡಿ, ರಾಜೇಂದ್ರನಗರ ಹೊಸ ಬಡಾವಣೆ ಹಾಗೂ ಸುತ್ತ–ಮುತ್ತ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.

ನಿಧನ



ಕೆ.ಪುರುಷೋತ್ತಮ್

ಮೈಸೂರು, ಫೆ.16– ಮೈಸೂರು ಲಕ್ಷ್ಮಿಕಾಂತನಗರದ ನಿವಾಸಿ ಕೆ.ಪುರುಷೋತ್ತಮ್(56) ಅವರು ಭಾನುವಾರ ನಿಧನರಾದರು.

ಇವರು ಪತ್ನಿ ಮೀನಾಕ್ಷಿ, ಪುತ್ರ ದೀಪಕ್, ಪುತ್ರಿ ಉಷಾ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಹೆಬ್ಬಾಳು ಸಿಐಟಿಬಿ ಛತ್ರದ ಬಳಿಯ ರುದ್ರಭೂಮಿಯಲ್ಲಿ ಸೋಮವಾರ ಬೆ.11ಕ್ಕೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿದೆ.

ಫೆ.20ರಿಂದ ಖಾಸಗಿ ಬಸ್ ಪ್ರಯಾಣ ದರ ಹೆಚ್ಚಳ

ಮೈಸೂರು,ಫೆ.16(ಎಸ್‌ಬಿಡಿ)–ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಖಾಸಗಿ ಬಸ್‌ಗಳ ಮಾಲೀಕರ ಸಭೆಯಲ್ಲಿ ಕೈಗೊಂಡಿರುವ ನಿರ್ಣಯದಂತೆ ಫೆ.20ರಿಂದ ಪರಿಷ್ಕೃತ ಪ್ರಯಾಣ ದರವು ಜಾರಿಗೆ ಬರಲಿದೆ.

ಶಕ್ತಿ ಯೋಜನೆ ಜಾರಿಯಾದಾಗಿನಿಂದ ಖಾಸಗಿ ಬಸ್ ಮಾಲೀಕರು ಸಂಕಷ್ಟಕ್ಕೆ ಸಿಲುಕಿದ್ದು, ನಷ್ಟವನ್ನು ಸರಿದೂಗಿಸಿಕೊಳ್ಳುವ ನಿಟ್ಟಿನಲ್ಲಿ ಮೈಸೂರು ಸಂಘದ ಅಧ್ಯಕ್ಷ ಕೆ.ಶಿವಲಿಂಗು ಹಾಗೂ ಚಾಮರಾಜನಗರ ಸಂಘದ ಅಧ್ಯಕ್ಷ ಅನ್ವರ್‌ಪಾಷ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದರ ಏರಿಕೆ ತೀರ್ಮಾನ ಕೈಗೊಂಡಿದ್ದು, ಸರಾಸರಿ ಶೇ.5ರಷ್ಟು ಪ್ರಯಾಣ ದರ ಏರಿಕೆ ಆಗಬಹುದು ಎನ್ನಲಾಗಿದೆ.

ಕೋವಿಡ್ ಪರಿಣಾಮ ಖಾಸಗಿ ಬಸ್ ಸೇವೆ ಉದ್ಯಮವು ನಷ್ಟಕ್ಕೆ ಸಿಲುಕಿದ್ದರಿಂದ 2022ರಲ್ಲಿಯೇ ಪ್ರಯಾಣ ದರ ಏರಿಕೆ ತೀರ್ಮಾನಕ್ಕೆ ಬರಲಾಗಿತ್ತಾದರೂ ಪೂರ್ಣವಾಗಿ ಜಾರಿಗೊಳಿಸಿರಲಿಲ್ಲ. ಇದೀಗ ಮತ್ತೊಮ್ಮೆ ದರ ಏರಿಕೆಯನ್ನು ಸಂಘವು ಅನುಮೋದಿಸಿದೆ. ದಿನೇ ದಿನೆ ಡೀಸೆಲ್ ದರ ಏರಿಕೆ ಜೊತೆಗೆ ಬಸ್ ಬಿಡಿಭಾಗಗಳು, ವಾಹನ ವಿಮೆ ಹಾಗೂ ಟೋಲ್ ಹೆಚ್ಚಳದ ಹಿನ್ನೆಲೆಯಲ್ಲಿ ಪ್ರಯಾಣ ದರ ಏರಿಕೆ ಅನಿವಾರ್ಯ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ. ಕಳೆದ ಒಂದೂವರೆ ವರ್ಷದಿಂದ ಬಹುತೇಕ ಮಹಿಳಾ ಪ್ರಯಾಣಿಕರು ಖಾಸಗಿ ಬಸ್‌ಗಳಿಂದ ದೂರವಾಗಿದ್ದಾರೆ. ನಿತ್ಯ ಓಡಾಡುತ್ತಿದ್ದ ಶಿಕ್ಷಕರು, ಬ್ಯಾಂಕ್ ಹಾಗೂ ಸರ್ಕಾರಿ ಉದ್ಯೋಗಿಗಳೂ ಕಡಿಮೆ ಆಗಿದ್ದಾರೆ. ಇದೆಲ್ಲದರಿಂದ ಒಟ್ಟಾರೆ ಆದಾಯ ಕುಸಿಯುತ್ತಿದೆ. ಶುಭ ಸಮಾರಂಭಗಳು, ಪ್ರವಾಸ, ಸಮಾವೇಶಗಳ ಸೇವೆಯಿಂದ ಖಾಸಗಿ ಬಸ್ ಉದ್ಯಮ ಉಸಿರಾಡುತ್ತಿದೆ. ಪ್ರಯಾಣ ದರ ಏರಿಕೆ ಮಾಡಿದರೆ ಸ್ವಲ್ಪ ಸುಧಾರಿಸಿಕೊಳ್ಳಬಹುದು ಎಂದು ಹೇಳಿದ್ದಾರೆ.

ಅಧ್ಯಯನ ಪ್ರವಾಸದ ಹೆಸರಿನಲ್ಲಿ ಶಾಸಕರ ತೀರ್ಥಯಾತ್ರೆ

ಭರವಸೆ ಸಮಿತಿ ಪ್ರವಾಸ ಚರ್ಚೆಗೆ ಗ್ರಾಸ

ಬೆಂಗಳೂರು, ಫೆ.16–ವಿಧಾನಪರಿಷತ್ ಭರವಸೆ ಸಮಿತಿ ಸದಸ್ಯರ ಅಧ್ಯಯನ ಪ್ರವಾಸ ಇದೀಗ ಚರ್ಚೆಗೆ ಗ್ರಾಸವಾಗಿದೆ. ಪರಿಷತ್ ಜೆಡಿಎಸ್ ಸದಸ್ಯ ಟಿ.ಎ.ಶರವಣ ನೇತೃತ್ವದಲ್ಲಿ ಸದಸ್ಯರು ದೆಹಲಿ ಮತ್ತು ಉತ್ತರಪ್ರದೇಶಕ್ಕೆ ತೆರಳಲಿದ್ದಾರೆ.

ಆರು ದಿನಗಳ ಪ್ರವಾಸದಲ್ಲಿ ಮಹಾಕುಂಭ ಸೇರಿದಂತೆ ಉತ್ತರ ಪ್ರದೇಶದಲ್ಲಿ ತೀರ್ಥಯಾತ್ರೆ ನಡೆಸಲಿದ್ದಾರೆ. ಇದು ಇದೀಗ ಚರ್ಚೆಗೆ ಗ್ರಾಸವಾಗಿದೆ.

ಭಾನುವಾರದಿಂದ ಫೆಬ್ರವರಿ 22ವರೆಗೆ ಉತ್ತರ ಪ್ರದೇಶ ಮತ್ತು ದೆಹಲಿಗೆ ಸಮಿತಿ ಸದಸ್ಯರು ಪ್ರವಾಸ ಕೈಗೊಂಡಿದ್ದಾರೆ. ಶರವಣ ಟಿಎ ಅಧ್ಯಕ್ಷತೆಯ ಈ ಸಮಿತಿಯಲ್ಲಿ ಹಣಮಂತ್ ನಿರಾಣಿ, ಪ್ರತಾಪಸಿಂಹ ನಾಯಕ್, ಡಿ.ಎಸ್.ಅರುಣ್, ಕೆ.ಎಸ್.ನವೀನ್, ಮಂಜುನಾಥ್ ಭಂಡಾರಿ, ತಿಪ್ಪಣ್ಣಪ್ಪ ಕಮಕನೂರ ಇದ್ದಾರೆ. ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಇಂಡಿಗೋ ವಿಮಾನದ ಮೂಲಕ ಆಗ್ರಾಗೆ ತಂಡ ತೆರಳಿದ್ದಾರೆ. ಅಲ್ಲಿಂದ ಸ್ಥಳೀಯವಾಗಿ ಕೆಲವೊಂದು ಪ್ರದೇಶಗಳಿಗೆ ಭೇಟಿ ನೀಡಿ ಸರ್ಕಾರಿ ಅತಿಥಿ ಗೃಹದಲ್ಲಿ ವಾಸ್ತವ್ಯ ಹೂಡಲಿದ್ದಾರೆ.



ಟಿ.ಎ.ಶರವಣ

ಸೋಮವಾರ ರಸ್ತೆ ಮೂಲಕವಾಗಿ ಆಗ್ರಾದಿಂದ ದೆಹಲಿಗೆ ತೆರಳಲಿದ್ದಾರೆ. ದೆಹಲಿಯಲ್ಲಿ ರಾಜ್ಯಸಭೆ ಭರವಸೆಗಳ ಸಮಿತಿ ಸದಸ್ಯರ ಜೊತೆಗೆ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ನಂತರದಲ್ಲಿ ಕರ್ನಾಟಕ ಭವನದಲ್ಲಿ ವಾಸ್ತವ್ಯ ಹೂಡಲಿದ್ದಾರೆ. 3ನೇ ದಿನ ದೆಹಲಿಯಿಂದ ಉತ್ತರಪ್ರದೇಶಕ್ಕೆ ಸಮಿತಿ ತಂಡ ತೆರಳಲಿದೆ.

ಭರವಸೆ ಸಮಿತಿ ಎಂದರೇನು

ವಿಧಾನಮಂಡಲ ಕಲಾಪದಲ್ಲಿ ಮಸೂದೆಗಳು, ನಿರ್ಣಯಗಳು, ಸದಸ್ಯರ ಪ್ರಶ್ನೆಗಳ ಕುರಿತಾಗಿ ಚರ್ಚೆ ನಡೆಯುವ ಸಂದರ್ಭದಲ್ಲಿ ಸಚಿವರು ನೀಡುವ ಭರವಸೆಗಳು ಮತ್ತು ಆಶ್ವಾಸನೆಗಳು ಈಡೇರಿದೆಯೇ ಎಂಬುವುದನ್ನು ಪರಿಶೀಲನೆ ನಡೆಸುವ ಹೊಣೆ ಈ ಭರವಸೆ ಸಮಿತಿಗೆ ಇದೆ.

ವಾರಣಾಸಿಯಲ್ಲಿ ಸ್ಥಳೀಯವಾಗಿ ಭೇಟಿ ಕೊಡಲಿದೆ. 4ನೇ ದಿನ ವಾರಣಾಸಿಯಿಂದ ಪ್ರಯಾಗ್ ರಾಜ್‌ಗೆ ತೆರಳಿ ಮಹಾ ಕುಂಭದಲ್ಲಿ ಭಾಗಿಯಾಗಲಿದ್ದಾರೆ. 5ನೇ ದಿನ ಸಮಿತಿ ಸದಸ್ಯರು ಅಯೋಧ್ಯೆಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಸರ್ಕಾರಿ ಅತಿಥಿಗೃಹದಲ್ಲಿ ವಾಸ್ತವ್ಯ ಹೂಡಿ 6ನೇ ದಿನ ಬೆಂಗಳೂರಿಗೆ ವಾಪಸ್ ಆಗಲಿದ್ದಾರೆ.

ಪತ್ರಕರ್ತ ಹೆಚ್.ದೇಶಾದ್ರಿ ಸೇರಿದಂತೆ ಏಳು ಮಂದಿ ರಾಜ್ಯ ಚಲನಚಿತ್ರ ಅಕಾಡೆಮಿ ಸದಸ್ಯರಾಗಿ ನೇಮಕ

ಬೆಂಗಳೂರು, ಫೆ.16– ಕರ್ನಾಟಕ ಚಲನಚಿತ್ರ ಅಕಾಡೆಮಿ ನೂತನ ಸದಸ್ಯರಾಗಿ ಏಳು ಮಂದಿಯನ್ನು ನೇಮಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಪತ್ರಿಕೋದ್ಯಮ, ಸಿನಿಮಾ ಕ್ಷೇತ್ರದ ಪ್ರತಿನಿಧಿಗಳನ್ನು ಸಾಮಾನ್ಯ ಸಮಿತಿಗೆ ಸದಸ್ಯರನ್ನು ನೇಮಿಸಲಾಗಿದೆ. ಹಿರಿಯ ಪತ್ರಕರ್ತ ಕೊಪ್ಪಳದ ಸಾವಿತ್ರಿ ಮಜುಂದಾರ್, ಶಿವಮೊಗ್ಗದ ನಮ್ಮ ನಾಡು ಕನ್ನಡ ಡೈಲಿಯ ಸಿನಿಮಾ ವಿಶ್ಲೇಷಕ ಹೆಚ್.ದೇಶಾದ್ರಿ, ಚಿದಾನಂದ ಪಟೇಲ್, ಸಿನಿಮಾ ಕಲಾವಿದರಾದ ನಿಖಿತಾ ಸ್ವಾಮಿ, ಸಿನಿಮಾ ಪ್ರಚಾರ ಡಿ.ಜಿ.ವೆಂಕಟೇಶ್, ಚಿತ್ರೋದ್ಯಮಿ ವಿಷ್ಣುಕುಮಾರ್, ಸಿನಿಮಾ ತಂತ್ರಜ್ಞ ಐವಾನ್ ಡಿಸಿಲ್ವ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಲಾಗಿದೆ. ಸರ್ಕಾರದ ಮುಂದಿನ ಆದೇಶದವರೆಗೂ ಸದಸ್ಯರು ರಾಜ್ಯ ಚಲನಚಿತ್ರ ಅಕಾಡೆಮಿ ಸಮಿತಿ ಸದಸ್ಯರಾಗಿ ಕಾರ್ಯನಿರ್ವಹಿಸಲಿದ್ದಾರೆ.

ನಿರ್ದೇಶಕರ ಅವಿರೋಧ ಆಯ್ಕೆ

ಮೈಸೂರು, ಫೆ. 16– ಮೈಸೂರಿನ ದಿವ್ಯ ಸಮಾಜ ನಿರ್ಮಾಣ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ 2025–2030ರ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಕ್ಕೆ ಎಸ್.ಶ್ರೀಧರ್, ಡಿ.ಎಸ್.ವಿಶ್ವನಾಥ್, ಎನ್. ಸುರೇಶ್, ಎನ್.ಎಂ. ಬಾಬು, ನಾಗಭೂಷಣ, ಎನ್.ಜಿ. ಕಾರ್ತಿಕ್, ಬಿ.ಎಸ್. ಶ್ರೀನಾಥ್, ಬಿ. ಗಣೇಶ್, ಎಸ್. ಸಂಜಯ್ ಬಾಬು, ಎಸ್. ಮಹೇಶ್, ಶ್ರೀಮತಿ ಮಹಾಲಕ್ಷ್ಮಿ ಆರ್. ಮತ್ತು ಶ್ರೀಮತಿ ಆರ್. ಮಾನಸ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬಾಪೂಜಿ ಗೃಹ ನಿರ್ಮಾಣ ಸಹಕಾರ ಸಂಘ : ಬಾಪೂಜಿ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಮುಂದಿನ 5 ವರ್ಷಗಳ ಆಡಳಿತ ಮಂಡಳಿಗೆ ಪ್ರಭುಸ್ವಾಮಿ, ಎನ್. ಬಸಪ್ಪ, ಡಾ.ಡಿ.ರೇವಣ್ಣಸಿದ್ದಯ್ಯ, ಬಿ.ರಾಜಪ್ಪ, ಮಹದೇವಸ್ವಾಮಿ, ಎಂ.ಕೆ. ಶಿವಕುಮಾರ್, ರಾಜಶೇಖರ್, ಡಿ. ಬಾಲಕೃಷ್ಣ, ಬಿ.ಎಸ್.ಮೀನಾಕ್ಷಿ ಮತ್ತು ಶೈಲಜಾ ಎಸ್.ಕುಮಾರ್ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಮೈಸೂರಿನಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್‌ಗೆ ಅಭಿನಂದನೆ...



ಕಾರ್ಯನಿಮಿತ್ತ ಇತ್ತೀಚೆಗೆ ಮೈಸೂರಿಗೆ ಆಗಮಿಸಿದ ಗೃಹ ಮಂತ್ರಿ ಡಾ.ಜಿ.ಪರಮೇಶ್ವರ್ ಅವರನ್ನು ಕೃಷ್ಣರಾಜ ಕ್ಷೇತ್ರದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಣಿಪಾಲ್ ಆಸ್ಪತ್ರೆಯ ಬಳಿ ಹೂಗುಚ್ಛ ನೀಡಿ ಸ್ವಾಗತಿಸಿದರು. ಈ ವೇಳೆ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಉಪಾಧ್ಯಕ್ಷ ಪುಟ್ಟಸ್ವಾಮಿ, ಆಶ್ರಯ ಸಮಿತಿ ಸದಸ್ಯರಾದ ಗುಣಶೇಖರ್, ಮಹಮದ್ ಫಾರೂಕ್, ಮುಖಂಡರಾದ ಸಕ್ಕಳ್ಳಿ ಬಸವರಾಜು, ರಾಹುಲ್ ಕುಂಬ್ರಳ್ಳಿ, ಗೋವಿಂದರಾಜು, ರಾಮನ್, ಭಾಗ್ಯ ಚಂದ್ರಶೇಖರ್ ಮತ್ತಿತರರಿದ್ದರು.


ಎಐಸಿಸಿ ಪುನರ್ರಚನೆ: ಮತ್ತೆ ರಾಷ್ಟ್ರ ರಾಜಕಾರಣಕ್ಕೆ ಬಿ.ಕೆ.ಹರಿಪ್ರಸಾದ್; ಸೈಯ್ಯದ್ ನಾಸಿರ್‌ಗೆ ಜಮ್ಮು–ಕಾಶ್ಮೀರ ಉಸ್ತುವಾರಿಯಾಗಿ ನೇಮಕ





ನವದೆಹಲಿ: ಕಾಂಗ್ರೆಸ್ ತನ್ನ ಪದಾಧಿಕಾರಿಗಳಲ್ಲಿ ಪ್ರಮುಖ ಬದಲಾವಣೆ ಮಾಡಿದೆ. ಹಲವು ರಾಜ್ಯಗಳ ಉಸ್ತುವಾರಿ ಬದಲಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆದೇಶ ಹೊರಡಿಸಿದ್ದಾರೆ. ರಾಜ್ಯಸಭಾ ಸದಸ್ಯ ಸಯ್ಯದ್ ನಾಸಿರ್ ಹುಸೇನ್ ಅವರನ್ನು ಜಮ್ಮು ಮತ್ತು ಕಾಶ್ಮೀರದ ಪ್ರಧಾನ ಕಾರ್ಯದರ್ಶಿಯಾಗಿ ಎಐಸಿಸಿ ನೇಮಿಸಿದೆ. ಹರಿಯಾಣ ರಾಜ್ಯದ ಪಕ್ಷದ ಉಸ್ತುವಾರಿಯಾಗಿ ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರನ್ನು ನೇಮಿಸಲಾಗಿದೆ. ಕಾರ್ಯಕಾರಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಪಕ್ಷದ ಸಂಘಟನೆಯ ಪುನರ್‌ರಚನೆ ಪ್ರಕ್ರಿಯೆಗೆ ಪಕ್ಷ ಚಾಲನೆ ನೀಡಿದೆ. ಛತ್ತೀಸಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರಿಗೂ ಪ್ರಧಾನ ಕಾರ್ಯದರ್ಶಿ ಹುದ್ದೆ ನೀಡಲಾಗಿದೆ. ಹರಿಪ್ರಸಾದ್ ದಶಕಗಳ ಕಾಲ ರಾಷ್ಟ್ರ ರಾಜಕಾರಣದಲ್ಲಿದ್ದು ಹಲವು ರಾಜ್ಯಗಳ ಉಸ್ತುವಾರಿಗಳಾಗಿ ಕಾರ್ಯನಿರ್ವಹಿಸಿದ್ದರು. 3 ವರ್ಷಗಳ ಹಿಂದೆ ರಾಜ್ಯ ರಾಜಕಾರಣಕ್ಕೆ ಬಂದಿದ್ದರು. ರಾಷ್ಟ್ರ ರಾಜಕಾರಣದಲ್ಲಿ ಅವರ ಅನುಭವವನ್ನು ಮತ್ತೆ ಬಳಸಿಕೊಳ್ಳಲು ಪಕ್ಷ ತೀರ್ಮಾನಿಸಿದೆ. ಕೃಷ್ಣ ಅಲ್ಲಾವರು ಅವರನ್ನು ಬಿಹಾರ, ಹಿಮಾಚಲ ಪ್ರದೇಶ ಮತ್ತು ಚಂಡೀಗಢಕ್ಕೆ ರಜನಿ ಪಾಟೀಲ್, ಮಧ್ಯಪ್ರದೇಶಕ್ಕೆ ಹರೀಶ್ ಚೌಧರಿ ಅವರನ್ನು ಉಸ್ತುವಾರಿಯಾಗಿ ನೇಮಿಸಲಾಗಿದೆ. ಮುಂದಿನ ವರ್ಷ ಬಿಹಾರ ಚುನಾವಣೆ ನಡೆಯಲಿದೆ. ಕಾಂಗ್ರೆಸ್ ನಾಯಕ ಅಜಯ್‌ಕುಮಾರ್ ಲಲ್ಲು ಅವರನ್ನು ಒಡಿಶಾ, ಕೆ.ರಾಜು ಅವರನ್ನು ಜಾರ್ಖಂಡ್, ಮೀನಾಕ್ಷಿ ನಟರಾಜನ್ ಅವರನ್ನು ತೆಲಂಗಾಣ ಮತ್ತು ಗಿರೀಶ್ ಚೋಡಂಕರ್ ಅವರನ್ನು ತಮಿಳುನಾಡು ಮತ್ತು ಪುದುಚೇರಿಯ ಉಸ್ತುವಾರಿಯನ್ನಾಗಿ ನೇಮಿಸಲಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.02.2025 ಸೋಮವಾರ, ಮಳೆ ನಕ್ಷತ್ರ: ಧನಿಷ್ಠ 06.02.2025 ರಿಂದ 18.02.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಚಿತ್ತ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

- **ಜೆಎಸ್ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಥೈರಾಯಿಡ್ ಸಮಸ್ಯೆ, ಗ್ಯಾಸ್ಟ್ರೈಟಿಸ್ (ಆಮ್ಲಪಿತ್ತ) ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.
- **ಶ್ರೀರಾಮ ದೇವಸ್ಥಾನ, ಶ್ರೀರಾಮಮಂದಿರ:** 39ನೇ ವಾರ್ಷಿಕೋತ್ಸವ, ಬೆಳಗ್ಗೆಯಿಂದ ನವಗ್ರಹ ಹೋಮ, ಅಷ್ಟ ದಿಕ್ಪಾಲಕರ ಹೋಮ, ದುರ್ಗಾ ಹೋಮ, ಗಣಪತಿ ಹೋಮ, ವಾಸ್ತು ಹೋಮ, ಕ್ಷೇತ್ರಪಾಲಕ ಹೋಮ, ಮೃತ್ಯುಂಜಯ ಹೋಮ, ಶ್ರೀರಾಮ ತಾರಕ ಹೋಮ, ಸುಬ್ರಹ್ಮಣ್ಯಸ್ವಾಮಿ ಹೋಮ, ಸುದರ್ಶನ ಹೋಮ, ಪೂರ್ಣಾಹುತಿ, ಮಧ್ಯಾಹ್ನ 1 ಗಂಟೆಗೆ ಮಹಾಮಂಗಳಾರತಿ, ತೀರ್ಥ, ಮಹಾಪ್ರಸಾದ, ಭೋಜನದ ವ್ಯವಸ್ಥೆ, ಸ್ಥಳ: ದೇವಸ್ಥಾನದ ಪ್ರಾಂಗಣ, ಕಾಳಮ್ಮನ ಗುಡಿ ಬೀದಿ, ಮಂಡಿಮೊಹಲ್ಲಾ.
- **ಹರಿದಾಸ ಸಂಗೀತ ಸಾಹಿತ್ಯೋತ್ಸವ ಸಮಿತಿ (ಮೈಸೂರು):** ಗಾನ ಸಿರಿ–ವೇದಾಂತ ಲಹರಿ ಭಾಗ–12, ಶ್ರೀ ವಾದಿರಾಜ ಗುರುಸಾರ್ವಭೌಮ ವಿರಚಿತ ರುಗ್ಮಿಣೀಶ ವಿಜಯ ಸಪ್ತಾಹ, ವಿದ್ವಾನ್ ಶ್ರೀ ಅನಂತ ಕುಲಕರ್ಣಿ ಅವರಿಂದ ಗಾಯನ, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಸಂಜೆ 5ರಿಂದ ರಾತ್ರಿ 8.30ರವರೆಗೆ
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.
- **ಕದಂಬ ರಂಗವೇದಿಕೆ (ಮೈಸೂರು), ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ (ಬೆಂಗಳೂರು):** ಕದಂಬ ರಂಗ ಹಬ್ಬ, ಮೈಸೂರಿನ ಸಂಚಲನದಿಂದ 'ಚಿತ್ರತುರಗ ನ್ಯಾಯ ಅರ್ಥಾತ್ ಕೀರ್ತಿಯ ಅವಾಂತರ' ನಾಟಕ, ಮೂಲ: ಅರ್ನಾಲ್ಡ್ ಬೆನೆಟ್, ಕನ್ನಡಕ್ಕೆ: ಶ್ರೀಧರ್ ಹೆಗ್ಗೋಡು, ನಿರ್ದೇಶನ: ದಿಗ್ವಿಜಯ ಹೆಗ್ಗೋಡು, ಸ್ಥಳ: ಕಿರುರಂಗಮಂದಿರ, ಸಂಜೆ 7 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: "ಆಧಾರ ಶಿಲೆ"–ಮೈಸೂರು ಸುತ್ತಮುತ್ತಲಿನ ಐತಿಹಾಸಿಕ ತಾಣಗಳ ಪರಿಚಯ ಮಾಲಿಕೆ. ಪ್ರಸ್ತುತಿ: ಡಾ.ರಾಮದಾಸ್ ರೆಡ್ಡಿ, 6.40–ಅರಿವಿನ ಶಿಖರ– ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಕೆ.ಬಿ.ಸುನೀತಾ ಆಚಾರ್ಯ, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 6.50–ರೈತರಿಗೆ ಸಲಹೆ, 7.15 –ಭರವಸೆ ಹೊನಲು –ವೈದ್ಯರ ಕಿವಿಮಾತು" ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ. ರಸ್ತೆ, ಬೆಂಗಳೂರು, 8.30–ಕನ್ನಡ ಚಿತ್ರಗೀತೆಗಳು, 9.05–ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ: ಪ್ರಾಯೋಜಕರು –Indian Cancer Society, Karnataka Chapter, 9.10–ನೆನಪಿನಂಗಳ (ಧ್ವನಿ ಭಂಡಾರದಿಂದ) ಸಾಹಿತ್ಯ ಕ್ಷೇತ್ರದ ಹಿರಿಯ ವಿದ್ವಾಂಸರಾದ ಪ್ರೊ.ಎ.ಎನ್. ಮೂರ್ತಿರಾಯರೊಂದಿಗೆ ಚ.ಹೊ.ನಾರಾಯಣಸ್ವಾಮಿ ಅವರು ನಡೆಸಿದ್ದ ಸಂವಾದ. 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಕೆ.ಪದ್ಮನಾಭ–ವೀಣಾ ವಾದನ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ–ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್ ಬಿ., 12.05–ವನಿತಾ ವಿಹಾರ, 12.35–ದೇವರನಾಮ, 12.45–ನಮ್ಮ ಆರೋಗ್ಯ– ಥೈರಾಯ್ಡ್ ಸಮಸ್ಯೆ ಲಕ್ಷಣಗಳು ಮತ್ತು ಪರಿಹಾರ ಕುರಿತು ಎಂಡೋಕ್ರೈನಾಲಜಿ ಹಾಗೂ ಡಯಾಬಿಟೀಸ್ ತಜ್ಞರಾದ ಡಾ.ಲಕ್ಷ್ಮೀನಾಗೇಂದ್ರ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 1.00–ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳ ಸರಣಿ, ರಾಷ್ಟ್ರೀಯ ಗೋಕುಲ್ ಮಿಷನ್ ಯೋಜನೆ ಕುರಿತು ಮಾಹಿತಿ ನೀಡುತ್ತಾರೆ–ಡಾ.ರಮೇಶ್. ಎಂ, 1.20–ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ: ಪ್ರಾಯೋಜಕರು Indian Cancer Society, Karnataka Chapter, 1.25–ಭಾವಗೀತೆಗಳು, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಬಿ.ಎಸ್.ವಿಜಯರಾಘವನ್–ಹಾಡುಗಾರಿಕೆ, 4.00–ಮಹಿಳಾರಂಗ, ನಾನು ನನ್ನ ಕಂಪನಿ ಮನೆಯಲ್ಲಿಯೇ ವಿವಿಧ ರೀತಿಯ ತಿಂಡಿ ತಿನಿಸುಗಳನ್ನು ತಯಾರಿಸುವ ಶಶಿಕಲಾ ಅವರೊಂದಿಗೆ ಮಾತುಕಥೆ, ಪ್ರಸ್ತುತಿ: ಸಹನ, 4.45–ಹಿಂದಿ ಪಾಠ, ಪ್ರಸ್ತುತಿ :ಶಾಂತಾ. ಡಿ. ಕಿಣಿ, 5.05–ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50–ಕೃಷಿರಂಗ: ಮೈಸೂರಿನ ಅಖಿಲ ಭಾರತ ವಾಕ್ ಶ್ರವಣ ಸಂಸ್ಥೆ ಆವರಣದಲ್ಲಿ ರೇಡಿಯೋ ಕಿಸಾನ್ ದಿನದ ಅಂಗವಾಗಿ ಏರ್ಪಾಡಾಗಿದ್ದ ವೇದ ಕೃಷಿ ಕಾರ್ಯಾಗಾರದ ಬಾನುಲಿ ವರದಿ. ಪ್ರಸ್ತುತಿ: ಆರ್.ಲೋಕೇಶ್ವರಿ, 7.45–ಕನ್ನಡ ಚಿತ್ರಗೀತೆಗಳು, 8.00–ಯುವವಾಣಿ– 'ವಿಜ್ಞಾನದ ಬೆಳವಣಿಗೆಯಲ್ಲಿ ಯುವಜನತೆಯ ಪಾತ್ರ' ಕುರಿತು ಮಾತುಕತೆ, ಭಾಗವಹಿಸುತ್ತಾರೆ: ಅಮೃತ ವಿಶ್ವವಿದ್ಯಾಪೀಠಂ, ಮೈಸೂರು ಕ್ಯಾಂಪಸ್‌ನ ವಿದ್ಯಾರ್ಥಿಗಳಾದ ನಿಹಾರಿಕಾ ಎನ್. ಸ್ಕಂದನ್, ನಂದಿನಿ ಎಸ್. ಮತ್ತು ಶರಣ್ಯ ಪಿ.ರಾವ್, ನಡೆಸಿಕೊಡುತ್ತಾರೆ: ಆರ್ಯಾ ಎಂ., 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ನಿರ್ಮಲ ರಾಜಶೇಖರ್–ವೀಣಾವಾದನ, 10.00–ರೂಪಕ ಹರಿಯನ್ನರಸಿದ ವನಿತೆಯರು, ರಚನೆ ಮತ್ತು ಪ್ರಸ್ತುತಿ–ಡಾ.ಸುಕನ್ಯಾ ಪ್ರಭಾಕರ್, 10.30–ಸವಿನೆನಪು.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಫೆಬ್ರವರಿ 17 ಸೋಮವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 300 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಯಾವುದೇ ಕ್ಷಣದಲ್ಲಿ

ಸ್ಥಳೀಯ ಸಂಸ್ಥೆಗಳ ಚುನಾವಣೆ

ಸಿದ್ಧರಾಗುವಂತೆ ಕಾರ್ಯಕರ್ತರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಕರೆ

- ಚುನಾವಣಾ ಸಿದ್ಧತೆಗಾಗಿ ಕಾರ್ಯಾಧ್ಯಕ್ಷರ ನೇತೃತ್ವದಲ್ಲಿ ವಿಭಾಗಾವಾರು ಸಮಿತಿ ರಚನೆ
- 100 ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ವರಿಷ್ಠರಿಗೆ ಮನವಿ


ಸುದ್ದಿಗೋಷ್ಠಿಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಮಾತನಾಡುತ್ತಿರುವುದು.

ಬೆಂಗಳೂರು, ಫೆ.16–ಯಾವುದೇ ಕ್ಷಣದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಬಹುದು. ಹೀಗಾಗಿ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಸಜ್ಜಾಗಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಕೆಪಿಸಿಸಿ ಕಚೇರಿಯಲ್ಲಿ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಶಿವಕುಮಾರ್ ಅವರು ಭಾನುವಾರ ಮಾತನಾಡಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ವಿಚಾರವಾಗಿ ನ್ಯಾಯಾಲಯದಿಂದ ಸದ್ಯದಲ್ಲೇ ಸೂಚನೆ ಬರುವ ಸಾಧ್ಯತೆ ಇದೆ. ಇನ್ನು ಬೆಂಗಳೂರು ನಗರಪಾಲಿಕೆ ಚುನಾವಣೆಯನ್ನು ನಡೆಸಬೇಕಾಗಿದ್ದು ಗ್ರೇಟರ್ ಬೆಂಗಳೂರು ವಿಚಾರವಾಗಿ ಅಭಿಪ್ರಾಯ ಸಂಗ್ರಹಕ್ಕೆ ಮುಂದಾಗಿದ್ದೇವೆ. ಯಾವುದೇ ಕ್ಷಣದಲ್ಲಿ ಈ ಚುನಾವಣೆಗಳು ಘೋಷಣೆಯಾಗಬಹುದು. ಇದಕ್ಕೆ ನಾವೆಲ್ಲರೂ ಸಿದ್ಧತೆ ಮಾಡಿಕೊಳ್ಳಬೇಕು ಎಂದರು. ಈ ಚುನಾವಣೆಗಳ ಸಿದ್ಧತೆಗಾಗಿ ಕಾರ್ಯಾಧ್ಯಕ್ಷರ ನೇತೃತ್ವದಲ್ಲಿ ಉಪಾಧ್ಯಕ್ಷರುಗಳನ್ನು ಸೇರಿಸಿಕೊಂಡು ವಿಭಾಗವಾರು ಸಮಿತಿ ರಚಿಸಲಿದ್ದೇವೆ. ಈ ಸಮಿತಿ ಮಾರ್ಚ್ ಒಳಗಾಗಿ ರಾಜ್ಯ ಪ್ರವಾಸ ಮಾಡಿ ■ 9ನೇ ಪುಟಕ್ಕೆ

'ಮುಂದಿನ ಸಿಎಂ ಡಿಕೆಶಿಗೆ ಜೈ'! ಮತ್ತೆ ಮೊಳಗಿದ ಮುಂದಿನ ಸಿಎಂ ಘೋಷಣೆ

ಬೆಂಗಳೂರು, ಫೆ16– ರಾಜ್ಯದಲ್ಲಿ ಸಿಎಂ ಬದಲಾವಣೆಯ ಚರ್ಚೆ ಜೋರಾದ ಬೆನ್ನಲ್ಲೆ ಡಿ.ಕೆ.ಶಿವಕುಮಾರ್ ಅಭಿಮಾನಿಗಳು ಆಗಾಗ ಮುಂದಿನ ಸಿಎಂ ಡಿ.ಕೆ. ಶಿವಕುಮಾರ್ ಎಂಬ ಘೋಷಣೆ ಕೂಗುವುದು ಕೂಡ ಸಾಮಾನ್ಯ ಸಂಗತಿಯಾಗಿದೆ. ಅದರಂತೆ ಇಂದು (ಫೆ16) ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಂಗಳೂರಿನ ವಿವಿಧ ವಾರ್ಡ್‌ಗಳಲ್ಲಿ ಸಿಟಿ ರೌಂಡ್ಸ್ ಹಾಕಿದ್ದಾರೆ. ಈ ವೇಳೆ ಮುಂದಿನ ಸಿಎಂ ಡಿಕೆಶಿ ಎಂಬ ಘೋಷಣೆ ಮೊಳಗಿದೆ.

ಡಿಕೆ ಶಿವಕುಮಾರ್ ಸಿಟಿ ರೌಂಡ್ಸ್ ಸಂದರ್ಭದಲ್ಲಿ ಅವರ ಅಭಿಮಾನಿಗಳು 'ಮುಂದಿನ ಸಿಎಂ ಡಿಕೆ ಶಿವಕುಮಾರ್‌ಗೆ ಜೈ' ಎನ್ನುವ ಮೂಲಕ ಅಭಿಮಾನ ಮೆರೆದಿದ್ದಾರೆ. ಬೆಂಗಳೂರು ರೌಂಡ್ಸ್‌ನ ಬಹುತೇಕ ಕಡೆಗಳಲ್ಲಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಡಿಕೆಶಿ ಮುಂದಿನ ಸಿಎಂ ಎಂಬ ಜಯಘೋಷ ಮೊಳಗಿಸಿದರು.

ಸ್ಥಳೀಯ ಚುನಾವಣೆಯಿಂದ ಲೋಕಸಭಾ ಚುನಾವಣೆವರೆಗೂ ಸಿದ್ದರಾಮಯ್ಯ ಬೇಕು

- ಡಿಸಿಎಂ ಡಿ.ಕೆ.ಶಿವಕುಮಾರ್
- ದಿನ ಬೆಳಗಾದರೇ ಅವರ ಸುದ್ದಿ ಎತ್ತಿಕೊಂಡು ಅವರ ಹೆಸರು ದುರುಪಯೋಗ ಮಾಡುವುದು ಬೇಡ

ಬೆಂಗಳೂರು, ಫೆ.16– ಸಿದ್ದರಾಮಯ್ಯ ನಮ್ಮ ನಾಯಕರು, ಸ್ಥಳೀಯ ಚುನಾವಣೆಯಿಂದ ಹಿಡಿದು ಲೋಕಸಭಾ ಚುನಾವಣೆವರೆಗೂ ಅವರು ಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

ಮುಂದಿನ ಚುನಾವಣೆಗೂ ಸಿಎಂ ಸಿದ್ದರಾಮಯ್ಯ ಬೇಕೆ ಬೇಕು ಎನ್ನುವ ಸಚಿವರುಗಳ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಸಿದ್ದರಾಮಯ್ಯ ನಮ್ಮ ಮುಖ್ಯಮಂತ್ರಿಗಳು, ನಮ್ಮ ನಾಯಕರು. ಎಲ್ಲಾ ಚುನಾವಣೆಗಳಿಗೂ ಅವರು ಬೇಕು. ಕಾಂಗ್ರೆಸ್ ಪಕ್ಷ ಎರಡು ಬಾರಿ ಸಿಎಂ ಆಗುವ ಅವಕಾಶ ಕೊಟ್ಟಿದೆ. ದಿನ ಬೆಳಗಾದರೇ ಅವರ ಸುದ್ದಿ ಎತ್ತಿಕೊಂಡು ಅವರ ಹೆಸರು ದುರುಪಯೋಗ ಮಾಡುವುದು ಬೇಡ. ಸ್ಥಳೀಯ ಚುನಾವಣೆಯಿಂದ ಹಿಡಿದು ಲೋಕಸಭಾ ಚುನಾವಣೆವರೆಗೂ ಸಿಎಂ ಸಿದ್ದರಾಮಯ್ಯ ಬೇಕು ಎಂದು ಹೇಳಿದರು.

ನೀರಾವರಿ ವಿಚಾರವಾಗಿ ಪಕ್ಷಾತೀತ ಹೋರಾಟ ಮಾಡಬೇಕು ಎಂಬ ದೇವೇಗೌಡರ ಹೇಳಿಕೆ ಬಗ್ಗೆ ಕೇಳಿದಾಗ, ರಾಜ್ಯದ ನೆಲ, ಜಲ ಹಿತಕ್ಕಾಗಿ ನಾವು ಬದ್ಧವಾಗಿದ್ದೇವೆ. ಅವರು ಮೇಕೆದಾಟು ಯೋಜನೆಗೆ ಒಂದೇ ದಿನದಲ್ಲಿ ಸಹಿ ಹಾಕಿಸುವುದಾಗಿ ಹೇಳಿದ್ದರು. ಮಹದಾಯಿ ವಿಚಾರವಾಗಿ ■ 9ನೇ ಪುಟಕ್ಕೆ

ದೆಹಲಿ ರೈಲು ನಿಲ್ದಾಣದಲ್ಲಿ ಕಾಲ್ತುಳಿತ; ಮೃತರ ಸಂಖ್ಯೆ 18ಕ್ಕೆ ಏರಿಕೆ

ಮೃತರ ಕುಟುಂಬಗಳಿಗೆ ಕೇಂದ್ರದಿಂದ ತಲಾ 10 ಲಕ್ಷ ಪರಿಹಾರ ಘೋಷಣೆ



ನವದೆಹಲಿ, ಫೆ.16– ಇಲ್ಲಿನ ರೈಲು ನಿಲ್ದಾಣದಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಮೃತರ ಸಂಖ್ಯೆ 18ಕ್ಕೆ ಏರಿಕೆಯಾಗಿದ್ದು, ಮೃತಪಟ್ಟವರ ಕುಟುಂಬಸ್ಥರಿಗೆ ತಲಾ 10 ಲಕ್ಷ ರೂ. ಹಾಗೂ ಗಂಭೀರವಾಗಿ ಗಾಯಗೊಂಡವರಿಗೆ ತಲಾ 2.5 ಲಕ್ಷ ರೂ. ಪರಿಹಾರವನ್ನು ಕೇಂದ್ರ ಸರ್ಕಾರ ಘೋಷಿಸಿದೆ.

ಕಾಲ್ತುಳಿತ ಸಂಭವಿಸಿದ್ದು ಹೇಗೆ?: ಶನಿವಾರ ರಾತ್ರಿ 10 ಗಂಟೆ ಹೊತ್ತಿಗೆ ಪ್ಲಾಟ್‌ಫಾರಂ 13 ಮತ್ತು 14ರಲ್ಲಿ ಮಹಾ ಕುಂಭಮೇಳ ನಡೆಯುತ್ತಿರುವ ಪ್ರಯಾಗರಾಜ್‌ಗೆ ತೆರಳಲು ಸಾವಿರಾರು ಮಂದಿ ಜಮಾಯಿಸಿದ್ದರು. ರಾತ್ರಿ 11.30ಕ್ಕೆ ಹೊರಡಬೇಕಿದ್ದ ಪ್ರಯಾಗರಾಜ್ ಎಕ್ಸ್‌ಪ್ರೆಸ್ ವಿಶೇಷ ರೈಲು ಪ್ಲಾಟ್‌ಫಾರಂ 14ರಲ್ಲಿ ನಿಂತಿತ್ತು. ಈ ರೈಲಿನಲ್ಲಿ ತೆರಳಲು 1,500 ಮಂದಿ ಜನರಲ್ ಟಿಕೆಟ್ ಪಡೆದಿದ್ದರು. ಬಿಹಾರದಿಂದ ಹೊರಟಿದ್ದ 'ಸ್ವತಂತ್ರ ಸೇನಾನಿ ಎಕ್ಸ್‌ಪ್ರೆಸ್' ಮತ್ತು 'ಭುವನೇಶ್ವರ ರಾಜಧಾನಿ' ರೈಲುಗಳೂ ತಡವಾಗಿ ಆಗಮಿಸಿದವು. ಆ ರೈಲುಗಳಲ್ಲಿ ಬಂದವರೂ ಸೇರಿಕೊಂಡು ಭಾರಿ ದಟ್ಟಣೆ ಉಂಟಾಯಿತು. ನಿಲ್ದಾಣದಿಂದ ಹೊರಕ್ಕೆ ■ 9ನೇ ಪುಟಕ್ಕೆ

ತನಿಖೆಗೆ ಉನ್ನತ ಮಟ್ಟದ ಸಮಿತಿ ರಚನೆ

ನವದೆಹಲಿ, ಫೆ.16– ಕಾಲ್ತುಳಿತ ಪ್ರಕರಣದ ತನಿಖೆ ನಡೆಸಲು ಇಬ್ಬರು ಸದಸ್ಯರ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ ಎಂದು ರೈಲ್ವೆ ಮಂಡಳಿಯ ಮಾಹಿತಿ ಮತ್ತು ಪ್ರಚಾರದ ಕಾರ್ಯನಿರ್ವಾಹಕ ನಿರ್ದೇಶಕ ದಿಲೀಪ್ ಕುಮಾರ್ ತಿಳಿಸಿದ್ದಾರೆ. ಉತ್ತರ ರೈಲ್ವೆಯ ಪ್ರಧಾನ ಮುಖ್ಯ ವಾಣಿಜ್ಯ ವ್ಯವಸ್ಥಾಪಕ ನರಸಿಂಗ್ ದೇವ್ ಮತ್ತು ಉತ್ತರ ರೈಲ್ವೆಯ ಪ್ರಧಾನ ಮುಖ್ಯ ಭದ್ರತಾ ಆಯುಕ್ತ ಪಂಕಜ್ ಗಂಗ್ವಾರ್ ಸಮಿತಿಯ ಸದಸ್ಯರಾಗಿದ್ದಾರೆ.

ಇಂದಿನಿಂದಲೇ ತನಿಖೆ ಆರಂಭಿಸಿರುವ ಸಮಿತಿಯು ರೈಲು ನಿಲ್ದಾಣದ ಎಲ್ಲಾ ಸಿಸಿಟಿವಿ ದೃಶ್ಯಾವಳಿಗಳನ್ನು ಸುರಕ್ಷಿತವಾಗಿರಿಸುವಂತೆ ಆದೇಶ ನೀಡಿದೆ. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ಪ್ರಯಾಣಿಕರನ್ನು ವಿಶೇಷ ರೈಲುಗಳ ಮೂಲಕ ಕಳುಹಿಸಿಕೊಡಲಾಗಿದೆ. ಯಥಾಸ್ಥಿತಿಯಂತೆ ರೈಲು ಸಂಚಾರ ಪ್ರಾರಂಭವಾಗಿದೆ' ಎಂದು ದಿಲೀಪ್ ಅವರು ತಿಳಿಸಿದ್ದಾರೆ.

ಬಿಜೆಪಿ ಅವಧಿಯ ವಿವಿಗಳಿಗೆ ಕೊಕ್; ಸರ್ಕಾರದ ನಡೆ ಅವಿವೇಕದ ಪರಮಾವಧಿ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ರೋಶ



ಬೆಂಗಳೂರು, ಫೆ.16– ಕಾಂಗ್ರೆಸ್ ಸರ್ಕಾರ ಜ್ಞಾನ ಗಂಗೆಯ ಆಲಯಗಳನ್ನು ಬರಿದು ಮಾಡಿ ಅಕ್ಷರ ದೀವಿಗೆಯನ್ನು ನಂದಿಸಲು ಹೊರಟಿದೆ. ಇದು ಅವಿವೇಕದ ಪರಮಾವಧಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

9 ವಿಶ್ವವಿದ್ಯಾನಿಲಯಗಳಿಗೆ ಬೀಗ ಜಡಿಯಲು ಹೊರಟಿರುವ ಸರ್ಕಾರದ ನಡೆಯನ್ನು ಖಂಡಿಸಿ ಎಕ್ಸ್‌ನಲ್ಲಿ ವಿಜಯೇಂದ್ರ ಪೋಸ್ಟ್ ಹಂಚಿಕೊಂಡಿದ್ದಾರೆ. ಬಡ ಹಾಗೂ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಪಾಲಿನ ಶಿಕ್ಷಣ ಭಾಗ್ಯ ಕಸಿಯಲು ಹೊರಟಿರುವ ಕಾಂಗ್ರೆಸ್ ಸರ್ಕಾರದ ನಿರ್ಧಾರ ಅವಿವೇಕತನದ ಪರಮಾವಧಿಯಾಗಿದೆ. ಶಿಕ್ಷಣದ ದೂರದೃಷ್ಟಿ ಹಾಗೂ ಉನ್ನತ ಶಿಕ್ಷಣದ ಹಕ್ಕು ಪ್ರತಿಯೊಬ್ಬ ವಿದ್ಯಾರ್ಥಿಗೆ ಸರಳವಾಗಿ, ಸುಲಭವಾಗಿ ದೊರೆಯಬೇಕು ಎಂಬ ಮಹತ್ವದ ಉದ್ದೇಶದಿಂದ 9 ವಿಶ್ವವಿದ್ಯಾನಿಲಯಗಳನ್ನು ಬಿಜೆಪಿ ■ 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಕವಿತಾ : ನಿನ್ನೆ ನನ್ನ ಗಂಡ ಕುಡಿಯೋದಿಲ್ಲ ಅಂತ ಕಾಲಿಗೆ ಬಿದ್ದ ಕಣೆ!
ಸವಿತಾ : ಹೌದಾ... ಆಮೇಲೆ ಏನಾಯ್ತು?
ಕವಿತಾ : ಬೆಳಗ್ಗೆ ಎದ್ದು ನೋಡಿದರೆ ನನ್ನ ಕಾಲಿನ ಗೆಜ್ಜೆ ಇರ್ಲಿಲ್ಲ ಕಣೆ!

ಮೈಸೂರು ಮಿತ್ರ
ಸೋಮವಾರ, 17 ಫೆಬ್ರವರಿ 2025
ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

'ಎಲ್ಲಾ ಪಾಠಗಳನ್ನು ಪುಸ್ತಕವೇ ಕಲಿಸುವುದಿಲ್ಲ, ಕೆಲವು ಪಾಠಗಳನ್ನು ಜೀವನ ಮತ್ತು ಸಂಬಂಧಗಳು ಕಲಿಸುತ್ತವೆ'

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { 'ಅಡಿಗೆ ಬಿದ್ದರೂ ಮೀಸೆ ಮೇಲು'

ನಿಮ್ಮ ಪತ್ರಗಳು

ಉದಯಗಿರಿ ಗಲಭೆ ಕಾನೂನಿಗೇ ಸವಾಲ್!

ಮಾನ್ಯರೆ,

ದೆಹಲಿ ವಿಧಾನಸಭಾ ಚುನಾವಣೆ ಫಲಿತಾಂಶದ ಹಿನ್ನೆಲೆಯಲ್ಲಿ ಪ್ರಚೋದನಾಕಾರಿ ಪೋಸ್ಟರ್ ವೈರಲ್ ಆದಕಾರಣ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮುಂದೆ ಜಮಾಯಿಸಿದ ಸಾವಿರಾರು ಮಂದಿ ಠಾಣೆಗೆ ಮುತ್ತಿಗೆ ಹಾಕಿ, ಡಿವೈಎಸ್‌ಪಿ ಕಾರಿಗೆ ಕಲ್ಲು ಹೊಡೆದು, ಹಲವು ಪೊಲೀಸ್ ವಾಹನಗಳನ್ನು ಜಖಂಗೊಳಿಸಿದ್ದು, 7 ಮಂದಿ ಪೊಲೀಸರೂ ಗಾಯಗೊಂಡಿದ್ದಾರೆ. ಈ ಸಂಬಂಧ ಹಲವರನ್ನು ಪೊಲೀಸರು ಬಂಧಿಸಿದ್ದಾರೆ.

ಪೊಲೀಸರ ಕ್ರಮವನ್ನು ಸಚಿವರೊಬ್ಬರು, ಅವರಿಗೆ ಕಾಮನ್ ಸೆನ್ಸ್ ಇಲ್ಲಾ ಎಂದರೆ, ಇನ್ನೊಬ್ಬ ಸಚಿವರು ಅವರೆಲ್ಲಾ ಅಪ್ರಾಪ್ತ ಯುವಕರು, ಅಮಾಯಕರು ಎಂದು ಸಮರ್ಥಿಸಿಕೊಂಡಿದ್ದರೆ, ಪಕ್ಷದ ವಕ್ತಾರರೊಬ್ಬರು ಇದೆಲ್ಲಾ 300 ಆರ್‌ಎಸ್‌ಎಸ್ ಕಾರ್ಯಕರ್ತರಿಂದಲೇ ಆಗಿದೆ ಎಂದು ಬಾಲಿಶ ಹೇಳಿಕೆ ನೀಡಿದ್ದಾರೆ.

ಬೆಂಗಳೂರಿನ ಡಿ.ಜೆ.ಹಳ್ಳಿಯಂತೆ ಇಲ್ಲೂ ಠಾಣೆ ಮೇಲೆ ದಾಳಿ ಮಾಡಿದ್ದಾರೆ. ಸಂವಿಧಾನ, ಕಾನೂನುಗಳು ತಿಳಿದಿದ್ದರೂ ದಾಳಿ ಮಾಡಿದ ಪುಂಡರನ್ನು ಸರ್ಕಾರದ ಪ್ರತಿನಿಧಿಗಳು, ಅಮಾಯಕರು, ಅಪ್ರಾಪ್ತರು ಎಂದು ಸಮರ್ಥಿಸಿಕೊಳ್ಳುವುದು ಅವರ ಬೇಜವಾಬ್ದಾರಿತನಕ್ಕೆ ಮತ್ತೊಂದು ನಿದರ್ಶನವಷ್ಟೇ.

ಒಬ್ಬ ಅಪರಾಧಿಯನ್ನು ಕೋರ್ಟ್, ವಿಚಾರಣೆಗೆ ಕರೆದುಕೊಂಡು ಹೋಗುವಾಗ ತಪ್ಪಿಸಿಕೊಳ್ಳಲು ಪ್ರಯತ್ನಿಸಿದನೆಂದು ಕಾಲಿಗೆ ಗುಂಡು ಹೊಡೆಯುವ, ಎನ್‌ಕೌಂಟರ್ ಮಾಡುವ ಪೊಲೀಸರು ಇಲ್ಲಿ ತಮ್ಮ ಮೇಲೆ ದಾಳಿ ಮಾಡಿದರೂ, ತಮ್ಮ ಪ್ರಾಣಕ್ಕೇ ಅಪಾಯ ಎದುರಾದರೂ ಗೋಲಿಬಾರ್ ಮಾಡದೆ ಅತೀವ ಸಂಯಮ ತೋರಿದ್ದರ ಹಿಂದಿನ ಕಾರಣವೇನು? ಏನೇ ಆದರೂ ಈ ಅಮಾಯಕರ ಮೇಲೆ ಏನೂ ಕ್ರಮ ಜರುಗಿಸಬೇಡಿ ಎಂದು ಮೇಲಿನಿಂದ ಆದೇಶ ಬಂದಿತ್ತಾ? ತಮ್ಮೆದುರೇ ಕಾನೂನನ್ನು ಕೈಗೆತ್ತಿಕೊಂಡರೂ ಅಸಹಾಯಕರಾದ ಪೊಲೀಸರನ್ನೇ ದಾಳಿ ಮಾಡಿದ ಪುಂಡರ ಜೊತೆ ಮುಗ್ಧರು ಎನ್ನೋಣವೇ?

ಇನ್ನು ಮುಂದಾದರೂ ಪೊಲೀಸರು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಕ್ಷಿಪ್ರ ಕಾರ್ಯಾಚರಣೆ ನಡೆಸುವ ಮೂಲಕ ಇಂತಹ ಪುಂಡರನ್ನು ಮಟ್ಟ ಹಾಕುವ ಕೆಲಸ ಮಾಡಲಿ. ಎಸ್‌ಪಿ, ಡಿವೈಎಸ್‌ಪಿ ಕಾರಿಗೇ ಕಲ್ಲು ಹೊಡೆಯುವವರಿಗೆ ಕಾನೂನು, ದೇಶ ಪ್ರೇಮದ ಅರಿವಿರುವುದಿಲ್ಲ. ಅದನ್ನು ತಿಳಿಸುವ ಕೆಲಸ ಮಾಡಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಮೈಸೂರು ವಿವಿ ಜೊತೆಗೆ ಮಂಡ್ಯ ವಿವಿ ವಿಲೀನ ಬೇಡ

ಮಾನ್ಯರೆ,

ನಮ್ಮ ಮಹಾರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕನಸಿನ ಕೂಸು ಮೈಸೂರು ವಿಶ್ವವಿದ್ಯಾನಿಲಯವನ್ನು ಕೆಲ ವರ್ಷಗಳ ಹಿಂದೆ ಹರಿದು ಹಂಚಿ ಮಂಡ್ಯ, ಹಾಸನ, ಚಾಮರಾಜನಗರ ಜಿಲ್ಲೆಗೊಂದರಂತೆ ಪ್ರತ್ಯೇಕ ವಿವಿಗಳನ್ನಾಗಿ ಸ್ಥಾಪಿಸಲಾದದ್ದು ಸರಿಯಷ್ಟೆ. ವಿವಿಗಳಿಗೆ ಸರ್ಕಾರದಿಂದ ಅನುದಾನ ಸರಿಯಾಗಿ ಸಿಗದೆ, ಖಾಯಂ ಪ್ರಾಧ್ಯಾಪಕರನ್ನು ನೇಮಕ ಮಾಡದೆ, ವಿದ್ಯಾರ್ಥಿಗಳಿಗೆ ತೊಂದರೆಯಾಗುವುದು ಗೊತ್ತಿದ್ದರೂ ಸಂಬಂಧಪಟ್ಟ ಇಲಾಖೆ ಹಲವಾರು ವರ್ಷಗಳಿಂದ ಕಾರ್ಯಪ್ರವೃತ್ತವಾಗದೆ ಕಾಲಹರಣ ಮಾಡುತ್ತಿರುವುದು ಎಲ್ಲರಿಗೂ ತಿಳಿದಿರುವ ಸಂಗತಿ.

ಸರ್ಕಾರ ನಾಲ್ಕು ವಿವಿಗಳ ಅಭಿವೃದ್ಧಿಯತ್ತ ಗಮನಹರಿಸದೆ, ಈಗ ಮಂಡ್ಯ ವಿವಿಯನ್ನು ಮತ್ತೇ ಮೈಸೂರು ವಿವಿ ಜೊತೆಗೆ ವಿಲೀನ ಮಾಡಲು ಚಿಂತನೆ ನಡೆಸಿರುವುದು ಎಷ್ಟು ಸಮಂಜಸ. ಇದೇನು ಮೊಹಮದ್ ಬಿನ್ ತುಘಲಕ್ ದರ್ಬಾರ, ದೆಹಲಿಯಿಂದ ದೇವಗಿರಿಗೆ, ದೇವಗಿರಿಯಿಂದ ದೆಹಲಿಗೆ ತನ್ನ ಆಡಳಿತವನ್ನು ಬದಲಾಯಿಸಿದಂತೆ, ವಿವಿಗಳನ್ನು ಮೊದಲು ಪ್ರತ್ಯೇಕ ಮಾಡಿ ಮತ್ತೇ ವಿವಿಗಳನ್ನು ವಿಲೀನ ಮಾಡಲು. ಪ್ರತ್ಯೇಕ ಮಾಡಿದ ವಿವಿಗಳನ್ನು ಯಾವುದೇ ಕಾರಣಕ್ಕೂ ಮತ್ತೇ ವಿಲೀನ ಮಾಡದೆ ಅವುಗಳನ್ನು ಅಭಿವೃದ್ಧಿಪಥದತ್ತ ಕೊಂಡೊಯ್ಯುವುದು ಸೂಕ್ತ.

–ಬೆಸಗರಹಳ್ಳಿ ರವಿಪ್ರಸಾದ್, ಮೈಸೂರು.

ರಾಜ್ಯ ಸರ್ಕಾರ ಉತ್ತರಿಸಲಿ...

ಮಾನ್ಯರೆ,

ಮೈಕ್ರೋ ಫೈನಾನ್ಸ್ ಕಂಪನಿಗಳ ನಿಯಂತ್ರಣಕ್ಕೆ ರಾಜ್ಯಸರ್ಕಾರ ಸಿದ್ಧಪಡಿಸಿದ್ದ ಸುಗ್ರೀವಾಜ್ಞೆಗೆ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಸಹಿ ಮಾಡಿದ್ದಾರೆ. ಈ ಹಿಂದೆ ಸುಗ್ರೀವಾಜ್ಞೆಯನ್ನು ರಾಜ್ಯ ಸರ್ಕಾರಕ್ಕೆ ಹಿಂದಿರುಗಿ ಸಿದ್ದ ರಾಜ್ಯಪಾಲರು ರಾಜ್ಯ ಸರ್ಕಾರದಿಂದ ಕೆಲವು ಸ್ಪಷ್ಟನೆಗಳನ್ನು ಕೋರಿದ್ದರು. ಸುಗ್ರೀವಾಜ್ಞೆಯಾಗಲಿ ಅಥವಾ ಯಾವುದೇ ಮಸೂದೆಯಾಗಲಿ, ಎರಡನೇ ಬಾರಿಗೆ ಸಚಿವ ಸಂಪುಟದಿಂದ ಅಂಗೀಕಾರಗೊಂಡು, ರಾಜ್ಯಪಾಲರಿಗೆ ಕಳುಹಿಸಲ್ಪಟ್ಟರೆ ಅವುಗಳಿಗೆ ರಾಜ್ಯಪಾಲರು ಅನುಮತಿ ನೀಡಲೇಬೇಕು. ಇದು ದೇಶದ ಸಂವಿಧಾನ ವಿಧಿಸಿರುವ ಕಟ್ಟುಪಾಡು. ಆದರೆ, ಈ ಸುಗ್ರೀವಾಜ್ಞೆಯ ಬಗ್ಗೆ ರಾಜ್ಯಪಾಲರು ವ್ಯಕ್ತಪಡಿಸಿದ ಕೆಲವು ಅಭಿಪ್ರಾಯಗಳು ಸಮಂಜಸವಾಗಿವೆ ಎಂದು ಹೇಳಬಹುದು. ಉದಾಹರಣೆಗೆ ಈಗಾಗಲೇ ಅಸ್ತಿತ್ವದಲ್ಲಿರುವ ಕಾನೂನು ಗಳಿಂದ ಇಂತಹ ಮೈಕ್ರೋ ಫೈನಾನ್ಸ್ ಕಂಪನಿಗಳನ್ನು ನಿಯಂತ್ರಣ ಮಾಡಲು ಸಾಧ್ಯವಿಲ್ಲವೇ? ಒಂದು ವೇಳೆ ಇಂತಹ ಕಂಪನಿಗಳಿಂದ ಸಾಲ ಪಡೆಯುವ ಜನರು ಸುಸ್ತಿದಾರರರಾದರೆ, ಸಾಲ ವಸೂಲಾತಿಗೆ ಅಂತಹ ಕಂಪನಿಗಳು ಏನು ಮಾಡಬೇಕು. ಇಂತಹ ಹಣಕಾಸು ಕಂಪನಿಗಳ ಮೇಲುಸ್ತುವಾರಿ ವಹಿಸಿರುವ ಭಾರತೀಯ ರಿಸರ್ವ್ ಬ್ಯಾಂಕಿನ ಪಾತ್ರವೇನು? ಮುಂತಾದ ಸೂಕ್ಷ್ಮ ಪ್ರಶ್ನೆಗಳಿಗೆ ರಾಜ್ಯ ಸರ್ಕಾರ ಉತ್ತರಿಸಬೇಕಾಗಿದೆ. –ಕೆ.ವಿ.ವಾಸು, ವಕೀಲರು–ನೋಟರಿ, ಮೈಸೂರು.

ಪಾಲಿಕೆಯಲ್ಲಿ ಕುರ್ಚಿಗಳ ವ್ಯವಸ್ಥೆ ಮಾಡಿ!

ಮಾನ್ಯರೆ,

ಮೈಸೂರು ಮಹಾನಗರಪಾಲಿಕೆ ಕಚೇರಿ ನಂ.17ರ ಜನನ ಮರಣ ವಿಭಾಗದಲ್ಲಿ ಅರ್ಜಿ ಸಲ್ಲಿಸಲು ಹೋಗುವ ಹಿರಿಯ ನಾಗರಿಕರಿಗೆ, ವಿಕಲಚೇತನರಿಗೆ ಹಾಗೂ ಮಹಿಳೆಯರಿಗೆ ಆಸನ ವ್ಯವಸ್ಥೆಯನ್ನೆ ಕಲ್ಪಿಸಿಲ್ಲ. ಆಯುಕ್ತರು ಮತ್ತು ಸಂಬಂಧಪಟ್ಟ ಅಧಿಕಾರಿಗಳು ಈ ಕೂಡಲೇ ಇದರ ಕಡೆ ಗಮನ ನೀಡಬೇಕು. ಅರ್ಜಿ ಚಲನ್ ಭರ್ತಿ ಮಾಡಲು ಮತ್ತು ಜನನ ಮರಣ ಪತ್ರ ಸ್ವೀಕೃತಿ ಪಡೆಯುವ ಸಂದರ್ಭದಲ್ಲಿ ಆಸನ ವ್ಯವಸ್ಥೆಯನ್ನು ಕಲ್ಪಿಸಬೇಕು. ಎಲ್ಲದಕ್ಕೂ ಬಿಲ್ ಮಾಡುವ ನಗರಪಾಲಿಕೆ ಚೇರ್, ಟೇಬಲ್‌ಗಳನ್ನು ಯಾವ ಪ್ರಭಾವಿ ಅಧಿಕಾರಿಯ ಕಚೇರಿಗೆ ಸ್ಥಳಾಂತರ ಮಾಡಿದ್ದಾರೆ?! ಸರ್ಕಾರಿ ಕಚೇರಿಗಳಲ್ಲಿ ಹಿರಿಯ ನಾಗರಿಕರಿಗೆ, ವಿಕಲಚೇತನರಿಗೆ, ಮಹಿಳೆಯರಿಗೆ ಕೂರಲು ಆಸನ ವ್ಯವಸ್ಥೆಯನ್ನ ಮಾಡುವ ನಿಯಮ ಇಲ್ಲಿಗೆ ಅನ್ವಯವಾಗುವುದಿಲ್ಲವೇ? ಸಂಬಂಧಪಟ್ಟ ಅಧಿಕಾರಿಗಳು ಈ ಕೂಡಲೇ ಕಾರ್ಯೋನ್ಮುಖರಾದರೇ ಉತ್ತಮ.

–ಅಜಯ್ ಶಾಸ್ತ್ರಿ, ಮೈಸೂರು.

ನಂಬಿಕೆಯೇ ನಮಗೆ ದೇವರು...!



ಭಾರತೀಯರಾದ ನಾವು ನಂಬಿಕೆಗಳನ್ನು ನಂಬಿ ಬದುಕುತ್ತಿರುವವರು, ಎಂದಿಗೂ ನಂಬಿಕೆಗಳನ್ನು ಯಾರೂ ಹುಸಿ ಮಾಡಲಾಗದು, ನಂಬಿಕೆಗಳೇ ನಮಗೆ ದೇವರುಗಳು. ಭಾರತವು ವಿಶ್ವಕ್ಕೇ ಗುರುವಾಗಿ ಹೊರಹೊಮ್ಮಿರುವುದು ನಂಬಿಕೆಯೆಂಬ ದೇವರು ಹಾಗೂ ಆಧ್ಯಾತ್ಮದ ತಳಹದಿಯಿಂದ, ಇದು ಉತ್ಪ್ರೇಕ್ಷೆ ಆಗಿರದೆ ಸತ್ಯವಾಗಿಯೂ ಸತ್ಯವಲ್ಲವೇ?.

ಬಸವಣ್ಣನವರ ವಚನದಲ್ಲಿ ನಂಬಿದರೆ ಪ್ರಸಾದ, ನಂಬದಿದ್ದರೆ ಅದು ವಿಷವಣ್ಣ, ಕಸಿಯಬಾರದು ಎಂದೇಳಿದೆ, ಭಾರತೀಯರು ನಾವು ಶ್ರದ್ಧಾಭಕ್ತಿಗಾಗಿ ಊಟ ಬಿಟ್ಟು ಉಪವಾಸ ಕುಳಿತೇವು. ಆದರೆ ನಂಬಿಕೆ ಎನ್ನುವುದನ್ನು ಬಿಡಲೊಲ್ಲೆವು. ಆ ನಂಬಿಕೆಯಿಂದಲೇ ಐವತ್ತು ಕೋಟಿಗೂ ಹೆಚ್ಚು ಭಕ್ತರು ಪ್ರಯಾಗರಾಜ್‌ನ ತ್ರಿವೇಣಿ ಸಂಗಮದಲ್ಲಿ ಕುಂಭಮೇಳದ ಶುಭದಿನಗಳಂದು ನದಿಯಲ್ಲಿ ಮುಳುಗೆದ್ದಿದ್ದು, ಭಕ್ತಿಗೆ ಪರವಶವಾಗಿ ಪವಿತ್ರ ನದಿಗಳಲ್ಲಿ ಸ್ನಾನ ಮಾಡುವುದರಿಂದ ತಮ್ಮ ಪಾಪಗಳನ್ನು ನಿವಾರಿಸುತ್ತದೆ. ಆಧ್ಯಾತ್ಮಿಕ ಶುದ್ಧೀಕರಣ ಮತ್ತು ಮೋಕ್ಷ ಸಿಗುವುದೆಂದು ನಂಬಿಕೆ ನಮ್ಮದು.

ಫೆಬ್ರವರಿ 10, 11 ಮತ್ತು 12ರಂದು ಮೂರು ದಿನಗಳು ಮೈಸೂರು ಜಿಲ್ಲೆಯ ತಿ.ನರಸೀಪುರದ ಕಾವೇರಿ, ಕಪಿಲಾ ಮತ್ತು ಸ್ಪಟಿಕಾ ಸರೋವರಗಳು ಕೂಡುವ ತ್ರಿವೇಣಿ ಸಂಗಮದಲ್ಲೂ ಹಿಂದಿಗಿಂತ ಈ ಬಾರಿ ಲಕ್ಷಾಂತರ ಭಕ್ತರು ಕುಂಭ ಸ್ನಾನವನ್ನು ಮಾಡಿ ಪುನೀತರಾಗಿದ್ದಾರೆ. ನಂಬಿಕೆಯಲ್ಲಿ ನೀರಿನ ಪಾವಿತ್ರ್ಯತೆ ಮುಖ್ಯವಾಗುತ್ತೇ ಹೊರತು ಅದು ಎಷ್ಟು ಶುದ್ಧವಾಗಿರುತ್ತದೆ ಎನ್ನುವುದು ಗೌಣವಾಗುತ್ತದೆ.

ಝುಳುಝುಳು ಹರಿಯುವ ಜೀವನದಿಗಳ ನೀರು ಸ್ವಚ್ಛವಾಗಿರುತ್ತದೆ ಹಾಗೂ ಆ ನೀರು ಎಲ್ಲದಕ್ಕೂ ಯೋಗ್ಯವಾಗಿರುತ್ತದೆ. ಹಿಂದಿನ ದಿನಗಳಲ್ಲಿ ಕೆರೆಕಟ್ಟೆಗಳು, ಬಾವಿಗಳು ಹಾಗೂ ನದಿಗಳ ನೀರನ್ನು ಶುದ್ಧೀಕರಿಸದೆ ನೇರವಾಗಿ ಕುಡಿಯುವುದರಿಂದ ಹಿಡಿದು ಎಲ್ಲದಕ್ಕೂ ಉಪಯೋಗಿಸುತ್ತಿದ್ದೆವು. ಆದರೆ ಆ ಪದ್ಧತಿಯು ಇಂದು ಯಾರಲ್ಲೂ ಉಳಿದಿಲ್ಲ. ಶುದ್ಧೀಕರಿಸಿದ ನೀರೇ ನಮಗೆ ಬೇಕು, ಕೆಲವರು ಶುದ್ಧೀಕರಿಸಿದ ನೀರನ್ನೂ ಚೆನ್ನಾಗಿ ಕಾಯಿಸಿ ಕುಡಿಯುವುದುಂಟು, ಏಕೆಂದರೆ ವಿಜ್ಞಾನ ಹೇಳುತ್ತದೆ ಅನೈರ್ಮಲ್ಯವಾಗಿರುವ ನೀರನ್ನು ಉಪಯೋಗಿಸಕೂಡದೆಂದು.

ಅಂದು ಮಲಿನವಾದುದ್ದನ್ನು ನದಿಗಳಿಗೆ ಹರಿಯಬಿಡುವ ಕಾರ್ಖಾನೆಗಳು ಇರಲಿಲ್ಲ. ನಗರಗಳು ದೊಡ್ಡದಾಗಿ ಬೆಳೆದಿರಲಿಲ್ಲ ಇದರಿಂದಾಗಿ ಪಾಲಿಕೆಗಳ ತ್ಯಾಜ್ಯದ ಪ್ರಮಾಣವು ನಿಯಂತ್ರಣದಲ್ಲಿತ್ತು ಹಾಗೂ ಹೆಚ್ಚು ರಾಸಾಯನಿಕಗಳನ್ನು ಬಳಸುತ್ತಿರಲಿಲ್ಲವಾದ್ದರಿಂದ ಕೆರೆಕಟ್ಟೆ ಹಾಗೂ ನದಿಗಳ ನೀರಿನ ಜೊತೆಗೆ ಅಂತರ್ಜಲ ನೀರೂ ಸಹ ಶುದ್ಧವಾಗಿ ಇದ್ದುದ್ದರಿಂದ ನೇರವಾಗಿ ಬಳಕೆಗೆ ಯೋಗ್ಯವಾಗಿತ್ತು. ಈ ಕಾರಣದಿಂದಲೇ ಮಿನರಲ್ ವಾಟರ್ ಬಾಟಲಿಗಳ ಬಳಕೆ ಇರಲಿಲ್ಲ. ಆದರೆ ಇಂದು ಎಲ್ಲವೂ ಅಗಾಧವಾಗಿ ಬದಲಾಗಿವೆ. ಅಭಿವೃದ್ಧಿಯ ಪರಿಣಾಮ ಊರುಗಳು ಬೆಳೆದಿವೆ. ನೀರಿನ ಬೇಡಿಕೆ ಹೆಚ್ಚಾಗಿದೆ. ತೆರೆದ ಬಾವಿಗಳಲ್ಲಿ ನೀರಿಲ್ಲ, ಕೆರೆ–ಕಟ್ಟೆಗಳಲ್ಲಿ ಕೊಳಚೆ ನೀರು ತುಂಬಿದೆ, ಕೊಳವೆ ಬಾವಿಗಳ ನೀರು ಕುಡಿಯಲು ಯೋಗ್ಯವಾಗಿಲ್ಲ.

ಸಾಮಾನ್ಯ ದಿನಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ವಿಲೇವಾರಿ ಮಾಡುವುದಕ್ಕೆ ಇನ್ನಿಲ್ಲದಂತೆ ಶ್ರಮವಹಿಸುತ್ತಿದ್ದರೂ ಹಳೆಯ ತ್ಯಾಜ್ಯವು ಬೆಟ್ಟಗುಡ್ಡಗಳಾಗಿ ಎಲ್ಲಾ ನಗರಗಳಲ್ಲಿ ಬೆಳೆದು ನಿಲ್ಲದೆ, ಪರ್ವತಗಳನ್ನು ಮೀರಿಸುವಷ್ಟು ಮತ್ತಷ್ಟು ಬೆಳೆಯುತ್ತಲೇ ಇದೆ.

ಹಬ್ಬಹರಿದಿನಗಳಲ್ಲಿ, ಜಾತ್ರೆ–ಮೇಳಗಳಲ್ಲಿ, ಸಭೆ–ಸಮಾರಂಭಗಳಲ್ಲಿ ಹಾಗೂ ಪ್ರಯಾಗರಾಜ್‌ನ ಕುಂಭಮೇಳದಂತಹ ದೊಡ್ಡ ದೊಡ್ಡ ಸಮಾರಂಭಗಳಲ್ಲಿ ಶೇಖರವಾಗುವ ತ್ಯಾಜ್ಯ ಹಾಗೂ ನೀರಿಗೆ ಸೇರುವ ವಿಷಕಾರಿ ವಸ್ತುಗಳ ಪ್ರಮಾಣವನ್ನು ನಿಖರವಾಗಿ ಅಂದಾಜಿಸಲಾಗದು.

ಅದ್ಧೂರಿಯಾಗಿ ನಡೆಯುವ ದೊಡ್ಡ ಸಮಾರಂಭಗಳಲ್ಲಿ ತ್ಯಾಜ್ಯದ ಸಮಸ್ಯೆ ಒಂದೇ ಅಲ್ಲ, ಮಾಲಿನ್ಯಗಳ ಸಮಸ್ಯೆಯೂ ಬಹುದೊಡ್ಡದಿರುತ್ತದೆ. ಪ್ರಯಾಗರಾಜ್‌ನಲ್ಲಿ ಉತ್ಪತ್ತಿ ಆಗಿರುವ ತ್ಯಾಜ್ಯದ ಕುರಿತು ತಿಳಿಯೋಣ. ಪ್ರಯಾಗದ ಮಹಾ ಕುಂಭಮೇಳದಲ್ಲಿ ಭಾಗಿಯಾದವರ ಸಂಖ್ಯೆ ಅಧಿಕೃತವಾಗಿಯೇ 56 ಕೋಟಿ, ಇನ್ನು ಲೆಕ್ಕಕ್ಕೆ ಸಿಗದವರು ಎರಡು ಕೋಟಿಗೂ ಹೆಚ್ಚು, ದೇಶದ ಜನಸಂಖ್ಯೆಯ ಶೇ.40ಕ್ಕಿಂತಲೂ ಹೆಚ್ಚು ಜನರು ಭಾಗವಹಿಸಿದಂತಾಯಿತು. ಇವರೆಲ್ಲರೂ ಸುಮ್ಮನೆ ವಾಪಸ್ಸು ಬರುತ್ತಾರೆಯೇ? ನೀರಿನ ಬಾಟಲಿಗಳು, ಟೀ ಕಪ್ಸ್, ಸೋಪು, ಶಾಂಪು, ತಿಂದು ಬಿಸಾಡುವ ಆಹಾರ ಪೊಟ್ಟಣಗಳ ಕವರ್, ಮಲಮೂತ್ರ ಇತ್ಯಾದಿಗಳನ್ನು ಬಿಟ್ಟು ಬರದೇ ಇರುತ್ತಾರೆಯೇ, ಕನಿಷ್ಠವೆಂದರು ಎರಡು ಮೂರು ದಿನಗಳು ಇದ್ದೇ ಇರುತ್ತಾರೆ. ಎರಡು ದಿನಗಳ ಲೆಕ್ಕವನ್ನು ಪರಿಗಣಿಸಿದರೆ ಸಂಖ್ಯೆ 116 ಕೋಟಿಗಳಾಗುವುದು.

> ಸಕಲ ಜೀವಿಗಳಿಗೂ ಆರೋಗ್ಯ ಸುಖಶಾಂತಿ ನೆಮ್ಮದಿ ಇದ್ದಾಗ ಮಾತ್ರ ಬದುಕು ಸುಂದರ, ಆರೋಗ್ಯವಾಗಿರಲು ನಮ್ಮ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಹಾಗೆಯೇ ಸುಖಶಾಂತಿ ನೆಮ್ಮದಿಗೆ ಸನಾತನ ಧರ್ಮದ ಆಚರಣೆಯು ಬೇಕು, ನಮ್ಮ ಧರ್ಮದಲ್ಲಿ ಕಾಣದ ಅಗೋಚರವಾದ ದಿವ್ಯಶಕ್ತಿ ಇರುವುದರಿಂದಲೇ ವಿಶ್ವದ ಎಲ್ಲಾ ದೇಶಗಳು ಭಾರತದತ್ತ ಕುತೂಹಲದಿಂದ ನೋಡುತ್ತಿವೆ. ಬರಿ ನೋಟದಲ್ಲೇ ಮುಗಿಸದೆ ಅವರು ಸಹ ಭಾರತೀಯ ಸಂಸ್ಕೃತಿ ಹಾಗೂ ಆಚಾರವಿಚಾರಗಳನ್ನು ಅನುಸರಿಸುತ್ತಿದ್ದಾರೆ.

ಒಬ್ಬ ಮನುಷ್ಯ ಉತ್ಪತ್ತಿ ಮಾಡುವ ತ್ಯಾಜ್ಯವು ಅವನ ಆಹಾರ ಕ್ರಮ ಹಾಗೂ ಜೀವನಶೈಲಿಯ ಮೇಲೆ ಆಧಾರಿತವಾಗಿರುತ್ತದೆ. ನಾಗರಿಕತೆ ಬೆಳೆದಂತೆ ಉತ್ಪತ್ತಿ ಆಗುವ ತ್ಯಾಜ್ಯದ ಪ್ರಮಾಣವು ಏರಿಕೆಯಾಗುತ್ತಿದೆ. ವಿಶ್ವಬ್ಯಾಂಕ್‌ನ ಅಂಕಿ ಅಂಶಗಳ ಪ್ರಕಾರ ಸರಾಸರಿ ಒಬ್ಬ ಮನುಷ್ಯ 0.74 ಕೆ.ಜಿ. ಉತ್ಪತ್ತಿ ಮಾಡಿದರೆ, ಭಾರತೀಯರು 0.67 ಕೆ.ಜಿ. ಪ್ರತೀ ಮನುಷ್ಯ ಉತ್ಪತ್ತಿ ಮಾಡುತ್ತಾನೆ. ಇದು ದೇಶದಿಂದ ದೇಶಕ್ಕೆ ಭಿನ್ನವಾಗಿದ್ದು, 0.11ನಿಂದ 4.54 ಕೆ.ಜಿ.ವರೆಗೆ ಇದೆ. ಬದಲಾದ ಜೀವನ ಕ್ರಮದಿಂದಾಗಿ ವಿಶ್ವದಲ್ಲಿ ನಗರಪಾಲಿಕೆಗಳ ತ್ಯಾಜ್ಯವು 2.12 ಬಿಲಿಯನ್ ಟನ್ ಇದೆ. 2050ರ ಹೊತ್ತಿಗೆ 3.40 ಬಿಲಿಯನ್ ಟನ್‌ಗೆ ಏರುವ ಸಂಭವ ಇದೆ. ಇದರ ಜೊತೆಗೆ ಲೆಕ್ಕಕ್ಕೆ ಸಿಗದ ತ್ಯಾಜ್ಯವು ಇಷ್ಟೇ ಪ್ರಮಾಣದಲ್ಲಿ ಇರಬಹುದು. ತ್ಯಾಜ್ಯದಲ್ಲಿ ಎರಡು ಬಗೆ ಇದೆ. ಒಂದು ಮರುಬಳಕೆ ಆಗುವಂತಹದ್ದು, ಮತ್ತೊಂದು ನಿರುಪಯುಕ್ತ ತ್ಯಾಜ್ಯ, ಇದರಲ್ಲಿ ನೂರಾರು ವರ್ಷ ಕಳೆದರೂ ಭೂಮಿಗೆ ಮತ್ತು ಜೀವಿಗಳಿಗೆ ಮಾರಕವಾಗುವ ಕರಗದೇ ಇರುವಂತಹ ತ್ಯಾಜ್ಯವೂ ಇದೆ.

ಪ್ರಯಾಗರಾಜ್ ಕಡೆಗೆ ಮತ್ತೇ ಬರೋಣ 116 ಕೋಟಿ (ಎರಡು ದಿನಕ್ಕೆ) ಜನಸಂಖ್ಯೆಗೆ ಪ್ರತೀ ವ್ಯಕ್ತಿಗೆ 0.67 ಕೆ.ಜಿ. ನಂತೆ 7,77,200 ಟನ್ ತ್ಯಾಜ್ಯ ಉತ್ಪತ್ತಿಯಾಗುವುದು. ಶೇ.50ರಷ್ಟನ್ನು ಪರಿಗಣಿಸಿದರೂ 12 ಸಾವಿರ ಎಕರೆ ವಿಸ್ತೀರ್ಣದಲ್ಲಿ ಹರಡಿಕೊಂಡಿರುವ 3.50 ಲಕ್ಷ ಟನ್ ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ಶೀಘ್ರ ವಿಲೇವಾರಿ ಮಾಡುವ ತುರ್ತುಕ್ರಮವನ್ನು ಪ್ರಯಾಗರಾಜ್ ನಗರಪಾಲಿಕೆಯು ತೆಗೆದುಕೊಳ್ಳಬೇಕಾಗುತ್ತದೆ (ಬೆಂಗಳೂರು ನಗರದಲ್ಲಿ ದಿನಕ್ಕೆ 3500 ಟನ್ ಸಂಗ್ರಹವಾಗುತ್ತಿದೆ. ಇದಕ್ಕಿಂತ ಸಾವಿರಪಟ್ಟು ಹೆಚ್ಚು). ತಪ್ಪಿದ್ದಲ್ಲಿ ಸಾಂಕ್ರಾಮಿಕ ರೋಗಗಳಿಗೆ ಅವಕಾಶ ಮಾಡಿಕೊಟ್ಟಂತಾಗುವುದು. ಇದರ ಜೊತೆಗೆ ಸೊಳ್ಳೆಗಳನ್ನು ತಡೆಯಲು ನದಿದಂಡೆ ಉದ್ದಕ್ಕೂ ಬಿದ್ದಿರುವ ಮಲಮೂತ್ರ, ಕೆಸರು, ಗ್ರೇವಾಟರ್ ಇತ್ಯಾದಿಗಳನ್ನು ಸ್ವಚ್ಛಗೊಳಿಸಬೇಕಾಗುತ್ತದೆ. ಇಷ್ಟಕ್ಕೇ ಮುಗಿಯುವುದಿಲ್ಲ ವಿಶಾಲವಾದ ಜಾಗದಲ್ಲಿ ನಿರ್ಮಾಣವಾಗಿರುವ ತಾತ್ಕಾಲಿಕ ಟೆಂಟ್‌ಗಳು ಹಾಗೂ ಇತರೆ ಕಟ್ಟಡಗಳನ್ನು ತೆರವು ಮಾಡಿದ ನಂತರ ನಿರುಪಯುಕ್ತ ಕಟ್ಟಡ ತ್ಯಾಜ್ಯವನ್ನು(C & D Waste) ವಿಲೇವಾರಿ ಮಾಡಬೇಕಾಗುತ್ತದೆ, ಪ್ಲಾಸ್ಟಿಕ್ ಬಾಟಲಿಗಳು, ಚೀಲಗಳು ಮುಂತಾದವುಗಳ ಪ್ರಮಾಣವು ಕಡಿಮೆ ಇರುವುದಿಲ್ಲ. ಏನೇ ವಿಲೇವಾರಿ ಮಾಡಿದರು ವಾಯುಮಾಲಿನ್ಯದ ಕಾರಣ ಅವುಗಳನ್ನು ಬೆಂಕಿಯಲ್ಲಿ ಸುಡುವಂತಿಲ್ಲ. ಎಲ್ಲವೂ ವೈಜ್ಞಾನಿಕ ರೀತಿಯಲ್ಲಿಯೇ ಆಗಬೇಕು. ಒಟ್ಟಿನಲ್ಲಿ ಪ್ರಯಾಗವನ್ನು ಯಥಾಃ ಸ್ಥಿತಿಗೆ ತರುವ ಕಾರ್ಯವು ನಗರಪಾಲಿಕೆಗೆ ಚಾಲೆಂಜಿಂಗ್ ಆಗಿರುತ್ತದೆ.

ನಗರಕ್ಕೆ 56 ಕೋಟಿ ಭಕ್ತರನ್ನು ಹೊತ್ತುತಂದ ವಾಹನಗಳ ಸಂಖ್ಯೆಗೆ ಲೆಕ್ಕವಿಲ್ಲ. 300 ಕಿಮೀನಷ್ಟು ಉದ್ದಕ್ಕೆ ಟ್ರಾಫಿಕ್ ಜಾಮ್ ಆಗಿರುವುದು ಬಹುಶಃ ದೇಶದ ಚರಿತ್ರೆಯಲ್ಲಿ ದಾಖಲೆಯಾಗಿ ಉಳಿಯುವುದು, ಅಷ್ಟೊಂದು ಪ್ರಮಾಣದಲ್ಲಿ ಸೇರಿದ ವಾಹನಗಳು ಉಗುಳುವ ಹೊಗೆಯಿಂದ ವಾಯುಮಾಲಿನ್ಯ ಆಗದೇ ಇರುವುದೇ?. ಮಹದೇವನ ಕೃಪೆ ಹಾಗೂ ನಾಗಸಾಧುಗಳ ದೈವಿಕ ಶಕ್ತಿಯೂ ಇರಬಹುದು. ಲೇಖನ ಬರೆಯುತ್ತಿರುವ ಈ ಸಮಯಕ್ಕೆ (13–02–2025 ಮಧ್ಯಾಹ್ನ 1.45) ಪ್ರಯಾಗದಲ್ಲಿ ವಾಯು ಗುಣಮಟ್ಟ ಸೂಚ್ಯಂಕವು 52 ಇತ್ತು. ಈ ಅಂಕಿಯು ಆರೋಗ್ಯದ ದೃಷ್ಟಿಯಿಂದ ಉತ್ತಮವಾಗಿದೆ. ದುರದೃಷ್ಟವೆಂದರೆ ಇದೇ ಸಮಯಕ್ಕೆ ಬೆಂಗಳೂರಿನ ವಾಯು ಗುಣಮಟ್ಟ ಸೂಚ್ಯಂಕವು 126 ಇತ್ತು. ಅಂದರೆ ಸೂಚ್ಯಂಕವು ಕಳಪೆ ಹಂತದಲ್ಲಿದ್ದು, ಅನಾರೋಗ್ಯದ ಗಡಿ 150ಅನ್ನು ದಾಟುವತ್ತ ಸಾಗಿದೆ.

ಸಕಲ ಜೀವಿಗಳಿಗೂ ಆರೋಗ್ಯ ಸುಖಶಾಂತಿ ನೆಮ್ಮದಿ ಇದ್ದಾಗ ಮಾತ್ರ ಬದುಕು ಸುಂದರ. ಆರೋಗ್ಯವಾಗಿರಲು ನಮ್ಮ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು. ಹಾಗೆಯೇ ಸುಖಶಾಂತಿ ನೆಮ್ಮದಿಗೆ ಸನಾತನ ಧರ್ಮದ ಆಚರಣೆಯು ಬೇಕು. ನಮ್ಮ ಧರ್ಮದಲ್ಲಿ ಕಾಣದ ಅಗೋಚರವಾದ ದಿವ್ಯಶಕ್ತಿ ಇರುವುದರಿಂದಲೇ ವಿಶ್ವದ ಎಲ್ಲಾ ದೇಶಗಳು ಭಾರತದತ್ತ ಕುತೂಹಲದಿಂದ ನೋಡುತ್ತಿವೆ. ಬರಿ ನೋಟದಲ್ಲೇ ಮುಗಿಸದೆ ಅವರು ಸಹ ಭಾರತೀಯ ಸಂಸ್ಕೃತಿ ಹಾಗೂ ಆಚಾರವಿಚಾರಗಳನ್ನು ಅನುಸರಿಸುತ್ತಿದ್ದಾರೆ. ಧರ್ಮಾಚರಣೆಯಲ್ಲಿ ಅಂಧಾಚಾರ, ಮೌಢ್ಯ, ಹಿಂಸೆ, ದ್ವೇಷ, ಅಸೂಯೆ ಇರಕೂಡದು ಮತ್ತು ಆಚರಿಸುವ ಖುಷಿಯಲ್ಲಿ ಪ್ರಕೃತಿಯನ್ನು ಮಲಿನವಾಗದಂತೆ ಎಚ್ಚರಿಕೆ ಅಗತ್ಯವಿದೆ, ಪರಿಸರವನ್ನು ಸ್ವಚ್ಛವಾಗಿ ಇಡುವುದು ಪಾಲಿಕೆಯವರ ಕೆಲಸ ಮಾತ್ರವಲ್ಲ ಎಲ್ಲರ ಕರ್ತವ್ಯ ಆಗಬೇಕು.



ಮಿರ್ಲೆ ಚಂದ್ರಶೇಖರ
ಮೊ: 9916129654

ಕಟ್ಟಡ ಕಾರ್ಮಿಕರಿಗೆ ಟೂಲ್‌ಕಿಟ್ ವಿತರಣೆ



ಮೈಸೂರು ಜಿಲ್ಲಾ ಕಟ್ಟಡ ಮತ್ತು ಇತರೆ ಕೆಲಸಗಾರರ ಸಂಘ ಆಯೋಜಿಸಿದ್ದ ಟೂಲ್ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಶಾಸಕ ಹರೀಶ್‌ಗೌಡ ಟೂಲ್ ಕಿಟ್ ವಿತರಿಸಿದರು.

ಮೈಸೂರು, ಫೆ.16–ಕಾರ್ಮಿಕ ಇಲಾಖೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಹಾಗೂ ಮೈಸೂರು ಜಿಲ್ಲಾ ಕಟ್ಟಡ ಮತ್ತು ಇತರೆ ಕೆಲಸಗಾರರ ಸಂಘ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಟೂಲ್ ಕಿಟ್ ವಿತರಣೆ ಕಾರ್ಯಕ್ರಮವನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿ, ಅರ್ಹ ಫಲಾನುಭವಿಗಳಿಗೆ ಟೂಲ್ ಕಿಟ್ ಅನ್ನು ವಿತರಿಸಿದರು. ನಂತರ ಮಾತನಾಡಿದ ಅವರು, ನಮ್ಮ ಸರ್ಕಾರ ಕಾರ್ಮಿಕರ ಪರವಾಗಿ ಇದೆ. ಆದುದರಿಂದಲೇ ಅಸಂಘಟಿತ ಕಾರ್ಮಿಕ ವಲಯಕ್ಕೆ ಆರೋಗ್ಯ ತಪಾಸಣೆ ಸೇರಿದಂತೆ, ನೋಂದಾಯಿತ ಕಾರ್ಮಿಕರಿಗೆ ವೈದ್ಯಕೀಯ ಚಿಕಿತ್ಸಾ ವೆಚ್ಚ, ಮಕ್ಕಳ ವಿದ್ಯಾಭ್ಯಾಸಕ್ಕೆ ಧನಸಹಾಯ, ಮದುವೆಗೆ ಧನಸಹಾಯ, 60 ವರ್ಷ ದಾಟಿದ ನೋಂದಾಯಿತ ಕಾರ್ಮಿಕರಿಗೆ ಪಿಂಚಣಿ ಸೌಲಭ್ಯ ಕೂಡ ಇದ್ದು, ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ಅವರು ತುಂಬಾ ಅಚ್ಚುಕಟ್ಟಾಗಿ ಕಾರ್ಮಿಕರಿಗೆ ಅನುಕೂಲ ಮಾಡುತ್ತಿದ್ದಾರೆ. ಹಾಗಾಗಿ ನೋಂದಣಿ ಆಗದ ಕಾರ್ಮಿಕರಲ್ಲಿ ಅರಿವು ಮೂಡಿಸಿ ಎಲ್ಲರೂ ನೋಂದಣಿ ಆಗುವಂತೆ ಮಾಡಿ ಎಂದು ಮನವಿ ಮಾಡಿದರು. ಈ ವೇಳೆ ಅಧಿಕಾರಿಗಳಾದ ಚೇತನ್‌ಕುಮಾರ್, ವೀಣಾ, ಜಯಣ್ಣ, ಮಾದಪ್ಪ, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಸಿದ್ದೇಗೌಡ, ಗೌರವ ಅಧ್ಯಕ್ಷ ನಿಂಗೇಗೌಡ, ಪದಾಧಿಕಾರಿಗಳಾದ ಸಣ್ಣಪ್ಪ, ವೆಂಕಟೇಶ್, ಪರಮೇಶ್, ಕೃಷ್ಣಪ್ಪ, ನಾಗರಾಜು, ರಾಜಗಣೇಶ್, ಕುಮಾರ್ ಕಾರ್ಮಿಕರು ಉಪಸ್ಥಿತರಿದ್ದರು.

ನಿಯಮ ಉಲ್ಲಂಘಿಸಿ ಜಾಹೀರಾತು ಫಲಕ, ಭಿತ್ತಿಪತ್ರ ಅಂಟಿಸಿದರೆ ದಂಡ

ಮೈಸೂರು: ಮೈಸೂರು ಪಾಲಿಕೆ ವ್ಯಾಪ್ತಿಯಲ್ಲಿ ಪಾಲಿಕೆಯಿಂದ ಅನುಮತಿ ಪಡೆಯದೆ ಎಲ್ಲೆಂದರಲ್ಲಿ ಬಸ್ ನಿಲ್ದಾಣಗಳಲ್ಲಿ, ನಗರದ ಪ್ರಮುಖ ಗೋಡೆಗಳ ಮೇಲೆ, ಮೇಲ್ಸೇತುವೆಗಳ ಮೇಲೆ, ವಿದ್ಯುತ್ ಕಂಬಗಳ ಮೇಲೆ ಜಾಹೀರಾತು ಫಲಕಗಳು ಹಾಗೂ ಭಿತ್ತಿಪತ್ರಗಳನ್ನು ಅಂಟಿಸುತ್ತಿರುವುದು ಕಂಡು ಬಂದಿರುತ್ತದೆ. ಆದ್ದರಿಂದ ಪಾಲಿಕೆಗೆ ಆರ್ಥಿಕ ನಷ್ಟ ಉಂಟಾಗುವುದಲ್ಲದೆ ನಗರದ ಸೌಂದರ್ಯ ಹಾಳಾಗುತ್ತಿದೆ. ಆದ್ದರಿಂದ ಕರ್ನಾಟಕ ಓಪನ್ ಪ್ಲೇಸ್ 1981, 1981ರ ನಿಯಮದಲ್ಲಿ ನೀಡಿರುವ ಅಧಿಕಾರದಂತೆ, ಈ ನಿಯಮವನ್ನು ಉಲ್ಲಂಘಿಸು ವವರಿಗೆ ರೂ. 10,000 ದಂಡ ವಿಧಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಸಾಲ ನೀಡಿ ಶೋಷಣೆ ಮಾಡುವವರ ವಿರುದ್ಧ ದೇವರಾಜ ಅರಸು ಕ್ರಮ ಕೈಗೊಂಡಿದ್ದರು

- ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ಮಾಹಿತಿ
- ಡಿ.ದೇವರಾಜ ಅರಸು ಅವರಂತೆ ಸಿದ್ದರಾಮಯ್ಯ ಮಾದರಿ ರಾಜಕಾರಣ ಮಾಡುತ್ತಿದ್ದಾರೆ



ಮೈಸೂರಿನ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರ್ಸ್ ಸಭಾಂಗಣದಲ್ಲಿ ಅನ್ವೇಷಣಾ ಸೇವಾ ಟ್ರಸ್ಟ್ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಮೈಸೂರು, ಫೆ.16(ಎಂಟಿವೈ)– ಸಾಲ ಪಡೆದ ಜನರಿಗೆ ಕಿರುಕುಳ ನೀಡುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರಮ ಕೈಗೊಂಡಿರುವಂತೆ ಈ ಹಿಂದೆಯೇ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರು ಸಾಲ ನೀಡಿ ಶೋಷಣೆ ಮಾಡುವವರ ವಿರುದ್ಧ ಕ್ರಮ ಕೈಗೊಂಡಿದ್ದರು ಎಂದು ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ತಿಳಿಸಿದ್ದಾರೆ.

ಮೈಸೂರಿನ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರ್ಸ್ ಸಭಾಂಗಣದಲ್ಲಿ ಅನ್ವೇಷಣಾ ಸೇವಾ ಟ್ರಸ್ಟ್ ಆಯೋಜಿಸಿದ್ದ ಅರಸು ಪತ್ರಿಕೆಯ 12ನೇ ವರ್ಷದ ವಾರ್ಷಿಕೋತ್ಸವ, ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಾಲ ನೀಡಿ ಶೋಷಣೆ ಮಾಡುವವರ ವಿರುದ್ಧ ಕ್ರಮ ಕೈಗೊಂಡಿದ್ದರಲ್ಲದೆ, ಅಂತಹವರ ವಿರುದ್ಧ ದೂರು ನೀಡುವಂತೆ ಸಲಹೆ ನೀಡಿದ್ದರು. ಪ್ರಸ್ತುತ ಸಂದರ್ಭದಲ್ಲಿ ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದ ವಿರುದ್ಧವೂ ಮುಖ್ಯಮಂತ್ರಿ ಸಿದ್ದರಾಮಯ್ಯ ಕಠಿಣ ಕ್ರಮ ಕೈಗೊಳ್ಳುತ್ತಿದ್ದಾರೆ. ಸಾಮಾಜಿಕ ಬದ್ಧತೆಯಲ್ಲಿ ಅರಸು ಅವರಂತೆ ಮಾದರಿ ರಾಜಕಾರಣ ಮಾಡುತ್ತಿದ್ದಾರೆ. ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯುವ ಮೂಲಕ ಶೋಷಿತ ಸಮುದಾಯಕ್ಕೆ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಈ ಹಿಂದೆ ದೇವರಾಜ ಅರಸು ಅವರು ಭಾಗ್ಯಜ್ಯೋತಿ ಹೆಸರಿನಲ್ಲಿ ಬಡವರ ಮನೆಗೆ ವಿದ್ಯುತ್ ಸಂಪರ್ಕ ಒದಗಿಸಿದರು. ಭಾಗ್ಯಜ್ಯೋತಿ ಇಂದಿಗೂ ನೂರಾರು ಕುಟುಂಬಗಳಿಗೆ ನೆರವಾಗಿವೆ. ಈಗಲೂ ಹಲವು ಕುಟುಂಬಗಳು ಮನೆಯ ವಿದ್ಯುತ್ ಬಿಲ್ ಕಟ್ಟಲಾಗದೆ ಕತ್ತಲಲ್ಲಿ ಇರುವುದನ್ನು ಗಮನಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಗೃಹಜ್ಯೋತಿ ಮೂಲಕ ಬೆಳಕು ನೀಡಿದ್ದಾರೆ. ಅರಸು ಅವರ ಸಾಮಾಜಿಕ ನೀತಿ ಎಲ್ಲ ರಾಜಕಾರಣಿಗಳಿಗೂ ಮಾದರಿ ಎಂದರು.

ಕಂಠೀರವ ಸ್ಟುಡಿಯೋ ಮಾಜಿ ಅಧ್ಯಕ್ಷರಾದ ವಿಜಯಲಕ್ಷ್ಮಿ ಮಾತನಾಡಿ, ಡಿ.ದೇವರಾಜ ಅರಸು ಅವರು ಎಷ್ಟು ಕಷ್ಟದಲ್ಲಿದ್ದರು ಎಂದು ಯಾರಿಗೂ ಗೊತ್ತಿಲ್ಲ. ಮುಖ್ಯಮಂತ್ರಿ ಆಗಿ ಶೋಷಿತರ ಧ್ವನಿಯಾಗಿದ್ದರು. ಆದರೆ ಅವರೇ ಶೋಷಣೆಗೆ ಒಳಗಾದರು. ಭ್ರಷ್ಟಾಚಾರ ಮಾಡಿ ದುಡ್ಡು ಮಾಡಿದ್ದಾರೆ ಎಂದು ಆರೋಪಿಸಿ ಅರಸು ಅವರ ಹೊಲ ಮತ್ತು ಮನೆಯ ಭೂಮಿ ಅಗೆದಿದ್ದರು. ಆದರೆ, ಅವರು ಮೈಸೂರು ಮತ್ತು ಬೆಂಗಳೂರು ಸೇರಿದಂತೆ ಎಲ್ಲಿಯೂ ನಿವೇಶನ ಹೊಂದಿರಲಿಲ್ಲ. ಅವರ ಮೊಮ್ಮಗ ಸೂರಜ್ ಹೆಗ್ಡೆ ಎಂದಿಗೂ ಅಜ್ಜನ ಹೆಸರನ್ನು ದುರ್ಬಳಕೆ ಮಾಡಿಕೊಂಡಿಲ್ಲ. ಖುದ್ದು ತಾನೇ ದೇವರಾಜ ಅರಸು ಮೊಮ್ಮಗ ಎಂದು ಹೇಳಿಕೊಂಡಿಲ್ಲ. ದೇವರಾಜ ಅರಸು ಹೆಸರು ಹೇಳುವ ಅನೇಕರು ಅವರ ಸಿದ್ಧಾಂತ ಮರೆತಿದ್ದಾರೆ ಎಂದು ವಿಷಾದಿಸಿದರು.

ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ಮಾತನಾಡಿ, ಪಕ್ಷದ ಕಚೇರಿಯಲ್ಲೂ ಕಾಣದ, ಚುನಾವಣೆಯಲ್ಲಿ ಪ್ರಚಾರಕ್ಕೂ ಬಾರದ ವ್ಯಕ್ತಿಗಳ ವೈಭವೀಕರಣವೇ ಇಂದು ಹೆಚ್ಚಾಗಿದೆ. ಸಜ್ಜನಿಕೆ ಮಾತ್ರ ಸಾಲದು, ಶಕ್ತಿ ಪ್ರದರ್ಶನ ಹಾಗೂ ಸತತ ಕಾರ್ಯಚಟುವಟಿಕೆಯಿಂದ ನಾಯಕತ್ವ ಪಡೆಯಬೇಕು ಎಂದು ದೇವರಾಜ ಅರಸು ಅವರ ಮೊಮ್ಮಗ ಸೂರಜ್ ಹೆಗ್ಡೆ ಅವರಿಗೆ ಸಲಹೆ ನೀಡಿದರು.

ರಾಜ್ಯ ಸರ್ಕಾರ ಬರುವ ಬಜೆಟ್‌ನಲ್ಲಿ ಅರಸು ಜಾಗೃತಿ ಅಕಾಡೆಮಿ ಚಾರಿಟಬಲ್ ಟ್ರಸ್ಟ್‌ಗೆ ಮೈಸೂರಿನಲ್ಲಿ 10 ಎಕರೆ ಜಾಗ ನೀಡಬೇಕು. ದೇವರಾಜ ಅರಸು ಅವರ ಪ್ರತಿಮೆ ನಿರ್ಮಾಣ ಮಾತ್ರವಲ್ಲ ಅವರ ಕಾಲದಲ್ಲಿ ಮಾಡಿರುವ ಸಾಮಾಜಿಕ ಕಾರ್ಯಗಳ ಚರ್ಚೆ ಹಾಗೂ ಚಿಂತನೆಯ ಕೇಂದ್ರ ಆರಂಭವಾಗಬೇಕೆಂದು ಒತ್ತಾಯಿಸಿದರು.

ಪ್ರಶಸ್ತಿ ಪ್ರದಾನ: ಇದೇ ವೇಳೆ ಪತ್ರಕರ್ತರಾದ ಟಿ.ಗುರುರಾಜ್, ರಮೇಶ್ ಸುರ್ವೆ, ಹಿರೇನಲ್ಲೂರು ಶಿವನ್, ಮಾಲತೇಶ್ ಅರಸ್, ಅಖಿಲ ಭಾರತ ಅಂಚೆ ನೌಕರರ ಸಂಘದ ಅಧ್ಯಕ್ಷ ಎನ್.ಕೃಷ್ಣ, ಯೋಗ ಶಿಕ್ಷಕಿ ಪ್ರೇಮಾ ಮಂಜುನಾಥ್ ಅವರಿಗೆ ಧ್ವನಿ ಕೊಟ್ಟ ಧಣಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಇದಕ್ಕೂ ಮುನ್ನ ಕಾರ್ಯಕ್ರಮವನ್ನು ಎಐಸಿಸಿ ಕಾರ್ಯದರ್ಶಿ ಸೂರಜ್ ಹೆಗ್ಡೆ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಅನ್ವೇಷಣಾ ಸೇವಾ ಟ್ರಸ್ಟ್‌ನ ಅಧ್ಯಕ್ಷ ಎಂ.ಜಿ.ಆರ್.ಅರಸ್, ಹೆಚ್.ಎಂ.ಟಿ. ಲಿಂಗರಾಜೇ ಅರಸ್ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಹಾಸನ ಮಿತ್ರ

ಹಾಸನ ಜಿಲ್ಲೆಯ ಹಲವೆಡೆ 4.19 ಲಕ್ಷ ಮೌಲ್ಯದ ಚಿನ್ನಾಭರಣ, ವಸ್ತು ಕಳವು



ಹಾಸನ: ಜಿಲ್ಲೆಯ ಎರಡು ಮನೆ ಹಾಗೂ ಅಂಗಡಿಯಲ್ಲಿ ಕಳ್ಳತನ ಮಾಡಿರುವ ಕಳ್ಳರು, 4.19 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಇತರ ವಸ್ತುಗಳನ್ನು ಕಳವು ಮಾಡಿದ್ದಾರೆ.

ಅರಸೀಕೆರೆಯ ರೈಲ್ವೆ ಕ್ವಾರ್ಟರ್ಸ್‌ನ ಅಬ್ದುಲ್ ಹಾನ್ ಫೆ.8ರಂದು ರಾತ್ರಿ ಮನೆಗೆ ಬೀಗ ಹಾಕಿ ಹೋಗಿದ್ದರು. ಮಾರನೇ ದಿನ ಬೆಳಿಗ್ಗೆ ಮನೆಗೆ ಬಂದು ನೋಡಿದಾಗ, ಹಿಂಬಾಗಿಲನ್ನು ಮುರಿದು ಮನೆಯೊಳಗೆ ನುಗ್ಗಿ ಬೀರುವಿನಲ್ಲಿದ್ದ ಸುಮಾರು 1.44 ಲಕ್ಷ ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ. ಅರಸೀಕೆರೆ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇನ್ನೊಂದು ಪ್ರಕರಣದಲ್ಲಿ ಹಾಸನ ಟೌನ್ ಚನ್ನಪಟ್ಟಣದ ದೇವಮ್ಮ ಬಡಾವಣೆ ತೀರ್ಥೇಶ್ ಅವರ ಮನೆಯ ಹಿಂದಿನ ಬಾಗಿಲು ಮುರಿದ ಒಳನುಗ್ಗಿರುವ ಕಳ್ಳರು, ಕಬೋರ್ಡ್‌ನಲ್ಲಿದ್ದ 1.50 ಲಕ್ಷ ಮೌಲ್ಯದ ಚಿನ್ನದ ಆಭರಣ ಹಾಗೂ 70 ಸಾವಿರ ನಗದು ಕಳವು ಮಾಡಿದ್ದಾರೆ. ಫೆ.14ರಂದು ಬೆಳಿಗ್ಗೆ 9.30ಕ್ಕೆ ಮನೆಯಲ್ಲಿದ್ದ ಪಲ್ಲವಿ ಅವರು ಬೀಗ ಹಾಕಿ, ಕೀಯನ್ನು ಅತ್ತೆಯ ಮನೆಗೆ ಕೊಟ್ಟು ಹೋಗಿದ್ದರು. ಫೆ.15ರಂದು ಬೆಳಿಗ್ಗೆ ಅತ್ತೆ ಬಂದು ನೋಡಿದಾಗ, ಕಳುವಾಗಿರುವುದು ಗೊತ್ತಾಗಿದೆ. ಹಾಸನ ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೂರನೇ ಪ್ರಕರಣದಲ್ಲಿ ಹೊಳೆನರಸೀಪುರದ ಹಾಸನ-ಮೈಸೂರು ರಸ್ತೆಯ ಪೂಜೆ ಕೊಪ್ಪಲು ಕ್ರಾಸ್ ಬಳಿ ಇರುವ ನಸೀರ್ ಅಹಮ್ಮದ್ ಅವರ ಉಮರ್ ಆಗ್ರೋ ಇಂಡಸ್ಟ್ರೀಸ್ ವರ್ಕ್‌ಶಾಪ್‌ನಲ್ಲಿ ಕಳ್ಳತನ ಮಾಡಿರುವ ಕಳ್ಳರು 1.25 ಲಕ್ಷ ಮೌಲ್ಯದ ವೆಲ್ಡಿಂಗ್ ಕೇಬಲ್ ಮತ್ತು ಟಯರ್‌ಗಳನ್ನು ಕಳವು ಮಾಡಿದ್ದಾರೆ. ಫೆ.13ರಂದು ರಾತ್ರಿ ನಸೀರ್ ಅಹಮ್ಮದ್ ಬೀಗ ಹಾಕಿ ಮನೆಗೆ ಹೋಗಿದ್ದರು. ಫೆ.14ರಂದು ವರ್ಕ್‌ಶಾಪ್‌ಗೆ ಬಂದು ಬಾಗಿಲು ತೆಗೆದಾಗ, ಕಳವಾಗಿರುವುದು ಗೊತ್ತಾಗಿದೆ. ಹೊಳೆನರಸೀಪುರ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವೃದ್ಧರು ಮಕ್ಕಳ ವಿರೋಧಕ್ಕೆ ಒಳಗಾಗಿ ವೃದ್ಧಾಶ್ರಮ ಹೆಚ್ಚಳಕ್ಕೆ ಕಾರಣವಾಗಿದೆ

ಉಪನ್ಯಾಸಕ ಡಾ.ಎಸ್.ಜಿ.ಮಹೇಶ್ ಬೇಸರ




ಕಾಮಧೇನು ಸಹಕಾರಿ ವೃದ್ಧಾಶ್ರಮದಲ್ಲಿ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಹಾಸನ: ಪ್ರಸ್ತುತದಲ್ಲಿ ಮಕ್ಕಳ ವಿರೋಧಕ್ಕೆ ವೃದ್ಧರು ಒಳಗಾದ ಪರಿಣಾಮ ವೃದ್ಧಾಶ್ರಮಗಳು ಹೆಚ್ಚಾಗುತ್ತಿವೆ. ವೃದ್ಧರ ಆರೋಗ್ಯದ ಬಗ್ಗೆ ಕಾಳಜಿ ಕೂಡ ಇಲ್ಲದಂತಾಗಿದೆ. ಆದರೆ ವೃದ್ಧಾಶ್ರಮಗಳು ಎಲ್ಲವನ್ನು ನೋಡಿಕೊಳ್ಳುತ್ತಿದೆ ಎಂದು ಹೇಮಗಂಗೋತ್ರಿ ವಿಶ್ವವಿದ್ಯಾಲಯ ಸಮಾಜಕಾರ್ಯ ವಿಭಾಗದ ಉಪನ್ಯಾಸಕ ಡಾ.ಎಸ್.ಜಿ.ಮಹೇಶ್ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಕಾಮಧೇನು ಸಹಕಾರಿ ವೃದ್ಧಾಶ್ರಮ ಆವರಣದಲ್ಲಿ ವಿಶ್ವವಿದ್ಯಾಲಯದ ಸಹಭಾಗಿತ್ವದಲ್ಲಿ ನಡೆದ 'ಪ್ರಸ್ತುತ ವಿದ್ಯಮಾನದಲ್ಲಿ ವೃದ್ಧರ ಸಮಸ್ಯೆಗಳು ಮತ್ತು ಅವರ ಆರೋಗ್ಯದ ಜವಾಬ್ದಾರಿಗಳ ಪಾತ್ರ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಯಸ್ಸಾದ ವೃದ್ಧರನ್ನು ನೋಡಿಕೊಳ್ಳುವುದು ಮಕ್ಕಳ ಜವಾಬ್ದಾರಿ. ನಮ್ಮಲ್ಲಿರುವ ಸಾಮಾನ್ಯ ಜ್ಞಾನವು ಪ್ರಸ್ತುತದಲ್ಲಿ ಕುಂದುತ್ತಿದ್ದು, ತಾಯಿ ಮತ್ತು ತಂದೆಯನ್ನು ಹಾರೈಕೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಇಂದು ವೃದ್ಧಾಶ್ರಮಗಳು ಹೆಚ್ಚಾಗುತ್ತಿದೆ. ಮನೆಯಲ್ಲಿ ತಂದೆ-ತಾಯಿಯನ್ನು ಸರಿಯಾಗಿ ನೋಡಿಕೊಳ್ಳುತ್ತಿಲ್ಲ. ಕರ್ನಾಟಕ ರಾಜ್ಯದಲ್ಲಿ 1500 ವೃದ್ಧಾಶ್ರಮವಿದ್ದು, ಇನ್ನು ಹೆಚ್ಚಾಗುತ್ತಿದ್ದು, ಮಕ್ಕಳಿಂದಲೇ ಹಿರಿಯರು ದೂರವಾದ ಹಿನ್ನಲೆಯಲ್ಲಿ ಇಂತಹ ವೃದ್ಧಾಶ್ರಮದ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ವೇಳೆ ಹೇಮಗಂಗೋತ್ರಿ ವಿಶ್ವವಿದ್ಯಾಲಯ ಸಮಾಜ ಕಾರ್ಯ ವಿಭಾಗದ ಉಪನ್ಯಾಸಕ ಡಾ.ವಿನಯ್, ಕಾಮಧೇನು ಸಹಕಾರಿ ವೃದ್ಧಾಶ್ರಮದ ನಿರ್ದೇಶಕ ಕೃಷ್ಣ ಅಯ್ಯಂಗಾರ್, ಪ್ರಭುಧರ್, ಕಾಮಧೇನು ಸಹಕಾರಿ ವೃದ್ಧಾಶ್ರಮದ ಮುಖ್ಯಸ್ಥರಾದ ಪುನೀತಾ, ದಿವ್ಯ, ಶಿಲ್ಪಾ ಶಾಲಿನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಿಶ್ವದಲ್ಲಿಯೇ ಅತೀ ದೊಡ್ಡ ಹನುಮಾನ್ ರೇಖಾಚಿತ್ರ ರಚನೆ



ತುರುವನೂರು ಗ್ರಾಮದಲ್ಲಿ ಬಿಡಿಸಿರುವ ಅತೀ ದೊಡ್ಡ ಹನುಮಾನ್ ರೇಖಾಚಿತ್ರ.

ಚಿತ್ರದುರ್ಗ, ಫೆ.16-ವಿಶ್ವದಲ್ಲಿಯೇ ಅತೀ ದೊಡ್ಡ ಹನುಮಾನ್ ರೇಖಾಚಿತ್ರವನ್ನು ಆಂಜನೇಯ ಜಾತ್ರಾ ಮಹೋತ್ಸವ ಅಂಗವಾಗಿ ಚಿತ್ರದುರ್ಗ ಜಿಲ್ಲೆಯ ತುರುವನೂರು ಗ್ರಾಮದಲ್ಲಿ ಬಿಡಿಸಲಾಗಿದೆ. ಈ ಒಂದು ರೇಖಾಚಿತ್ರ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿಯೂ ದಾಖಲೆ ಬರೆಯಲಿದೆ ಎಂದು ಹೇಳಲಾಗಿದೆ.

ತುರುವನೂರಿನ ಪ್ರಭಂಜನ ರೆಡ್ಡಿ ಎಂಬವರ ಜಮೀನಿನಲ್ಲಿ ರಾಮಧೂತ ಹನುಮನ ಬೃಹತ್ ರೇಖಾಚಿತ್ರವನ್ನು ಬಿಡಿಸಲಾಗಿದೆ. 20,500 ಚದುರ ಮೀಟರ್ ವಿಸ್ತೀರ್ಣದಲ್ಲಿ ಈ ಚಿತ್ರವನ್ನು ಬಿಡಿಸಲಾಗಿದ್ದು 5 ಎಕರೆ ಜಮೀನಿನಲ್ಲಿ ಎಂ ಸ್ಯಾಂಡ್‌ನಲ್ಲಿ ಹನುಮಾನ್ ಚಿತ್ರ ಮೂಡಿಬಂದಿದೆ.

ಒಟ್ಟು 75 ಸಾವಿರ ರೂಪಾಯಿ ವೆಚ್ಚದಲ್ಲಿ ಭಜರಂಗಿಗೆ ವಿದ್ಯುತ್ ದೀಪ ಅಳವಡಿಕೆ ಮಾಡಲಾಗಿದೆ. ಆಟೋಕ್ಯಾಡ್ ತಂತ್ರಜ್ಞಾನ ಬಳಸಿ ವಿರಾಟ ಹನುಮನ ರೇಖಚಿತ್ರವನ್ನು ರಚನೆ ಮಾಡಲಾಗಿದೆ. ಈ ಮಹಾಕಾರ್ಯಕ್ಕೆ ಶಾಲಾ- ಕಾಲೇಜು ವಿದ್ಯಾರ್ಥಿಗಳು ಕೂಡ ಸಹಕಾರ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಇನ್ನು ಈ ಬಗ್ಗೆ ಮಾತನಾಡಿದ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಇದೇ ಊರಿನವರಾದ ಮಂಜುನಾಥ್ ರೆಡ್ಡಿ ಹಾಗೂ ಅವರ ಶ್ರೀಮತಿಯವರ ಇಚ್ಛಾ ಶಕ್ತಿಯಿಂದ ಇಂತಹದೊಂದು ಅದ್ಭುತ ಸೃಷ್ಟಿಯಾಗಿದೆ. ಇಲ್ಲೇ ಹುಟ್ಟಿ ಇಲ್ಲೇ ಬೆಳೆದು ಈಗ ಬೆಂಗಳೂರಿನಲ್ಲಿರುವ ದಂಪತಿ ಅವರು ಇಲ್ಲಿ ಐದು ಎಕರೆ ಜಮೀನಿನಲ್ಲಿ ಹನುಮಾನ್ ರೇಖಾಚಿತ್ರವನ್ನು ಬಿಡಿಸಿದ್ದಾರೆ. ನಾನು ಇದೇ ಕ್ಷೇತ್ರದ ಶಾಸಕನಾಗಿ ನನಗೆ ತುಂಬಾ ಸಂತೋಷ ನೀಡಿದೆ ಎಂದು ಹೇಳಿದ್ದಾರೆ.

ಮಂಜುನಾಥ್ ರೆಡ್ಡಿ ಮಾತನಾಡಿ, ನಾವು ಮೂಲತಃ ಇದೇ ತುರುವನೂರು ಗ್ರಾಮದವರು, ನಾವು ಬೆಂಗಳೂರಿನಲ್ಲಿದ್ದರೂ ಕೂಡ ನಮ್ಮ ಊರಲ್ಲಿ ಆಂಜನೇಯನ ಜಾತ್ರೆ ಪ್ರತಿ ವರ್ಷ ನಡೆಯುತ್ತದೆ. ಈ ಜಾತ್ರೆಗೆ ವಿಶೇಷವಾಗಿ ಏನಾದರೂ ಮಾಡಬೇಕು ಎಂದು ಹಲವಾರು ವರ್ಷಗಳಿಂದ ಮನಸಲ್ಲಿ ತುಂಬಾನೇ ತುಡಿತವಿತ್ತು. ಕಳೆದ ಒಂದು ಒಂದೂವರೆ ವರ್ಷಗಳಿಂದ ಈ ಬಗ್ಗೆ ಕಾರ್ಯರೂಪಗಳನ್ನು ನಿರ್ಮಿಸಿಕೊಂಡು ಈಗ ಕಾರ್ಯರೂಪಕ್ಕೆ ತಂದಿದ್ದೇವೆ. ಈ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಹೇಳಿದ್ದಾರೆ.

ನಾಳೆ ನಕ್ಷಾ ಯೋಜನೆ ಉದ್ಘಾಟನಾ ಸಮಾರಂಭ

ಮೈಸೂರು: ಕಂದಾಯ ಇಲಾಖೆ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ವತಿಯಿಂದ ನಡೆಯುವ "ನಕ್ಷಾ" ನಗರ ಪ್ರದೇಶಗಳಲ್ಲಿನ ಆಸ್ತಿಗಳಿಗೆ ಭೂ ದಾಖಲೆಗಳ ರಚನೆ ಯೋಜನೆಯ ಉದ್ಘಾಟನಾ ಸಮಾರಂಭವನ್ನು ಫೆ.18ರಂದು ಬೆಳಗ್ಗೆ 11 ಗಂಟೆಗೆ ಬೋಗಾದಿಯ ರಂಗಮಂದಿರದಲ್ಲಿ (ಗಣಪತಿ ದೇವಸ್ಥಾನದ ಹಿಂಭಾಗ) ಹಮ್ಮಿಕೊಳ್ಳಲಾಗಿದೆ.

ಧಾರ್ಮಿಕ ಶಾಸ್ತ್ರೀಯ ಅಧ್ಯಯನಕ್ಕೆ ಪೂರಕ ವಾತಾವರಣ ಅತ್ಯವಶ್ಯಕ

ವ್ಯಾಸರಾಜ ಮಠದ(ಸೋಸಲೆ) ಶ್ರೀ ವಿದ್ಯಾಶ್ರೀಶತೀರ್ಥ ಸ್ವಾಮೀಜಿ ಅಭಿಮತ



ವಿವಿಧ ಭಜನಾ ಮಂಡಳಿ ಮಹಿಳೆಯರಿಂದ ಹರಿದಾಸ ಕೀರ್ತನೆಗಳನ್ನು ಪ್ರಸ್ತುತಪಡಿಸಿದರು.

ಮೈಸೂರು, ಫೆ.16(ಎಸ್‌ಪಿಎನ್)- ಧಾರ್ಮಿಕ ಶಾಸ್ತ್ರೀಯ ಅಧ್ಯಯನದಲ್ಲಿ ತೊಡಗಿಸಿಕೊಂಡು ಆ ವಿಷಯವನ್ನು ಪೂರ್ಣಗೊಳಿಸುವವರ ಸಂಖ್ಯೆ ವಿರಳ. ಹಾಗಾಗಿ ಈ ವಿಷಯ ಅಧ್ಯಯನಕ್ಕೆ ಪೂರಕ ವಾತಾವರಣ ನಿರ್ಮಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ವ್ಯಾಸರಾಜ ಮಠದ(ಸೋಸಲೆ) ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಹರಿದಾಸ ಸಂಗೀತ ಸಾಹಿತ್ಯೋತ್ಸವ ಸಮಿತಿಯ ವತಿಯಿಂದ ಶಾರದಾ ವಿಲಾಸ ಕಾಲೇಜಿನ ಶತಮಾನೋತ್ಸವ ಸಭಾಂಗಣದಲ್ಲಿ ಭಾನುವಾರ ಸಂಜೆ ಆಯೋಜಿಸಿದ್ದ 'ಗಾನಸಿರಿ ವೇದಾಂತ ಲಹರಿ ಭಾಗ-12' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇತ್ತೀಚೆಗೆ ವ್ಯಾಸಂಗಕ್ಕೆ ಮೊಬೈಲ್ ಹಾವಳಿ ಮಾರಕವಾಗಿದೆ. ಇದರಿಂದ ವಿದ್ಯಾರ್ಥಿಗಳ ಅಧ್ಯಯನ ಬೇರೆಡೆ ಸೆಳೆಯುತ್ತಿದೆ. ಇಂತಹ ಸಂದರ್ಭದಲ್ಲಿ ಧಾರ್ಮಿಕ ಶಾಸ್ತ್ರೀಯ ಅಧ್ಯಯನಕ್ಕೆ ಬರುವವರ ಸಂಖ್ಯೆ ಇನ್ನೂ ವಿರಳವಾಗುತ್ತಿದೆ. ಧಾರ್ಮಿಕ ವಿಷಯದಲ್ಲಿ ತೊಡಗಿಸಿಕೊಂಡು ಪೂರ್ಣವಾಗಿ ತೊಡಗಿಸಿಕೊಂಡು ಅಧ್ಯಯನ ನಡೆಸುವವರ ಸಂಖ್ಯೆ ಅತಿ ವಿರಳ ಎಂದು ಬೇಸರ ವ್ಯಕ್ತಪಡಿಸಿದರು.

ಸಾಮಾನ್ಯ ವಿಷಯಗಳ ಬಗ್ಗೆ ವಿಶ್ವವಿದ್ಯಾಲಯ, ಕಾಲೇಜುಗಳಲ್ಲಿ ವ್ಯಾಸಂಗ ಮಾಡುವವರ ಸಂಖ್ಯೆ ಹೆಚ್ಚಿದೆ. ಆದರೆ, ಧಾರ್ಮಿಕ ಶಾಸ್ತ್ರೀಯ ಅಧ್ಯಯನ ಮಾಡುವವರ ಸಂಖ್ಯೆ ಕೇವಲ ಅತ್ಯಲ್ಪ. ಈ ಜ್ಞಾನ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವುದು ಸಮಾಜದ ಮುಖ್ಯ ಕರ್ತವ್ಯ. ಈ ಅಧ್ಯಯನಕ್ಕೆ ಚ್ಯುತಿ ಬರದಂತೆ ನೋಡಿಕೊಳ್ಳುವುದು ಸಮಾಜದ ಕರ್ತವ್ಯ ಎಂದರು.

ಹಿಂದೆ ಶಾಸ್ತ್ರೀಯ ಅಧ್ಯಯನಕ್ಕೆ ಅನುಕೂಲ ಮತ್ತು ಅನನುಕೂಲಗಳಿದ್ದವು. ಆದರೆ, ಪ್ರತಿಬಂಧಕಗಳು ಇರಲಿಲ್ಲ. ಅಂದು ಅಧ್ಯಯನಕ್ಕೆ ಪೂರಕ ವಾತಾವರಣವಿತ್ತು, ಅದು ಈಗಿಲ್ಲ. ಇಡೀ ವಾತಾವರಣ ಕಲುಷಿತಗೊಂಡಿದೆ. ನಾನಾ ಆಕರ್ಷಣೆಗಳು ಮನಸ್ಸನ್ನು ಕದಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಈ ವೇಳೆ ಸುಧಾಮಂಗಳ ಪೂರೈಸಿದ ಯುವ ವಿದ್ವಾಂಸರಾದ ಪ್ರಣವಾಚಾರ್ಯ, ಸುಘೋಷಾಚಾರ್ಯ, ಎಚ್.ಎನ್.ಸೌಮಿತ್ರಿ, ಶ್ರೀಶ ಅಯಾಚಿತ ಅವರನ್ನು ಸನ್ಮಾನಿಸಲಾಯಿತು. ಎನ್.ಧಾನ್ಯ, ಎಂ.ಎಸ್.ಕೀರ್ತನ, ಎಸ್.ಹಂಸಣಿ, ನಯನ ನಾಗರಾಜ್ ಅವರು ಹರಿದಾಸ ಕೀರ್ತನೆಗಳನ್ನು ಪ್ರಸ್ತುತ ಪಡಿಸಿದರು.

ಕೇಂದ್ರ ಸೇವೆಗೆ ತೆರಳಿದ ಡಾ.ಅಜಯ್ ನಾಗಭೂಷಣ್-ಶಿಖಾ ಐಎಎಸ್ ದಂಪತಿ





ಬೆಂಗಳೂರು, ಫೆ.16- ಕರ್ನಾಟಕದಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಣೆ ಮಾಡಿದ್ದ ಸಿ.ಶಿಖಾ ಮತ್ತು ಡಾ. ಅಜಯ್ ನಾಗಭೂಷಣ್ ದಂಪತಿ ಕೇಂದ್ರ ಸೇವೆಗೆ ನಿಯೋಜನೆಗೊಂಡಿದ್ದಾರೆ. 2024ರಲ್ಲಿಯೇ ರಾಜ್ಯ ಸರ್ಕಾರ ಸಿ.ಶಿಖಾ ಅವರನ್ನು ರಾಜ್ಯ ಸೇವೆಯಿಂದ ಬಿಡುಗಡೆ ಮಾಡಿದೆ. ಕಳೆದ ವಾರ ಡಾ. ಅಜಯ್ ನಾಗಭೂಷಣ್ ಸಹ ರಾಜ್ಯ ಸೇವೆಯಿಂದ ಬಿಡುಗಡೆಗೊಂಡಿದ್ದಾರೆ.

ಸಿ.ಶಿಖಾ ಮತ್ತು ಡಾ.ಅಜಯ್ ನಾಗಭೂಷಣ್ ಇಬ್ಬರೂ ಸಹ 2004ನೇ ಬ್ಯಾಚ್‌ನ ಕರ್ನಾಟಕ ಕೇಡರ್‌ನ ಐಎಎಸ್ ಅಧಿಕಾರಿಗಳು. ಡಾ.ಅಜಯ್ ನಾಗಭೂಷಣ್ ಅವರು ಕೇಂದ್ರ ವಾರ್ತಾ ಮತ್ತು ಪ್ರಚಾರ ಇಲಾಖೆ ಜಂಟಿ ಕಾರ್ಯದರ್ಶಿಯಾಗಿ ನೇಮಕಗೊಂಡಿದ್ದಾರೆ.

ರಾಜ್ಯದಲ್ಲಿ ಅವರು ಸರ್ಕಾರದ ಪ್ರಧಾನ ಕಾರ್ಯದರ್ಶಿ ಸಹಕಾರ ಇಲಾಖೆ ಮತ್ತು ಪಶುಸಂಗೋಪನೆ, ಪಶು ವೈದ್ಯಕೀಯ ವಿಜ್ಞಾನ ಹಾಗೂ ಮೀನುಗಾರಿಕೆ ಇಲಾಖೆ ಸರ್ಕಾರದ ಕಾರ್ಯದರ್ಶಿ ಹುದ್ದೆಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದ್ದರು.

ಡಾ.ಅಜಯ್ ನಾಗಭೂಷಣ್ ಪತ್ನಿ ಸಿ.ಶಿಖಾ ಅವರು ಸಹ ರಾಜ್ಯದ ಹಿರಿಯ ಐಎಎಸ್ ಅಧಿಕಾರಿ. ಮೈಸೂರು ಜಿಲ್ಲಾಧಿಕಾರಿ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡಿ ಉತ್ತಮ ಹೆಸರು ಗಳಿಸಿದ್ದರು. ವಾಣಿಜ್ಯ ತೆರಿಗೆ ಇಲಾಖೆ ಆಯುಕ್ತರಾಗಿ ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿದ್ದರು. ಅವರು 2024ರ ನವೆಂಬರ್‌ನಲ್ಲಿಯೇ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯದ ಜಂಟಿ ಕಾರ್ಯದರ್ಶಿಯಾಗಿ ನಿಯೋಜನೆಗೊಂಡಿದ್ದು, ರಾಜ್ಯ ಸೇವೆಯಿಂದ ಬಿಡುಗಡೆ ಮಾಡಲಾಗಿದೆ.

ಕರ್ನಾಟಕ ಕೇಡರ್‌ನ ಐಎಎಸ್ ದಂಪತಿ ಸಿ.ಶಿಖಾ ಮತ್ತು ಡಾ. ಅಜಯ್ ನಾಗಭೂಷಣ್ ಇಬ್ಬರೂ ಕೇಂದ್ರ ಸೇವೆಗೆ ನಿಯೋಜನೆಗೊಂಡಂತಾಗಿದೆ. ಈ ಹಿಂದೆ ಅಜಯ್ ನಾಗಭೂಷಣ್ ಮಂಡ್ಯ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದರು. ಆಗ ಸಿ.ಶಿಖಾ ಮೈಸೂರು ಜಿಲ್ಲಾಧಿಕಾರಿಯಾಗಿದ್ದರು.

ಸಿ.ಶಿಖಾ ಅವರು 2023ರ ಕರ್ನಾಟಕ ವಿಧಾನಸಭೆ ಚುನಾವಣೆಯ ಸಂದರ್ಭದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಣೆ ಮಾಡಿ ರಾಷ್ಟ್ರ ಮಟ್ಟದ ಪ್ರಶಸ್ತಿ ಪಡೆದಿದ್ದರು. ವಾಣಿಜ್ಯ ತೆರಿಗೆ ಆಯುಕ್ತರಾಗಿ ಇಲಾಖೆ ಮೂಲಕ ಮತದಾರರಲ್ಲಿ ಉಚಿತ ಉಡುಗೊರೆಗಳ ಕುರಿತು ಹಮ್ಮಿಕೊಂಡಿದ್ದ ಜನಜಾಗೃತಿ, ವಾಣಿಜ್ಯ ಕ್ಷೇತ್ರದಲ್ಲಿ ಚುನಾವಣಾ ನೀತಿ ಸಂಹಿತೆ ಪಾಲನೆ ಸೇರಿದಂತೆ ಕಟ್ಟುನಿಟ್ಟಿನ ಚುನಾವಣೆ ನಡೆಸಲು ಪ್ರಮುಖ ಪಾತ್ರವಹಿಸಿದ್ದಕ್ಕಾಗಿ ಆಯೋಗ ಅವರಿಗೆ ಪ್ರಶಸ್ತಿ ನೀಡಿತ್ತು.

ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕಿಯಾಗಿ ಉತ್ತಮ ಕೆಲಸ ಮಾಡಿದ್ದರು. ಬೆಂಗಳೂರು ನಗರದ ಹೊರವರ್ತುಲ ರಸ್ತೆಯಲ್ಲಿ ಬಿಎಂಟಿಸಿ ಬಸ್‌ಗಳಿಗೆ ಪ್ರತ್ಯೇಕ ಪಥ ನಿರ್ಮಾಣ ಮಾಡುವ ಆಲೋಚನೆ ಸಿ.ಶಿಖಾ ಅವರದ್ದಾಗಿತ್ತು. ಅವರು ಸುಮಾರು ಮೂರೂವರೆ ವರ್ಷಗಳ ಕಾಲ ಮೈಸೂರು ಜಿಲ್ಲಾಧಿಕಾರಿಯಾಗಿ ದಸರಾ ಸಂದರ್ಭದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಣೆ ಮಾಡಿದ್ದರು.

ಇಟಾಚಿಗೆ ಸಿಲುಕಿ ಗಾಯಗೊಂಡ ನಾಗರಹಾವಿಗೆ ಶಸ್ತ್ರಚಿಕಿತ್ಸೆ, ಆರೈಕೆ



ಇಟಾಚಿ ಯಂತ್ರಕ್ಕೆ ಸಿಲುಕಿ ಗಾಯಗೊಂಡಿದ್ದ ನಾಗರಹಾವನ್ನು ಉರಗ ಸಂರಕ್ಷಕ ನಿತೀಶ್ ರಕ್ಷಣೆ ಮಾಡಿ ಪಶು ವೈದ್ಯ ಡಾ.ಯಶವಂತ್ ಕುಮಾರ್ ಅವರಿಂದ ಚಿಕಿತ್ಸೆ ಕೊಡಿಸಿದರು.

ಮೈಸೂರು, ಫೆ.16(ಎಂಟಿವೈ)- ಮಣ್ಣು ತುಂಬುವ ವೇಳೆ ಇಟಾಚಿ ಹಲ್ಲಿಗೆ ಸಿಲುಕಿ ಗಾಯಗೊಂಡಿದ್ದ ನಾಗರಹಾವೊಂದನ್ನು ಉರಗ ಸಂರಕ್ಷಕರೊಬ್ಬರು ರಕ್ಷಿಸಿ, ಪಶುವೈದ್ಯರಿಂದ ಚಿಕಿತ್ಸೆ ಕೊಡಿಸಿ ಬಿಡುಗಡೆ ಮಾಡಿದ್ದಾರೆ.

ಮೈಸೂರು ತಾಲೂಕಿನ ವರಕೋಡು ಗ್ರಾಮದ ಹೊರವಲಯದ ಜಮೀನೊಂದರಲ್ಲಿ ಮಣ್ಣಿನ ಕೆಲಸ ಮಾಡುತ್ತಿದ್ದ ಇಟಾಚಿಗೆ ಆಕಸ್ಮಿಕವಾಗಿ ನಾಗರಹಾವು ಸಿಲುಕಿತ್ತು. ಇದರಿಂದ ಇಟಾಚಿಯ ಹಲ್ಲು ತಾಗಿ ನಾಗರಹಾವಿನ ದೇಹಕ್ಕೆ ಗಂಭೀರ ಗಾಯಗೊಂಡಿತ್ತು. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ವರಕೋಡು ಗ್ರಾಮದ ಉರಗ ಸಂರಕ್ಷಕ ಸ್ನೇಕ್ ನಿತೀಶ್ ಗಾಯಗೊಂಡಿದ್ದ ಹಾವನ್ನು ಮೈಸೂರಿಗೆ ತಂದು ರಾಜ್‌ಕುಮಾರ್ ರಸ್ತೆಯಲ್ಲಿರುವ ಪಶುವೈದ್ಯ ಡಾ.ಯಶವಂತ್‌ಕುಮಾರ್ ಅವರಿಂದ ಗಾಯಗೊಂಡ ಹಾವಿಗೆ 24 ಹೊಲಿಗೆ ಹಾಕಿಸಿ, ಸೂಕ್ತ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಚೇತರಿಸಿಕೊಂಡ ಆ ಹಾವನ್ನು ಸುರಕ್ಷಿತ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಫೆ.19ರಂದು ಛತ್ರಪತಿ ಶಿವಾಜಿ ಜಯಂತಿ



ಮೈಸೂರು, ಫೆ.16(ಆರ್‌ಕೆ)-ಫೆಬ್ರವರಿ 19ರಂದು ಮೈಸೂರಿನ ಕಲಾಮಂದಿರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ 398ನೇ ಜಯಂತಿಯನ್ನು ಆಚರಿಸಲಾಗುವುದು. ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಿತಿ, ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಕೆ.ಹರೀಶ್‌ಗೌಡ ಹಾಗೂ ಇತರರು ಭಾಗವಹಿಸುವರು.

ಜೋಜೋ ಕ್ರಿಕೆಟ್ ಕ್ಲಬ್‌ಗೆ ಪ್ರಥಮ ಬಹುಮಾನ



ಮೈಸೂರು ವಲಯ ಕ್ಲಬ್‌ಗಳ ಕ್ರಿಕೆಟ್ ಪಂದ್ಯಾವಳಿಯಲ್ಲಿ ಜೋಜೋ ಕ್ರಿಕೆಟ್ ಕ್ಲಬ್ ಪ್ರಥಮ ಬಹುಮಾನ ಪಡೆದುಕೊಂಡಿದೆ.

ಮೈಸೂರು, ಫೆ. 16- ಮೈಸೂರಿನ ಗಂಗೋತ್ರಿ ಗ್ಲೇಡ್ಸ್ ಮೈದಾನದಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ನಿಂದ ನಡೆದ ಮೈಸೂರು ವಲಯದ ಕ್ಲಬ್‌ಗಳಿಗೆ ನಡೆದ 50 ಓವರ್‌ಗಳ ಗೋಪಾಲಸ್ವಾಮಿ ಮೆಮೋರಿಯಲ್ ಕ್ರಿಕೆಟ್ ಟೂರ್ನಮೆಂಟ್‌ನಲ್ಲಿ ಜೋಜೋ ಕ್ರಿಕೆಟ್ ಕ್ಲಬ್ ಪ್ರಥಮ ಬಹುಮಾನ ಪಡೆದುಕೊಂಡಿದೆ. ಲಂಕೇಶ್ ಉತ್ತಮ ಬೌಲಿಂಗ್ ಮಾಡಿ 2 ವಿಕೆಟ್‌ಗಳನ್ನು ಪಡೆದುಕೊಂಡರು. 241 ರನ್ ಗುರಿಯನ್ನು ಬೆನ್ನತ್ತಿದ ಜೋಜೋ ಕ್ರಿಕೆಟ್ ಕ್ಲಬ್ ನಾಲ್ಕು ಓವರ್‌ಗಳನ್ನು ಉಳಿಸಿಕೊಂಡು ಗುರಿಯನ್ನು ತಲುಪಿತು. ಜೋಜೋ ಕ್ರಿಕೆಟ್ ಕ್ಲಬ್ 4 ವಿಕೆಟ್‌ಗಳಿಂದ ಪಂದ್ಯವನ್ನು ಗೆದ್ದಿತು.

ವಿಜೇತ ತಂಡವನ್ನು ಸೈಕಲ್ ಪ್ಯೂರ್ ಅಗರ್‌ಬತ್ತಿ ವ್ಯವಸ್ಥಾಪಕ ನಿರ್ದೇಶಕ ಮತ್ತು ಜೋ ಜೋ ಕ್ರಿಕೆಟ್ ಕ್ಲಬ್ ಮಾಲೀಕರಾದ ಅರ್ಜುನ್ ರಂಗಾ ಅವರು ಅಭಿನಂದಿಸಿದರು.

ವಾರದ ಸಮಾವೇಶದಲ್ಲಿ ಕುಲಸಚಿವ ಡಾ.ಎನ್.ನಾಗರಾಜರಿಗೆ ಸನ್ಮಾನ

ಮೈಸೂರು, ಫೆ. 16- ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನ ವಾರದ ಸಮಾವೇಶದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ ನಿರ್ದೇಶಕರು ಹಾಗೂ ಕುಲಸಚಿವ (ಪರೀಕ್ಷಾಂಗ)ಡಾ.ಎನ್.ನಾಗರಾಜ ಅವರನ್ನು ಸನ್ಮಾನಿಸಲಾಯಿತು.

ಬಳಿಕ ಮಾತನಾಡಿ, ಸಾಧಕ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳಿಗೆ ಅಭಿನಂದಿಸಿ ಮಾತನಾಡುತ್ತಾ, ಮಹಾಜನ ಪ್ರಥಮ ದರ್ಜೆ ಕಾಲೇಜು ಆರಂಭದಿಂದಲೂ ಪಠ್ಯ ಬೋಧನೆ ಜೊತೆಗೆ, ವಿದ್ಯಾರ್ಥಿಗಳ ಪಠ್ಯೇತರ ಚಟುವಟಿಕೆಗಳು, ಸಮಾಜ ಸೇವಾ ಕಾರ್ಯಗಳು ಮೊದಲಾದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ವಾತಾವರಣವನ್ನು ಕಲ್ಪಿಸಿಕೊಟ್ಟಿರುವುದು ಶ್ಲಾಘನೀಯ ಎಂದರು. ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ಆರ್. ಜಯಕುಮಾರಿ, ಆಡಳಿತ ನಿರ್ವಹಣಾಧಿಕಾರಿ ಡಾ.ಎಸ್.ಆರ್.ರಮೇಶ್, ಕನ್ನಡ ವಿಭಾಗದ ಮುಖ್ಯಸ್ಥ ಡಾ.ತಿಮ್ಮೇಗೌಡ, ಪ್ರೈಮಾನಿಟರ್ ಕೆ.ಎಸ್.ರವೀಂದ್ರ ಡೆಪ್ಯುಟಿ ಪ್ರೈಮಾನಿಟರ್ ಆದ ಅಭಯ್ ಮುರಳೀಧರ್, ಸ್ಟ್ರೀಮ್ ಹೆಡ್ ಆದ ಸಂಜನಾ ವಿ ಶಾಖಾಪೂರ್, ಅಧ್ಯಾಪಕರು ಹಾಗೂ ಅಧ್ಯಾಪಕೇತರರು ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.



ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ವಾರದ ಸಮಾವೇಶದಲ್ಲಿ ಮೈಸೂರು ವಿವಿ ಕುಲಸಚಿವ (ಪರೀಕ್ಷಾಂಗ) ಡಾ.ಎನ್. ನಾಗರಾಜ ಅವರನ್ನು ಸನ್ಮಾನಿಸಲಾಯಿತು.

ಅವಹೇಳನಕಾರಿ ಪೋಸ್ಟರ್ ಪ್ರಕರಣ: ಇಂದು ಆರೋಪಿ ಜಾಮೀನು ಅರ್ಜಿ ವಿಚಾರಣೆ

ಮೈಸೂರು, ಫೆ. 16(ಆರ್‌ಕೆ)- ಸಮುದಾಯದ ಬಗ್ಗೆ ಅವಹೇಳನಕಾರಿ ಪೋಸ್ಟರ್ ಅನ್ನು ಸೋಷಿಯಲ್ ಮೀಡಿಯಾದಲ್ಲಿ ಹರಿಬಿಟ್ಟ ಪ್ರಕರಣದಲ್ಲಿ ಬಂಧಿತರಾಗಿರುವ ಸತೀಶ್ ಅಲಿಯಾಸ್ ಪಾಂಡುರಂಗ ಅವರು ಜಾಮೀನು ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ನಾಳೆ (ಫೆ.17) ನಡೆಯಲಿದೆ.

ಶನಿವಾರ ವಿಚಾರಣೆ ನಡೆಸಿದ ಮೈಸೂರಿನ 2ನೇ ಹೆಚ್ಚುವರಿ ಸಿವಿಲ್ (ಕಿರಿಯ ಶ್ರೇಣಿ) ನ್ಯಾಯಾಲಯದ ನ್ಯಾಯಾಧೀಶರು, ಜಾಮೀನು ಸಂಬಂಧ ತೀರ್ಪನ್ನು ಸೋಮವಾರ (ಫೆ.17)ಕ್ಕೆ ಮುಂದೂಡಿದ್ದರು. ಆರೋಪಿಯನ್ನು ಬಂಧಿಸಿದಾಗ ವಶಪಡಿಸಿಕೊಂಡಿದ್ದ ಮೊಬೈಲ್ ಫೋನ್ ನಿಂದ ಪೋಸ್ಟರ್ ಕಳುಹಿಸಲಾಗಿದೆ ಎಂದು ಹೇಳಲಾಗಿರುವ ಮಾಹಿತಿಯನ್ನು ಪರಾಮರ್ಶಿಸಲಿರುವ ನ್ಯಾಯಾಧೀಶರು, ಸೋಮವಾರ ಸಂಜೆ ಜಾಮೀನು ಬಗ್ಗೆ ತೀರ್ಪು ನೀಡುವರು. ಈಗಾಗಲೇ ವಾದ-ಪ್ರತಿವಾದ ಪೂರ್ಣಗೊಂಡಿರುವುದ ರಿಂದ ತೀರ್ಪನ್ನು ಮಾತ್ರ ಕಾಯ್ದಿರಿಸಲಾಗಿದೆ ಎಂದು ಮೈಸೂರಿನ ಹೋಟೆಲ್ ಉದ್ಯಮಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಸೂಕ್ತ ತರಬೇತಿ ಪಡೆದು ಸಹಕಾರಿ ಚುನಾವಣೆಗಳ ನಡೆಸಿ

ಹಾಸನ ಸಹಕಾರ ಇಲಾಖೆ ಅಧಿಕಾರಿ ಜಗದೀಶ್ ಸಲಹೆ



ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ಸಹಕಾರ ಭವನದಲ್ಲಿ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಚುನಾವಣೆ ಸಂಬಂಧ ಆಯೋಜಿಸಿದ್ದ ವಿಶೇಷ ತರಬೇತಿ ಕಾರ್ಯಾಗಾರವನ್ನು ಮೈಸೂರು ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ವೈ.ಭೈರಪ್ಪ, ಹಾಸನ ಸಹಕಾರ ಇಲಾಖೆ ಅಧಿಕಾರಿ ಜಗದೀಶ್ ಹಾಗೂ ಇನ್ನಿತರರು ಉದ್ಘಾಟಿಸಿದರು.

ಮೈಸೂರು, ಫೆ.16(ಎಂಟಿವೈ)-ಸಹಕಾರ ಇಲಾಖೆ ಕಾನೂನುಗಳು ಕಾಲ ಕಾಲಕ್ಕೆ ಬದಲಾಗುತ್ತಿದ್ದು, ಅದಕ್ಕೆ ಅನುಗುಣವಾಗಿ ಸಿಬ್ಬಂದಿ ತರಬೇತಿ ಪಡೆದುಕೊಂಡು ನಿಯಮಾನುಸಾರ ಸಹಕಾರ ಸಂಘಗಳ ಚುನಾವಣೆಯನ್ನು ನಡೆಸಬೇಕು ಎಂದು ಹಾಸನ ಸಹಕಾರ ಇಲಾಖೆ ಅಧಿಕಾರಿ ಜಗದೀಶ್ ಸಲಹೆ ನೀಡಿದ್ದಾರೆ.

ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ಸಹಕಾರ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಸಹಕಾರ ಇಲಾಖೆ, ಜಿಲ್ಲಾ ಸಹಕಾರ ಒಕ್ಕೂಟದಿಂದ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಚುನಾವಣೆ ಸಂಬಂಧ ಆಯೋಜಿಸಿದ್ದ ವಿಶೇಷ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಸಹಕಾರಿ ಕಾನೂನಿಗೆ ತಿದ್ದುಪಡಿ ಆಗುತ್ತಿರುತ್ತವೆ. ಅವುಗಳ ಬಗ್ಗೆ ಎಲ್ಲಾ ಸಿಬ್ಬಂದಿಗೆ ಮಾಹಿತಿ ಇರಬೇಕು. ಅದಕ್ಕಾಗಿ ಕಾರ್ಯಾಗಾರ ಆಯೋಜಿಸುವ ಮೂಲಕ ತರಬೇತಿ ನೀಡಲಾಗುತ್ತಿದೆ. ಇಲ್ಲಿ ಸಹಕಾರಿ ನಿಯಮಗಳ ಬಗ್ಗೆ ತಿಳಿದುಕೊಂಡು ಚುನಾವಣೆಗಳಲ್ಲಿ ತಮ್ಮ ಕರ್ತವ್ಯ ಹಾಗೂ ಜವಾಬ್ದಾರಿ ಬಗ್ಗೆ ಮನವರಿಕೆ ಮಾಡಿಕೊಳ್ಳಬೇಕು. ಆ ಮೂಲಕ ಸಹಕಾರಿ ಚುನಾವಣೆಗಳಲ್ಲಿ ಮುಖ್ಯ ಕಾರ್ಯನಿರ್ವಾಹಕರ ಕಾರ್ಯದ ಪ್ರಾಮುಖ್ಯತೆ ಬಗ್ಗೆ ತಿಳಿಸಿಕೊಡಬೇಕು ಎಂದು ಸಲಹೆ ನೀಡಿದರು.

ಸಹಕಾರಿ ಸಂಘಗಳ ನಿಯಮದಲ್ಲಿ ಹೊಸ ಆಡಳಿತ ಮಂಡಳಿ ರಚಿಸುವ ಬಗೆ, ಸಹಕಾರಿ ಕಾಯ್ದೆ, ನಿಯಮಾನುಸಾರ ಪಾರದರ್ಶಕವಾಗಿ ಚುನಾವಣೆ ನಡೆಸುವ ಕ್ರಮ, ಚುನಾವಣೆಗಳಲ್ಲಿ ಸಿಇಒಗಳ ಪಾತ್ರದ ಬಗ್ಗೆ ತಿಳಿದುಕೊಳ್ಳಬೇಕು. ಯಾವುದೇ ಸಹಕಾರ ಸಂಘವಾದರೂ ಚುನಾವಣೆ ಪ್ರಕ್ರಿಯೆ ಒಂದೇ ಆಗಿರುತ್ತದೆ. ಈ ಸಂದರ್ಭದಲ್ಲಿ ಜವಾಬ್ದಾರಿ ಹೆಚ್ಚಿರುತ್ತದೆ. ಕಾನೂನಾತ್ಮಕವಾಗಿ, ನಿಷ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸಬೇಕು. ಸಂಘದ ಉಪನಿಯಮಗಳನ್ನು ಸಂಕ್ಷಿಪ್ತವಾಗಿ ಓದಿ ಮನನ ಮಾಡಿಕೊಳ್ಳುವುದು ಸಿಇಒ ಅವರ ಮೊದಲ ಕರ್ತವ್ಯ. ಕಾಯ್ದೆಗೆ ತಿದ್ದುಪಡಿ ಬಂದಾಗ, ಉಪನಿಯಮಗಳಿಗೆ ಅಳವಡಿಸಿಕೊಂಡು, ಸರ್ವ ಸದಸ್ಯರ ಸಭೆಯಲ್ಲಿ ಅನುಮೋದನೆ ಪಡೆಯಬೇಕು ಎಂದು ತಿಳಿಸಿದರು.

ಮೈಸೂರು ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕ ಎಸ್.ಹೆಚ್.ಮನೋಜ್‌ಕುಮಾರ್ ಮಾತನಾಡಿ, ಸಹಕಾರ ಸಂಘಗಳಲ್ಲಿ ಯಾವುದೇ ಲೋಪದೋಷವಿಲ್ಲದೆ ಚುನಾವಣೆ ನಡೆಸಲು ಈ ತರಬೇತಿ ಅಗತ್ಯ. ಇದಕ್ಕಾಗಿ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ. ಸಹಕಾರ ಕ್ಷೇತ್ರವು ಪವಿತ್ರವಾದುದ್ದಾಗಿದ್ದು ತರಬೇತಿ ಸಮಯದಲ್ಲಿ ತಿಳಿಸಿದ ವಿಷಯಗಳನ್ನು ಕಾರ್ಯರೂಪಕ್ಕೆ ತರಬೇಕು. ಚುನಾವಣೆ ಸಂದರ್ಭದಲ್ಲಿ ಯಾವುದೇ ಅಡೆತಡೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕ ವೈ.ಭೈರಪ್ಪ ಮಾತನಾಡಿ, ಸಹಕಾರ ಸಂಘದ ಕಾಯ್ದೆ ತುಂಬಾ ಕಟ್ಟುನಿಟ್ಟಿನಿಂದ ಕೂಡಿದೆ. ಈ ಸಂದರ್ಭದಲ್ಲಿ ಒಂದು ಸಂಸ್ಥೆಯನ್ನು ಸರಿಯಾದ ಕಾರ್ಯ ವ್ಯಾಪ್ತಿಯಲ್ಲಿ ನಡೆಸುವ ಜವಾಬ್ದಾರಿ ಸಿಇಒ ಅಧಿಕಾರಿಗಳ ಮೇಲಿದೆ. ಅದನ್ನು ಉತ್ತಮವಾಗಿ ನಿಭಾಯಿಸಬೇಕು ಎಂದರು.

ಮೂಡುಬಿದಿರೆ ಕೆಐಸಿಎಂ ಪ್ರಾಂಶುಪಾಲ ಎಂ.ವಿಶ್ವೇಶ್ವರಯ್ಯ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜವಾಬ್ದಾರಿ ಮತ್ತು ಕರ್ತವ್ಯಗಳು ಹಾಗೂ ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮಗಳಲ್ಲಿನ ಇತ್ತೀಚಿನ ತಿದ್ದುಪಡಿ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಎಂ.ವಿಶ್ವೇಶ್ವರಯ್ಯ, ಕೆಐಸಿಎಂ ಪ್ರಾಂಶುಪಾಲ ಪುಟ್ಟಸ್ವಾಮಿ ಇದ್ದರು.

ಎಕ್ಸ್‌ಪ್ರೆಸ್‌ವೇನಲ್ಲಿ ಸಿನಿಮೀಯ ರೀತಿಯ ಅಪಘಾತ: ಕಾರಿನ ಮೇಲೆ ಹತ್ತಿ ನಿಂತ ಇನ್ನೊಂದು ಕಾರು

ಚನ್ನಪಟ್ಟಣ, ಫೆ.16– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ಸಿನಿಮೀಯ ರೀತಿಯ ಅಪಘಾತವೊಂದು ಸಂಭವಿಸಿದ್ದು, ಕಾರೊಂದು ಮತ್ತೊಂದು ಕಾರು ಹತ್ತಿ ನಿಂತಿದೆಂಯಾದರೂ, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.



ಚನ್ನಪಟ್ಟಣದ ಕಣ್ವ ಗೇಟಿನ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ರಸ್ತೆಗೆ ಬ್ಯಾರಿಕೇಟ್ ಹಾಕಿ ಪೌರ ಕಾರ್ಮಿಕರು ಸ್ವಚ್ಛತೆ ಮಾಡುತ್ತಿದ್ದಾಗ ಮುಂದಿದ್ದ ಕಾರೊಂದು ನಿಧಾನವಾಗಿ ಬ್ಯಾರಿಕೇಟ್ ಕ್ರಾಸ್ ಮಾಡುತ್ತಿತ್ತು. ಹಿಂದಿನಿಂದ ವೇಗವಾಗಿ ಬಂದ ಮತ್ತೊಂದು ಕಾರು ಬ್ಯಾರಿಕೇಟ್ ನೋಡದೇ ಮುಂದಿದ್ದ ಕಾರಿಗೆ ಡಿಕ್ಕಿ ಹೊಡೆಯಿತು. ಇದರಿಂದ ಮುಂದಿದ್ದ ಕಾರಿನ ಮೇಲೆ ಜಿಗಿದು ಕಾರು ನಿಂತಿತ್ತು. ಈ ದೃಶ್ಯ ನೋಡುಗರಿಗೆ ಥೇಟ್ ಸಿನಿಮಾ ಶೂಟಿಂಗ್‌ನಂತೆ ಕಾಣುತ್ತಿತ್ತು. ಆದರೆ ಅದೃಷ್ಟವಶಾತ್ ಎರಡು ಕಾರಿನಲ್ಲಿದ್ದ ಯಾರಿಗೂ ಯಾವುದೇ ರೀತಿಯ ಪ್ರಾಣಾಪಾಯ ಸಂಭವಿಸಿಲ್ಲ. ಈ ಸಂಬಂಧ ಚನ್ನಪಟ್ಟಣ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಾಲು ಉತ್ಪಾದಕರ ಸಹಕಾರ ಸಂಘಗಳು ದೇವಸ್ಥಾನವಿದ್ದಂತೆ

ಡಿಂಕಾ ಗ್ರಾಮದಲ್ಲಿ ಮನ್‌ಮುಲ್ ನಿರ್ದೇಶಕ ಶಿವಕುಮಾರ್‌ಗೆ ಅಭಿನಂದನೆ

ಚಿನಕುರಳಿ, ಫೆ.16– ಹಾಲು ಉತ್ಪಾದಕರ ಸಹಕಾರ ಸಂಘಗಳು ದೇವಸ್ಥಾನ ಇದ್ದಂತೆ. ಇಲ್ಲಿ ರಾಜಕೀಯ ಮಾಡದೆ ಪ್ರತಿಯೊಬ್ಬರು ಡೇರಿ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಮನ್ ಮುಲ್ ನಿರ್ದೇಶಕ ಸಿ.ಶಿವಕುಮಾರ್ ತಿಳಿಸಿದರು.

ತಾಲೂಕಿನ ಡಿಂಕಾ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ನಡೆದ ಅಭಿನಂದನೆ ಸಮಾರಂಭದಲ್ಲಿ ಅಭಿನಂಧನೆ ಸ್ವೀಕರಿಸಿ ಅವರು ಮಾತನಾಡಿದರು.

ಮನ್‌ಮುಲ್ ಚುನಾವಣೆಯಲ್ಲಿ ಕ್ಷೇತ್ರದ ಹಾಲು ಉತ್ಪಾದಕರ ಸಹಕಾರ ಸಂಘದ ಮತದಾರರು ನನಗೆ ಹೆಚ್ಚಿನ ಸಂಖ್ಯೆಯಲ್ಲಿ ಮತ ಕೊಟ್ಟು ಗೆಲ್ಲಿಸುವ ಮೂಲಕ ಜವಬ್ದಾರಿ ಹೆಚ್ಚಿಸಿದ್ದಾರೆ. ನನ್ನ ಅಧಿಕಾರದ ಅವಧಿಯಲ್ಲಿ ಡೇರಿಗಳ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ ಎಂದು ತಿಳಿಸಿದರು.

ಡಿಂಕಾ ಗ್ರಾಮ ಉತ್ಪಾದಕರ ಸಹಕಾರ ಸಂಘವು ಹಾಲು ಉತ್ಪಾದನೆಯಲ್ಲಿ ತಾಲೂಕಿನಲ್ಲೇ ಮೊದಲ ಸ್ಥಾನದಲ್ಲಿದೆ. ಗ್ರಾಮದಲ್ಲಿ ಹಲವಾರು ಮಂದಿ ರೈತರು ಹೈನುಗಾರಿಕೆಯಲ್ಲಿ ತೊಡಗಿಸಿಕೊಂಡು ಆರ್ಥಿಕವಾಗಿ ಸದೃಢರಾಗಿದ್ದಾರೆ. ಮುಂದಿನ ದಿನಗಳಲ್ಲಿ ಡಿಂಕಾ ಡೇರಿಯನ್ನು ಜಿಲ್ಲೆಯಲ್ಲಿಯೇ ಮೊದಲ ಸ್ಥಾನಕ್ಕೆ ತೆಗೆದುಕೊಂಡು ಹೋಗಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ಜತೆಗೆ ಒಕ್ಕೂಟದಿಂದ ಡೇರಿಗೆ ದೊರೆಯುವ ಸೌಲಭ್ಯಗಳನ್ನು ಮೊದಲ ಆದ್ಯತೆ ಮೇರೆಗೆ ನೀಡಲಾಗುವುದು ಎಂದರು.



ಡಿಂಕಾ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿಯವರು ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್ ಅವರನ್ನು ಅಭಿನಂಸಿದರು.

ತಾಪಂ ಮಾಜಿ ಸದಸ್ಯ ಸಿ.ಎಸ್.ಗೋಪಾಲಗೌಡ, ಡೇರಿ ಅಧ್ಯಕ್ಷ ಗಿರೀಶ್, ಉಪಾಧ್ಯಕ್ಷ ಕೃಷ್ಣಶೆಟ್ಟಿ, ನಿರ್ದೇಶಕರಾದ ಡಿ.ವಿ.ಶಿವಣ್ಣ ಡಿ.ಈ.ಕಲಿಗಣೇಶ್, ಮಹೇಶ್, ಮಹದೇವಪ್ಪ, ಶಿವಲಿಂಗಪ್ಪ, ಡಿ.ಎಂ.ಇಂದ್ರೇಶ್, ಶ್ರೀನಿವಾಸಯ್ಯ, ಡಿ.ಎಂ.ಪುಟ್ಟೇಗೌಡ, ಪ್ರೇಮಮ್ಮ, ರಮಾದೇವಿ, ಸೌಮ್ಯ, ಕಾರ್ಯದರ್ಶಿ ಡಿ.ಎಂ.ಶಿವಪ್ಪ ಮುಖಂಡರಾದ ಪಿಎಲ್‌ಡಿ ಮಾಜಿ ಅಧ್ಯಕ್ಷ ಡಿಂಕಾ ಸೋಮಣ್ಣ, ಗ್ರಾಪಂ ಮಾಜಿ ಅಧ್ಯಕ್ಷರಾದ ಪುಟ್ಟರಾಜು, ಜಗದೀಶ್, ಡಿ.ಸಿ.ರುದ್ರಶೇಖರ್, ಲೋಕೇಶ್ ಹಾಗೂ ಡೇರಿ ಸಿಬ್ಬಂದಿಗಳು ಇದ್ದರು.

ಪತ್ರಕರ್ತನ ಮೇಲೆ ಮಾರಣಾಂತಿಕ ಹಲ್ಲೆ

ಮನೆ ಗೇಟ್ ಮುಂದೆಯೇ ದುಷ್ಕರ್ಮಿಗಳ ದಾಳಿ

ಮಂಡ್ಯ, ಫೆ.16– ಕೆಲಸ ಮುಗಿಸಿ ಮನೆ ಬಳಿ ಬಂದಾಗ ಮೂರ್‍ನಾಲ್ಕು ಮಂದಿ ದುಷ್ಕರ್ಮಿಗಳು ಪತ್ರಕರ್ತನ ಮೇಲೆ ಮಾರಕಾಸ್ತ್ರಗಳಿಂದ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ನಗರದ ತಾವರೆಗೆರೆ ಬಡಾವಣೆಯಲ್ಲಿ ಶನಿವಾರ ರಾತ್ರಿ ನಡೆದಿದೆ.

ಖಾಸಗಿ ಸಂಸ್ಥೆಯ ಪತ್ರಕರ್ತ ಜಯಕುಮಾರ್(42) ದುಷ್ಕರ್ಮಿಗಳಿಂದ ಹಲ್ಲೆಗೊಳಗಾದವರಾಗಿದ್ದಾರೆ. ಶನಿವಾರ ಕರ್ತವ್ಯ ಮುಗಿಸಿ ಸುಮಾರು 11 ಗಂಟೆ ಸಮಯದಲ್ಲಿ ಮನೆಗೆ ತೆರಳಲು ಗೇಟ್ ತೆರೆಯುವಾಗ ಹೊಂಚು ಹಾಕಿ ಕುಳಿತ್ತಿದ್ದ ದುಷ್ಕರ್ಮಿಗಳು ಏಕಾಏಕಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಲು ಮುಂದಾಗಿದ್ದಾರೆ.

ಬೈಕ್‌ನಲ್ಲಿ ಮನೆ ಬಳಿಗೆ ಬಂದು ಗೇಟ್ ತೆಗೆಯುವಾಗ ಏಕಾಏಕಿ ಹಲ್ಲೆಗೆ ಮುಂದಾಗಿದ್ದಾರೆ. ಈ ಸಂದರ್ಭದಲ್ಲಿ ಚೀರಾಡಿದಾಗ ಅಕ್ಕಪಕ್ಕ ಮನೆಯವರು ಧಾವಿಸಿ ಬಂದಿದ್ದಾರೆ. ತಕ್ಷಣವೇ ದುಷ್ಕರ್ಮಿಗಳು ಕಾರಿನಲ್ಲಿ ಸ್ಥಳದಿಂದ ಪರಾರಿಯಾಗಿದ್ದಾರೆ. ಕೂಡಲೇ ತೀವ್ರ ರಕ್ತಸ್ರಾವದಿಂದ ಕುಸಿದು ಬಿದ್ದಿದ್ದ ಜಯಕುಮಾರ್ ಅವರನ್ನು ಸ್ಥಳೀಯರು ಮಂಡ್ಯ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಯಿತು.



ಕೈ, ತಲೆ, ಬೆನ್ನಿಗೆ ಗಂಭೀರವಾಗಿ ಗಾಯವಾಗಿದ್ದ ಪರಿಣಾಮ ಅವರಿಗೆ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಈ ಸಂಬಂಧ ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ. ಭಾನುವಾರ ಬೆಳಿಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಎಎಸ್ಪಿ ತಿಮ್ಮಯ್ಯ, ಡಿವೈಎಸ್ಪಿ ರಮೇಶ್ ಸೇರಿದಂತೆ ಬೆರಳಚ್ಚು ತಜ್ಞರು, ಶ್ವಾನದಳ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸಹಾಯಧನಕ್ಕೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು,ಫೆ.16– ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಎಸ್.ಸಿ.ಪಿ, ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಭ್ಯರ್ಥಿಗಳಿಗೆ ಸಣ್ಣ ಉದ್ಯಮದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲಾಭಿವೃದ್ಧಿ ತರಬೇತಿ ನೀಡಿ, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟಿನ್ ನಡೆಸಲು ಸಹಾಯಧನ ನೀಡಲು ಉದ್ದೇಶಿಸಲಾಗಿರುವುದರಿಂದ ಸದರಿ ತರಬೇತಿ ಹಾಗೂ ಸಹಾಯಧನಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ಫೆ.25 ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಪ್ರಕಟಣೆ ತಿಳಿಸಿದೆ.

ಸರ್ಕಾರಿ ಕೆಲಸಕೊಡಿಸುವುದಾಗಿ ಮಹಿಳೆಗೆ 14 ಲಕ್ಷ ವಂಚನೆ

ಮಂಡ್ಯ, ಫೆ.16– ಸರ್ಕಾರಿ ಕೆಲಸ ಕೊಡಿಸುವುದಾಗಿ ವಂಚಕರು ಸುಮಾರು 14 ಲಕ್ಷ ರೂ. ವಂಚನೆ ಮಾಡಿದ್ದಾರೆ ಎಂದು ಆರೋಪಿಸಿ ಮಹಿಳೆಯೊಬ್ಬರು ನಗರದ ಪೂರ್ವ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಬೆಂಗಳೂರಿನ ನಿವಾಸಿ ಶಿವರುದ್ರ, ಮಂಡ್ಯ ನಗರದ ತಾವರೆಗೆರೆ ನಿವಾಸಿ ವೆಂಕಟೇಶ್ ಹಾಗೂ ತಾಲೂಕಿನ ಹುಣಕನಹಳ್ಳಿ ಗ್ರಾಮದ ಚೇತನ್ ಎಂಬುವರ ವಿರುದ್ಧ ನಗರದ ಗುತ್ತಲು ರಸ್ತೆಯ ಜಯಲಕ್ಷ್ಮಿ ಟಾಕೀಸ್ ಹಿಂಭಾಗದ ಸಾಹುಕಾರ್ ಚನ್ನಯ್ಯ ಬಡಾವಣೆಯ ನಿವಾಸಿ ಎಸ್.ಕೊಾಯಿತ್ರಿ ಎಂಬುವರು ದೂರು ನೀಡಿದ್ದಾರೆ.

ಮೂವರು ನನ್ನ ಮಗ ಕಿರಣ್‌ಗೆ ಅಬಕಾರಿ ಇಲಾಖೆಯಲ್ಲಿ ನೇರ ನೇಮಕಾತಿ ಮೂಲಕ ಸರ್ಕಾರಿ ಡ್ರೈವರ್ ಕೆಲಸಕ್ಕೆ ತೆಗೆದುಕೊಳ್ಳುತ್ತಿದ್ದು, ನನಗೆ ವಿಧಾನಸೌಧದಲ್ಲಿ ಮತ್ತು ಅಬಕಾರಿ ಇಲಾಖೆಯಲ್ಲಿ ಸರ್ಕಾರಿ ಅಧಿಕಾರಿಗಳು ಪರಿಚಯವಿದ್ದಾರೆ. ಹಣ ಖರ್ಚು ಮಾಡಿದರೆ ಲಂಚ ನೀಡಿ ನಿಮ್ಮ ಮಗ ಕಿರಣ್‌ಗೆ ಅಬಕಾರಿ ಇಲಾಖೆಯಲ್ಲಿ ಸರ್ಕಾರಿ ಡ್ರೈವರ್ ಕೆಲಸ ಕೊಡಿಸುತ್ತೇವೆ. 6 ಲಕ್ಷರೂ. ಕೊಡುವಂತೆ ಹೇಳಿ ನುಬಿಸಿದರು. ಅಲ್ಲದೆ, ನಿಮ್ಮ ಕಡೆಯವರು ಬೇರೆ ಯಾರಾದರೂ ಇದ್ದರೆ ಹೇಳಿ ಅವರಿಗೂ ಸರ್ಕಾರಿ ಕೆಲಸ ಕೊಡಿಸುತ್ತೇನೆ ಎಂದು ಹೇಳಿದರು.

ಅವರ ಮಾತು ನಂಬಿದ ನಾನು ನನ್ನ ಸಂಬಂಧಿಕರ ಮಕ್ಕಳಾದ ರಾಕೇಶ್ ಮತ್ತು ರಾಜೇಶ್ ಅವರು ಓದಿದ್ದಾರೆ ಎಂದು ಹೇಳಿದಾಗ, ಆಗ ಅವರು ಮೂರು ಜನರಿಂದ 18 ಲಕ್ಷ ರೂ. ಆಗುತ್ತೆ ಎಂದು ಹೇಳಿದರು. ಆಗ ನಾವು ಒಟ್ಟು 14 ಲಕ್ಷ ರೂ. ಹಣ ನೀಡಿದ್ದೆವು. ಆದರೆ ಅವರು ಸರ್ಕಾರಿ ಅಧಿಕಾರಿಗಳ ಸಹಿಗಳನ್ನು ಪೋರ್ಜರಿ ಮಾಡಿ ಸುಳ್ಳು ನೇಮಕಾತಿ ದಾಖಲಾತಿಗಳನ್ನು ಸೃಷ್ಟಿ ಮಾಡಿ ನಮಗೆ ನೀಡಿ ವಂಚಿಸಿ ಮೋಸ ಮಾಡಿದ್ದಾರೆ. ಅಲ್ಲದೆ, ಇದೇ ರೀತಿ ಹಲವಾರು ಜನರಿಗೆ ಸರ್ಕಾರಿ ಕೆಲಸ ಕೊಡಿಸುವುದಾಗಿ ನಂಬಿಸಿ ಲಕ್ಷಾಂತರ ರೂ. ಹಣ ಪಡೆದು ಮೋಸ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ಎಫ್‌ಐಆರ್ ದಾಖಲಿಸಿಕೊಂಡಿರುವ ಪೂರ್ವ ಠಾಣೆಯ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಮಿಕ್ಕೆರೆಯಲ್ಲಿ ದೇಗುಲದ ಹಣ ದೋಚಿದ ದುಷ್ಕರ್ಮಿಗಳು

ಮಳವಳ್ಳಿ, ಫೆ.16– ದೇವಸ್ಥಾನಕ್ಕೆ ನುಗ್ಗಿರುವ ಕಳ್ಳರು ಒಳಭಾಗದಲ್ಲಿದ್ದ ಹುಂಡಿ ಹೊಡೆದು ಹಣ ದೋಚಿ ಪರಾರಿಯಾಗಿರುವ ಘಟನೆ ಮಳವಳ್ಳಿ ತಾಲೂಕಿನ ಮಿಕ್ಕೆರೆ ಗ್ರಾಮದ ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನದಲ್ಲಿ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.

ಫೆ.10ರಂದು ಎಂದಿನಂತೆ ಅರ್ಚಕ ವೀರೇಶ್ ದೇವಸ್ಥಾನದಲ್ಲಿ ಪೂಜಾ ಕೈಂಕರ್ಯ ಮುಗಿಸಿಕೊಂಡು ಬಾಗಿಲು ಹಾಕಿಕೊಂಡು ಹೋಗಿದ್ದಾರೆ. ಆದರೆ ಫೆ.11ರಂದು ಬೆಳಿಗ್ಗೆ 6 ಗಂಟೆಗೆ ದೇವಸ್ಥಾನದ ಬಾಗಿಲು ತೆಗೆದಾಗ ಹುಂಡಿ ಹೊಡೆದು ಹಣ ದೋಚಿರುವುದು ಬೆಳಕಿಗೆ ಬಂದಿದೆ.ಹುಂಡಿಯಲ್ಲಿ ಸುಮಾರು 10 ಸಾವಿರ ರೂ. ಹಣ ಇತ್ತು ಎನ್ನ ಲಾಗಿದ್ದು, ಅರ್ಚಕ ವೀರೇಶ್ ಕಿರುಗಾವಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಕಳ್ಳರ ಪತ್ತೆಗೆ ಮುಂದಾಗಿದ್ದಾರೆ.

ಶ್ರೀರಂಗಪಟ್ಟಣದಲ್ಲಿ ನಕಲಿ ಚಿನ್ನ ತೋರಿಸಿ 65 ಲಕ್ಷ ವಂಚನೆ

ಶ್ರೀರಂಗಪಟ್ಟಣ, ಫೆ.16– ನಕಲಿ ಚಿನ್ನ ತೋರಿಸಿ 65 ಲಕ್ಷ ರೂ. ಪಡೆದು ವಂಚಿಸಿದ್ದಾರೆ ಎಂದು ಆರೋಪಿಸಿ ಆಂಧ್ರಪ್ರದೇಶದ ಮೂಲದ ವ್ಯಕ್ತಿಯೊಬ್ಬರು ಪೊಲೀಸ್ ಠಾಣೆಗೆ ದೂರು ನೀಡಿರುವ ಘಟನೆ ಶ್ರೀರಂಗಪಟ್ಟಣದಲ್ಲಿ ನಡೆದಿದೆ.

ಆಂಧ್ರಪ್ರದೇಶದ ಕಡಪ ಜಿಲ್ಲೆಯ ವಂಟಿಮಿಟ್ಟ ಮಂಡಲಂ ಬಳಿಯ ಸಾಲಬಾದ್ ಗ್ರಾಮದ ಕೆ.ಬುಜ್ಜಯ್ಯ ಹಣ ಕಳೆದುಕೊಂಡ ವ್ಯಕ್ತಿಯಾಗಿದ್ದು, ಶ್ರೀರಂಗಪಟ್ಟಣದ ಕಿರಣ್ ಎಂಬಾತ ನಕಲಿ ಚಿನ್ನ ತೋರಿಸಿ ಹಣ ಎಗರಿಸಿದ್ದಾನೆ ಎಂದು ದೂರು ನೀಡಲಾಗಿದೆ.

ಕಡಪ ನಗರದಲ್ಲಿ ಕೆ.ಬುಜ್ಜಯ್ಯ ತನ್ನ ಸ್ನೇಹಿತ ಸುಬ್ಬಾರೆಡ್ಡಿ ಅವರ ಬಣ್ಣದ ಅಂಗಡಿಯಲ್ಲಿ ಕುಳಿತ್ತಿದ್ದಾಗ ಮಂಡ್ಯ ಮೂಲದ ಕಿರಣ್ ಎಂಬ ವ್ಯಕ್ತಿಯ ಪರಿಚಯವಾಗಿದೆ. ಕೆಲವು ದಿನಗಳ ನಂತರ ಬುಜ್ಜಯ್ಯ ಅವರಿಗೆ ದೂರವಾಣಿ ಕರೆ ಮಾಡಿದ ಕಿರಣ್, ಮನೆ ಕಟ್ಟುವ ಸಮಯದಲ್ಲಿ ಸಣ್ಣ ಸಣ್ಣ ಹರಳಿನ ರೀತಿಯ ಚಿನ್ನ ದೊರೆತಿದೆ. ಸ್ಯಾಂಪಲ್‌ಗಳನ್ನು ಬಂದು ನೋಡುವಂತೆ ತಿಳಿಸಿದ್ದಾನೆ.

ಅದರಂತೆ ಮಂಡ್ಯಕ್ಕೆ ಆಗಮಿಸಿದ ಕೆ.ಬುಜ್ಜಯ್ಯ ಚಿನ್ನದ ಹರಳುಗಳನ್ನು ನೋಡಿದ್ದಾರೆ. ಆಗ ಕಿರಣ್ ನನಗೆ 2.5 ಕೆಜಿ ಚಿನ್ನ ಸಿಕ್ಕಿದ್ದು, ನೀವು ನನಗೆ 75 ಲಕ್ಷ ರೂ. ಕೊಟ್ಟರೆ, ನಾನು ಚಿನ್ನವನ್ನು ಕೊಡುವುದಾಗಿ ತಿಳಿಸಿದ್ದಾನೆ. ಆತನ ಮಾತನ್ನು ನಂಬಿದ ಕೆ.ಬುಜ್ಜಯ್ಯ ಮತ್ತೆ ತವರೂರು ಕಡಪ ನಗರಕ್ಕೆ ತೆರಳಿ 65 ಲಕ್ಷ ರೂ. ಹಣ ಸಿದ್ಧಪಡಿಸಿಕೊಂಡು ಸ್ನೇಹಿತರ ಜೊತೆ ಮಂಡ್ಯಕ್ಕೆ ಬಂದಿದ್ದಾರೆ. ಕಿರಣ್ ಮೈಸೂರಿಗೆ ಬರುವಂತೆ ತಿಳಿಸಿದ್ದಾನೆ. ಅದರಂತೆ ಮೈಸೂರಿನ ರಿಂಗ್ ರಸ್ತೆಯ ಬಳಿ ತೆರಳಿದಾಗ ಶ್ರೀರಂಗಪಟ್ಟಣದ ಮೂಲ ಶ್ರೀಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದ ಹತ್ತಿರಕ್ಕೆ ಬರುವಂತೆ ಹೇಳಿದನು.

ಬೆಳಿಗ್ಗೆ 9ಕ್ಕೆ ದೇವಸ್ಥಾನದ ಬಳಿ ಬಂದಾಗ ಕಿರಣ್ ಮತ್ತು ಇನ್ನೊಬ್ಬ ವ್ಯಕ್ತಿ ಬಂದು ಮಾತನಾಡಿ, ಕಿರಣ್ ತನ್ನ ಕರ್ಚಿಫ್‌ನಲ್ಲಿ ಕಟ್ಟಿದ ಚಿನ್ನದ ತುಂಡುಗಳನ್ನು ಬುಜ್ಜಯ್ಯನಿಗೆ ನೀಡಿದ್ದಾನೆ. ಕೂಡಲೇ ಬುಜ್ಜಯ್ಯ ಹಣದ ಬ್ಯಾಗ್ ಅನ್ನು ಕಿರಣ್‌ಗೆ ನೀಡಿ, ತನ್ನ ಬಳಿ ಇದ್ದ ವ್ಯಕ್ತಿಗೆ ಚಿನ್ನವನ್ನು ಪರೀಕ್ಷಿಸುವಂತೆ ಹೇಳಿ ತಿರುಗಿದಾಗ ಕಿರಣ್ ರಸ್ತೆ ಪಕ್ಕದ ಹಳ್ಳದ ಕಡೆಗೆ ಬ್ಯಾಗ್ ಸಮೇತ ಓಡಿ ಹೋದ. ಚಿನ್ನವನ್ನು ಪರಿಶೀಲಿಸಿದಾಗ ನಕಲಿ ಚಿನ್ನ ಎಂಬುದು ತಿಳಿಯಿತು. ಆದ್ದರಿಂದ ಕೂಡಲೇ ಆತನ ವಿರುದ್ಧ ಕ್ರಮ ಕೈಗೊಂಡು ನ್ಯಾಯ ದೊರಕಿಸಿಕೊಡಬೇಕು ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪೊಲೀಸರು ಆರೋಪಿ ಬಂಧನಕ್ಕೆ ಕ್ರಮ ವಹಿಸಿದ್ದಾರೆ.

ಬೆಸಗರಹಳ್ಳಿ ಗ್ರಾಪಂ ಸದಸ್ಯನ ಅಪಹರಣ

ಮದ್ದೂರು, ಫೆ.16– ಬೆಸಗರಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ರಮೇಶ್ ಎಂಬುವರನ್ನು ಅಪರಿಚಿತರು ಅಪಹರಣ ಮಾಡಿದ್ದಾರೆ ಎಂದು ಮತ್ತೊಬ್ಬ ಸದಸ್ಯ ಬಾಬು.ಎಂ.ಆರ್ ಎಂಬುವರು ಬೆಸಗರಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಬೆಸಗರಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಮಾಡಲು ಪಂಚಾಯಿತಿ ಬಳಿ ಬರುತ್ತಿದ್ದಾಗ ಬೆಸಗರಹಳ್ಳಿ ಕಡೆಯಿಂದ ಮಾರುತಿ ಓಮ್ನಿ ಕಾರಿನಲ್ಲಿ ಬಂದ ಮೂರ್‍ನಾಲ್ಕು ಜನ ಕಾರು ನಿಲ್ಲಿಸಿ ಏಕಾಏಕಿ ರಮೇಶ್ ಅವರನ್ನು ಹೆದರಿಸಿ ಮಂಡ್ಯದ ಕಡೆಗೆ ಅಪಹರಣ ಮಾಡಿಕೊಂಡು ಹೋಗಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ದೂರು ದಾಖಲಿಸಿಕೊಂಡಿರುವ ಬೆಸಗರಹಳ್ಳಿ ಠಾಣೆಯ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಪಾಂಡವಪುರ ಬಳಿ ವೃದ್ಧೆಯ ಚಿನ್ನ ದೋಚಿದ ದುಷ್ಕರ್ಮಿಗಳು

ಪಾಂಡವಪುರ, ಫೆ.16– ಅಪರಿಚಿತ ವ್ಯಕ್ತಿಯೊಬ್ಬ ವೃದ್ಧೆಯೊಬ್ಬರನ್ನು ಲೋನ್ ಹಣ ಕೊಡಿಸುವ ನೆಪದಲ್ಲಿ ಯಾಮಾರಿಸಿ ಚಿನ್ನದ ಒಡವೆ ದೋಚಿ ಪರಾರಿಯಾಗಿರುವ ಘಟನೆ ಪಾಂಡವಪುರ ತಾಲೂಕಿನ ಜಕ್ಕನಹಳ್ಳಿ ವೃತ್ತದಲ್ಲಿ ನಡೆದಿದೆ.

ಫೆ.10ರಂದು ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಜಕ್ಕನಹಳ್ಳಿ ವೃತ್ತದಲ್ಲಿ ತಾಲೂಕಿನ ತಾಳೆಕೆರೆ ಗ್ರಾಮದ ವೃದ್ಧೆ ಚಿಕ್ಕತಾಯಮ್ಮ ನಿಂತಿದ್ದಾಗ ಅಲ್ಲಿಗೆ ಬಂದ ಅಪರಿಚಿತ ವ್ಯಕ್ತಿಯೊಬ್ಬ ಪರಿಚಯದವನಂತೆ ಅಕ್ಕ ಚೆನ್ನಾಗಿದ್ದೀಯಾ ಅಂತ ಮಾತನಾಡಿಸಿದ್ದಾನೆ. ನಿಮಗೆ ಮನೆ ಕಟ್ಟಿಸಲು ಗ್ರ್ಯಾಂಟ್ ಮಾಡಿಸಿಕೊಟ್ಟಿದ್ದು ನಾನೇ. ಈಗ ನಿಮಗೆ ಗ್ರ್ಯಾಂಟ್ ಹಣ ಬಂದಿದೆ. ಆದ್ದರಿಂದ ಅವರಿಗೆ ಸ್ವಲ್ಪ ಹಣ ಕೊಡಬೇಕು ಎಂದು ಹೇಳಿ ಪುಸಲಾಯಿಸಿದ್ದಾನೆ ಇದನ್ನು ನಂಬಿದ ವೃದ್ಧೆ ಚಿಕ್ಕತಾಯಮ್ಮ ನನ್ನ ಬಳಿ ಹಣವಿಲ್ಲ ಎಂದು ಹೇಳಿದ್ದಾರೆ. ಆಗ ವ್ಯಕ್ತಿ ನಿಮ್ಮ ಕಿವಿಯಲ್ಲಿರುವ ಓಲೆ ಕೊಡಿ, ಅದನ್ನು ಗಿರವಿ ಇಟ್ಟು ನಂತರ ಬಿಡಿಸಿಕೊಡುತ್ತೇನೆ ಎಂದು ನಂಬಿಸಿದ್ದಾನೆ ಇದನ್ನು ನಂಬಿದ ಚಿಕ್ಕತಾಯಮ್ಮ ಅವರು ಕಿವಿಯಲ್ಲಿದ್ದ ಒಂದು ಜೊತೆ ಚಿನ್ನದ ಓಲೆಗಳನ್ನು ಬಿಚ್ಚಿಕೊಟ್ಟಿದ್ದಾರೆ. ಅದನ್ನು ಪಡೆದ ಅಪರಿಚಿತ ವ್ಯಕ್ತಿ ಅಲ್ಲಿಂದ ಪರಾರಿಯಾಗಿದ್ದಾನೆ. ವಂಚನೆಗೊಳಗಾದ ವೃದ್ಧ ಮಹಿಳೆ ಚಿಕ್ಕತಾಯಮ್ಮ ಮೇಲುಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ದ್ವಿಚಕ್ರ ವಾಹನದಲ್ಲಿ ಪುಟ್ಟ ಮಕ್ಕಳಿಗೆ ಸೇಫ್ಟಿ ಹಾರ್ನೆಸ್ ಬೆಲ್ಟ್ ಕಡ್ಡಾಯ

ಮೈಸೂರು ಸಂಚಾರ ಪೊಲೀಸರಿಂದ ಜಾಗೃತಿ

ಮೈಸೂರು, ಫೆ.16(ಎಸ್‌ಬಿಡಿ)– ದ್ವಿಚಕ್ರ ವಾಹನದಲ್ಲಿ ಪುಟ್ಟ ಮಕ್ಕಳನ್ನು ಕರೆದೊಯ್ಯುವಾಗ ಕಡ್ಡಾಯವಾಗಿ ಸೇಫ್ಟಿ ಹಾರ್ನೆಸ್ ಬೆಲ್ಟ್(ಸುರಕ್ಷತಾ ಚೀಲ) ಬಳಸುವಂತೆ ನಗರದ ಸಂಚಾರ ವಿಭಾಗದ ಪೊಲೀಸರು ಜಾಗೃತಿ ಮೂಡಿಸುತ್ತಿದ್ದಾರೆ.

ದೇವರಾಜ, ನರಸಿಂಹರಾಜ, ಸಿದ್ಧಾರ್ಥನಗರ ಸಂಚಾರ ಠಾಣೆ ಪೊಲೀಸರು, ತಮ್ಮ ಠಾಣಾ ವ್ಯಾಪ್ತಿಯ ಪ್ರಮುಖ ರಸ್ತೆ ಹಾಗೂ ಜಂಕ್ಷನ್‌ಗಳಲ್ಲಿ ಬ್ಯಾನರ್ ಪ್ರದರ್ಶನದೊಂದಿಗೆ ಕರಪತ್ರ ವಿತರಿಸಿ, ಅರಿವು ಮೂಡಿಸಿದರು. ದ್ವಿಚಕ್ರ ವಾಹನಗಳಲ್ಲಿ 9 ತಿಂಗಳಿಂದ 4 ವರ್ಷದವರೆಗಿನ ಮಗುವನ್ನು ಕರೆದೊಯ್ಯುವಾಗ ಸೇಫ್ಟಿ ಹಾರ್ನೆಸ್ ಬೆಲ್ಟ್ ಧರಿಸಬೇಕೆಂಬ ನಿಯಮವಿದೆ. ಮಕ್ಕಳ ಸುರಕ್ಷತೆ ದೃಷ್ಟಿಯಿಂದಲೂ ಈ ಕ್ರಮ ಉಪಯುಕ್ತವಾಗಿದೆ ಎಂದು ಮಾಹಿತಿ ನೀಡಿದರು. ಕೆಲವೆಡೆ ದ್ವಿಚಕ್ರ ವಾಹನದಲ್ಲಿದ್ದ ಪುಟ್ಟ ಮಕ್ಕಳಿಗೆ ಸೇಫ್ಟಿ ಹಾರ್ನೆಸ್ ಬೆಲ್ಟ್ ಧರಿಸುವ ವಿಧಾನವನ್ನೂ ತಿಳಿಸಿಕೊಟ್ಟರು.



ಮೈಸೂರಿನಲ್ಲಿ ಸಂಚಾರ ಪೊಲೀಸರು ಸೇಫ್ಟಿ ಹಾರ್ನೆಸ್ ಬೆಲ್ಟ್ ಬಗ್ಗೆ ಜಾಗೃತಿ ಮೂಡಿಸಿದರು

ದ್ವಿಚಕ್ರ ವಾಹನಗಳಲ್ಲಿ ಅನೇಕ ಸವಾರರು ತಮ್ಮ ಮಕ್ಕಳನ್ನು ಪೆಟ್ರೋಲ್ ಟ್ಯಾಂಕ್‌ಗಳ ಮೇಲೆ ಕೂರಿಸುತ್ತಾರೆ. ಸ್ಕೂಟರ್‌ಗಳಲ್ಲಿ ಫುಟ್‌ರೆಸ್ಟ್ ಪ್ರದೇಶದಲ್ಲಿ ನಿಲ್ಲಿಸುತ್ತಾರೆ. ಹೀಗೆ ಕರೆದೊಯ್ಯುವಾಗ ಮಕ್ಕಳು ಸಮತೋಲನ ಕಳೆದುಕೊಂಡು ಬೀಳುವ ಅಪಾಯ ಹೆಚ್ಚಿದೆ. ಹಠಾತ್ ಬ್ರೇಕ್ ಹಾಕಿದಾಗ ಇಂಥಹ ಘಟನೆಗಳು ಸಂಭವಿಸುವ ಸಾಧ್ಯತೆಯೂ ಇದೆ. ಕೆಲ ಮಕ್ಕಳು ಸಂಚಾರದ ವೇಳೆ ನಿದ್ರೆಗೆ ಜಾರಿ ಆಯತಪ್ಪಿ ಬೀಳಬಹುದು. ಆದ್ದರಿಂದ ಮಕ್ಕಳಿಗೆ ಸೇಫ್ಟಿ ಹಾರ್ನೆಸ್ ಬೆಲ್ಟ್ ಧರಿಸುವುದು ಅತ್ಯಂತ ಸುರಕ್ಷಿತವಾಗಿದೆ.

ಕೇಂದ್ರ ಮೋಟಾರು ವಾಹನ ನಿಯಮಾವಳಿ 1989ರ ನಿಯಮ 138(7)ರ ಅನ್ವಯ 9 ತಿಂಗಳು ಮೇಲ್ಪಟ್ಟ ಹಾಗೂ 4 ವರ್ಷದ ಒಳಗಿನ ಎಲ್ಲ ಮಕ್ಕಳನ್ನು ದ್ವಿಚಕ್ರ ವಾಹನಗಳಲ್ಲಿ ಕರೆದೊಯ್ಯುವಾಗ ಸೇಫ್ಟಿ ಹಾರ್ನೆಸ್ ಬೆಲ್ಟ್ ಧರಿಸಬೇಕಿದೆ. ಇದು ಹಗುರ, ವಾಟರ್ ಪ್ರೂಫ್ ಮತ್ತು ಗುಣಮಟ್ಟದಿಂದ ಕೂಡಿರಬೇಕು. ಸುಲಭವಾಗಿ ಹೊಂದಾಣಿಕೆ (ಅಡ್ಜೆಸ್ಟ್)ಮಾಡುವಂತಿರಬೇಕು. 30 ಕೆಜಿಯಷ್ಟು ತೂಕವನ್ನು ತಾಳುವ ಸಾಮರ್ಥ್ಯವಿರಬೇಕು. ದ್ವಿಚಕ್ರ ವಾಹನಗಳಲ್ಲಿ ಈ ವಯೋಮಾನದ ಮಕ್ಕಳಿದ್ದರೆ ವಾಹನದ ವೇಗ 40ಕಿ.ಮೀ. ಮೀರಬಾರದು. ಹಿಂಬದಿಯಲ್ಲಿ ಕೂರಿಸಿಕೊಳ್ಳುವ ಮಕ್ಕಳಿಗೆ ಕ್ರ್ಯಾಶ್ ಹೆಲ್ಮೆಟ್ ಅಥವಾ ಬೈಸಿಕಲ್ ಹೆಲ್ಮೆಟ್ ಧರಿಸಬೇಕು. ವಾಹನ ಚಾಲನೆ ಮಾಡುವವರೊಂದಿಗೆ ಬೆಸೆದಿರುವಂತೆ ಮಗುವನ್ನು ಕೂರಿಸಿಕೊಂಡು, ಸೇಫ್ಟಿ ಹಾರ್ನೆಸ್ ಬೆಲ್ಟ್ ಅನ್ನು ಚಾಲಕನ ಸೊಂಟಕ್ಕೆ ಅಳವಡಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

ನಾಗಮಂಗಲದ ಬಳಿ ಆಕಸ್ಮಿಕ ಗನ್ ಫೈರಿಂಗ್, ಮಗು ಧಾರುಣ ಸಾವು

ಮಂಡ್ಯ: ಗನ್ ಹಿಡಿದುಕೊಂಡು ಮಕ್ಕಳು ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ಗುಂಡು ಹಾರಿ ಮಗು ಸಾವನ್ನಪ್ಪಿರುವ ಘಟನೆ ನಾಗಮಂಗಲ ತಾಲೂಕಿನ ದೊಂದೆಮಾದಿ ಹಳ್ಳಿ ಗ್ರಾಮದ ಕೋಳಿ ಫಾರಂನಲ್ಲಿ ನಡೆದಿದೆ.

ಶಶಾಂಕ್ ಹಾಗೂ ಲಿಪಿಕ ದಂಪತಿ ಪುತ್ರ ಅಭಿ ಷೇಕ್(3) ಮೃತಪಟ್ಟ ಮಗು. ಭಾವ ಶಂಕರ್‌ದಾಸ್ ಪುತ್ರಸುದೀಪ್ ದಾಸ್(13) ಎಂಬಾತ ಆಕಸ್ಮಿಕವಾಗಿ ಫೈರಿಂಗ್ ಮಾಡಿರುವ ಬಾಲಕ. ಅಭಿಷೇಕ್ ತಾಯಿ ಲಿಪಿಕಾಗೂ ಗಾಯವಾಗಿದೆ.

ಕಾಂಗ್ರೆಸ್ ಮುಖಂಡ ನರಸಿಂಹಮೂರ್ತಿ ಎಂಬುವರಿಗೆ ಸೇರಿದ ಕೋಳಿ ಫಾರಂನಲ್ಲಿ ಘಟನೆ ನಡೆದಿದೆ. ನರಸಿಂಹಮೂರ್ತಿ ಕೋಳಿ ಫಾರಂನಲ್ಲಿ ಪಶ್ಚಿಮ ಬಂಗಾಳ ಮೂಲದ ಶಶಾಂಕ್ ಹಾಗೂ ಲಿಪಿಕಾ ದಂಪತಿ ಕಳೆದ ಹಲವು ವರ್ಷಗಳಿಂದ ಕೆಲಸ ನಿರ್ವಹಿಸುತ್ತಿದ್ದರು.

ಶಶಾಂಕ್ ಹಾಗೂ ಲಿಪಿಕಾರನ್ನು ನೋಡಲು ಭಾವ ಶಂಕರ್ ದಾಸ್ ಹಾಗೂ ಆತನ ಮಗ ಸುದೀಪ್ ದಾಸ್ ಬಂದಿದ್ದರು. ಮಕ್ಕಳಿಬ್ಬರು ಆಟವಾಡುತ್ತಿದ್ದಾಗ ಮಕ್ಕಳ ಕೈಗೆ ಗನ್ ಸಿಕ್ಕಿದೆ. ಆಗ ಅಸಲಿ ಗನ್ ಎಂದು ತಿಳಿಯದೇ ಆಕಸ್ಮಿಕ ಫೈರಿಂಗ್ ಆಗಿದೆ. ಫೈರಿಂಗ್ ಆದ ತಕ್ಷಣ ಗುಂಡು ಮಗುವಿನ ಹೊಟ್ಟೆ ಹೊಕ್ಕಿತ್ತು.

ಗಂಭೀರವಾಗಿ ಗಾಯಗೊಂಡಿದ್ದ ಮಗುವನ್ನು ಬಿ.ಜಿ.ನಗರದ ಆದಿಚುಂಚನಗಿರಿ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮಗು ಸಾವನ್ನಪ್ಪಿದೆ. ಗಾಯಗೊಂಡಿರುವ ತಾಯಿ ಲಿಪಿಕಾಗೆ ವೈದ್ಯರಿಂದ ಚಿಕಿತ್ಸೆ ನೀಡಲಾಗುತ್ತಿದೆ. ಕೋಳಿ ಫಾರಂ ಮಾಲೀಕ ನರಸಿಂಹಮೂರ್ತಿ ಅವರಿಗೆ ಈ ಗನ್ ಸೇರಿದ್ದು, ಪರವಾನಗಿ ಪಡೆದು ಗನ್ ಇಟ್ಟುಕೊಂಡಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆದರೆ ಈ ಗನ್ ಮಕ್ಕಳ ಸಿಕ್ಕಿದ್ದು ಹೇಗೆ ಎಂಬುದು ತನಿಖೆಯಿಂದ ತಿಳಿದುಬರಬೇಕಿದೆ.

ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಕೊಡುಗೆ ಸ್ಮರಿಸೋಣ

'ಲಾಯರ್ಸ್ ಡೈರಿ' ಬಿಡುಗಡೆಗೊಳಿಸಿ ಶಾಸಕ ಜಿ.ಟಿ.ದೇವೇಗೌಡರ ಕರೆ

ಮೈಸೂರು,ಫೆ.16(ಪಿಎಂ)– ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ, ಬರಹ, ಹೋರಾಟ ಮತ್ತು ಕೊಡುಗೆಗಳನ್ನು ನಾವೆಲ್ಲರೂ ಸ್ಮರಿಸಬೇಕು. ಅವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮಾಜಿ ಸಚಿವರೂ ಆದ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಹೇಳಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯ ರೋಟರಿ ಸಭಾಂಗಣದಲ್ಲಿ ವಿಶ್ವರತ್ನ ಚಾರಿಟಬಲ್ ಟ್ರಸ್ಟ್ ಹಾಗೂ ಹೆಚ್.ಎನ್.ಲಾ ಅಸೋಸಿಯೇಟ್ಸ್ ಜಂಟಿ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 2025ರ 'ಲಾಯರ್ಸ್ ಡೈರಿ' ಬಿಡುಗಡೆ ಸಮಾರಂಭದಲ್ಲಿ ಡೈರಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರು ವಿಶ್ವದಲ್ಲಿ ಅತ್ಯುತ್ತಮ ಸಂವಿಧಾನವನ್ನು ದೇಶಕ್ಕೆ ಕೊಡುಗೆಯಾಗಿ ನೀಡಿದ್ದಾರೆ. ಸಂವಿಧಾನಕ್ಕೆ ಬದ್ಧರಾಗಿ ಅದರ ಆಶಯದಂತೆ ನಾವು ನಡೆಯಬೇಕು. ಸಂವಿಧಾನದ ಅರಿವು ಮೂಡಿಸಲು ರಾಜ್ಯ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುತ್ತಿದೆ. ನ್ಯಾ.ನಾಗಮೋಹನ್‌ದಾಸ್ ಅವರ 'ಸಂವಿಧಾನ ಓದು' ಪುಸ್ತಕವನ್ನು ಬೆಂಗಳೂರಿನ ವಕೀಲರ ಸಂಘದಲ್ಲಿ ನಾನೇ ಬಿಡುಗಡೆ ಮಾಡಿದ್ದೆ. ನಾನು ಆಗ ಉನ್ನತ ಶಿಕ್ಷಣ ಸಚಿವನಾಗಿದ್ದೆ ಎಂದು ನೆನಪಿಸಿಕೊಂಡರು.

ಎಷ್ಟೇ ವಿರೋಧಗಳು ಎದುರಾದರೂ ಅಂಬೇಡ್ಕರ್ ಅವರು ಹೋರಾಟದ ಮೂಲಕ ದೇಶದಲ್ಲಿ ದಲಿತರಿಗೆ ಮಾತ್ರವಲ್ಲದೆ, ತುಳಿತಕ್ಕೆ ಒಳಗಾದ ಎಲ್ಲಾ ಸಮಾಜಗಳಿಗೆ ಶಕ್ತಿ ತಂದುಕೊಟ್ಟರು. ಇಂದು ಸಣ್ಣ ಸಮುದಾಯದ ಮೋದಿಯವರು ಪ್ರಧಾನಿಯಾಗಿದ್ದಾರೆ. ಅಂತೆಯೇ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿದ್ದು, ರೈತನಾದ ನಾನು ಸಹ ಶಾಸಕನಾಗಿದ್ದೇನೆ. ಮಂತ್ರಿಯಾಗಿಯೂ ಕೆಲಸ ಮಾಡಿದ್ದೇನೆ. ಇದಕ್ಕೆಲ್ಲಾ ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನ ಕಾರಣ. ಅಂಬೇಡ್ಕರ್ ಅವರು ಹೋರಾಟ ಫಲದಿಂದ ನಾವೆಲ್ಲರೂ ಇಂದು ವಿದ್ಯಾವಂತರಾಗಲು ಸಾಧ್ಯವಾಗಿದೆ. ನನಗೆ ದೊರೆತ ಸ್ಥಾನಗಳಲ್ಲಿ ಸಂವಿಧಾನಕ್ಕೆ ಅನುಗುಣವಾಗಿ ಪ್ರಾಮಾಣಿಕವಾಗಿ ನಡೆದುಕೊಂಡಿದ್ದು, ಮುಂದೆಯೂ ಅಂತೆಯೇ ನಡೆದುಕೊಳ್ಳುತ್ತೇನೆ ಎಂದರು.

ಯಾವುದೇ ಸರ್ಕಾರವಾದರೂ ಸಂವಿಧಾನಕ್ಕೆ ಅನುಗುಣವಾಗಿ ನಡೆಯಬೇಕು. ಅಂಬೇಡ್ಕರ್ ಅವರು ಕೊಟ್ಟ ಕೊಡುಗೆಯಲ್ಲಿ ನಾವು ಕೇವಲ ಶೇ.10ರಷ್ಟು ಕೊಡುಗೆ ನೀಡಿದರೆ, ಸಮಾಜದಲ್ಲಿ ಸಂಪೂರ್ಣವಾಗಿ ಸಮಾನತೆ ನೆಲೆಸಲಿದೆ. ದೇಶ ಸಮೃದ್ಧಿಯಾಗಿ ಬೆಳೆಯಲಿದೆ. ಅಂಬೇಡ್ಕರ್ ಅವರ ಬದುಕು–ಬರಹ ನಮಗೆ ದಾರಿದೀಪ ಎಂದು ಹೇಳಿದರು.



ಮೈಸೂರಿನ ಜೆಎಲ್‌ಬಿ ರಸ್ತೆಯ ರೋಟರಿ ಸಭಾಂಗಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ 2025ರ 'ಲಾಯರ್ಸ್ ಡೈರಿ' ಅನ್ನು ಶಾಸಕ ಜಿ.ಟಿ.ದೇವೇಗೌಡರು ಬಿಡುಗಡೆ ಮಾಡಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ದೇಶ ಸರಿ ದಾರಿಯಲ್ಲಿ ಸಾಗಲು ಇಂಜಿನಿಯರ್, ವೈದ್ಯವೃತ್ತಿ ಹಾಗೂ ವಕೀಲ ವೃತ್ತಿ ಮಹತ್ವದ ಪಾತ್ರ ವಹಿಸುತ್ತೇವೆ. ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ದೂರದೃಷ್ಟಿ ಇಟ್ಟುಕೊಂಡು ಮಹತ್ವದ ಸಂವಿಧಾನವನ್ನು ದೇಶಕ್ಕೆ ಅರ್ಪಣೆ ಮಾಡಿದ್ದಾರೆ. ನನಗೂ ಶಿಕ್ಷಣ ದೊರೆಯಲು ಸಂವಿಧಾನವೇ ಕಾರಣ ಎಂದರು.

ಎಷ್ಟೋ ಜನ ಜೀವನ ಸಾಗಿಸಲು ಕಷ್ಟ ಪಡುತ್ತಿದ್ದಾರೆ. ವ್ಯವಸ್ಥೆ ಕೆಟ್ಟ ಪರಿಸ್ಥಿತಿಯಲ್ಲಿದೆ. ಒಬ್ಬ ಕ್ರಿಕೆಟ್ ಪಟು ಸಿಕ್ಸರ್ ಹೊಡೆದರೆ 10 ಲಕ್ಷ ರೂ. ಲಭಿಸುತ್ತದೆ. ಆದರೆ ಒಬ್ಬ ರೈತ ಜೀವನಪೂರ್ತಿ ದುಡಿದರೂ 10 ಲಕ್ಷ ಸಂಪಾದಿಸುವುದು ಸಾಧ್ಯವಾಗದಂತಹ ಪರಿಸ್ಥಿತಿ ಇದೆ. ಇಂತಹ ವ್ಯವಸ್ಥೆಯ ಬದಲಾವಣೆಗೆ ಹೊಸ ಆಲೋಚನೆಗಳು ಅಗತ್ಯವಾಗಿವೆ. ಸಮಾಜಕ್ಕೆ ಅನುಕೂಲವಾಗುವಂತಹ ಚಟುವಟಿಕೆಗಳನ್ನು ದೊಡ್ಡ ಮಟ್ಟದಲ್ಲಿ ವಕೀಲ ಸಮುದಾಯ ಮಾಡಬೇಕೆಂದು ಕೋರಿದರು.

ಶಾಸಕ ಕೆ.ಹರೀಶ್‌ಗೌಡ ಅತಿಥಿಯಾಗಿ ಪಾಲ್ಗೊಂಡಿದ್ದರು. ಮೈಸೂರು ವಕೀಲರ ಸಂಘದ ಉಪಾಧ್ಯಕ್ಷ ಎಂ.ವಿ.ಚಂದ್ರಶೇಖರ್ ಅಧ್ಯಕ್ಷತೆ ವಹಿಸಿದ್ದರು. ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್, ಮೈಸೂರು ವಕೀಲರ ಸಂಘದ ಅಧ್ಯಕ್ಷ ಲೋಕೇಶ್, ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ವಿಶ್ವರತ್ನ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ.ಹೆಚ್.ಬಿ.ಸೋಮಶೇಖರ ಹಾನವಾಡಿ ಮತ್ತಿತರರು ಹಾಜರಿದ್ದರು.

> "ವಿವಿಧತೆಯಲ್ಲಿ ಏಕತೆಯಿಂದ ಹಾಗೂ ಸಹಬಾಳ್ವೆ ಮತ್ತು ಸಾಮರಸ್ಯದಿಂದ ದೇಶದಲ್ಲಿ ಎಲ್ಲರು ಬದು ಕಲು ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನ ಕಾರಣ. ಸಂವಿಧಾನ ಎಲ್ಲರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಿದೆ. ನಾನು ಶಾಸಕನಾಗಲೂ ಸಂವಿಧಾನವೇ ಕಾರಣ. ಆದರೆ ಈಗ ಸಂವಿಧಾನ ಬದಲಾವಣೆ ಮಾತುಗಳು ಕೇಳಿಬರುತ್ತಿವೆ. ಸಂವಿಧಾನ ಉಳಿಸಲು ಕಾಂಗ್ರೆಸ್ ಪಕ್ಷ ಮತ್ತು ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಶಾಲಾ ಹಂತದಲ್ಲೇ ಮಕ್ಕಳಿಗೆ ಸಂವಿಧಾನದ ಮಹತ್ವ ತಿಳಿಸಲು ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ನಮ್ಮ ಸರ್ಕಾರದಿಂದ ರೂಪಿಸಲಾಗಿದೆ. ಇದರಿಂದ ಮಕ್ಕಳು ಸಂವಿಧಾನ ಪೀಠಿಕೆಯನ್ನು ಅರ್ಥೈಸಿಕೊಳ್ಳಲು ಸಾಧ್ಯವಾಗಿದೆ. – ಕೆ.ಹರೀಶ್‌ಗೌಡ, ಶಾಸಕರು, ಚಾಮರಾಜ ವಿಧಾನಸಭಾ ಕ್ಷೇತ್ರ

ಗೌಡಗೆರೆಯಲ್ಲಿ ಗೃಹಿಣಿ ಅನುಮಾನಾಸ್ಪದ ಸಾವು

ಮಂಡ್ಯ,ಫೆ.16– ತಾಲೂಕಿನ ಕೆ.ಗೌಡಗೆರೆ ಗ್ರಾಮದ ಪಂಪ್‌ಸೆಟ್ ನೀರಿನ ಬಾವಿಯಲ್ಲಿ ಮಹಿಳೆಯ ಶವ ಪತ್ತೆಯಾಗಿದ್ದು, ನನ್ನ ಮಗಳ ಸಾವಿನ ಬಗ್ಗೆ ಅನುಮಾನವಿದೆ ಎಂದು ಮಹಿಳೆಯ ತಾಯಿ ಕೆರಗೋಡು ಪೊಲೀಸ್ ಠಾಣೆಯಲ್ಲಿ ಯುಡಿಆರ್ ಪ್ರಕರಣ ದಾಖಲಿಸಿದ್ದಾರೆ.



ಗ್ರಾಮದ ಯಶ್ವಂತ್ ಪತ್ನಿ ಜಾಹ್ನವಿ(27) ಮೃತಪಟ್ಟಿರುವ ಮಹಿಳೆ. ಈಕೆ ಬಾವಿಗೆ ಬಿದ್ದು ಸಾವನ್ನಪ್ಪಿದ್ದಾರೆ. ಮಗಳು ಬಾವಿಗೆ ಬಿದ್ದು ಮೃತಪಟ್ಟಿರುವ ಬಗ್ಗೆ ಅನುಮಾನ ಕಂಡು ಬಂದಿದ್ದು, ತಾವು ಸ್ಥಳಕ್ಕೆ ಬಂದು ಪರಿಶೀಲಿಸಿ ಕಾನೂನು ಕ್ರಮ ಜರುಗಿಸಬೇಕು ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಜಾಹ್ನವಿಯನ್ನು ಕೆ.ಗೌಡಗೆರೆ ಗ್ರಾಮದ ಸಿದ್ದರಾಮಯ್ಯ ಎಂಬುವರ ಪುತ್ರ ಯಶ್ವಂತ್‌ಗೆ ಮದುವೆ ಮಾಡಿದ್ದು, ಮಗಳು ಮನೆಯಲ್ಲಿಯೇ ಇದ್ದಳು. ಫೆ.12ರಂದು ರಾತ್ರಿ 9 ಗಂಟೆಯಲ್ಲಿ ನನಗೆ ಕರೆ ಮಾಡಿದ್ದು, ಆಗ ನನಗೆ 6 ತಿಂಗಳಿನಿಂದ ಹೊಟ್ಟೆ ನೋವು ಬರುತ್ತಿದ್ದು, ಹೆಚ್ಚಿಗೆ ಮಾತನಾಡಲು ಆಗುವುದಿಲ್ಲ ಎಂದು ಫೋನ್ ಕಟ್ ಮಾಡಿದಳು. ನಂತರ 13ರಂದು ಬೆಳಿಗ್ಗೆ 7.45 ಗಂಟೆಯಲ್ಲಿ ಗ್ರಾಮದ ಯಾರೋ ಫೋನ್ ಮಾಡಿ ನಿಮ್ಮ ಮಗಳು ಜಾಹ್ನವಿ ರಾತ್ರಿ ಸಮಯದಲ್ಲಿ ಅವರ ಮನೆಯ ಹತ್ತಿರದ ಪಂಪ್‌ಸೆಟ್ ನೀರಿನ ಬಾವಿಗೆ ಬಿದ್ದು ಮೃತಪಟ್ಟಿರುತ್ತಾರೆಂದು ತಿಳಿಸಿದರು.

ನಾವು ಗ್ರಾಮಕ್ಕೆ ಹೋಗಿ ವಿಚಾರಿಸಿದಾಗ ರಾತ್ರಿ ಸಮಯದಲ್ಲಿ ಅವರ ಗಂಡ ಯಶ್ವಂತ್ ಅವರಿಗೆ ನಾನು ವಾಕ್ ಮಾಡಿಕೊಂಡು ಬರುತ್ತೇನೆ ಎಂದು ಹೇಳಿ ಮನೆಯ ಆಚೆಗೆ ಹೋಗಿದ್ದು, ಮಾರನೇ ದಿನ ಬೆಳಿಗ್ಗೆ ಬಾವಿಯಲ್ಲಿ ಬಿದ್ದು ಮೃತಪಟ್ಟಿದ್ದಾಳೆ ಎಂದು ತಿಳಿಸಿದ್ದಾರೆ ಆದ್ದರಿಂದ ಸಾವಿನ ಬಗ್ಗೆ ಅನುಮಾನವಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ದೂರು ನೀಡಿದ್ದಾರೆ. ಅದರಂತೆ ತನಿಖೆ ನಡೆಯುತ್ತಿದ್ದು, ವೈದ್ಯಕೀಯ ವರದಿ ಬಂದ ನಂತರ ಸತ್ಯಾಸತ್ಯತೆ ತಿಳಿಯಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.

ಸಿಇಟಿ: ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಣೆ

ಬೆಂಗಳೂರು, ಫೆ.16– ಎಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ದಿನಾಂಕವನ್ನು ಫೆ.24ರವರೆಗೆ ವಿಸ್ತರಿಸಲಾಗಿದೆ.

ಮೊದಲು ಫೆ.18ರವರೆಗೆ ಅವಕಾಶ ಇತ್ತು. ಈಗ ಅವಧಿ ವಿಸ್ತರಿಸಲಾಗಿದ್ದು, ಶುಲ್ಕ ಪಾವತಿಗೆ ಫೆ. 25ರವರೆಗೆ ಅವಕಾಶ ನೀಡಲಾಗಿದೆ. ವೈದ್ಯಕೀಯ, ದಂತ ವೈದ್ಯಕೀಯ ಮತ್ತು ಆಯುಷ್ ಕೋರ್ಸ್‌ಗಳ ಪ್ರವೇಶಕ್ಕೆ ನೀಟ್ ತೆಗೆದುಕೊಂಡರೂ ರಾಜ್ಯದಲ್ಲಿನ ವೈದ್ಯಕೀಯ ಸೀಟುಗಳ ಪ್ರವೇಶಕ್ಕೆ ಪರೀಕ್ಷಾ ಪ್ರಾಧಿಕಾರದಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ.

ಈಗಾಗಲೇ ಅರ್ಜಿ ಸಲ್ಲಿಸಿರುವವರು ಅರ್ಜಿಗಳಲ್ಲಿನ ಮಾಹಿತಿ ಬದಲಿಸಬಹುದು. ದಾಖಲೆಗಳ ಪರಿಶೀಲನೆ ಕಾಲೇಜು ಹಂತದಲ್ಲೇ ನಡೆಯಲಿದ್ದು, ಕ್ಲೇಮ್‌ಗಳ ಪ್ರಕಾರ ಅಗತ್ಯ ದಾಖಲೆಗಳನ್ನು ಹೊಂದಿಸಿಕೊಂಡು ಹೋಗಬೇಕು ಎಂದು ಅವರು ಸಲಹೆ ನೀಡಿದ್ದಾರೆ.

ಮೈಸೂರು ಮಿತ್ರ ಸೋಮವಾರ 17 ಫೆಬ್ರವರಿ 2025

ವಿಕೇಂದ್ರೀಕರಣ ಸೂಚ್ಯಂಕ ಶ್ರೇಯಾಂಕದಲ್ಲಿ ಕರ್ನಾಟಕಕ್ಕೆ ಅಗ್ರಸ್ಥಾನ

ಬೆಂಗಳೂರು, ಫೆ.16– ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ ನಡೆಸಿದ 2023–24ರ ಅಧ್ಯಯನದ ಪ್ರಕಾರ, ರಾಜ್ಯದಲ್ಲಿನ ಪಂಚಾಯತ್‌ಗಳು ನ್ಯಾಯಯುತವಾಗಿ ಮತ್ತು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವುದರ ಜೊತೆಗೆ ಅನುಕರಣೀಯ ಹಣಕಾಸು ನಿರ್ವಹಣಾ ಕ್ರಮಗಳು ಮತ್ತು ಹೊಣೆಗಾರಿಕೆಯನ್ನು ತೋರಿಸಿವೆ ಎಂದು ತಿಳಿದುಬಂದಿದೆ.

ಐಐಪಿಎ ವರದಿ: ರಾಜ್ಯಗಳಲ್ಲಿ ಪಂಚಾಯತ್‌ಗಳಿಗೆ ವಿಕೇಂದ್ರೀಕರಣದ ಸ್ಥಿತಿ–ಸೂಚಕ ಪುರಾವೆ ಆಧಾರಿತ ಶ್ರೇಯಾಂಕವನ್ನು ಕೇಂದ್ರ ಪಂಚಾಯತ್ ರಾಜ್ ಸಚಿವಾಲಯದ ರಾಜ್ಯ ಸಚಿವ ಪ್ರೊ.ಎಸ್.ಪಿ. ಸಿಂಗ್ ಬಘೇಲ್ ದೆಹಲಿಯಲ್ಲಿ ಬಿಡುಗಡೆ ಮಾಡಿದರು. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒಟ್ಟಾರೆ ಪಂಚಾಯತ್ ವಿಕೇಂದ್ರೀಕರಣ ಸೂಚ್ಯಂಕ ಮತ್ತು ಆರು ಆಯಾಮಗಳ ಪ್ರಕಾರ ಶ್ರೇಣೀಕರಿಸಲಾಗಿದೆ ಅವುಗಳೆಂದರೆ ಚೌಕಟ್ಟು; ಕಾರ್ಯಗಳು; ಹಣಕಾಸು; ಕಾರ್ಯನಿರ್ವಾಹಕರು; ಸಾಮರ್ಥ್ಯ ವರ್ಧನೆ ಮತ್ತು ಹೊಣೆಗಾರಿಕೆ. ವಿಕೇಂದ್ರೀಕರಣ ಸೂಚ್ಯಂಕದಲ್ಲಿ ಹಾಗೂ 'ಹಣಕಾಸು' ಮತ್ತು 'ಜವಾಬ್ದಾರಿ'ಯ ಪ್ರಮುಖ ಉಪ–ಸೂಚ್ಯಂಕಗಳಲ್ಲಿ ಕರ್ನಾಟಕ ಅಗ್ರಸ್ಥಾನದಲ್ಲಿದೆ.

ಸೂಚಕಗಳ ಒಟ್ಟಾರೆ ವಿಶ್ಲೇಷಣೆಯು ರಾಜ್ಯದ ಶ್ಲಾಘನೀಯ ಕಾರ್ಯಕ್ಷಮತೆಯನ್ನು ಪ್ರದರ್ಶಿಸುತ್ತದೆ ಎಂದು ವರದಿ ಹೇಳುತ್ತದೆ. ಕೇಂದ್ರ ವಿನ್ಯಾಸಗೊಳಿಸಿದ ಲಂಬ ಯೋಜನೆಗಳಲ್ಲಿ ಗಣನೀಯ ಪಾತ್ರಗಳನ್ನು ನಿಯೋಜಿಸುವಾಗ ಪಂಚಾಯತ್‌ಗಳಿಗೆ ಗಮನಾರ್ಹ ಸಂಖ್ಯೆಯ ಕಾರ್ಯಗಳನ್ನು ನಿಯೋಜಿಸುತ್ತದೆ.

ವರದಿ ಪ್ರಕಾರ, 15ನೇ ಹಣಕಾಸು ಆಯೋಗದ ಸಹಾಯಧನವನ್ನು ಸಕಾಲಿಕವಾಗಿ ಬಿಡುಗಡೆ ಮಾಡುವ ಮತ್ತು ಬಳಸಿಕೊಳ್ಳುವಲ್ಲಿ ರಾಜ್ಯವು ಮುಂಚೂಣಿಯಲ್ಲಿದೆ. ರಾಜ್ಯ ಹಣಕಾಸು ಆಯೋಗದ ಶಿಫಾರಸುಗಳ ಕಾರಣದಿಂದಾಗಿ, ಹಣವನ್ನು ಪಂಚಾಯತ್‌ಗಳಿಗೆ ಸಕಾಲಿಕವಾಗಿ ಬಿಡುಗಡೆ ಮಾಡಲಾಗುತ್ತದೆ. ತೆರಿಗೆ ಮತ್ತು ತೆರಿಗೆಯೇತರ ತೆರಿಗೆಗಳನ್ನು ವಿಧಿಸಲು ಪಂಚಾಯತ್‌ಗಳು ಗರಿಷ್ಠ ಅಧಿಕಾರವನ್ನು ಹೊಂದಿವೆ ಎಂದು ವರದಿಯಲ್ಲಿ ಹೇಳಲಾಗಿದೆ. 'ಜವಾಬ್ದಾರಿ' ಆಯಾಮದಲ್ಲಿ ಕರ್ನಾಟಕವು ಅಗ್ರಸ್ಥಾನದಲ್ಲಿದೆ ಮತ್ತು 'ಸಾಮಾಜಿಕ ಲೆಕ್ಕಪರಿಶೋಧನೆ' ಮತ್ತು 'ಗ್ರಾಮಸಭೆ'ಯ ಸೂಚಕದಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸಿದೆ ಎಂದು ವರದಿ ಹೇಳುತ್ತದೆ. 'ಕಾರ್ಯನಿರ್ವಾಹಕರ' ಆಯಾಮದ ಅಡಿಯಲ್ಲಿ, ರಾಜ್ಯವು ನಿಗದಿಪಡಿಸಿದ ಅನುಮೋದಿತ ಹುದ್ದೆಗಳ ಪ್ರಕಾರ ಕಾರ್ಯನಿರ್ವಹಿಸುವ ಗರಿಷ್ಠ ಸಂಖ್ಯೆಯ ಪಂಚಾಯತ್ ಅಧಿಕಾರಿಗಳಲ್ಲಿ ರಾಜ್ಯವು ಒಂದಾಗಿದೆ.

'ಸಾಮರ್ಥ್ಯ ವೃದ್ಧಿ'ಯಲ್ಲಿ ಕರ್ನಾಟಕವು ಅಗ್ರ ಹತ್ತು ರಾಜ್ಯಗಳಲ್ಲಿ ಒಂದು: 'ಸಾಮರ್ಥ್ಯ ವೃದ್ಧಿ' ಆಯಾಮದಲ್ಲಿ, ರಾಜ್ಯವು ಅಗ್ರ 10 ರಾಜ್ಯಗಳಲ್ಲಿ ಒಂದಾಗಿದೆ. ಕರ್ನಾಟಕದ ಗ್ರಾಮ ಪಂಚಾಯತ್ ವ್ಯವಸ್ಥೆಯು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಳೀಯ ಸ್ವ–ಆಡಳಿತ, ಭಾಗವಹಿಸುವಿಕೆಯ ಪ್ರಜಾಪ್ರಭುತ್ವ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಲು ಒಂದು ಪ್ರಮುಖ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತದೆ.



> "ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆ (ಐಐಪಿಎ) ಮತ್ತು ಪಂಚಾಯತ್ ರಾಜ್ ಸಚಿವಾಲಯದ ಅಧ್ಯಯನದ ಪ್ರಕಾರ ಪಂಚಾಯಿತಿಗಳಿಗೆ ಅಧಿಕಾರ ವಿಕೇಂದ್ರೀಕರಣ ಶ್ರೇಯಾಂಕದಲ್ಲಿ ಕರ್ನಾಟಕಕ್ಕೆ ಮೊದಲ ಸ್ಥಾನ ಸಿಕ್ಕಿರುವುದು ಖುಷಿ ತಂದಿದೆ. ತಳಮಟ್ಟದಲ್ಲಿ ಪ್ರಜಾಪ್ರಭುತ್ವವನ್ನು ಸಶಕ್ತಗೊಳಿಸಲು ತಮ್ಮ ಸರ್ಕಾರದ ಸಮರ್ಪಣೆಯನ್ನು ಎತ್ತಿ ತೋರಿಸುತ್ತದೆ. ಆರ್ಥಿಕ ಸ್ವಾಯತ್ತತೆ ಮತ್ತು ಹೊಣೆಗಾರಿಕೆಯಲ್ಲಿ ರಾಷ್ಟ್ರವನ್ನು ಮುನ್ನಡೆಸಿದೆ ಎಂದು ಹಂಚಿಕೊಳ್ಳಲು ಹೆಮ್ಮೆಪಡುತ್ತೇನೆ. ಅಧಿಕಾರ ವಿಕೇಂದ್ರೀಕರಣ ಸೂಚ್ಯಂಕದಲ್ಲಿ ಅಗ್ರ ಶ್ರೇಯಾಂಕ (72.23) ಪಡೆದಿದೆ. ಹಣಕಾಸು ಮತ್ತು ಹೊಣೆಗಾರಿಕೆಯಲ್ಲಿ, ಪರಿಣಾಮಕಾರಿ ಹಣಕಾಸು ಹಂಚಿಕೆ ಮತ್ತು ಸಕಾಲಿಕ ನಿಧಿ ಬಿಡುಗಡೆ, 15ನೇ ಹಣಕಾಸು ಆಯೋಗದ ಅನುದಾನದ ಸಮರ್ಥ ಬಳಕೆ, ಪ್ರಬಲ ಗ್ರಾಮಸಭೆಗಳು, ಸಾಮಾಜಿಕ ಲೆಕ್ಕ ಪರಿಶೋಧನೆಗಳಲ್ಲಿ ರಾಜ್ಯವು ಮುಂದಿದೆ.
>
> –ಸಿದ್ದರಾಮಯ್ಯ, ಮುಖ್ಯಮಂತ್ರಿ

ಭೂಕಂದಾಯ ಕಾಯ್ದೆ ಕಲಂ 136(3) ಪ್ರಕರಣ

ಕೊಡಗು ಡಿಸಿಗೆ ವರ್ಗಾವಣೆ

ಮೈಸೂರು, ಫೆ.16(ಆರ್‌ಕೆ)–ಕರ್ನಾಟಕ ಭೂಕಂದಾಯ ಕಾಯಿದೆ ಕಲಂ 136(3)ರಡಿ 45 ಪ್ರಕರಣಗಳನ್ನು ಕೊಡಗು ಜಿಲ್ಲಾಧಿಕಾರಿಗಳ ನ್ಯಾಯಾಲಯಕ್ಕೆ ವರ್ಗಾಯಿಸಿ ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರು ಆದೇಶಿಸಿದ್ದಾರೆ.

ಫೆ.14ರಂದು ಈ ಕುರಿತು ಆದೇಶ ಹೊರಡಿಸಿರುವ ಅವರು, ಕರ್ನಾಟಕ ಭೂಕಂದಾಯ ಕಾಯ್ದೆ ಕಲಂ 27(ಎ)ರಡಿ ಪ್ರಕರಣಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ವರ್ಗಾಯಿಸುವಂತೆ ಮೈಸೂರು ವಕೀಲರ ಸಂಘದ ಅಧ್ಯಕ್ಷರು ಮನವಿ ಹಾಗೂ ಮೈಸೂರು ಜಿಲ್ಲಾಧಿಕಾರಿಗಳ ವರದಿ ಸಂಖ್ಯೆ Mysdc-/RPMS/RPMS/35/2025 E-712059 ಉಲ್ಲೇಖದನ್ವಯ ಮೈಸೂರು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲೇ ವಿಚಾರಣೆ ಮುಂದುವರಿದರೆ ಪಕ್ಷಕಾರರಿಗೆ ಫೇರ್ ಅಂಡ್ ಇಂಪಾರ್ಷಿಯಲ್ ಜಸ್ಟೀಸ್ ಒದಗಿಸುವಲ್ಲಿ ಸಫಲವಾಗುವ ಸಂಭವ ವಿರಳವಾದ್ದರಿಂದ ಮೈಸೂರು ಉಪವಿಭಾಗಾಧಿಕಾರಿಗಳ ನ್ಯಾಯಾಲಯದ ಆದೇಶಗಳಲ್ಲಿ ಒಟ್ಟು 45 ಪ್ರಕರಣಗಳಲ್ಲಿ ಲೋಪವಿದೆ ಎಂದು ಸರ್ಕಾರಕ್ಕೆ ಶಿಫಾರಸು ಮಾಡಿ ನಂತರ ಸ್ವಯಂಪ್ರೇರಿತವಾಗಿ ಕರ್ನಾಟಕ ಭೂ ಕಂದಾಯ ಕಾಯಿದೆ ಕಲಂ (3)ರ ಮೇರೆಗೆ ವಿಚಾರಣೆ ಅಂಗೀಕರಿಸಿಕೊಂಡು ವಿಚಾರಣೆ ನಡೆಸುತ್ತಿರುವ ಪ್ರಕರಣಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸದರಿ ಪ್ರಕರಣಗಳಿಗೆ ಮಾತ್ರ ಸೀಮಿತವಾಗಿ ಮೇಲ್ಮನವಿ ವಿಚಾರಣೆ ನಡೆಸಲು ಕೊಡಗು ಜಿಲ್ಲಾಧಿಕಾರಿಗಳಿಗೆ ವರ್ಗಾಯಿಸಿದೆ ಎಂದು ಪ್ರಾದೇಶಿಕ ಆಯುಕ್ತರು ಆದೇಶದಲ್ಲಿ ತಿಳಿಸಿದ್ದಾರೆ.

ಸೈಯದ್ ಅಬ್ರಾರ್ ನಗರ ಯುವ ಕಾಂಗ್ರೆಸ್ ಅಧ್ಯಕ್ಷ



ಮೈಸೂರು, ಫೆ.16(ಎಂಟಿವೈ)–ಇತ್ತೀಚೆಗೆ ನಡೆದ ಕರ್ನಾಟಕ ಯುವ ಕಾಂಗ್ರೆಸ್ ಸಮಿತಿ ಚುನಾವಣೆಯಲ್ಲಿ ಮೈಸೂರು ನಗರ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಸೈಯದ್ ಅಬ್ರಾರ್ 9263 ಮತ ಪಡೆದು ಆಯ್ಕೆಯಾಗಿದ್ದಾರೆ. ಎರಡನೇ ಬಾರಿಗೆ ಸೈಯದ್ ಅಬ್ರಾರ್ ಆಯ್ಕೆಯಾಗಿದ್ದಾರೆ.

ವ್ಯಕ್ತಿ ಖಾತೆಗೆ ಕತ್ತರಿ; 19 ಲಕ್ಷ ದೋಚಿದ ವಂಚಕರು

ಮೈಸೂರು, ಫೆ.16(ಎಸ್‌ಬಿಡಿ)–ವ್ಯಕ್ತಿಯೊಬ್ಬರ ಗಮನಕ್ಕೆ ಬಾರದಂತೆ ಅವರ ಖಾತೆಯಿಂದ 19 ಲಕ್ಷ ಹಣ ವರ್ಗಾವಣೆ ಆಗಿರುವ ಬಗ್ಗೆ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶ್ರೀರಾಂಪುರದ 57 ವರ್ಷದ ವ್ಯಕ್ತಿಯೊಬ್ಬರು ಈ ಸಂಬಂಧ ದೂರು ನೀಡಿದ್ದು, ತಮ್ಮ ಎರಡು ಖಾತೆಯಿಂದಲೂ ಹಣ ಲಪಟಾಯಿಸಲಾಗಿದೆ ಎಂದು ತಿಳಿಸಿದ್ದಾರೆ. ಫೆ.11ರಂದು ನನ್ನ ಗಮನಕ್ಕೆ ಬಾರದಂತೆ ಒಂದು ಖಾತೆಯಿಂದ 17 ಲಕ್ಷ ರೂ. ಹಾಗೂ ಮತ್ತೊಂದು ಖಾತೆಯಿಂದ 2.30 ಲಕ್ಷ ರೂ. ಬೇರೊಂದು ಖಾತೆಗೆ ವರ್ಗಾವಣೆ ಎಂದು ದೂರಿನಲ್ಲಿ ನಮೂದಿಸಿದ್ದಾರೆ.

ಆನ್‌ಲೈನ್ ಷೇರು ಹೂಡಿಕೆ ನೆಪದಲ್ಲಿ ಅಧಿಕ ಲಾಭದಾಸೆ ತೋರಿಸಿ ಮೋಸ ಮಾಡುವುದು, ಬೆಲೆಬಾಳುವ ಉಡುಗೊರೆ ಕಳುಹಿಸುವ ನೆಪದಲ್ಲಿ ವಂಚಿಸುವುದು, ಅಧಿಕಾರಿಗಳ ಸೋಗಿನಲ್ಲಿ ಬೆದರಿಸಿ, ಸುಲಿಗೆ ಮಾಡುವುದು, ಹೀಗೆ ವಿವಿಧ ರೀತಿಯಲ್ಲಿ ಜನರ ಹಣ ದೋಚುವ ಪ್ರಕರಣಗಳು ಸಾಕಷ್ಟು ನಡೆಯುತ್ತಿವೆ. ಈ ನಡುವೆ ಖಾತೆದಾರನಿಗೆ ತಿಳಿಯದಂತೆ ಹಣ ಲಪಟಾಯಿಸಿರುವುದು ಸಾರ್ವಜನಿಕರ ಆತಂಕ ಹೆಚ್ಚಿಸಿದೆ.

ಮೈಸೂರಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಡಾಲಿ ಧನಂಜಯ್

ಸಾವಿರಾರು ಅಭಿಮಾನಿಗಳು, ಚಿತ್ರರಂಗದ ಗಣ್ಯರು, ರಾಜಕೀಯ ಮುಖಂಡರು, ವಿವಿಧ ಮಠದ ಶ್ರೀಗಳಿಂದ ಶುಭ ಹಾರೈಕೆ

ಮೈಸೂರು, ಫೆ.16(ಜಿಎ)–ನಟ ರಾಕ್ಷಸ ಡಾಲಿ ಧನಂಜಯ್ ಹಾಗೂ ಡಾ.ಧನ್ಯತಾ ಭಾನುವಾರ ಕುಟುಂಬದ ಹಿರಿಯರು ಮತ್ತು ಆತ್ಮೀಯರ ಸಮ್ಮುಖದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ಮೈಸೂರಿನ ವಸ್ತುಪ್ರದರ್ಶನದ ಆವರಣದಲ್ಲಿ ನಿರ್ಮಿಸಿದ್ದ ಅದ್ಧೂರಿ ದೇವಾಲಯದ ಸೆಟ್‌ನಲ್ಲಿ ಡಾಲಿ ಧನಂಜಯ್ ವಿವಾಹ ಮಹೋತ್ಸವಕ್ಕೆ ವಿವಿಧ ಮಠದ ಸ್ವಾಮೀಜಿಗಳು, ಸಿನಿಮಾ ನಟ, ನಟಿಯರು, ರಾಜಕೀಯ ಮುಖಂಡರು ಹಾಗೂ ಅಪಾರ ಅಭಿಮಾನಿಗಳು ಸಾಕ್ಷಿಯಾದರು.

ನಟರಾದ ಶಿವರಾಜ್‌ಕುಮಾರ್, ದೊಡ್ಡಣ್ಣ, ವಸಿಷ್ಠ ಸಿಂಹ, ಲೂಸ್ ಮಾದ ಯೋಗೇಶ್, ಸಾಧು ಕೋಕಿಲಾ, ತರುಣ್ ಸುಧೀರ್, ಮಂಡ್ಯ ರಮೇಶ್, ನಟಿಯರಾದ ರಮ್ಯ, ಸೋನಲ್, ಸಪ್ತಮಿ ಗೌಡ, ಸೋನು ಗೌಡ, ಶಾಸಕ ಜಿ.ಟಿ.ದೇವೇಗೌಡ, ಸತೀಶ್ ಜಾರಕಿಹೊಳಿ, ಶಿವಲಿಂಗೇಗೌಡ, ನಯನ ಮೋಟಮ್ಮ ಸೇರಿದಂತೆ ಉದ್ಯಮಿಗಳು ನವ ಜೋಡಿಗೆ ಶುಭ ಕೋರಿದರು.

ಮಂಟಪದಲ್ಲಿ ಮದುವೆ ಶಾಸ್ತ್ರ ಮುಗಿಯುತ್ತಿದ್ದಂತೆ ಮಂಟಪದಿಂದ ಹೊರಬಂದ ಡಾಲಿ, ಧನ್ಯತಾ ಅಭಿಮಾನಿಗಳತ್ತ ಕೈಬೀಸಿ ಎಲ್ಲರಿಗೂ ಧನ್ಯವಾದ ತಿಳಿಸಿ, ಊಟ ಮಾಡಿಕೊಂಡು ಹೋಗುವಂತೆ ಮನವಿ ಮಾಡಿದರು. ಈ ವೇಳೆ ಅಭಿಮಾನಿಗಳಿಂದ ಡಾಲಿ... ಡಾಲಿ... ಅತ್ತಿಗೆ.. ಅತ್ತಿಗೆ ಎಂಬ ಜೈಕಾರ ಕೇಳಿ ಬರುತ್ತಿದ್ದಂತೆ ಅಭಿಮಾನಿಗಳ ಅಪಾರ ಪ್ರೀತಿ ಕಂಡು ಡಾಲಿ ಧನಂಜಯ್ ಭಾವುಕರಾಗಿ ಕಣ್ಣೀರಿಟ್ಟರು.

ನಂತರ ಮಾಧ್ಯಮಗಳೊಂದಿಗೆ ಡಾಲಿ ಧನಂಜಯ್ ಮಾತನಾಡಿ, ಮದುವೆಯ ಎಲ್ಲಾ ಕಾರ್ಯಕ್ರಮಗಳು ಶಾಂತಿಯುತವಾಗಿ ನಡೆದಿದೆ. ಆರತಕ್ಷತೆಗೆ ನೂರಾರು ಜನ ಬಂದಿದ್ದು ಖುಷಿ ಆಯಿತು. ನಾನು ಅಂದುಕೊಂಡಂತೆ ಎಲ್ಲವೂ ಆಗಿದ್ದೂ ಎಲ್ಲರು ಖುಷಿ ಪಟ್ಟಿದ್ದಾರೆ. ಚಿತ್ರರಂಗದ ಕುಟುಂಬಕ್ಕೆ, ಅಭಿಮಾನಿಗಳಿಗೆ ನಾನು ಯಾವಾಗಲೂ ಆಭಾರಿ ಆಗಿದ್ದೇನೆ. ಸಾವಿರಾರು ಜನ ಬಂದು ಹಾರೈಸಿದ್ದು ಖುಷಿ ಆಯಿತು. ಅಭಿಮಾನಿಗಳ ಪ್ರೀತಿಗೆ ಏನು ವಾಪಸ್ ನೀಡಬೇಕೆಂದು ಗೊತ್ತಿಲ್ಲ. ಅವರ ಪ್ರೀತಿಯನ್ನು ಉಳಿಸಿಕೊಳ್ಳುತ್ತೇನೆ. ಅವರು ತುಂಬಾ ಶಾಂತಿಯುತವಾಗಿ ನಡೆದುಕೊಂಡಿದ್ದಾರೆ. ಅವರ ಪ್ರೀತಿಯನ್ನು ಉಳಿಸಿಕೊಳ್ಳುತ್ತೇನೆ ಎಂದರು.



ನಟ ಡಾಲಿ ಧನಂಜಯ್ ಹಾಗೂ ಡಾ.ಧನ್ಯತಾ ಭಾನುವಾರ ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ತಾಳಿ ಕಟ್ಟುವಾಗ ನನಗೇನು ಭಯ ಆಗಿಲ್ಲ. ನಾನು ಹೇಗೆ ಇದ್ನೋ ಹಾಗೆಯೇ ಇದ್ದೆ. ಎಲ್ಲವೂ ಚೆನ್ನಾಗಿಯೇ ಆಯಿತು. ಮನೆಯವರು ಅಂದುಕೊಂಡ ಹಾಗೆಯೇ ಮದುವೆ ನಡೆಯಿತು. ನನಗೂ ಕೆಲಸ ಇದೆ. ಅವರಿಗೂ ಕೆಲಸ ಇದೆ. ಮಾರ್ಚ್‌ನಿಂದ ಮತ್ತೆ ಶೂಟಿಂಗ್ ಶುರು ಮಾಡುತ್ತೇನೆ ಎಂದು ತಿಳಿಸಿದರು.

ಇಷ್ಟು ಜನರನ್ನು ನಾನು ಯಾವತ್ತೂ ನೋಡಿರಲಿಲ್ಲ. ಇವರಿಗೆ ಸ್ವಲ್ಪ ಪರಿಚಯ ಇರುತ್ತದೆ. ನಾನು ತುಂಬಾ ಭಾವುಕಳಾದೆ. ಎಲ್ಲರ ಆಶೀರ್ವಾದ ಪಡೆದು ತುಂಬಾನೇ ಖುಷಿ ಆದೆ. ಡಾಲಿ ಅವರ ಕುಟುಂಬ ನನ್ನ ಕುಟುಂಬ ಇದ್ದ ಹಾಗೆ. ಒಂದು ವರ್ಷದಿಂದ ಇದ್ದೇವೆ. ನನ್ನ ಮನೆಗೆ ಹೋಗುವ ತರಾ ಫೀಲಿಂಗ್ ಇದೆ. ತುಂಬಾ ಖುಷಿಯಿಂದ ನಾನು ಹೋಗೋಕೆ ಕಾಯ್ತಾ ಇದ್ದೇನೆ ಎಂದು ಧನ್ಯತಾ ಹೇಳಿದರು.



ಚಿತ್ರನಟ ಧನಂಜಯ ಹಾಗೂ ಡಾ.ಧನ್ಯತಾ ಶುಭ ವಿವಾಹದಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ನಟ ಸಾಧುಕೋಕಿಲಾ, ಪಾಲಿಕೆ ಮಾಜಿ ಸದಸ್ಯ ಲೋಕೇಶ್ ಪಿಯಾ ಇನ್ನಿತರರು ನೂತನ ವಧು–ವರರಿಗೆ ಶುಭಾಶಯ ಕೋರಿದರು.

ಪ್ರಜಾಪಿತ ಬ್ರಹ್ಮಕುಮಾರಿಯವರಿಂದ ವ್ಯಸನಮುಕ್ತ ಸಮಾಜಕ್ಕೆ ಜಾಗೃತಿ



ಮೈಸೂರಿನ ಬಸವಮಾರ್ಗ ವ್ಯಸನ ಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಶಿವರಾತ್ರಿ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶೋಭಾ ಪ್ರತಿಜ್ಞಾವಿಧಿ ಬೋಧಿಸಿದರು.

ಮೈಸೂರು, ಫೆ.16(ಎಂಟಿವೈ)–ಮೈಸೂರಿನ ಹೆಬ್ಬಾಳು ಬಡಾವಣೆಯಲ್ಲಿರುವ ಬಸವ ಮಾರ್ಗ ವ್ಯಸನ ಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಶಿವರಾತ್ರಿ ಮಹೋತ್ಸವದ ಅಂಗವಾಗಿ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ವತಿಯಿಂದ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶೋಭಾ ಅವರು ಮಾತನಾಡಿ, ಬೀಡಿ, ಸಿಗರೇಟ್, ಗುಟಕ, ಗಾಂಜಾ, ಮದ್ಯಪಾನ ಚಟಗಳಿಂದ ಮನುಷ್ಯ ನಾನಾ ತೊಂದರೆಗಳಿಗೆ ಸಿಲುಕಿ ಹಾಕಿಕೊಳ್ಳುತ್ತಾನೆ. ಇವೆಲ್ಲ ಚಟಗಳಿಂದ ದೇಹದ ಅಂಗಾಂಗಗಳು ಹಾನಿಗೆ ಒಳಗಾಗುತ್ತದೆ. ಪರಿಣಾಮ ಅನೇಕ ರೋಗಗಳಿಗೆ ಬಲಿಯಾಗಬೇಕಾಗುತ್ತದೆ. ಇದರಿಂದ ನಮ್ಮ ಕುಟುಂಬ ಹಾಗೂ ಸಮಾಜಕ್ಕೆ ನಾವು ದೊಡ್ಡ ಹೊರೆಯಾಗುತ್ತೇವೆ. ಈ ನಿಟ್ಟಿನಲ್ಲಿ ವ್ಯಸನಿಗಳು ತಮ್ಮ ಚಟದಿಂದ ಹೊರಬಂದು ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಬೇಕು ಎಂದು ಸಲಹೆ ನೀಡಿದರು. ಕುಂಭಕರ್ಣ ನಿದ್ದೆಯಿಂದ ಎದ್ದು ಜಾಗೃತ ಸ್ಥಿತಿಗೆ ಬರುವ ಸಾಂದರ್ಭಿಕ ಟ್ಯಾಬ್ಲೋ ಪ್ರದರ್ಶನ ಗಮನ ಸೆಳೆಯಿತು. ವ್ಯಸನಿಗಳು ವ್ಯಸನದಿಂದ ಮುಕ್ತರಾಗುತ್ತೇವೆ ಎಂದು ಪ್ರತಿಜ್ಞಾವಿಧಿ ಸ್ವೀಕಾರ ಮಾಡಿದರು.

ಜ್ಞಾನಕ್ಕಿಂತ ಮಿಗಿಲಾದ ಸಂಪತ್ತು ಮತ್ತೊಂದಿಲ್ಲ

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಅರಳಿ ನಾಗರಾಜ ಗಂಗಾವತಿ



ಮೈಸೂರಿನ ನೆಲೆ ಫೌಂಡೇಷನ್ ಶಾರದಾ ನೆಲೆಯ ಹೆಣ್ಣು ಮಕ್ಕಳ ಉಚಿತ ವಿದ್ಯಾರ್ಥಿನಿಲಯದಲ್ಲಿ 23ನೇ ವಿದ್ಯಾರ್ಥಿನಿಲಯಗಳೆಡೆಗೆ ವಚನಗಳ ನಡಿಗೆ ಕಾರ್ಯಕ್ರಮ, ವಚನಶಾಲೆ ಕೃತಿ ಬಿಡುಗಡೆ ಸಮಾರಂಭ ನಡೆಯಿತು.

ಮೈಸೂರು,ಫೆ.16–ಜ್ಞಾನಕ್ಕಿಂತ ಮಿಗಿಲಾದ ಸಂಪತ್ತು ಮತ್ತೊಂದಿಲ್ಲ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಅರಳಿ ನಾಗರಾಜ ಗಂಗಾವತಿ ಹೇಳಿದರು.

ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ನಿವೃತ್ತ ನ್ಯಾಯಮೂರ್ತಿ ಅರಳಿ ನಾಗರಾಜ ಅವರ ದತ್ತಿ ಅಂಗವಾಗಿ ನೆಲೆ ಫೌಂಡೇಷನ್ ಶಾರದಾ ನೆಲೆಯ ಹೆಣ್ಣು ಮಕ್ಕಳ ಉಚಿತ ವಿದ್ಯಾರ್ಥಿನಿಲಯದಲ್ಲಿ ಆಯೋಜಿಸಿದ್ದ 23ನೇ ವಿದ್ಯಾರ್ಥಿನಿಲಯಗಳೆಡೆಗೆ ವಚನಗಳ ನಡಿಗೆ ಕಾರ್ಯಕ್ರಮ ಮತ್ತು ವಚನಶಾಲೆ ಕೃತಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಅನುಭವ ಮಂಟಪದ ಅಧ್ಯಕ್ಷರಾದ ಅಲ್ಲಮಪ್ರಭುಗಳು ಭೂಮಿ, ಹೇಮ ಮತ್ತು ಕಾಮಿನಿ ನಿನ್ನವಳಲ್ಲ ಅವು ಜಗಕಿಕ್ಕಿದ ವಿಧಿ. ನಿನ್ನ ಒಡವೆ ಎಂಬುದು ಜ್ಞಾನರತ್ನ. ಆ ಒಡವೆಯನ್ನು ನೀನು ಧರಿಸಿದೆಯಾದರೆ ನಿನಗಿಂತ ಅಧಿಕರು ಯಾರಿಲ್ಲ ಎಂದು ಹೇಳಿದ್ದಾರೆ. ನಾವು ಆಸ್ತಿ ಗಳಿಕೆಗೆ ಗಮನಕೊಡದೆ ಜ್ಞಾನ ಗಳಿಕೆಗೆ ಒತ್ತು ಕೊಡಬೇಕು ಎಂದರು.

ವಿದ್ಯಾರ್ಥಿಗಳು ಆಲಿಸಿದಂತಹ ವಿಷಯಗಳನ್ನು ಅರ್ಥೈಸಿಕೊಂಡು, ನಂತರ ದಾಖಲಿಸಿ ಸಂದರ್ಭಾನುಸಾರ ಆಚರಣೆಗೆ ತಂದರೆ ವಿಶೇಷ ವ್ಯಕ್ತಿತ್ವ ಹೊಂದಿದ ವಿದ್ಯಾರ್ಥಿಗಳಾಗಿ ರೂಪುಗೊಳ್ಳಲು ಸಾಧ್ಯ. ನಾವು ನಮಗಾಗಿ ಬದುಕುವುದಕ್ಕಿಂತ ಸಮಾಜಕ್ಕಾಗಿ, ದೇಶಕ್ಕಾಗಿ ಬದುಕುವ ಕೌಶಲವನ್ನು ರೂಢಿಸಿಕೊಳ್ಳಬೇಕು ಎಂದರು.

ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ ಮಾತನಾಡಿ, ನಮ್ಮ ಮನದ ಮೈಲಿಗೆಯನ್ನು ಹೋಗಲಾಡಿಸಿಕೊಳ್ಳಲು ಶರಣರ ವಚನಗಳು ಸಹಾಯಕವಾಗಿದ್ದು, ಅವುಗಳನ್ನು ಅಧ್ಯಯನ ಮತ್ತು ಅನ್ವಯದ ದೃಷ್ಟಿಯಿಂದ ಅಭ್ಯಾಸ ಮಾಡಬೇಕು. ಗಣಿತದ ಮೂಲ ಕ್ರಿಯೆಗಳನ್ನು ನಮ್ಮ ಜೀವನಕ್ಕೆ ಅಳವಡಿಸಿಕೊಂಡು ಮಿತ್ರರನ್ನು ಕೂಡಬೇಕು, ಶತ್ರುಗಳನ್ನು ಕಳೆಯಬೇಕು, ಸದ್ಗುಣಗಳನ್ನು ಗುಣಿಸಬೇಕು. ದುರ್ಗುಣಗಳನ್ನು ಭಾಗಿಸಬೇಕು ಎಂದು ಹೇಳಿದರು.

ನಂತರ ವಚನ ವಾಚನ ಮಾಡಿದ 20ವಿದ್ಯಾರ್ಥಿನಿಯರಿಗೆ ವಚನ ಭಾರತ ಪುಸ್ತಕ ಮತ್ತು ವಚನದೀವಿಗೆ ಪ್ರಮಾಣ ಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ನೆಲೆ ಫೌಂಡೇಷನ್ ಶಾರದಾ ನೆಲೆ ಕಮಿಟಿ ಸದಸ್ಯ ಪಿ.ಜೆ ರಾಘವೇಂದ್ರ, ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕಿ ರೂಪ ಕುಮಾರಸ್ವಾಮಿ, ಕೇಂದ್ರೀಯ ಸಂಚಾಲಕಿ ಮಲ್ಲಮ್ಮ ಶಿವಪ್ರಸಾದ್, ಅಧ್ಯಕ್ಷ ಅನಿಲ್ ಕುಮಾರ್ ವಾಜಂತ್ರಿ, ವಸತಿನಿಲಯದ ಮೇಲ್ವಿಚಾರಕಿ ರೇವತಿ, ಚಂದ್ರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

9 ವಿಶ್ವವಿದ್ಯಾಲಯ ಬಂದ್: ಮೈಸೂರು ವಿವಿ ಹಾಲಿ, ವಿಶ್ರಾಂತ ಕುಲಪತಿಗಳ ಪ್ರತಿಕ್ರಿಯೆ

ಮೈಸೂರು, ಫೆ. 16(ಆರ್‌ಕೆ)– ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆರಂಭಿಸಿದ್ದ 10 ಹೊಸ ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡಲು ಮುಂದಾಗಿರುವ ಕಾಂಗ್ರೆಸ್ ಸರ್ಕಾರದ ಕ್ರಮವನ್ನು ಮೈಸೂರು ವಿವಿ ಹಾಲಿ ಹಾಗೂ ವಿಶ್ರಾಂತ ಕುಲಪತಿಗಳು ಸ್ವಾಗತಿಸಿದ್ದಾರೆ.

ಒಳ್ಳೆಯ ಬೆಳವಣಿಗೆ: ಈ ಸಂಬಂಧ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಪ್ರೊಎನ್.ಕೆ.ಲೋಕನಾಥ್, ಮೈಸೂರು ವಿವಿಯೊಂದಿಗೆ ಇದ್ದ ಇತರ ಜಿಲ್ಲೆಗಳ ಕಾಲೇಜು ಸಂಯೋಜನೆ ತೆಗೆದು ಹಾಕಿ ಆಯಾ ಜಿಲ್ಲೆಗಳಿಗೆ ಪ್ರತ್ಯೇಕ ವಿವಿ ಸ್ಥಾಪಿಸಿದ್ದ ಕಾರಣ ನಮ್ಮ ವಿವಿಗೆ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿ ಸಂಪನ್ಮೂಲವೂ ತೀವ್ರ ಕಡಿಮೆಯಾಗಿತ್ತು. ಇದೀಗ ಆ ವಿವಿಗಳನ್ನು ಬಂದ್ ಮಾಡಿ ಮೊದಲಿದ್ದಂತೆಯೇ ಮುಂದುವರೆಸಲು ತೀರ್ಮಾನಿಸಿರುವುದು ಒಳ್ಳೆಯ ಬೆಳವಣಿಗೆ ಎಂದರು.



ಸ್ಥಾಪಿಸಿದ್ದೇ ತಪ್ಪು: ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಪ್ರತಿಕ್ರಿಯಿಸಿ, ಹೊಸ ವಿಶ್ವವಿದ್ಯಾಲಯಗಳ ಸ್ಥಾಪಿಸಿದ್ದೇ ತಪ್ಪು. ಅಲ್ಲದೇ ಅನುದಾನ ನೀಡದಿರುವುದರಿಂದ ಆಂತರಿಕ ಸಂಪನ್ಮೂಲದಿಂದಲೇ ವಿವಿ ನಡೆಸುವುದು ಕಷ್ಟಸಾಧ್ಯವಾದ ಕಾರಣ ಹೊಸ ವಿಶ್ವ ವಿದ್ಯಾಲಯಗಳನ್ನು ಮುಚ್ಚಿ ಹಳೇ ವಿವಿಗಳೊಂದಿಗೆ ಸಂಯೋಜನೆ ಮಾಡುವುದು ಉತ್ತಮ ಎಂದು ಅಭಿಪ್ರಾಯಪಟ್ಟರು.



ದಿಢೀರ್ ಮುಚ್ಚಬಾರದು: ಮತ್ತೋರ್ವ ವಿಶ್ರಾಂತ ಕುಲಪತಿ ಪ್ರೊ.ಜಿ.ಹೇಮಂತ್ ಕುಮಾರ್ ಮಾತನಾಡಿ, ಚಾಮರಾಜನಗರ ವಿವಿ ಸ್ಥಾಪನೆ ಸಂಬಂಧ ರಚಿಸಲಾಗಿದ್ದ ಸಮಿತಿ ಅಧ್ಯಕ್ಷನಾಗಿದ್ದುದು ನಿಜ. ಆದರೆ, ಸರ್ಕಾರ ಇಂತಿಷ್ಟು ವಾರ್ಷಿಕ ಅನುದಾನ ನೀಡಬೇಕೆಂದು ಶಿಫಾರಸ್ಸು ಮಾಡಿದ್ದೆವು. ಪ್ರತಿ ವಿವಿಗೆ 100 ಕೋಟಿ ರೂ. ಅನುದಾನವನ್ನು ಘೋಷಿಸಿ, ಪ್ರತೀ ವರ್ಷ ಹತ್ತು ಕೋಟಿ ರೂ. ಬಿಡುಗಡೆ ಮಾಡಿದ್ದರೆ ತೊಂದರೆಯಾಗುತ್ತಿರಲಿಲ್ಲ. ಈಗ ದಿಢೀರ್ ರದ್ದುಗೊಳಿಸುವ ಬದಲು ವಿದ್ಯಾರ್ಥಿಗಳ ಕೋರ್ಸ್ ಮುಗಿದು ಕುಲಪತಿಗಳ ಅವಧಿ ಪೂರ್ಣಗೊಳ್ಳುವವರೆಗೆ ಮುಂದುವರಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.



ಫೆ.19ರಿಂದ ಮೂರು ದಿನ ರಾಷ್ಟ್ರೀಯ ಸಮ್ಮೇಳನ

ಮೈಸೂರು,ಫೆ.16–ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ``Ecotourism: Harnessing Travel to Discover Nature, Promote Conservation and Support Sustainable Development" ವಿಷಯದ ಮೇಲೆ ಫೆ.19ರಿಂದ 21ರವರೆಗೆ 3 ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಯುವ ವಿಜ್ಞಾನಿಗಳು ಶೈಕ್ಷಣಿಕ ತಜ್ಞರು ಯುವ ಉದ್ಯಮದಾರರು ಭಾಗವಹಿಸಬಹುದು. ಆಸಕ್ತರು ಫೆ.17ರೊಳಗೆ https://forms.gle/WCW9krCt8sGQUP55A ಮೂಲಕ ನೋಂದಾಯಿಸಿಕೊಳ್ಳಬಹುದು. ಮಾಹಿತಿಗೆ ಮೊ.: 9845258894, 9686449019, & 9620767819 ಅನ್ನು ಸಂಪರ್ಕಿಸಬಹುದು.


ದೇಶ - ವಿದೇಶ

ಸ್ವಯಂಘೋಷಿತ ಸಲಿಂಗಕಾಮಿ ಮುಹ್ಸಿನ್ ಹೆಂಡ್ರಿಕ್ಸ್ ಗುಂಡಿಕ್ಕಿ ಹತ್ಯೆ



ಕೇಪ್ಟೌನ್: ವಿಶ್ವದ ಮೊದಲ ಬಹಿರಂಗ ಸಲಿಂಗಕಾಮಿ ಮುಹ್ಸಿನ್ ಹೆಂಡ್ರಿಕ್ಸ್ ಅವರನ್ನು ದಕ್ಷಿಣ ಆಫ್ರಿಕಾದ ಗ್ಕೆಬೆರಾ ಬಳಿ ಗುಂಡಿಕ್ಕಿ ಕೊಲ್ಲಲಾಗಿದೆ. ಹೆಂಡ್ರಿಕ್ಸ್ ಶನಿವಾರ ಇನ್ನೊಬ್ಬ ವ್ಯಕ್ತಿಯೊಂದಿಗೆ ಕಾರಿನಲ್ಲಿ ಚಲಿಸುತ್ತಿದ್ದಾಗ ಅಪರಿಚಿತ ವಾಹನವೊಂದರಲ್ಲಿ ಬಂದ ದುಷ್ಕರ್ಮಿಗಳು ಅವರ ಕಾರು ತಡೆದು ಗುಂಡಿಕ್ಕಿ ಹತ್ಯೆಗೈದಿದ್ದಾರೆ. ಕಾರಿನ ಹಿಂಬದಿಯಲ್ಲಿ ಕುಳಿತಿದ್ದ ಹೆಂಡ್ರಿಕ್ಸ್‌ಗೆ ಮಾರಣಾಂತಿಕ ಗಾಯಗಳಾಗಿ ಅವರು ಸಾವನ್ನಪ್ಪಿದ್ದಾರೆ ಎಂದು ಪೂರ್ವ ಕೇಪ್ ಪೊಲೀಸರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಅಂತರರಾಷ್ಟ್ರೀಯ ಲೆಸ್ಬಿಯನ್, ಗೇ, ಬೈಸೆಕ್ಸುವಲ್, ಟ್ರಾನ್ಸ್ ಮತ್ತು ಇಂಟರ್‌ಸೆಕ್ಸ್ ಅಸೋಸಿಯೇಷನ್ ಈ ಹತ್ಯೆಯನ್ನು ಬಲವಾಗಿ ಖಂಡಿಸಿದೆ. ಮುಹ್ಸಿನ್ ಹೆಂಡ್ರಿಕ್ಸ್ ಹತ್ಯೆಯ ಸುದ್ದಿಯಿಂದ ಐಎಲ್‌ಜಿಎ ವರ್ಲ್ಡ್ ಕುಟುಂಬವು ತೀವ್ರ ಆಘಾತಕ್ಕೊಳಗಾಗಿದೆ ಮತ್ತು ಇದು ದ್ವೇಷ ಅಪರಾಧವಾಗಿರಬಹುದು ಎಂದು ನಾವು ಭಾವಿಸಿದ್ದೇವೆ. ಈ ದಾಳಿಯನ್ನು ಸಂಪೂರ್ಣವಾಗಿ ತನಿಖೆ ಮಾಡುವಂತೆ ಅಧಿಕಾರಿಗಳಿಗೆ ಮನವಿ ಮಾಡುತ್ತೇವೆ ಎಂದು ಅದರ ಕಾರ್ಯನಿರ್ವಾಹಕ ನಿರ್ದೇಶಕಿ ಜೂಲಿಯಾ ಎರ್ಟ್ ಹೇಳಿದ್ದಾರೆ.

ನಾಗ್ಪುರ: ಸ್ಫೋಟಕ ತಯಾರಿಕಾ ಘಟಕದಲ್ಲಿ ಸ್ಫೋಟ; ಇಬ್ಬರು ಸಾವು



ನಾಗ್ಪುರ: ಮಹಾರಾಷ್ಟ್ರದ ನಾಗ್ಪುರ ಜಿಲ್ಲೆಯಲ್ಲಿ ಭಾನುವಾರ ಸ್ಫೋಟಕ ತಯಾರಿಕಾ ಘಟಕದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಜಿಲ್ಲಾ ಕೇಂದ್ರದಿಂದ ಸುಮಾರು 50 ಕಿಮೀ ದೂರದಲ್ಲಿರುವ ಕಟೋಲ್ ತಹಸಿಲ್‌ನ ಕೊತ್ವಾಲ್‌ಬುಡಿಯಲ್ಲಿರುವ ಎಸ್‌ಬಿಎಲ್ ಎನರ್ಜಿ ಲಿಮಿಟೆಡ್‌ನಲ್ಲಿ ಮಧ್ಯಾಹ್ನ 1:30ಕ್ಕೆ ಸ್ಫೋಟ ಸಂಭವಿಸಿದೆ ಎಂದು ಅಧಿಕಾರಿ ಮಾಹಿತಿ ನೀಡಿದ್ದಾರೆ. ಈ ದುರ್ಘಟನೆಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಕೆಲವರು ಗಾಯಗೊಂಡಿದ್ದಾರೆ. ಸ್ಫೋಟದಿಂದಾಗಿ ಸುತ್ತಮುತ್ತಲಿನ ದಟ್ಟಕಾಡಿನಲ್ಲಿ ಸಣ್ಣ ಪ್ರಮಾಣದಲ್ಲಿ ಬೆಂಕಿ ಕಾಣಿಸಿಕೊಂಡಿತು. ತದನಂತರ ಬೆಂಕಿಯನ್ನು ನಿಯಂತ್ರಿಸಲಾಗಿದೆ. ಸ್ಫೋಟ ಹೇಗೆ ಸಂಭವಿಸಿತು. ಇದಕ್ಕೆ ಕಾರಣವೇನು ಎಂಬುದನ್ನು ತಿಳಿಯಲು ತನಿಖೆ ಆರಂಭಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಖೈಬರ್ ಪಖ್ತುಂಖ್ವಾದಲ್ಲಿ ಪಾಕ್ ಸೈನಿಕರ ಕಾರ್ಯಾಚರಣೆ; 15 ಖ್ವಾರಿಜ್ ಉಗ್ರರ ಹತ್ಯೆ

ಖೈಬರ್ ಪಖ್ತುಂಖ್ವಾ(ಪಾಕಿಸ್ತಾನ): ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಶನಿವಾರ ನಡೆದ ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಭದ್ರತಾ ಪಡೆಗಳು ಒಂದು 15 ಭಯೋತ್ಪಾದಕರನ್ನು ಹತ್ಯೆಗೈದಿವೆ.

ಇಂಟರ್–ಸರ್ವೀಸಸ್ ಪಬ್ಲಿಕ್ ರಿಲೇಶನ್ಸ್ (ಐಎಸ್‌ಪಿಆರ್) ಪ್ರಕಾರ, ಫೆ.15ರಂದು, ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಎರಡು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಹದಿನೈದು ಖ್ವಾರಿಜ್ ಉಗ್ರರನ್ನು ಭದ್ರತಾ ಪಡೆಗಳು ಕೊಂದಿವೆ. ಡೇರಾ ಇಸ್ಮಾಯಿಲ್ ಖಾನ್ ಜಿಲ್ಲೆಯ ಹಥಾಲಾದ ಸಾಮಾನ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳು ಖ್ವಾರಿಜ್ ಉಗ್ರರು ಇರುವ ಬಗ್ಗೆ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದವು.

ಕಾರ್ಯಾಚರಣೆಯ ಸಮಯದಲ್ಲಿ ಪಾಕಿಸ್ತಾನದ ಭದ್ರತಾ ಸಿಬ್ಬಂದಿ ಖ್ವಾರಿಜ್ ಉಗ್ರರು ಅಡಗಿದ್ದ ಸ್ಥಳವನ್ನು ಪತ್ತೆ ಮಾಡಿದ್ದವು. ಕಾರ್ಯಾಚರಣೆಯಲ್ಲಿ ಖಾರ್ಜಿ ಫಾರ್ಮಾ ಅಲಿಯಾಸ್ ಸಾಕಿಬ್, ಖಾರ್ಜಿ ಅಮಾನುಲ್ಲಾ ಅಲಿಯಾಸ್ ತೂರಿ, ಖಾರ್ಜಿ ಸಯೀದ್ ಅಲಿಯಾಸ್ ಲಿಯಾಖತ್ ಮತ್ತು ಖಾರ್ಜಿ ಬಿಲಾಲ್ ಸೇರಿದಂತೆ 15 ಭಯೋತ್ಪಾದಕರು ಸಾವನ್ನಪ್ಪಿದ್ದಾರೆ.

ಮಹಿಳೆ ಮೇಲೆ ಅತ್ಯಾಚಾರ: ಯೂಟ್ಯೂಬರ್ ಬಂಧನ

ಕೊಚ್ಚಿ: ಸಾಮಾಜಿಕ ಜಾಲತಾಣಗಳ ಮೂಲಕ ಸ್ನೇಹ ಬೆಳೆಸಿಕೊಂಡಿದ್ದ ಮಹಿಳೆಯೊಬ್ಬರ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ 25 ವರ್ಷದ ಯೂಟ್ಯೂಬರ್ ನನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಂತ್ರಸ್ತೆಯ ದೂರಿನ ಆಧಾರದ ಮೇಲೆ ಇಲ್ಲಿನ ಕಲಮಸ್ಸೇರಿ ಪೊಲೀಸರು ಶನಿವಾರ ಕೋಯಿಕ್ಕೋಡ್‌ನಿಂದ ಮೊಹಮ್ಮದ್ ನಿಶಾಲ್ ಎಂಬಾತನನ್ನು ಬಂಧಿಸಿದ್ದಾರೆ ಎಂದು ಪೊಲೀಸ್ ಹೇಳಿಕೆ ತಿಳಿಸಿದೆ. ದೂರಿನ ಪ್ರಕಾರ ಮಹಿಳೆಯ ಆಕ್ಷೇಪಾರ್ಹ ವಿಡಿಯೋಗಳು ಮತ್ತು ಫೋಟೊಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡುವುದಾಗಿ ಬೆದರಿಕೆ ಹಾಕಿದ ಯೂಟ್ಯೂಬರ್ ಎರಡು ಬಾರಿ ಅತ್ಯಾಚಾರವೆಸಗಿದ್ದಾನೆ.

ಆ ವಿಡಿಯೋಗಳು ಮತ್ತು ಫೋಟೊಗಳನ್ನು ಸಂತ್ರಸ್ತೆಯ ಪತಿಗೂ ಕಳುಹಿಸುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿ ವಿರುದ್ಧ ವಿವಿಧ ಠಾಣೆಗಳಲ್ಲಿ ಇದೇ ರೀತಿಯ ಪ್ರಕರಣಗಳು ದಾಖಲಾಗಿವೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ಯೂಟ್ಯೂಬರ್ ನನ್ನು ಇಲ್ಲಿನ ಸ್ಥಳೀಯ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಬರಾಕ್ ಒಬಾಮ ಸಲಿಂಗಕಾಮಿ, ಪತ್ನಿ ಮಿಶೆಲ್ ಹೆಣ್ಣಲ್ಲ, ಗಂಡು; ಎರಾಲ್ ಮಸ್ಕ್ ಆರೋಪ



ವಾಷಿಂಗ್ಟನ್: ಅಮೆರಿಕದ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಅವರನ್ನು ವಿಚಿತ್ರ ವ್ಯಕ್ತಿ ಎಂದು ಕರೆದಿರುವ ಎರೋಲ್ ಮಸ್ಕ್, ಅಮೆರಿಕದ ಮಾಜಿ ಪ್ರಥಮ ಮಹಿಳೆ ಮಿಶೆಲ್ ಒಬಾಮ ಓರ್ವ ಗಂಡು ಎಂದು ಗಂಡು ಗಂಭೀರ ಆರೋಪ ಮಾಡಿದ್ದಾರೆ. ಮಿಶೆಲ್ ಒಬಾಮ ಓರ್ವ ಗಂಡಾಗಿದ್ದು, ಅವರು ಹೆಣ್ಣಿನಂತೆ ವೇಷ ಧರಿಸುತ್ತಾರೆ ಎಂದು ಎರಾಲ್ ಮಸ್ಕ್ ಆರೋಪಿಸಿದ್ದಾರೆ. ವೈಡ್ ಅವೇಕ್ ಪಾಡ್‌ಕ್ಯಾಸ್ಟ್‌ನಲ್ಲಿ ಜೋಶುವಾ ರೂಬಿನ್ ಜೊತೆಗಿನ ಸಂದರ್ಶನದಲ್ಲಿ, ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರನ್ನು ಓರ್ವ ಸಲಿಂಗಕಾಮಿ ಎಂದು ಎರೋಲ್ ಮಸ್ಕ್ ಕರೆದಿದ್ದಾರೆ. ಎರೋಲ್ ಮಸ್ಕ್ ವಿಲಕ್ಷಣ ಹೇಳಿಕೆಗಳನ್ನು ನೀಡುವುದಕ್ಕೆ ಹೆಸರುವಾಸಿಯಾಗಿದ್ದು, ಇದೀಗ ಅವರ ಹೇಳಿಕೆಗಳಿಗೆ ಬರಾಕ್ ಮತ್ತು ಮಿಶೆಲ್ ಒಬಾಮ ಆಹಾರವಾಗಿದ್ದಾರೆ.

ಸದ್ಯ ಎರೋಲ್ ಮಸ್ಕ್ ಹೇಳಿಕೆಗೆ ಅಮೆರಿಕದಲ್ಲಿ ಭಾರಿ ಆಕ್ರೋಶ ವ್ಯಕ್ತವಾಗಿದ್ದು, ಬರಾಕ್ ಮತ್ತು ಮಿಶೆಲ್ ಒಬಾಮ ಬಗ್ಗೆ ಎರೋಲ್ ಮಸ್ಕ್ ಮಾಡಿರುವ ಆರೋಪಗಳು ಸತ್ಯಕ್ಕೆ ದೂರವಾದವು ಎಂಬ ಅಭಿಪ್ರಾಯ ಕೇಳಿಬಂದಿದೆ.

ಆರು ಮಂದಿ ಸಾಧಕರಿಗೆ ಕರ್ನಾಟಕ ಅರೆಭಾಷೆ ಸಂಸ್ಕೃತಿ, ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿ



ಸುದ್ದಿಗೋಷ್ಠಿಯಲ್ಲಿ ಅರೆಭಾಷಾ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ ಮಾತನಾಡಿದರು.

ಮಡಿಕೇರಿ,ಫೆ.16– ಅರೆಭಾಷಾ ಸಾಹಿತ್ಯ, ಸಂಸ್ಕೃತಿ ಮತ್ತು ಅದರ ಬೆಳವಣಿಗೆಯಲ್ಲಿ ಗಣನೀಯ ಸಾಧನೆ ಮಾಡಿದ 6 ಮಂದಿ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಅರೆಭಾಷಾ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ ಅವರು ಈ ಕುರಿತು ಮಾಹಿತಿ ನೀಡಿ, 2022ನೇ ಸಾಲಿನ ಗೌರವ ಪ್ರಶಸ್ತಿಯನ್ನು ಸಂಶೋಧನೆ ಮತ್ತು ಅರೆಭಾಷೆ ಸಾಹಿತ್ಯ ಕ್ಷೇತ್ರದ ಸಾಧನೆಗಾಗಿ ಕೊಡಗಿನ ಡಾ.ಕಾವೇರಿಮನೆ ಬೋಜಪ್ಪ, ಅರೆಭಾಷೆ ಮತ್ತು ಸಂಸ್ಕೃತಿಯ ಸೇವೆಗಾಗಿ ತುಂತಜೆ ವೆಂಕಟೇಶ್(ಗಣೇಶ್) ಮತ್ತು ಶಿಕ್ಷಣ ಮತ್ತು ವೈದ್ಯಕೀಯ ಸೇವೆಗಾಗಿ ದಕ್ಷಿಣ ಕನ್ನಡ ಜಿಲ್ಲೆಯ ಡಾ.ಕೆ.ವಿ.ಚಿದಾನಂದ ಅವರು ಪಡೆದುಕೊಂಡಿದ್ದಾರೆ ಎಂದರು.

2023ನೇ ಸಾಲಿನ ಗೌರವ ಪ್ರಶಸ್ತಿಗೆ ಅರೆಭಾಷೆ ಸಾಹಿತ್ಯ ಮತ್ತು ಶೈಕ್ಷಣಿಕ ಸೇವೆಗಾಗಿ ಕೊಡಗಿನ ಕುಯಿಂತೋಡು ದಾಮೋದರ, ಅರೆಭಾಷಾ ಅಧ್ಯಯನ ಮತ್ತು ಸಂಶೋಧನೆಗಾಗಿ ದಕ್ಷಿಣ ಕನ್ನಡದ ಎ.ಕೆ. ಹಿಮಕರ ಮತ್ತು ಅರೆಭಾಷಾ ಸಾಧನೆ ಮತ್ತು ಕಲಾ ಪೋಷಕರ ನೆಲೆಯಲ್ಲಿ ಕೊಡಗಿನ ಕೂಡಕಂಡ ಕಾವೇರಮ್ಮ ಸೋಮಣ್ಣ ಅವರು ಆಯ್ಕೆಯಾಗಿದ್ದಾರೆ ಎಂದು ತಿಳಿಸಿದರು.

ಪ್ರಶಸ್ತಿ ಪ್ರದಾನ ಸಮಾರಂಭ ಫೆ.8ರಂದು ನಗರದ ಗೌಡ ಸಮಾಜದ ಸಭಾಂಗಣದಲ್ಲಿ ನಡೆಯಲಿದ್ದು, ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ, ಶಾಸಕರಾದ ಡಾ.ಮಂತರ್ ಗೌಡ, ಎ.ಎಸ್.ಪೊನ್ನಣ್ಣ, ಸಂಸದ ಯದುವೀರ್ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಂಶೋಧನಾ ಪ್ರಬಂಧಗಳ ಬಿಡುಗಡೆ: ಸಮಾರಂಭದಲ್ಲಿ ಅರೆಭಾಷಾ ಅಕಾಡೆಮಿಯ ಫೆಲೋಶಿಪ್‌ನಡಿ ಅರೆಭಾಷೆಗೆ ಸಂಬಂಧಿಸಿದ ವಿವಿಧ ವಿಷಯಗಳಡಿ ಸಂಶೋಧನೆಗಳನ್ನು ನಡೆಸಲಾಗಿತ್ತು. ಅದರಂತೆ ಡಾ. ಪುರುಷೋತ್ತಮ ಕೆ.ವಿ., ಬೇಕಲ್ ಲೀಲಾವತಿ, ಲೋಕೇಶ್ ಪೆರ್ಲಂಪಾಡಿ, ಕೆ.ಆರ್. ತೇಜ ಕುಮಾರ್, ಡಿ.ಸಿ.ನಂಜುಂಡ ಮತ್ತು ಸೀತಾರಾಮ ಕೇವಳ ಅವರ ಸಂಶೋಧನಾ ಪುಸ್ತಕಗಳನ್ನು ಬಿಡುಗಡೆಮಾಡಲಾಗುತ್ತದೆ ಎಂದರು.

ವಿವಿಧ ಪುಸ್ತಕಗಳ ಅನಾವರಣ: ಪುಸ್ತಕ ಪ್ರಕಟಣೆಗಾಗಿ ಅಕಾಡೆಮಿ ನೀಡಿದ್ದ ಆಹ್ವಾನದಂತೆ ವಿವಿಧ ಲೇಖಕರು ಸಲ್ಲಿಸಿದ್ದ ಪುಸ್ತಕಗಳಲ್ಲಿ ಆಯ್ದ ಪುಸ್ತಕಗಳ ಲೋಕಾರ್ಪಣೆ ಕಾರ್ಯ ಇದೇ ಸಂದರ್ಭ ನಡೆಸಲು ಉದ್ದೇಶಿಸಲಾಗಿದೆ. ವಿಮಲಾ ಅರುಣ ಅವರ ಸೂಂತ್ರಿ, ಕುಕ್ಕನೂರು ರೇಷ್ಮ ಅವರ ಕಥಾ ಸಂಕಲನ, ಲೀಲಾ ದಾಮೋದರ ಅವರು ರಚಿಸಿರುವ ಸಾಲು ದೀಪ ಪುಸ್ತಕ ಬಿಡುಗಡೆಯಾಗಲಿದೆ ಎಂದು ವಿವರಿಸಿದರು. ಸಮಾರಂಭದಲ್ಲಿ ಅಕಾಡೆಮಿ ವತಿಯಿಂದ ಅರೆಭಾಷೆ ಮಾತನಾಡುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಕಲಾವಿದರಿಗೆ ವಾದ್ಯ ಪರಿಕರಗಳನ್ನು ವಿತರಿಸಲಾಗುವುದೆಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಕಾಡೆಮಿ ಸದಸ್ಯರಾದ ಪೂಲಕಂಡ ಸಂದೀಪ್, ಪೊನ್ನಚ್ಚನ ಮೋಹನ್ ಉಪಸ್ಥಿತರಿದ್ದರು.

ಮಾಜಿ ಸೈನಿಕರ ಗಮನಕ್ಕೆ

ಮಡಿಕೇರಿ: ವಾಯುಪಡೆ ಅಭಿಲೇಖಾಲಯ (ನವದೆಹಲಿ) ನ್ಯಾಯಾಲಯದ ಪ್ರಕರಣಗಳಲ್ಲಿ ಭಾಗಿಯಾಗಿರುವ ಮಾಜಿ ವಾಯುಸೇನಾ ಯೋಧರ ವೈಯಕ್ತಿಕ ದಾಖಲಾತಿ ಹೊರತುಪಡಿಸಿ 25 ವರ್ಷಗಳ ಬದಲಾಗಿ ಕೇವಲ 5 ವರ್ಷಗಳವರೆಗೆ ಮಾತ್ರ ಮಾಜಿ ವಾಯುಸೇನಾ ಯೋಧರ ವೈಯಕ್ತಿಕ ಕಡತಗಳನ್ನು ಸಂರಕ್ಷಿಸಲಾಗುತ್ತದೆ ಎಂದು ತಿಳಿಸಿದ್ದು, ಮಾಜಿ ವಾಯುಸೇನಾ ಯೋಧರಿಗೆ ತಮ್ಮ ವೈಯಕ್ತಿಕ ದಾಖಲಾತಿಗಳ ಅವಶ್ಯವಿದ್ದಲ್ಲಿ ಜುಲೈ 10, 2025 ರೊಳಗೆ ವಾಯುಪಡೆ ದಾಖಲಾತಿ ಕಚೇರಿ ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ವಿ.ಪೇಟೆಯಲ್ಲಿ ಮೂವರು ಕಳ್ಳರ ಬಂಧನ

ಕೊಡಗು ಜಿಲ್ಲೆಯ ಕಳವು ಪ್ರಕರಣಗಳು ಪತ್ತೆ



ಕೆ.ಸಿ. ಅಶೋಕ | ಕೆ.ಪಿ. ಕೀರ್ತಿ | ರಿಯಾಜ್

ಮಡಿಕೇರಿ,ಫೆ.16– ಕೊಡಗು ಜಿಲ್ಲೆಯ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಹನಗಳು, ಚಿನ್ನಾಭರಣ, ಕಾಫಿ, ಕರಿಮೆಣಸು ಕಳವು ಮಾಡುತ್ತಿದ್ದ ಮೂವರು ಆರೋಪಿಗಳನ್ನು ವಿರಾಜಪೇಟೆ ಗ್ರಾಮಾಂತರ ಠಾಣಾ ಪೊಲೀಸರು ಬಂಧಿಸಿದ್ದಾರೆ.

ನಾಲಾಡಿ ಕಕ್ಕಬ್ಬೆ ಗ್ರಾಮದ ಕೆ.ಸಿ ಅಶೋಕ(35), ಸೋಮವಾರಪೇಟೆ ಕಿಬ್ಬೆಟ್ಟ ಗ್ರಾಮದ ಅಯ್ಯಪ್ಪ ಕಾಲೋನಿ ನಿವಾಸಿ ಕೆ.ಪಿ.ಕೀರ್ತಿ(25), ಸೋಮವಾರ ಪೇಟೆ ರೇಂಜರ್ ಬ್ಲಾಕ್ ನಿವಾಸಿ ರಿಯಾಜ್ ಅಲಿಯಾಸ್ ಸಾಬು(26) ಬಂಧಿತ ಆರೋಪಿಗಳು. ಇವರುಗಳು ಗೋಣಿಕೊಪ್ಪ, ಭಾಗಮಂಡಲ, ಮಡಿಕೇರಿ ಹಾಗೂ ಕುಶಾಲನಗರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲಿ ಕಳ್ಳತನ ಮಾಡಿರುವುದು ವಿಚಾರಣೆ ವೇಳೆ ಬಯಲಿಗೆ ಬಂದಿದೆ.

ಪ್ರಕರಣ ಹಿನ್ನೆಲೆ: 2024ರ ನವೆಂಬರ್ 30ರಂದು ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಬಿಟ್ಟಂಗಾಲದ ಅಂಚೆ ಕಚೇರಿ ಬೀಗ ಮುರಿದು ಖಜಾನೆ ಬಾಕ್ಸ್, ಸ್ಟ್ಯಾಂಪ್‌ಗಳು, ಅಂಚೆ ಪಾಸ್‌ಬುಕ್‌ಗಳು, ಸಿಸಿ ಕ್ಯಾಮರಾ ಡಿವಿಆರ್ ಕಳವು ಮಾಡಲಾಗಿತ್ತು. ಮಾತ್ರವಲ್ಲದೇ ಬಿಟ್ಟಂಗಾಲ ನಿವಾಸಿ ಮಾಚಯ್ಯ ಎಂಬವರ ಶೆಡ್‌ನಲ್ಲಿ ನಿಲ್ಲಿಸಿದ್ದ ಓಮ್ನಿ ವಾಹನ ಕಳ್ಳತನ ಮಾಡಿರುವ ಕುರಿತು 2 ಪ್ರತ್ಯೇಕ ಪ್ರಕರಣ ದಾಖಲಾಗಿತ್ತು. ಕಳವು ಪ್ರಕರಣದ ತನಿಖೆಗೆ ರಚಿಸಲಾದ ತಂಡ ಸ್ಥಳಕ್ಕೆ ಭೇಟಿ ನೀಡಿ ಸಾಕ್ಷ್ಯಗಳು ಮತ್ತು ತಾಂತ್ರಿಕ ಮಾಹಿತಿ ಕಲೆ ಹಾಕಿ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಸ್ವತ್ತುಗಳು ವಶಕ್ಕೆ: ಅಂಚೆ ಕಚೇರಿಯಿಂದ ಕಳವು ಮಾಡಲಾಗಿದ್ದ ಸಿಸಿಟಿವಿ ಡಿವಿಆರ್, ಖಜಾನೆ ಬಾಕ್ಸ್ ಮತ್ತು 930 ರೂ. ಮೌಲ್ಯದ ಸ್ಟ್ಯಾಂಪ್‌ಗಳು, ಓಮ್ನಿ ಕಾರು, 2 ದ್ವಿಚಕ್ರ ವಾಹನಗಳು, ಮರ ಕುಯ್ಯುವ ಯಂತ್ರ, 1 ಏರ್‌ಗನ್, 200 ಕೆ.ಜಿ ಕಾಫಿ, 250 ಕೆ.ಜಿ ಕಾಳುಮೆಣಸು, 30 ಗ್ರಾಂ ಚಿನ್ನ, 229 ಗ್ರಾಂ ಬೆಳ್ಳಿ ಆಭರಣಗಳನ್ನು ವಶಕ್ಕೆ ಪಡೆದು ಆರೋಪಿಗಳನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

ವಿರಾಜಪೇಟೆ ಡಿವೈಎಸ್‌ಪಿ ಮಹೇಶ್ ಕುಮಾರ್, ವಿರಾಜಪೇಟೆ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ, ಠಾಣಾಧಿಕಾರಿಗಳಾದ ಲತಾ, ವಾಣಿಶ್ರೀ, ಗ್ರಾಮಾಂತರ ಠಾಣೆ ಸಿಬ್ಬಂದಿ ಮತ್ತು ಅಪರಾಧ ಪತ್ತೆದಳದ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ.

ಕಾಡಾನೆ ದಾಳಿ: ಇಬ್ಬರಿಗೆ ಗಂಭೀರ ಗಾಯ, ಆಸ್ಪತ್ರೆಗೆ ದಾಖಲು



ಮಡಿಕೇರಿ: ಕಾಫಿ ತೋಟದಲ್ಲಿ ಕೆಲಸ ಮುಗಿಸಿ ಬೈಕಿನಲ್ಲಿ ತೆರಳುತ್ತಿದ್ದ ಇಬ್ಬರ ಮೇಲೆ ಕಾಡಾನೆ ದಾಳಿ ಮಾಡಿ ಗಂಭೀರವಾಗಿ ಗಾಯಗೊಳಿಸಿದ ಘಟನೆ ವಿರಾಜಪೇಟೆ ತಾಲೂಕಿನ ಮಾಲ್ದಾರೆ ಪಂಚಾಯಿತಿ ವ್ಯಾಪ್ತಿಯ ತೂಬನಕೊಲ್ಲಿ ಪೆರ್ಲ್ಯಾಂಡ್ ಕಾಫಿ ತೋಟದಲ್ಲಿ ರಾತ್ರಿ ನಡೆದಿದೆ.

ಕಾಫಿ ತೋಟವೊಂದರ ಮೇಲ್ವಿಚಾರಕ ವಾಸುದೇವಯ್ಯ ಹಾಗೂ ಕಾರ್ಮಿಕ ಸಹರ್ ಅಲಿ ಕಾಡಾನೆ ದಾಳಿಯಿಂದ ಗಾಯಗೊಂಡು ಸಿದ್ದಾಪುರ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಬಳಿಕ ಮಡಿಕೇರಿ ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ರಾತ್ರಿ ಕಾಫಿ ಪಲ್ಪಿಂಗ್ ಕೆಲಸ ಮುಗಿಸಿ ಬೈಕಿನಲ್ಲಿ ಇಬ್ಬರು ಕಾಫಿ ತೋಟದ ಮಾರ್ಗವಾಗಿ ತೆರಳುತ್ತಿದ್ದ ಸಂದರ್ಭದಲ್ಲಿ ಹಠಾತ್ತನೆ ಅಡ್ಡಲಾಗಿ ಬಂದ ಕಾಡಾನೆಯೊಂದು ಬೈಕಿನ ಮೇಲೆ ದಾಳಿಗೆ ಮುಂದಾಗಿದೆ. ಕಾಡಾನೆ ದಾಳಿಯಿಂದ ಪಾರಾಗಲು ಬೈಕನ್ನು ಬಿಟ್ಟು ತೋಟದೊಳಗೆ ಓಡಿ ಹೋಗಲು ಯತ್ನಿಸಿದ ಸಂದರ್ಭ ಕಾಡಾನೆ ಹಿಂಬಾಲಿಸಿ ಇಬ್ಬರ ಮೇಲು ದಾಳಿಗೆ ಮುಂದಾಗಿದೆ.

ಕಾಡಾನೆ ದಾಳಿಯಿಂದ ವಾಸುದೇವಯ್ಯ ಕಾಲಿಗೆ ಗಂಭೀರ ಗಾಯವಾಗಿದ್ದು, ಮತ್ತೋರ್ವ ಕಾರ್ಮಿಕ ಸಹಾರ್ ಅಲಿಗೆ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ. ಸಿದ್ದಾಪುರ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಬಳಿಕ ಹೆಚ್ಚಿನ ಚಿಕಿತ್ಸೆಗೆ ಮಡಿಕೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಸ್ಥಳಕ್ಕೆ ವಲಯ ಅರಣ್ಯ ಅಧಿಕಾರಿ ಶಿವರಾಂ, ಉಪ ವಲಯ ಅರಣ್ಯ ಅಧಿಕಾರಿ ಸಂಜಿತ್ ಸೋಮಯ್ಯ, ಅರಣ್ಯ ರಕ್ಷಕ ಅರುಣ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅಂಬೇಡ್ಕರ್, ಬುದ್ಧ ಬ್ಯಾನರ್‌ಗೆ ಬೆಂಕಿ

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಲು ಆಗ್ರಹ

ಮಡಿಕೇರಿ,ಫೆ.16– ಮಡಿಕೇರಿ ನಗರದ ಡಾ.ಅಂಬೇಡ್ಕರ್ ಭವನದ ಎದುರು ಅಳವಡಿಸಲಾಗಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರವಿದ್ದ ಬ್ಯಾನರ್ ಮತ್ತು ಅಂಬೇಡ್ಕರ್, ಬುದ್ಧ ಸಹಿತ ಹಿರಿಯ ಚೇತನರ ಭಾವಚಿತ್ರಗಳಿದ್ದ ಮತ್ತೊಂದು ಬ್ಯಾನರ್ ಅನ್ನು ಸುಟ್ಟ ಪ್ರಕರಣವನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಕೊಡಗು ಜಿಲ್ಲಾ ಸಂಚಾಲಕಿ ಗಾಯತ್ರಿ ನರಸಿಂಹ ತಿಳಿಸಿದ್ದಾರೆ.



ಗಾಯತ್ರಿ

ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಜಾಪ್ರಭುತ್ವ ರಾಷ್ಟ್ರ ಭಾರತದಲ್ಲಿ ನ್ಯಾಯ ಕೋರಿ ಪ್ರತಿಭಟನೆ ನಡೆಸುವ ಹಕ್ಕನ್ನು ಎಲ್ಲರಿಗೂ ಸಂವಿಧಾನ ನೀಡಿದೆ. ಡಾ. ಅಂಬೇಡ್ಕರ್ ಭವನದ ವಿಚಾರವಾಗಿ ವಿವಿಧ ದಲಿತ ಸಂಘಟನೆಗಳು ಪ್ರತಿಭಟನೆ ನಡೆಸಿದ್ದು, ಇದರ ಭಾಗವಾಗಿ ಬ್ಯಾನರ್ ಅಳವಡಿಸಲಾಗಿತ್ತು. ಹೋರಾಟವನ್ನು ಹತ್ತಿಕ್ಕುವ ಸಲುವಾಗಿ ಕಿಡಿಗೇಡಿಗಳು ಬ್ಯಾನರ್ ಅನ್ನು ಸುಟ್ಟು ಹಾಕಿರುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬ್ಯಾನರ್‌ಗಳಿಗೆ ಬೆಂಕಿ ಹಚ್ಚುವ ಮೂಲಕ ಅದರಲ್ಲಿದ್ದ ಡಾ.ಬಿ.ಆರ್.ಅಂಬೇಡ್ಕರ್, ಬುದ್ಧ ಸೇರಿದಂತೆ ಮಹನೀಯರ ಭಾವಚಿತ್ರಗಳಿಗೆ ಅಗೌರವ ತೋರಲಾಗಿದೆ. ಪೊಲೀಸ್ ಇಲಾಖೆ ಪ್ರಕರಣವನ್ನು ಲಘುವಾಗಿ ಕಾಣದೆ ಗಂಭೀರವಾಗಿ ಪರಿಗಣಿಸಬೇಕು ಮತ್ತು ಕಿಡಿಗೇಡಿಗಳನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು.

ಇನ್ನು ಮುಂದೆ ಈ ರೀತಿಯ ಪ್ರಕರಣಗಳು ನಡೆಯದಂತೆ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಎಂದು ಗಾಯತ್ರಿ ನರಸಿಂಹ ಆಗ್ರಹಿಸಿದ್ದಾರೆ.

ಶ್ರೀ ಮುತ್ತಪ್ಪ ಸ್ವಾಮಿಯ ಅದ್ಧೂರಿ ತೆರೆ ಮಹೋತ್ಸವ



ಶ್ರದ್ಧಾಭಕ್ತಿಯೊಂದಿಗೆ ಶ್ರೀ ಮುತ್ತಪ್ಪ ಸ್ವಾಮಿಯ ಅದ್ಧೂರಿ ತೆರೆ ಮಹೋತ್ಸವ ನಡೆಯಿತು.

ಕುಶಾಲನಗರ, ಫೆ.16– ಇಲ್ಲಿನ ಬೈಚನಹಳ್ಳಿ ಯೋಗಾನಂದ ಬಡಾವಣೆಯ ಕಾವೇರಿ ನದಿ ತಟದಲ್ಲಿರುವ ಶ್ರೀ ಮುತ್ತಪ್ಪ ಸ್ವಾಮಿ ದೇವಾಲಯದಲ್ಲಿ ಶನಿವಾರ ಶ್ರದ್ಧಾಭಕ್ತಿಯೊಂದಿಗೆ ತೆರೆ ಮಹೋತ್ಸವ ಅದ್ಧೂರಿಯಾಗಿ ನಡೆಯಿತು.

ತೆರೆ ಮಹೋತ್ಸವಕ್ಕೆ ಬೆಳಗ್ಗೆ ಗಣಪತಿ ಹೋಮ ಹಾಗೂ ಧ್ವಜಾರೋಹಣ ಮಾಡುವ ಮೂಲಕ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ವಿಭಿನ್ನತೆಯಲ್ಲಿ ಏಕತೆ ಎಂಬ ಸಾಮರಸ್ಯದ ಸಂದೇಶ ಸಾರುವ ಹಿನ್ನೆಲೆಯಲ್ಲಿ ಧ್ವಜಾರೋಹಣ ಕಾರ್ಯಕ್ರಮದಲ್ಲಿ ವಿವಿಧ ಸಮಾಜಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ನಗರದಲ್ಲಿ ಇರುವ ವಿವಿಧ ದೇವಾಲಯಗಳ ಅಧ್ಯಕ್ಷರುಗಳು ಮತ್ತು ಪದಾಧಿಕಾರಿಗಳು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ಮಧ್ಯಾಹ್ನ 2 ಗಂಟೆಗೆ ಮುತ್ತಪ್ಪನ್ ಮಲೈ ಇರಕ್ಕಲ್, ಸಂಜೆ 4 ಗಂಟೆಗೆ ಮುತ್ತಪ್ಪನ್ ವೆಳ್ಳಾಟಂ ನಡೆಯಿತು. ಸಂಜೆ 5 ಗಂಟೆಗೆ ಅಯ್ಯಪ್ಪ ದೇವಸ್ಥಾನದಿಂದ ಊರಿನ ಪ್ರಮುಖ ಬೀದಿಗಳಲ್ಲಿ ವಿದ್ಯುತ್ ದೀಪಗಳ ಅಲಂಕಾರದಿಂದ ಕೇರಳದ ಪ್ರಖ್ಯಾತ ಚಂಡೆ ವಾದಕರ ವಾದ್ಯಘೋಷದೊಂದಿಗೆ ನೂರಾರು ಮಹಿಳೆಯರು, ಮಕ್ಕಳು ಜ್ಯೋತಿ ಬೆಳಗಿಸಿಕೊಂಡು ಮೆರವಣಿಗೆಯಲ್ಲಿ ಸಾಗಿ ದೇವಾಲಯಕ್ಕೆ ಆಗಮಿಸಿದರು.

ರಾತ್ರಿ ಅನ್ನದಾನ ಪ್ರಸಾದವನ್ನು ಸೇರಿದ್ದ ಭಕ್ತರು ಸ್ವೀಕರಿಸಿದರು. ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಸ್ಥಳೀಯ ಕಲಾವಿದರು ಮತ್ತು ಮಕ್ಕಳಿಂದ ದೇವಾಲಯದ ಸಾಂಸ್ಕೃತಿಕ ವೇದಿಕೆಯಲ್ಲಿ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದು, ರಾತ್ರಿ 11 ಗಂಟೆಗೆ ಕಳಿಗ ಪಾಟು, 12 ಗಂಟೆಗೆ ಕಳಸ ಆಗಮನವಾಯಿತು.

ಮಡಿಕೇರಿ ಶಾಸಕ ಡಾ. ಮಂತರ್ ಗೌಡ ಮತ್ತು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವಿ.ಪಿ.ಶಶಿಧರ್, ಪುರಸಭೆ ಅಧ್ಯಕ್ಷೆ ಜಯಲಕ್ಷ್ಮಿ ಚಂದ್ರು ಕುಡಾ ಅಧ್ಯಕ್ಷ ಪ್ರಮೋದ್ ಮುತ್ತಪ್ಪ ದೇವಾಲಯಕ್ಕೆ ಭೇಟಿ ನೀಡಿ ಮುತ್ತಪ್ಪ ಸ್ವಾಮಿ ಆಶೀರ್ವಾದ ಪಡೆದುಕೊಂಡರು. ತೆರೆ ಮಹೋತ್ಸವದಲ್ಲಿ ಕುಶಾಲನಗರ ಹಾಗೂ ಸುತ್ತಮುತ್ತ ಗ್ರಾಮಗಳಿಂದ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಶ್ರೀ ಮುತ್ತಪ್ಪ ಸ್ವಾಮಿ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ವರದ, ಟ್ರಸ್ಟ್ ಪದಾಧಿಕಾರಿಗಳು ಮತ್ತು ದೇವಾಲಯ ಸಮಿತಿಯ ಸದಸ್ಯರುಗಳು ಪಾಲ್ಗೊಂಡಿದ್ದರು.

ಚಾ.ನಗರ ವಿಶ್ವವಿದ್ಯಾಲಯ ಮುಚ್ಚದಂತೆ ಆಗ್ರಹ



ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವುದು.

ಚಾಮರಾಜನಗರ, ಫೆ.16 – ಚಾಮರಾಜನಗರ ವಿಶ್ವವಿದ್ಯಾಲಯ ಸೇರಿದಂತೆ ರಾಜ್ಯದ 7 ವಿಶ್ವವಿದ್ಯಾನಿಲಯಗಳನ್ನು ಆರ್ಥಿಕ ನಷ್ಟ ಕಾರಣ ನೀಡಿ, ಮುಚ್ಚಲು ರಾಜ್ಯ ಕಾಂಗ್ರೆಸ್ ಸರ್ಕಾರ ಮುಂದಾಗಿರುವುದು ಖಂಡನೀಯವಾಗಿದ್ದು, ಬಿಜೆಪಿ ಇದರ ವಿರುದ್ಧ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ ಬಿಜೆಪಿ ಸರ್ಕಾರ ಅವಧಿಯಲ್ಲಿ ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಶೈಕ್ಷಣಿಕ ಮಟ್ಟ ಹೆಚ್ಚಿಸಲು 7ಹೊಸ ವಿಶ್ವವಿದ್ಯಾನಿಲಯ ಆರಂಭಿಸಿತು. ಆದರೆ, ಸಿದ್ದರಾಮಯ್ಯ ನೇತೃತ್ವದ ಸರ್ಕಾರ ವಿಶ್ವವಿದ್ಯಾನಿಲಯಗಳ ನಿರ್ವಹಣೆಗೆ ಕೋಟ್ಯಾಂತರ ಅನುದಾನಬೇಕು ಎಂಬ ಅಂಶ ಮುಂದಿಟ್ಟುಕೊಂಡು ವಿಶ್ವ ವಿದ್ಯಾನಿಲಯ ಮುಚ್ಚಲು ಮುಂದಾಗಿರುವುದು ಸರಿಯಲ್ಲ ಎಂದರು.

ವಿಶ್ವವಿದ್ಯಾನಿಲಯ ಬಂದ್ ಮಾಡಿದರೆ ಪದವಿ ಹಾಗೂ ಸ್ನಾತಕೋತ್ತರ ಪದವಿ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ. ವಿದ್ಯಾರ್ಥಿಗಳು ದೂರದ ಮೈಸೂರು ಹಾಗೂ ಇತರೇ ವಿಶ್ವವಿದ್ಯಾಲಯಗಳನ್ನು ಆಶ್ರಯಿಸಬೇಕಾಗುತ್ತದೆ. ಇದರಿಂದ ಜಿಲ್ಲೆಯ ಶಿಕ್ಷಣಮಟ್ಟ ಕುಸಿಯುತ್ತದೆ ಎಂದು ದೂರಿದರು.

ಜಿಲ್ಲೆಯಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ವಿಶ್ವವಿದ್ಯಾಲಯ ಮುಚ್ಚುವ ಪ್ರಸ್ತಾಪ ಕೈಬಿಟ್ಟು, ಅಭಿವೃದ್ಧಿಗೆ ವಿಶೇಷ ಅನುದಾನ ನೀಡಬೇಕು. ಇಲ್ಲದಿದ್ದರೆ ವಿದ್ಯಾರ್ಥಿಗಳ ಜೊತೆಗೂಡಿ ರಾಜ್ಯಾದ್ಯಂತ ಬಿಜೆಪಿ ಹೋರಾಟ ನಡೆಸಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್‌ಕುಮಾರ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ. ರಾಮಚಂದ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್, ಶಿವಣ್ಣ ಹಾಜರಿದ್ದರು.

ಗ್ಯಾಸ್ ಸೋರಿಕೆಯಿಂದ ಅಗ್ನಿ ಅವಘಡ: ಐವರಿಗೆ ಗಾಯ



ಗ್ಯಾಸ್ ಸಿಲಿಂಡರ್ ಸೋರಿಕೆಯಿಂದ ಚಾಮರಾಜನಗರದ ಕೊಳದ ಬೀದಿಯ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಮನೆಯಲ್ಲಿ ಬೆಂಕಿ ಅವಘಡ ಸಂಭವಿಸಿದೆ.

ಚಾಮರಾಜನಗರ, ಫೆ.16 – ಗ್ಯಾಸ್ ಸಿಲಿಂಡರ್ ಸೋರಿಕೆಯಿಂದ ಮನೆಯಲ್ಲಿ ಅಗ್ನಿ ಅವಘಡ ಸಂಭವಿಸಿದ ಪರಿಣಾಮ ಮೂವರು ಮಕ್ಕಳು ಸೇರಿದಂತೆ ಐವರಿಗೆ ಸಣ್ಣ, ಪುಟ್ಟ ಗಾಯಗಳಾಗಿದ್ದು, ಮನೆ ವಸ್ತುಗಳು ಹಾನಿಯಾಗಿರುವ ಘಟನೆ ನಗರದ ಕೊಳದ ಬೀದಿಯ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಭಾನುವಾರ ನಡೆದಿದೆ.

ಕೊಳದ ಬೀದಿಯ ನಿವಾಸಿಗಳಾದ ವಿಶ್ವನಾಥ್ (45), ಇವರ ಪತ್ನಿ ಅಂಬಿಕಾ (35) ಹಾಗೂ ಇವರ ಮಕ್ಕಳಾದ ರೋಹಿಣಿ (12), ವಿವೇಕ್ (10), ಶಕ್ತಿ (3) ಅವರಿಗೆ ಸಣ್ಣಪುಟ್ಟ ಸುಟ್ಟ ಗಾಯಗಳಾಗಿದೆ. ಅದೃಷ್ಟವಶಾತ್ ಯಾವುದೆ ಪ್ರಾಣ ಹಾನಿಯಾಗಿಲ್ಲ. ಆದರೆ, ಘಟನೆಯಿಂದ ಮನೆಯ ಸಾಮಗ್ರಿಗಳಿಗೆ ಹಾನಿಯಾಗಿದೆ.

ವಿಷಯ ತಿಳಿದು ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಆಗಮಿಸಿ, ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಈ ಸಂಬಂಧ ಚಾಮರಾಜನಗರ ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ಕುರಿತು ಮಾಲೀಕ ವಿಶ್ವನಾಥ್ ಮಾತನಾಡಿ, ಬೆಂಕಿ ಅವಘಡದಿಂದ ಮನೆಯಲ್ಲಿದ್ದ ಟಿವಿ, ಮಕ್ಕಳ ಬಟ್ಟೆಗಳು, ರೇಷನ್ ಕಾರ್ಡ್ ಸೇರಿದಂತೆ ಕೆಲವು ದಾಖಲೆಗಳು, ದಿನಸಿ ಸಾಮಗ್ರಿಗಳು ಸುಟ್ಟು ಹೋಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಫೆ.21ರಂದು ಗುರುಸಿದ್ದೇಶ್ವರ ಬಸವ ದೇವಸ್ಥಾನದ ಸಂಪ್ರೋಕ್ಷಣೆ



ನಟ ಕೆ.ಗಣೇಶರಾವ್ ಕೇಸರಕರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಚಾಮರಾಜನಗರ, ಫೆ.16– ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಹೊಂಡರಬಾಳು ಗ್ರಾಮದಲ್ಲಿ ಫೆ. 21ರಂದು ಶ್ರೀಗುರುಸಿದ್ದೇಶ್ವರ ಬಸವ ದೇವಸ್ಥಾನದ ಸಂಪ್ರೋಕ್ಷಣೆ ಹಾಗೂ ಸರ್ಕಾರಿ ಶಾಲೆಯ ದತ್ತು ಸ್ವೀಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ನಟ ಕೆ.ಗಣೇಶರಾವ್ ಕೇಸರಕರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ದೇವಸ್ಥಾನವನ್ನು ಮಹದೇಶ್ವರಬೆಟ್ಟದ ಸಾಲೂರು ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಉದ್ಘಾಟಿಸಲಿದ್ದು, ಹೊಂಡರಬಾಳು ಆದಿಗುರು ಶಂಖಿನಸ್ವಾಮಿ ಮಠಾಧಿಪತಿ ಪಟ್ಟದ ವಿದ್ವಾನ್ ಶ್ರೀನೀಲಕಂಠ ಶಿವಾಚಾರ್ಯ ಸ್ವಾಮೀಜಿ ದಿವ್ಯಸಾನ್ನಿಧ್ಯ ವಹಿಸಲಿದ್ದಾರೆ. ಬೆಂಗಳೂರಿನ ಗೋಸಾಯಿ ಮಹಾಸಂಸ್ಥಾನ ಮಠದ ಜಗದ್ಗುರು ವೇದಾಂತಚಾರ್ಯ ಶ್ರೀಮಂಜುನಾಥ ಭಾರತಿ ಸ್ವಾಮೀಜಿಗಳ ಘನ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನೆರವೇರಲಿದ್ದು, ಎಲ್ಲ ರಾಜಕೀಯ ಪಕ್ಷಗಳ ಜನಪ್ರತಿನಿಧಿಗಳು, ಮುಖಂಡರು, ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದರು.

ಸ್ವಂತ ಖರ್ಚಿನಲ್ಲಿ ದೇವಸ್ಥಾನ ನಿರ್ಮಾಣ ಮಾಡಲಾಗಿದ್ದು, ಅಂದು 2500 ಭಕ್ತರಿಗೆ ಅನ್ನ ಸಂತರ್ಪಣೆ ಕಾರ್ಯ ನಡೆಯಲಿದೆ. ಅಲ್ಲದೇ ನಾನು ಓದಿದ ಶಾಲೆಯನ್ನು ದತ್ತು ಪಡೆದು ಶಾಲೆಗೆ ಅಗತ್ಯವಿರುವ ಮೂಲಸೌಕರ್ಯ, ಸ್ಮಾರ್ಟ್‌ಕ್ಲಾಸ್ ನಿರ್ಮಾಣ, ಆಟ, ಪಾಠ, ಸಲಕರಣೆ, ಸಮವಸ್ತ್ರ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು.

ಶಾಲೆಯ ಮುಖ್ಯಶಿಕ್ಷಕ ವಾಸು ಮಾತನಾಡಿ, ಶಾಲೆಯಲ್ಲಿ 74 ವಿದ್ಯಾರ್ಥಿಗಳು ಓದುತ್ತಿದ್ದು ನಟ ಗಣೇಶ್‌ರಾವ್ ಅವರು ವಿದ್ಯಾರ್ಥಿಗಳಿಗೆ ಬಿಳಿ ಸಮವಸ್ತ್ರ, ನೋಟ್ ಪುಸ್ತಕ, ಆಟದ ಸಾಮಗ್ರಿಗಳನ್ನು ಕೊಡುಗೆ ನೀಡಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಗ್ರಾಪಂ ಸದಸ್ಯ ಸಿದ್ದಲಿಂಗಸ್ವಾಮಿ, ಮುಖಂಡ ಮಲ್ಲೇಶ್ ಇದ್ದರು.


ನಾಳೆ ನಗರದಲ್ಲಿ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

ಚಾಮರಾಜನಗರ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ನಗರದ ಆರ್ ಪ್ರೋಸೆಸ್ ಮತ್ತು ಎಸ್.ಎಂ.ಎಫ್.ಜಿ. ಇಂಡಿಯನ್ ಕ್ರೆಡಿಟ್ ಕಂಪನಿ ಲಿಮಿಟೆಡ್ ಸಹಯೋಗದೊಂದಿಗೆ ವಿವಿಧ ಹುದ್ದೆಗಳ ನೇಮಕಾತಿಗೆ ಫೆ.18ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಸಲಾಗುವುದು.

ಆರ್ ಪ್ರೋಸೆಸ್ ಕಂಪನಿಯಲ್ಲಿ ಖಾಲಿ ಇರುವ 15 ಟ್ರೈನಿ ಪ್ರೋಸೆಸ್ ಅಸೋಸಿಯಟ್ ಹುದ್ದೆಗಳಿಗೆ 18 ರಿಂದ 30 ವರ್ಷದೊಳಗಿನ ಯಾವುದೇ ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿರುವವರು ಹಾಗೂ ಎಸ್.ಎಂ.ಎಫ್.ಜಿ. ಇಂಡಿಯನ್ ಕ್ರೆಡಿಟ್ ಕಂಪನಿ ಲಿಮಿಟೆಡ್‌ನಲ್ಲಿ ಖಾಲಿ ಇರುವ 30 ಟೆಲಿಕಾಲಿಂಗ್, ಫೀಲ್ಡ್ ಆಫೀಸರ್ ಮತ್ತು ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ 18 ರಿಂದ 32 ವರ್ಷದೊಳಗಿನ ಎಸ್.ಎಸ್.ಎಲ್.ಸಿ. ಪಿಯುಸಿ, ಐ.ಟಿ.ಐ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಪುರುಷ, ಮಹಿಳಾ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು.

ಆಸಕ್ತ ಅಭ್ಯರ್ಥಿಗಳು ಸ್ವ–ವಿವರ (ಬಯೋಡೇಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂ.ಸಂ.08226–224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ.ಮಹಮ್ಮದ್ ಅಕ್ಬರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊಳ್ಳೇಗಾಲದಲ್ಲಿ ಸಂತ ಸೇವಾಲಾಲರ ಜಯಂತಿ ಆಚರಣೆ



ಕೊಳ್ಳೇಗಾಲದಲ್ಲಿ ಸಂತ ಸೇವಾಲಾಲ ಮಹಾರಾಜರ 286ನೇ ಜಯಂತಿ ಆಚರಣೆ.

ಕೊಳ್ಳೇಗಾಲ, ಫೆ16– ಶರಣ ಸಂತ ಸೇವಾಲಾಲ ಮಹಾರಾಜರ 286ನೇ ಜಯಂತಿಯನ್ನು ತಾಲೂಕು ಆಡಳಿತದ ವತಿಯಿಂದ ಶನಿವಾರ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಸಂತ ಸೇವಾಲಾಲರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ತಾಪಂ ಇಓ ಗುರುಶಾಂತಪ್ಪ ಬೆಳ್ಳುಂಡಗಿ ಮಾತನಾಡಿ, ಬಂಜಾರ ಸಮಾಜದವರು ಶ್ರಮಜೀವಿಗಳು, ಸೌಮ್ಯವಾದಿಗಳು, ತಮ್ಮ ಪಾಲಿನ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಕಾಯಕ ಜೀವಿಗಳು, ಸೇವಾಲಾಲ್ ಜಯಂತಿ ಆಚರಣೆ ಈ ಸಂದರ್ಭದಲ್ಲಿ ಸಂತರ ತತ್ವಾದರ್ಶಗಳನ್ನು ಯುವ ಪೀಳಿಗೆ ಮೈಗೂಡಿಸಿಕೊಳ್ಳಬೇಕು, ಸಮಾಜದ ಬಂಧುಗಳು ತಮ್ಮ ಮಕ್ಕಳನ್ನು ಶೈಕ್ಷಣಿಕ ಪ್ರಗತಿಗೆ ಸ್ಪಂದಿಸಬೇಕು, ಅವರ ಹಾಕಿಕೊಟ್ಟ ಹಾದಿಯಲ್ಲಿ ಎಲ್ಲರೂ ಸಾಗುವಂತಾಗಬೇಕು ಎಂದರು.

ಜಿಲ್ಲಾ ಬಂಜಾರ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಶಾಂತರಾಜು ಲಮಾಣಿ ಮಾತನಾಡಿ, ಬಂಜಾರ ಸಮುದಾಯ ಅನೇಕ ಸಮಸ್ಯೆಗಳನ್ನು ಅನುಭವಿಸುತ್ತಿದ್ದು, ಜೀವನಕ್ಕಾಗಿ ವಲಸೆ ಹೋಗುವುದರಿಂದ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಸಂತ ಸೇವಾಲಾಲರು ವಿದ್ಯೆ, ಪ್ರಾಣಿ ಸಾಕಾಣಿಕೆ ಭವಿಷ್ಯದ ದಿನಗಳ ಕುರಿತಂತೆ ಮುಂಚಿತವಾಗಿಯೇ ಅರಿವು ಮೂಡಿಸಿದ್ದರು. ಮದ್ಯಪಾನ, ಧೂಮಪಾನ ಇವೆಲ್ಲಾ ವ್ಯಸನದಿಂದ ಹೊರಬರಬೇಕು, ಹೆಣ್ಣು ಮಕ್ಕಳ ಗೌರವ ಕಾಪಾಡುವ ನಿಟ್ಟಿನಲ್ಲಿ ಮುಂದಾಗಬೇಕು ಎಂಬ ಸಂದೇಶ ಸಾರಿದ್ದಾರೆ ಎಂದರು

ಸಮಾಜದ ಮುಖಂಡರು ಕೂಲಿಗಾಗಿ ವಲಸೆ ತೆರಳುತ್ತಿದ್ದ ಈವೇಳೆ ಹಾವು ಕಚ್ಚಿ ಕೂಲಿಕಾರರ ಮಕ್ಕಳು ಸಾವಿಗೀಡಾಗಿರುವ ಅನೇಕ ಪ್ರಕರಣಗಳಿದ್ದು ಇತ್ತೀಚೆಗೆ ಕೊಳ್ಳೇಗಾಲ ತಾಲೂಕಿನಲ್ಲಿ ಪುಟ್ಟ ಮಗು ಸಾವಿಗೀಡಾಗಿದೆ. ವಿಷದ ಬೀಜ ಸೇವಿಸಿ ಕೆಲ ಮಕ್ಕಳು ಅಸ್ವಸ್ಥರಾದ ಪ್ರಕರಣವಿದ್ದು ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತ ಈ ಸಂಬಂಧ ಗಮನಹರಿಸಿ ಸಮಾಜದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸ್ಪಂದಿಸುವಂತಾಗಬೇಕು ಎಂದು ಹೇಳಿದರು.

ಪರಿಶಿಷ್ಟ ಪಂಗಡ ಕಲ್ಯಾಣ ಅಧಿಕಾರಿ ರಾಜೇಶ್, ದೈಹಿಕ ಶಿಕ್ಷಣ ಪರಿವೀಕ್ಷಕ ಸ್ಟೀವನ್, ಭೂಮಾಪನ ಇಲಾಖೆ ಸಹಾಯಕ ನಿರ್ದೇಶಕ ನಟರಾಜು, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಶಿವರಾಜು, ಡಾ.ಉಮಾಶಂಕರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಶಿವಲೀಲಾ, ಅಬಕಾರಿ ಉಪನಿರೀಕ್ಷಕ ಸಿದ್ದಯ್ಯ, ಕಂದಾಯ ಇಲಾಖೆ ಶಿರಸ್ತೇದಾರ್ ಕೃಪಾಕಾರ್, ಲಂಬಾಣಿ ಜನಾಂಗದ ನಾಗರಾಜು, ಮಹದೇವು.ಕೆ, ಗುರುಸ್ವಾಮಿ, ತುಳಸಿಯನ್, ಪ್ರಮಿಳಾ ಬಾಯಿ, ಮುನಿಯನಾಯ್ಕ, ರಾಜಿಲಿ ಬಾಯಿ, ಮಹದೇವ ಇನ್ನಿತರಿದ್ದರು

ಜಾತಿ ಆದಾಯ ಪ್ರಮಾಣ ಪತ್ರ ಪಡೆಯಲು ಸಹಾಯವಾಣಿ ಸ್ಥಾಪನೆ

ಚಾಮರಾಜನಗರ, ಫೆ.16– ರಾಜ್ಯದಲ್ಲಿ ನಡೆಯುತ್ತಿರುವ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಅವಶ್ಯಕತೆ ಇರುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಅನುಕೂಲಕ್ಕಾಗಿ ತ್ವರಿತವಾಗಿ ಸ್ಪಂದಿಸಲು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

ಸಾರ್ವಜನಿಕರು ಜಾತಿ, ಆದಾಯ ಪ್ರಮಾಣ ಪತ್ರ ಪಡೆಯಲು ತೊಂದರೆ ಉಂಟಾದಲ್ಲಿ ಸಹಾಯವಾಣಿ ಕೇಂದ್ರದ ಸಂಖ್ಯೆ 08226–223160 ಹಾಗೂ ಜಿಲ್ಲಾ ಎಜೆಎಸ್‌ಕೆ ಸಮಾಲೋಚಕರ ಮೊ.ಸಂ 8861461509ಕ್ಕೆ ಕರೆ ಮಾಡಿದ್ದಲ್ಲಿ ಕೂಡಲೇ ಸ್ಪಂದಿಸಿ ಕ್ರಮವಹಿಸಲಾಗುವುದು. ಯಾವುದೇ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

ಸ್ಥಳೀಯ ಸಂಸ್ಥೆಗಳ ಚುನಾವಣೆ

ಎಲ್ಲಾ ಕಡೆ ಸಮನ್ವಯತೆ ಸಾಧಿಸಿ ತಯಾರಿ ಮಾಡಿಕೊಳ್ಳಬೇಕು. ಎಲ್ಲೆಲ್ಲಿ ನಾಯಕರ ಮಧ್ಯೆ ಹೊಂದಾಣಿಕೆ ಸಾಧಿಸಿ, ಶೇ.50 ರಷ್ಟು ಮಹಿಳಾ ಅಭ್ಯರ್ಥಿಗಳನ್ನು ತಯಾರು ಮಾಡುವ ಬಗ್ಗೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು. ಇನ್ನು 100 ಕಾಂಗ್ರೆಸ್ ಕಚೇರಿ ನಿರ್ಮಿಸುವ ಹಿನ್ನೆಲೆಯಲ್ಲಿ ಇವುಗಳ ಶಂಕುಸ್ಥಾಪನೆ ಕಾರ್ಯಕ್ರಮ ನೆರವೇರಿಸಲು ದಿನಾಂಕ ನಿಗದಿ ಮಾಡುವಂತೆ ನಮ್ಮ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರಿಗೆ ಮನವಿ ಮಾಡಿದ್ದೇನೆ. ಈ ಕಾರ್ಯಕ್ಕೆ ನಾಲ್ಕು ವಿಭಾಗಗಳಲ್ಲಿ ಸಮಿತಿ ರಚಿಸಲಾಗಿದೆ ಎಂದು ತಿಳಿಸಿದರು. ಕಚೇರಿ ಕಟ್ಟಡ ನಿರ್ಮಾಣ ಮಾಡುವ ಜಾಗ ಕಾಂಗ್ರೆಸ್ ಪಕ್ಷದ ಹೆಸರಿನಲ್ಲಿ ನೋಂದಣಿ ಆಗದಿದ್ದರೆ ಅಲ್ಲಿ ನಮ್ಮ ನಾಯಕರಿಂದ ಶಂಕುಸ್ಥಾಪನೆ ಮಾಡಿಸುವುದಿಲ್ಲ. ಈ ಕಟ್ಟಡ ನಿರ್ಮಾಣದ ಜಾಗ ವೈಯಕ್ತಿಕ ಹೆಸರು, ಬೇರೆ ಟ್ರಸ್ಟ್ ಹೆಸರಿನಲ್ಲಿ ಇರುವಂತಿಲ್ಲ ಎಂದರು. ಇನ್ನು ಆನಂದರಾವ್ ವೃತ್ತದ ಬಳಿ ಇರುವ ಜಾಗದಲ್ಲಿ ಕಟ್ಟಡ ನಿರ್ಮಾಣಕ್ಕೆ ನಕ್ಷೆ ಸಿದ್ಧಪಡಿಸಲಾಗಿದೆ. ಈ ಕಟ್ಟಡದ ಶಂಕುಸ್ಥಾಪನೆಯನ್ನು ಅದೇ ದಿನ ನೆರವೇರಿಸಲಾಗುವುದು ಎಂದು ತಿಳಿಸಿದರು.

ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ವಿವಿಧ ನಾಯಕರು ಹಂತ ಹಂತವಾಗಿ ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ. ಇಂದು ಎಲ್.ಆರ್.ಶಿವರಾಮೇಗೌಡ ಅವರು ಕಾಂಗ್ರೆಸ್ ಪಕ್ಷ ಸೇರಿದ್ದಾರೆ. ಜೆಡಿಎಸ್ ಪಕ್ಷದಿಂದ ಸಂಸತ್ ಸದಸ್ಯರಾಗಿದ್ದರು. ಇನ್ನು ನಮ್ಮ ಪಕ್ಷದ ರಾಷ್ಟ್ರೀಯ ವಕ್ತಾರರಾಗಿದ್ದ ಬ್ರಿಜೇಶ್ ಕಾಳಪ್ಪ ಅವರು ಕೂಡ ಆಪ್ ಪಕ್ಷ ತೊರೆದು ಕಾಂಗ್ರೆಸ್ ಸೇರಿದ್ದಾರೆ. ತಾವುಗಳು ಮತ್ತೆ ಕಾಂಗ್ರೆಸ್‌ನಲ್ಲಿ ಗುರುತಿಸಿಕೊಳ್ಳಬೇಕು, ಕಾಂಗ್ರೆಸ್ ಪಕ್ಷದಲ್ಲೇ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ನಿರ್ಧಾರ ಮಾಡಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಭವಿಷ್ಯವಿದೆ ಎಂದು ಮನದಟ್ಟು ಮಾಡಿಕೊಂಡು ಇಂದು ನಮ್ಮ ಪಕ್ಷ ಸೇರುತ್ತಿದ್ದಾರೆ. ಈ ಇಬ್ಬರು ನಾಯಕರು ಹಾಗೂ ಅವರ ಕಾರ್ಯಕರ್ತರಿಗೆ ಪಕ್ಷದ ಪರವಾಗಿ ಆತ್ಮೀಯವಾಗಿ ಸ್ವಾಗತಿಸುತ್ತೇನೆ. ಕಾಂಗ್ರೆಸ್ ಪಕ್ಷ ಸಮುದ್ರ ಇದ್ದಂತೆ. ಎಲ್ಲಾ ನದಿಗಳು ಸಮುದ್ರ ಸೇರುವಂತೆ ಎಲ್ಲಾ ಪಕ್ಷಗಳ ನಾಯಕರು ನಮ್ಮ ಸಿದ್ಧಾಂತ, ನಾಯಕತ್ವ ಒಪ್ಪಿ ಪಕ್ಷ ಸೇರುತ್ತಿದ್ದಾರೆ.

ಪ್ರಶ್ನೆಯೊಂದಕ್ಕೆ ಉತ್ತರ ನೀಡಿದ ಅವರು, ಪಕ್ಷಕ್ಕೆ ಸೇರುವವರ ದೊಡ್ಡ ಪಟ್ಟಿ ಇದೆ. ಕೆಲವು ನಾಯಕರ ಬಗ್ಗೆ ಸ್ಥಳೀಯವಾಗಿ ಚರ್ಚೆ ಮಾಡಿ ತೀರ್ಮಾನ ಮಾಡಬೇಕಿದೆ. ಚರ್ಚೆ ಮಾಡಿ ಹಂತ ಹಂತವಾಗಿ ಪಕ್ಷ ಸೇರ್ಪಡೆ ಮಾಡಿಕೊಳ್ಳುತ್ತೇವೆ. ಪಕ್ಷಕ್ಕೆ ಸೇರಿಸಿಕೊಳ್ಳುವಾಗ ಮಾಧ್ಯಮಗಳಿಗೆ ಮಾಹಿತಿ ನೀಡುತ್ತೇವೆ ಎಂದರು. ಶಾಸಕರು ಸಂಪರ್ಕದಲ್ಲಿ ಇದ್ದಾರಾ ಎಂದು ಕೇಳಿದಾಗ, "ಇದು ಗೌಪ್ಯವಾದ ವಿಚಾರ. ಇದನ್ನು ಬಹಿರಂಗಪಡಿಸುವುದಿಲ್ಲ ಎಂದು ತಿಳಿಸಿದರು.

ಚುನಾವಣೆವರೆಗೂ ಸಿದ್ದರಾಮಯ್ಯ ಬೇಕು

ನಾವೇ ಕೇಂದ್ರ ಸಚಿವರನ್ನು ಭೇಟಿ ಮಾಡಿ ಮನವಿ ಮಾಡಿದ್ದೇವೆ. ಇದು ಅವರ ಹೋರಾಟವಲ್ಲ, ರಾಜ್ಯದ ಹೋರಾಟ. ಅವರು ಅಧಿಕಾರದಲ್ಲಿ ಇರುವಾಗ ಹೋರಾಟ ಯಾಕೆ ಮಾಡಬೇಕು? ಎಂದು ಪ್ರಶ್ನಿಸಿದರು. ನಾವು ಈ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ, ನಮಗೆ ಅದರ ಅಗತ್ಯವೂ ಇಲ್ಲ. ಅವರಿಗೆ ರಾಜಕಾರಣ ಮಾಡಿ ರೂಢಿ ಇರಬಹುದು. ನಾವು ಹೋರಾಟ ಮಾಡಿದಾಗ ಅವರು ಯಾವ ರೀತಿ ಟೀಕೆ ಮಾಡಿದ್ದಾರೆ ಎಂದು ನೋಡಿದ್ದೇವೆ. ನಾವು ಅದನ್ನು ಮರೆತು ರಾಜ್ಯದ ಹಿತಕ್ಕಾಗಿ ನೀರಾವರಿ ಯೋಜನೆಗೆ ಪ್ರಯತ್ನಿಸುತ್ತೇವೆ. ಭದ್ರಾ ಮೇಲ್ದಂಡೆ ಯೋಜನೆಗೆ 5 ಸಾವಿರ ಕೋಟಿ ಘೋಷಣೆ ಮಾಡಿದ್ದೀರಿ, ಅದನ್ನು ಕೊಟ್ಟಿಲ್ಲ ಎಂದು ಅವರು ಸಂಸತ್ತಿನಲ್ಲಿ ಎಂದಾದರೂ ಪ್ರಶ್ನೆ ಮಾಡಿದ್ದಾರಾ? ದೇವೇಗೌಡರು, ಕುಮಾರಸ್ವಾಮಿ, ಕೇಂದ್ರ ಸಚಿವರು, ಸಂಸದರು ಈ ಬಗ್ಗೆ ಧ್ವನಿ ಎತ್ತುತ್ತಾರೆ ಎಂಬ ನಿರೀಕ್ಷೆ ಇಟ್ಟುಕೊಂಡಿದ್ದೆ. ಆ ಕೆಲಸದಲ್ಲೂ ವಿಫಲರಾಗಿದ್ದಾರೆ. ಮೊದಲು ಈ ಕೆಲಸ ಮಾಡಲಿ. ಕಾವೇರಿ ಗೋದಾವರಿ ಜೋಡಣೆ ಮಾಡಿದರೆ ಸಂತೋಷ. ಅವರು ಯೋಜನೆ ತರಲಿ. ನಮ್ಮಿಂದ ಯಾವ ಸಹಕಾರ ಬೇಕು ಹೇಳಲಿ. ನಾವು ನೀಡುತ್ತೇವೆ. ಇಲ್ಲಿಂದಲೇ ಅವರಿಗೆ ಸಾಷ್ಟಾಂಗ ನಮಸ್ಕಾರ ಹಾಕುತ್ತೇವೆ ಎಂದರು.

ಬೆಂಗಳೂರಿನ ನೀರಿನ ವಿಚಾರವಾಗಿ ಮಾತನಾಡಿದ್ದಾರೆ ಎಂದು ಕೇಳಿದಾಗ, ಅವರ ಪಕ್ಷದ ನಾಯಕರಿಂದ ಗೊಂದಲದ ಹೇಳಿಕೆ ಕೊಡಿಸುತ್ತಿದ್ದಾರೆ. ಡಿ.ಸಿ ತಮ್ಮಣ್ಣ ಅವರಿಗೆ ಮಾಹಿತಿ ಇಲ್ಲ. ಈ ವಿಚಾರದಲ್ಲಿ ಡಿಪಿಆರ್ ಸಿದ್ಧಪಡಿಸಿದ್ದಾರೆ ಅಷ್ಟೇ. ಇನ್ನೂ ತೀರ್ಮಾನ ಮಾಡಿಲ್ಲ, ನಾನು ಅಧಿಕಾರಕ್ಕೆ ಬಂದ ತಕ್ಷಣವೇ ಬೆಂಗಳೂರಿಗೆ 6 ಟಿಎಂಸಿ ನೀರನ್ನು ಮಂಜೂರು ಮಾಡಿದ್ದೇನೆ. ಮುಂದಿನ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ ಎಂದರು

ಸರ್ಕಾರದ ನಡೆ ಅವಿವೇಕದ ಪರಮಾವಧಿ

ಸರ್ಕಾರ ಅಸ್ತಿತ್ವಕ್ಕೆ ತಂದಿತ್ತು. ಇವುಗಳ ಅಭಿವೃದ್ಧಿಗಾಗಿ ಮೀಸಲಿರಿಸಬೇಕಾಗಿದ್ದ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ವಿನಿಯೋಗಿಸಿಕೊಳ್ಳುವ ಕಾರಣಕ್ಕಾಗಿ ವಿವಿಗಳನ್ನು ಮುಚ್ಚಲು ಹೊರಟಿರುವ ಕಾಂಗ್ರೆಸ್ ಸರ್ಕಾರದ ನಿರ್ಧಾರ ಶಿಕ್ಷಣ ಹಾಗೂ ಅಭಿವೃದ್ಧಿ ವಿರೋಧಿಯ ಧೋರಣೆಯನ್ನು ಸಾಕ್ಷೀಕರಿಸುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದ್ದಾರೆ.

ಇತಿಹಾಸದಿಂದಲೂ ದಕ್ಷಿಣ ಭಾರತದಲ್ಲಿ 'ಕರ್ನಾಟಕ ರಾಜ್ಯ ಶಿಕ್ಷಣದ ಕಾಶಿ' ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಅದಕ್ಕೆ ಹಿನ್ನಡೆಯುಂಟು ಮಾಡುವ ನಿರ್ಧಾರಗಳನ್ನು ಈ ಹಿಂದಿನ ಯಾವ ಸರ್ಕಾರಗಳೂ ಕೈಗೊಂಡಿರಲಿಲ್ಲ. ಆದರೆ ಈ ಕಾಂಗ್ರೆಸ್ ಸರ್ಕಾರ ಇಂಥಾ ನಿರ್ಧಾರ ಕೈಗೊಂಡಿರುವುದು ನಿಜಕ್ಕೂ ಖಂಡನೀಯ ಕ್ರಮವಾಗಿದೆ ಎಂದು ಗುಡುಗಿದ್ದಾರೆ.

ಇನ್ನು ಬಿಜೆಪಿ ಸರ್ಕಾರದ ಅವಧಿಯಲ್ಲಿ ಪದವಿ ಹಾಗೂ ಸ್ನಾತಕೋತ್ತರ ಶಿಕ್ಷಣ ಪಡೆಯಲು ಸಂಕಷ್ಟ ಎದುರಿಸುತ್ತಿದ್ದ ವಿವಿಧ ಪ್ರದೇಶಗಳ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತೆರೆಯಲಾಗಿದ್ದ ಹಾಸನ, ಚಾಮರಾಜನಗರ, ಹಾವೇರಿ, ಕೊಡಗು, ಕೊಪ್ಪಳ, ಬಾಗಲಕೋಟೆ, ಮಂಡ್ಯ, ಮಹಾರಾಣಿ ಕ್ಲಸ್ಟರ್, ನೃಪತುಂಗ ಸೇರಿದಂತೆ ಇತರ ಹಿಂದುಳಿದ ಪ್ರದೇಶಗಳ ವಿಶ್ವವಿದ್ಯಾನಿಲಯಗಳನ್ನು ಮುಚ್ಚಿಸಲು ಹೊರಟಿರುವ ಕಾಂಗ್ರೆಸ್ ಸರ್ಕಾರದ ಕ್ರಮದ ಹಿಂದಿನ ಯೋಚನೆ ಶಿಕ್ಷಣ ವಿರೋಧಿ ನೀತಿಯ ವಿಕೃತ ನಡೆಯಾಗಿದೆ. ಈ ಕೂಡಲೇ ಸರ್ಕಾರ ತನ್ನ ಈ ನಿರ್ಧಾರವನ್ನು ಕೈ ಬಿಟ್ಟು ಈ 9 ವಿಶ್ವವಿದ್ಯಾನಿಲಯಗಳ ಅಸ್ತಿತ್ವವನ್ನು ಉಳಿಸಿ ಅಭಿವೃದ್ಧಿಗೆ ಸೂಕ್ತ ಅನುದಾನ ಬಿಡುಗಡೆ ಮಾಡಲಿ ಎಂದು ಒತ್ತಾಯಿಸಿದರು.

ತಲಾ 10 ಲಕ್ಷ ಪರಿಹಾರ ಘೋಷಣೆ


ನಡೆಯಲು ನೂರಾರು ಪ್ರಯಾಣಿಕರು ಒಂದೇ ಸಮನೆ ಮುನ್ನುಗ್ಗುತ್ತಿದ್ದರೆ, ಮತ್ತಷ್ಟು ಪ್ರಯಾಣಿಕರು ಪ್ರಯಾಗರಾಜ್‌ಗೆ ತೆರಳುವ ಧಾವಂತದಲ್ಲಿ ಇದ್ದರು. ಈ ಸಂದರ್ಭ ಕಾಲು ಜಾರಿ ಕೆಲವರು ನೆಲಕ್ಕೆ ಬಿದ್ದರು. ಅವರನ್ನು ತುಳಿದುಕೊಂಡೇ ರೈಲನ್ನು ಏರಿದರು. ಸುಮಾರು ಅರ್ಧ ಗಂಟೆ ಕಾಲ ನೂಕು ನುಗ್ಗಲು ಮುಂದುವರಿದು ಉಸಿರುಗಟ್ಟಿದ ವಾತಾವರಣದಲ್ಲಿ ಹಲವಾರು ಮಂದಿ ಅಸ್ವಸ್ಥರಾದರು ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.

ತಕ್ಷಣವೇ ರೈಲು ನಿಲ್ದಾಣದ ಅಧಿಕಾರಿಗಳು ಅಗ್ನಿ ಶಾಮಕ ದಳದ ಹೆಚ್ಚುವರಿ ತುಕಡಿಗಳನ್ನು ಕರೆಸಿಕೊಂಡು ಪರಿಸ್ಥಿತಿ ನಿಯಂತ್ರಿಸಲು ಶ್ರಮಿಸಿದರು. ಘಟನೆಯ ತೀವ್ರತೆಯ ಮಾಹಿತಿ ಪಡೆದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ತುಕಡಿಗಳೂ ಆಗಮಿಸಿ ರಕ್ಷಣಾ ಕಾರ್ಯಾಚರಣೆ ಕೈಗೊಂಡವು. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಸ್ಥಳಕ್ಕೆ ಭೇಟಿ ಕೊಟ್ಟು ಪರಿಶೀಲನೆ ನಡೆಸಿದ್ದಾರೆ. ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೇನಾ ಅವರು ಸಂತ್ರಸ್ತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ರೈಲ್ವೆ ಪೊಲೀಸರಿಗೆ ಅಗತ್ಯ ತುರ್ತು ಕ್ರಮ ಜರುಗಿಸಲು ಸೂಚನೆ ನೀಡಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಕೂಡ ಲೆಫ್ಟಿನೆಂಟ್ ಗವರ್ನರ್ ಅವರಿಂದ ಮಾಹಿತಿ ಪಡೆದು, ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳಿದ್ದಾರೆ.

ಸ್ಥಳದಲ್ಲಿ 4 ಆಂಬ್ಯುಲೆನ್ಸ್ ಹಾಗೂ ಅಗ್ನಿ ಶಾಮಕ ವಾಹನಗಳು ಬೀಡುಬಿಟ್ಟಿವೆ. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಉತ್ತರ ರೈಲ್ವೆ ಹೇಳಿದೆ. ಘಟನೆ ಬಳಿಕ, ಪ್ರಯಾಣಿಕರ ದಟ್ಟಣೆ ಕಡಿಮೆ ಮಾಡಲು ಪ್ರಯಾಗರಾಜ್‌ಗೆ ನಾಲ್ಕು ವಿಶೇಷ ರೈಲುಗಳನ್ನು ಓಡಿಸುವುದಾಗಿ ಉತ್ತರ ರೈಲ್ವೆ ಘೋಷಿಸಿದೆ.

ಪ್ರಧಾನಿ ಮೋದಿ ಸೇರಿ ಗಣ್ಯರ ಸಂತಾಪ

ನವದೆಹಲಿ, ಫೆ.16– ದೆಹಲಿ ರೈಲು ನಿಲ್ದಾಣದಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ 18 ಮಂದಿ ಸಾವನ್ನಪ್ಪಿ, 12 ಮಂದಿ ಗಾಯಗೊಂಡಿದ್ದಾರೆ. ಈ ಬಗ್ಗೆ ಪ್ರಧಾನಿ ಮೋದಿಯವರು ಟ್ವೀಟ್ ಮೂಲಕ ಸಂತಾಪ ಸೂಚಿಸಿದ್ದಾರೆ.



ದೆಹಲಿ ರೈಲು ನಿಲ್ದಾಣದಲ್ಲಿ ಸಂಭವಿಸಿದ ಕಾಲ್ತುಳಿತ ದುರಂತದಿಂದ ದುಃಖಿತನಾಗಿದ್ದೇನೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರ ಬಗ್ಗೆ ಸಂತಾಪವಿದೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಈ ಕಾಲ್ತುಳಿತದಲ್ಲಿ ಗಾಯಗೊಂಡವರಿಗೆ ಅಧಿಕಾರಿಗಳು ಸಹಾಯ ಮಾಡುತ್ತಿದ್ದಾರೆ ಎಂದು ಟ್ವೀಟ್ ಮಾಡಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಹ ಸಂತಾಪ ಸೂಚಿಸಿದ್ದಾರೆ. ನವದೆಹಲಿ ರೈಲು ನಿಲ್ದಾಣದಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಹಲವರು ಮೃತಪಟ್ಟಿರುವ ಸುದ್ದಿ ತಿಳಿದು ತೀವ್ರ ದುಃಖವಾಗಿದೆ. ಮೃತರ ಕುಟುಂಬಗಳಿಗೆ ನನ್ನ ಮನದಾಳದಿಂದ ಸಂತಾಪ ಸೂಚಿಸುತ್ತಿದ್ದೇನೆ. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

ಗೃಹ ಸಚಿವ ಅಮಿತ್ ಶಾ, ಉಪರಾಷ್ಟ್ರಪತಿ ಜಗದೀಪ್ ಧನಕರ್, ದೆಹಲಿ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಸೇರಿ ಅನೇಕರು ಘಟನೆ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದಾರೆ.

ಮೈಸೂರು ಮಿತ್ರ ಸೋಮವಾರ 17 ಫೆಬ್ರವರಿ 2025

ಸುಸಜ್ಜಿತ ಕ್ರೀಡಾಂಗಣ ನಿರ್ಮಾಣಕ್ಕೆ ಆಗ್ರಹಿಸಿ ಕರೆ ನೀಡಿದ್ದ

ಮ್ಯಾರಥಾನ್‌ಗೆ ನಿರೀಕ್ಷೆಗೂ ಮೀರಿದ ಬೆಂಬಲ

ತಿ.ನರಸೀಪುರ, ಫೆ.16– ಸುಸಜ್ಜಿತ ಕ್ರೀಡಾಂಗಣ ನಿರ್ಮಾಣಕ್ಕೆ ಆಗ್ರಹಿಸಿ ತಾಲೂಕು ಕ್ರೀಡಾಂಗಣ ಹೋರಾಟ ಸಮಿತಿ ಕರೆ ನೀಡಿದ್ದ ಮ್ಯಾರಥಾನ್‌ಗೆ ಪಟ್ಟಣದಲ್ಲಿ ನಿರೀಕ್ಷೆಗೂ ಮೀರಿ ಬೆಂಬಲ ವ್ಯಕ್ತವಾಯಿತು.

ಪಟ್ಟಣದ ವಿದ್ಯೋದಯ ವೃತ್ತದಲ್ಲಿ ನೆರೆದಿದ್ದ ಸಾವಿರಾರು ಕ್ರೀಡಾಭಿಮಾನಿಗಳ ಸಮ್ಮುಖದಲ್ಲಿ ರಾಷ್ಟ್ರೀಯ ಕ್ರೀಡಾಪಟು, ನಿವೃತ್ತ ಆದಾಯ ತೆರಿಗೆ ಅಧಿಕಾರಿ ಮಹದೇವ ಮ್ಯಾರಥಾನ್‌ಗೆ ಚಾಲನೆ ನೀಡಿದರು. ವಿದ್ಯೋದಯ ಕಾಲೇಜು ವೃತ್ತದಿಂದ ಹೊರಟ ಮ್ಯಾರಥಾನ್ ಖಾಸಗಿ ಬಸ್ ನಿಲ್ದಾಣ, ಲಿಂಕ್ ರಸ್ತೆ, ಭಗವಾನ್ ವೃತ್ತ, ಕೆನರಾ ಬ್ಯಾಂಕ್ ಮಾರ್ಗವಾಗಿ ತಾಲೂಕು ಕಚೇರಿ ತೆರಳಿ ಶಿರಸ್ತೇದಾರ್ ಮಂಜುಳಾ ಅವರಿಗೆ ಮನವಿ ಸಲ್ಲಿಸಿತು.

ಮ್ಯಾರಥಾನ್‌ಗೆ ದಸಂಸ, ಬೆಳಕು ಫೌಂಡೇಶನ್, ರೈತ ಸಂಘ, ಕಬ್ಬು ಬೆಳೆಗಾರರ ಸಂಘ, ಶಿವಶಂಕರ ಸ್ಪೋರ್ಟ್ಸ್ ಕ್ಲಬ್ ಇನ್ನಿತರೆ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿದ್ದರು. ಕ್ರಿಕೆಟ್, ಸ್ಕೇಟಿಂಗ್, ವಾಲಿಬಾಲ್, ಖೋಖೋ ಆಟಗಾರರು ಮ್ಯಾರಥಾನ್‌ನಲ್ಲಿ ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಕ್ರೀಡಾಂಗಣ ಹೋರಾಟ ಸಮಿತಿ ಅಧ್ಯಕ್ಷ ಎಂ.ರಮೇಶ್ ಮಾತನಾಡಿ, ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲೂ ಸರ್ಕಾರಿ ಕ್ರೀಡಾಂಗಣವಿದ್ದು, ನಮ್ಮ ತಾಲೂಕಿನಲ್ಲಿ ಮಾತ್ರ ಕ್ರೀಡಾಂಗಣವಿಲ್ಲ. ಪಟ್ಟಣದಲ್ಲಿ ಸರ್ಕಾರಿ ಕಾರ್ಯಕ್ರಮ, ರಾಷ್ಟ್ರೀಯ ಹಬ್ಬಗಳು, ಶಾಲಾ, ತಾಲೂಕು, ಜಿಲ್ಲಾ ಮಟ್ಟದ ಕ್ರೀಡಾಕೂಟಗಳನ್ನು ನಡೆಸಲು ಖಾಸಗಿ ವಿದ್ಯೋದಯ ಕ್ರೀಡಾಂಗಣ ಅವಲಂಬಿಸಬೇಕಾದ ಅನಿವಾರ್ಯತೆ ಇದೆ. ಈಗಾಗಲೇ ಈ ಭಾಗದ ಜನಪ್ರತಿನಿಧಿಗಳು ತಾಲೂಕು ಕ್ರೀಡಾಂಗಣಕ್ಕೆ ನಾಂದಿ ಹಾಡಿದ್ದಾರೆ. ಪಟ್ಟಣ ವ್ಯಾಪ್ತಿ 9.30 ಎಕರೆ ಜಮೀನನ್ನು ಗುರುತಿಸಿದ್ದು, ಆದಷ್ಟು ಬೇಗ ಕ್ರೀಡಾಂಗಣಕ್ಕೆ ಭೂಮಿಪೂಜೆ ಮಾಡಬೇಕು ಎಂದು ಆಗ್ರಹಿಸಿದರು.



ವಿವಿಧ ಸಂಘಟನೆಗಳ ಸದಸ್ಯರು ಶಿರಸ್ತೇದಾರ್‌ಗೆ ಮನವಿ ಸಲ್ಲಿಸಿದರು.

ಸಮಿತಿ ಪ್ರಧಾನ ಕಾರ್ಯದರ್ಶಿ ಆಲಗೂಡು ಶಿವಕುಮಾರ್ ಮಾತನಾಡಿ, ತಾಲೂಕಿನಲ್ಲಿ 2.50 ಲಕ್ಷಕ್ಕೂ ಅಧಿಕ ಮಂದಿ ವಾಸವಿದ್ದು, ಹಲವು ಕ್ರೀಡಾಪಟುಗಳು ಕ್ರೀಡಾಂಗಣ ಇಲ್ಲದೆ ಜಿಲ್ಲಾ, ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ. ತಾಲೂಕಿಗೆ ಸರ್ಕಾರಿ ಕ್ರೀಡಾಂಗಣದ ಅನಿವಾರ್ಯತೆ ಇದ್ದು, ಈಗಲೂ ಹಲವು ಕ್ರೀಡಾಪಟುಗಳು, ವಾಯು ವಿಹಾರಿಗಳು, ಯುವಕರು ಮತ್ತು ವಯೋವೃದ್ಧರು ರಸ್ತೆ ಬದಿ ವ್ಯಾಯಾಮ ನಿರತರಾಗಿರುತ್ತಾರೆ. ಇಲ್ಲವೇ ಖಾಸಗಿ ವಿದ್ಯೋದಯ ಸಂಸ್ಥೆ ಕ್ರೀಡಾಂಗಣ ಅವಲಂಬನೆ ಮಾಡಬೇಕಿದೆ. ಹೀಗಾಗಿ ನಿಗದಿತ ಜಾಗದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ ಚಾಲ್ತಿ ನೀಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಬಿಜೆಪಿ ಮುಖಂಡ ಡಾ.ರೇವಣ್ಣ, ನಿವೃತ್ತ ದೈಹಿಕ ಶಿಕ್ಷಕ ಆರ್.ಎಸ್. ಬಸವರಾಜು, ಅನಾಥ ಶವಗಳ ಮುಕ್ತಿದಾತ ಡಾ.ಮಾದೇಶ್, ಸೇವಾಶ್ರಯ ಫೌಂಡೇಶನ್ ಅಧ್ಯಕ್ಷ ಮಣಿಕಂಠರಾಜ್ ಗೌಡ, ನಾಗರೀಕ ಸೇವಾ ವೇದಿಕೆ ಅಧ್ಯಕ್ಷ ಹೆಚ್.ಆರಿಫ್, ಕಸಾಪ ಅಧ್ಯಕ್ಷ ಕನ್ನಡ ಪುಟ್ಟಸ್ವಾಮಿ, ತಾಲೂಕು ನೌಕರರ ಸಂಘದ ಅಧ್ಯಕ್ಷ ಎಂ.ವಿ.ಶಿವಶಂಕರಮೂರ್ತಿ, ಎಂ.ಜವರಾಜ್, ವಕೀಲರಾದ ನಾಗೇಂದ್ರ ಪ್ರಸಾದ್, ಪರಮೇಶ್, ಕುಮಾರಸ್ವಾಮಿ, ಜ್ಞಾನೇಂದ್ರಮೂರ್ತಿ, ಹೆಚ್.ಡಿ.ಮಾದಪ್ಪ, ಪುಟ್ಟಸ್ವಾಮಿ, ಎಂ.ಪ್ರವೀಣ್, ಪುರಸಭಾ ಸದಸ್ಯ ತುಂಬಲ ಪ್ರಕಾಶ್, ಬಾದಾಮಿ ಮಂಜು, ರೈತ ಮುಖಂಡರಾದ ಸಿದ್ದೇಶ್, ಪತ್ರ ಬರಹಗಾರ ಗೌರಿಶಂಕರ, ಶಿಕ್ಷಕರಾದ ಜಯಪ್ಪ ಪಾಲ್ ಪ್ರೇಮ ಚಂದ್, ಪುಟ್ಟರಾಜು, ಮಲ್ಲೇಶ್, ಗುರು, ಮಂಜುನಾಥ್, ಎಸ್‌ಎಂಆರ್ ಪ್ರಕಾಶ್, ಕುಕ್ಕೂರು ರಾಜು, ಪ್ರಾಂಶುಪಾಲರಾದ ಉದಯಕುಮಾರ್, ಕೆ.ಎಂ.ಸೌಮ್ಯ, ಶಿವಕುಮಾರ್, ಖೋಖೋ ತಾಂತ್ರಿಕ ಅಧಿಕಾರಿ ಕೆ.ಎಸ್.ಅಮೂಲ್ಯ, ಮಹೇಶ್, ಬ್ಯಾಂಕ್ ಮಂಜು, ಚಂದ್ರು, ಜಿ.ಎಲ್. ತ್ರಿಪುರಾಂತಕ, ಕೋಚ್ ಮಂಜುನಾಥ್, ರಾಷ್ಟ್ರೀಯ ಖೋಖೋ ಕ್ರೀಡಾಪಟು ವೀಣಾ, ಬೆಳಕು ಫೌಂಡೇಶನ್ ಅರವಿಂದ್, ವಿರಾಟ್, ಸೇರಿದಂತೆ ವಿವಿಧ ಸಂಘಟನೆಗಳ ಸದಸ್ಯರು ಸೇರಿದಂತೆ ಇತರರಿದ್ದರು.

> ತಿ.ನರಸೀಪುರದಲ್ಲಿ 30 ಸಾವಿರಕ್ಕೂ ಹೆಚ್ಚು ಜನರಿದ್ದು, ಪುರಸಭೆ ವ್ಯಾಪ್ತಿಯ 23 ವಾರ್ಡ್‌ಗಳ ಪೈಕಿ 16 ವಾರ್ಡ್‌ಗಳು ಮುಖ್ಯಮಂತ್ರಿ ಪ್ರತಿನಿಧಿಸುವ ವರುಣಾಕ್ಕೆ ಸೇರಿದರೆ, 6 ವಾರ್ಡ್‌ಗಳು ಸಚಿವ ಮಹದೇವಪ್ಪ ಪ್ರತಿನಿಧಿಸುವ ತಿ.ನರಸೀಪುರ ಕ್ಷೇತ್ರಕ್ಕೆ ಒಳಪಟ್ಟಿವೆ. ಘಟಾನುಘಟಿಗಳು ಕ್ಷೇತ್ರ ಪ್ರತಿನಿಧಿಸಿದರೂ ಇದುವರೆಗೂ ತಾಲೂಕು ಕ್ರೀಡಾಂಗಣ ನಿರ್ಮಾಣವಾಗಿಲ್ಲ. ಹಾಗಾಗಿ ಕ್ರೀಡಾಂಗಣ ನಿರ್ಮಾಣಕ್ಕೆ ಜನತೆ ಹೋರಾಟ ಮಾಡಬೇಕಾದ ಅನಿವಾರ್ಯತೆ ಬಂದಿದೆ. ಸರ್ಕಾರ ತುರ್ತು ಕ್ರಮವಹಿಸಬೇಕು.
>
> **-ಮಹದೇವ,** ರಾಷ್ಟ್ರೀಯ ಕ್ರೀಡಾಪಟು.

> ಕ್ರೀಡಾಂಗಣ ನಿರ್ಮಾಣಕ್ಕೆ ಜಾಗ ಗುರ್ತಿಸಲಾಗಿದೆ. ಆದರೆ ಕ್ರೀಡಾಂಗಣ ನಿರ್ಮಾಣ ವಿಳಂಬವಾಗುತ್ತಿದ್ದು, ಆದಷ್ಟು ಬೇಗ ವರುಣ ಕ್ಷೇತ್ರ ಪ್ರತಿನಿಧಿಸುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ತಿ.ನರಸೀಪುರ ಕ್ಷೇತ್ರ ಪ್ರತಿನಿಧಿಸುವ ಸಚಿವ ಹೆಚ್.ಸಿ.ಮಹದೇವಪ್ಪ ಅವರು ಕ್ರೀಡಾಂಗಣ ನಿರ್ಮಾಣಕ್ಕೆ ಆದೇಶಿಸಬೇಕು.
>
> **- ಶಿವಕುಮಾರ್,** ಪ್ರಧಾನ ಕಾರ್ಯದರ್ಶಿ, ಕ್ರೀಡಾಂಗಣ ಹೋರಾಟ ಸಮಿತಿ.

ದಲೈಲಾಮರ ಆಶೀರ್ವಾದ ಪಡೆದ ಶಾಸಕ ಜಿಡಿಹೆಚ್

ಹುಣಸೂರು, ಫೆ.16– ಟಿಬೆಟಿಯನ್ನರ ಧರ್ಮಗುರು, ನೊಬೆಲ್ ಶಾಂತಿ ಪ್ರಶಸ್ತಿ ಪುರಸ್ಕೃತ 14ನೇ ದಲೈಲಾಮರನ್ನು ಶಾಸಕ ಜಿ.ಡಿ.ಹರೀಶ್‌ಗೌಡ ಭೇಟಿ ಮಾಡಿ ಆಶೀರ್ವಾದ ಪಡೆದರು.

ತಾಲೂಕಿನ ಗುರುಪುರ ಟಿಬೆಟಿಯನ್ ಪುನರ್ವಸತಿ ಕೇಂದ್ರದಲ್ಲಿ ಬೀಡು ಬಿಟ್ಟಿರುವ ಧರ್ಮಗುರು ದಲೈಲಾಮರನ್ನು ಭೇಟಿ ಮಾಡಿದ ವೇಳೆ ಶಾಸಕರನ್ನು ತುಂಬು ಹೃದಯದಿಂದ ಆಶೀರ್ವದಿಸಿ, ನಿಮ್ಮ ಭವಿಷ್ಯ ಉಜ್ವಲವಾಗಿ ಬೆಳಗಲಿ ಎಂದು ಹಾರೈಸಿದರು. ನಂತರ ಧರ್ಮ ಗುರುಗಳೊಂದಿಗೆ ಗಂಟೆಗೂ ಹೆಚ್ಚು ಕಾಲ ಹರೀಶ್‌ಗೌಡ ಪ್ರಾರ್ಥನಾ ಸಭೆಯಲ್ಲಿ ಭಾಗವಹಿಸಿದರು.

ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಧರ್ಮ ಗುರುಗಳ ಭೇಟಿ ಮತ್ತು ನೀಡಿದ ಆಶೀರ್ವಾದ ನನ್ನ ಮನಸನ್ನು ಉಲ್ಲಸಿತಗೊಳಿಸಿದೆ. ಅವರಿಂದ ಸಕಾರಾತ್ಮಕ ಶಕ್ತಿಗಳನ್ನು ಪಡೆದಿದ್ದೇನೆ. ತಾಯಿ ನಾಡಿಗಾಗಿ ಶಾಂತಿಯುತವಾಗಿ ಹಲವು ದಶಕಗಳಿಂದ ಹೋರಾಡುತ್ತಿರುವ ಟಿಬೆಟಿಯನ್ನರಿಗೆ ಭಾರತ ಬೆನ್ನೆಲುಬಾಗಿ ನಿಂತಿದೆ. ಅವರ ಹೋರಾಟಕ್ಕೆ ಶೀಘ್ರ ಫಲ ಸಿಗಲಿ ಎಂದು ಆಶಿಸುತ್ತೇನೆ ಎಂದರು. ಈ ವೇಳೆ ಟಿಬೆಟಿಯನ್ ಪುನರ್ವಸತಿ ಕೇಂದ್ರದ ಅಧಿಕಾರಿಗಳು ಮತ್ತು ಟಿಬೆಟಿಯನ್ ನಿವಾಸಿಗಳು ಹಾಜರಿದ್ದರು.



ಟಿಬೆಟಿಯನ್ ಧರ್ಮಗುರು 14ನೇ ದಲೈಲಾಮರನ್ನು ಶಾಸಕ ಜಿ.ಡಿ.ಹರೀಶ್‌ಗೌಡ ಭೇಟಿ ಮಾಡಿ ಆಶೀರ್ವಾದ ಪಡೆದರು.

ನಾಮಧಾರಿ ಸಮುದಾಯವನ್ನು '2ಎ'ಗೆ ಸೇರಿಸಲು ಪ್ರಯತ್ನ

ಕೆ.ಆರ್.ನಗರ, ಫೆ.16– ನಾಮಧಾರಿ ಸಮುದಾಯದ ಬಹುದಿನಗಳ ಬೇಡಿಕೆಯಂತೆ ಅವರನ್ನು ಪ್ರವರ್ಗ '2ಎ' ಮೀಸಲಾತಿ ಪಟ್ಟಿಗೆ ಸೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಿದ್ದು, ಈ ವಿಚಾರದಲ್ಲಿ ಸಮಾಜದ ಮುಖಂಡರು ನನ್ನೊಂದಿಗೆ ಕೈ ಜೋಡಿಸಬೇಕು ಎಂದು ಶಾಸಕ ಡಿ.ರವಿಶಂಕರ್ ಮನವಿ ಮಾಡಿದರು.

ಪಟ್ಟಣದ ಅಖಿಲ ನಾಮಧಾರಿಗೌಡ ಸಮುದಾಯ ಭವನದಲ್ಲಿ ನಡೆದ ಶಾಸಕರ ಸನ್ಮಾನ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮುಂದಿನ ದಿನಗಳಲ್ಲಿ ಕೆ.ಆರ್.ನಗರ ಕ್ಷೇತ್ರದ ನಾಮಧಾರಿ ಸಮಾಜದ ಮುಖಂಡರೊಡಗೂಡಿ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳನ್ನು ಭೇಟಿಯಾಗಿ ಈ ಸಂಬಂಧ ಮನವಿ ಸಲ್ಲಿಸುವುದಾಗಿ ತಿಳಿಸಿದರು.

ಚುನಾವಣೆಯಲ್ಲಿ ಕ್ಷೇತ್ರದ ನಾಮಧಾರಿ ಸಮುದಾಯದ ಮತದಾರರು ನನ್ನನ್ನು ಬೆಂಬಲಿಸಿ ಶಾಸಕನಾಗಲು ಹರಸಿ ಆಶೀರ್ವದಿಸಿದ್ದು, ಇದನ್ನು ಎಂದಿಗೂ ಮರೆಯುವುದಿಲ್ಲ. ನೀವು ಕಳೆದ ಹಲವು ದಶಕಗಳಿಂದ ಉತ್ತಮ ಕೆಲಸ ಮಾಡುತ್ತಿದ್ದು ಇದಕ್ಕೆ ನನ್ನ ಬೆಂಬಲ ಸದಾ ಇರುತ್ತದೆ ಎಂದರು.



ಕಾರ್ಯಕ್ರಮದಲ್ಲಿ ಶಾಸಕ ಡಿ.ರವಿಶಂಕರ್ ಅವರನ್ನು ಸನ್ಮಾನಿಸಲಾಯಿತು.

ಸಮಾಜದವರು ನೀಡಿರುವ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು. ಭವಿಷ್ಯದಲ್ಲಿ ನೀವು ಕೈಗೊಳ್ಳುವ ಚಟುವಟಿಕೆಗಳಿಗೆ ಸರ್ಕಾರದಿಂದ ಅಗತ್ಯ ಅನುದಾನ ಕೊಡಿಸುವುದರೊಂದಿಗೆ ಶಾಸಕರ ನಿಧಿಯಿಂದಲೂ ಸಹಕಾರ ನೀಡುವುದಾಗಿ ಪ್ರಕಟಿಸಿದರು.

ನಾಮಧಾರಿಗೌಡ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ ನಾನು ಈ ಹಿಂದೆ 15 ಲಕ್ಷವನ್ನು ಕೊಡಿಸಿದ್ದು, ಈಗಲೂ ಹೆಚ್ಚುವರಿ ಕಟ್ಟಡ ಮತ್ತು ಶೌಚಾಲಯ ನಿರ್ಮಾಣಕ್ಕೆ ಮತ್ತಷ್ಟು ಅನುದಾನ ಕೊಡಿಸುತ್ತೇನೆ ಎಂದು ಭರವಸೆ ನೀಡಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ನಾಮಧಾರಿಗೌಡ ಸಮಾಜದವರಿಗೆ ಆದ್ಯತೆ ಮೇರೆಗೆ ಅವಕಾಶ ನೀಡುವುದಾಗಿ ಹೇಳಿದರಲ್ಲದೆ ಈಗಾಗಲೇ ತಾಲೂಕು ಮಹಿಳಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನವನ್ನು ಸಮಾಜದ ಲತಾ ಅವರಿಗೆ ನೀಡಿದ್ದು, ಜೊತೆಗೆ ಈಗ ಆಶ್ರಯ ಸಮಿತಿ ಸದಸ್ಯರನ್ನಾಗಿ ಸಮಂತ್ ಅವರನ್ನು ನೇಮಕ ಮಾಡಲಾಗಿದೆ ಎಂದರು.

ಇದೇ ವೇಳೆ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಶಾಸಕ ಡಿ.ರವಿಶಂಕರ್ ಅವರನ್ನು ಸನ್ಮಾನಿಸಲಾಯಿತು. ಅಖಿಲ ನಾಮಧಾರಿಗೌಡ ಕೇಂದ್ರ ಸಮಿತಿ ಅಧ್ಯಕ್ಷ ಪಿ.ಚನ್ನರೇವಣ್ಣ, ತಾಲೂಕು ಘಟಕದ ಅಧ್ಯಕ್ಷ ಕೆ.ಆರ್.ಅಶೋಕ್ ಕುಮಾರ್, ಸಂಘದ ಕಾರ್ಯದರ್ಶಿ ಎಂ.ಆರ್. ಪುಟ್ಟರಾಜು, ನಿರ್ದೇಶಕ ಪುರುಷೋತ್ತಮ, ಪುರಸಭೆ ಮಾಜಿ ಸದಸ್ಯ ಕೆ.ಆರ್.ಗಿರೀಶ್ ಮಾತನಾಡಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಸ್.ಮಹೇಶ್, ನಿರ್ದೇಶಕ ಸೈಯದ್ ಜಾಬೀರ್, ಪುರಸಭೆ ಸದಸ್ಯ ನಟರಾಜು, ತಾಪಂ ಮಾಜಿ ಸದಸ್ಯ ಜಯರಾಮೇಗೌಡ, ಸಮಾಜದ ಮುಖಂಡರಾದ ನೀಲಕಂಠೇಗೌಡ, ದಶರಥ, ಶೋಭಾ, ಮಹೇಶ್, ತಿಮ್ಮೇಗೌಡ, ನಂಜಪ್ಪ, ಸುಧಾಕರ್, ಸಮಂತ್, ತಾಲೂಕು ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ತಾಂಡವಮೂರ್ತಿ ಮತ್ತಿತರರಿದ್ದರು.

ಮಕ್ಕಳಿಗೆ ಆಸ್ತಿಗಿಂತ ಶಿಕ್ಷಣ ಅಗತ್ಯ



ಹುರ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ವಾರ್ಷಿಕೋತ್ಸವ ನಡೆಯಿತು.

ಮಲ್ಕುಂಡಿ, ಫೆ.16– ಮಕ್ಕಳಿಗೆ ಆಸ್ತಿಗಿಂತ ಶಿಕ್ಷಣ ಅಗತ್ಯವಾಗಿದೆ ಎಂದು ಬಿಇಓ ಮಹೇಶ್ ತಿಳಿಸಿದರು.

ಇಲ್ಲಿಗೆ ಸಮೀಪದ ಹುರ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯೆ ಎಲ್ಲಾ ಸಂಪತ್ತಿಗಿಂತ ಬಹಳ ಶ್ರೇಷ್ಠವಾದ ಸಂಪತ್ತು. ಶಿಕ್ಷಣ ಇದ್ದರೆ ಮಾತ್ರ ದೇಶದ ಉತ್ತಮ ಪ್ರಜೆಯಾಗಲು ಸಾಧ್ಯ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಿದಾಗ ಅವರೇ ಎಲ್ಲಾ ಸಂಪತ್ತುಗಳನ್ನು ಪಡೆದುಕೊಳ್ಳುತ್ತಾರೆ. ಸರ್ಕಾರಿ ಶಾಲೆಯಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಎಷ್ಟೋ ಮಂದಿ ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿ ಉನ್ನತ ಮಟ್ಟದಲ್ಲಿದ್ದಾರೆ. ಆದ್ದರಿಂದ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು. ಹಣ ವ್ಯರ್ಥ ಮಾಡಿ ಖಾಸಗಿ ಶಾಲೆಗೆ ಸೇರಿಸುವ ಬದಲು ಸರ್ಕಾರಿ ಶಾಲೆಗೆ ಸೇರಿಸಿದರೆ ಸೌಲಭ್ಯದ ಜೊತೆಗೆ ಉತ್ತಮ ಶಿಕ್ಷಣ ದೊರೆಯುತ್ತದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಪೂರ್ಣಿಮಾ, ಲತಾ, ಲೋಹಿತ್, ಅಶ್ವತ್, ಪಾಂಶುಪಾಲರಾದ ಮಂಜುನಾಥ್, ಆಶಾ, ನಿಲಯ ಪಾಲಕ ಮುರುಳೀಧರ್, ಶಿಕ್ಷಕ ವೃಂದ ಹಾಜರಿದ್ದರು.

ಗೋಣಹಳ್ಳಿ ಮಾರಮ್ಮ ಜಾತ್ರಾ ಮಹೋತ್ಸವ

ಕಂಪಲಾಪುರ, ಫೆ.16– ಗ್ರಾಮದ ಮಡಿವಾಳ ಬೀದಿಯಲ್ಲಿರುವ ಗೋಣಹಳ್ಳಿ ಮಾರಮ್ಮ ದೇವಾಲಯದ 5ನೇ ವರ್ಷದ ಜಾತ್ರಾ ಮಹೋತ್ಸವ ಫೆ.18 ರಂದು ನಡೆಯಲಿದೆ. ಅಂದು ಬೆಳಗ್ಗೆ 6 ಗಂಟೆಗೆ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಮಧ್ಯಾಹ್ನ 12.30ಕ್ಕೆ ಮಹಾಮಂಗಳಾರತಿ, 1.30ಕ್ಕೆ ಅನ್ನಸಂತರ್ಪಣೆ, ಸಂಜೆ 6 ಗಂಟೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿಯ ಅದ್ಧೂರಿ ಮೆರವಣಿಗೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಜಲಾನಯನ ಯಾತ್ರೆಗೆ ಅದ್ಧೂರಿ ಸ್ವಾಗತ



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿ ಗ್ರಾಮಕ್ಕೆ ಆಗಮಿಸಿದ ಜಲಾನಯನ ಯಾತ್ರೆಯನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ವಿಜೃಂಭಣೆಯ ಶ್ರೀಸಂತೆ ಮಾಸ್ತಮ್ಮನವರ ಕೊಂಡೋತ್ಸವ

ಸರಗೂರು, ಫೆ.16– ಪಟ್ಟಣದಲ್ಲಿ ಸಂತೆ ಮಾಸ್ತಮ್ಮನವರ ಕೊಂಡೋತ್ಸವ ವಿಜೃಂಭಣೆಯಿಂದ ನೆರವೇರಿತು. ಈ ವೇಳೆ ಭಕ್ತರು ಕೊಂಡ ಹಾಯುವ ಮೂಲಕ ಹರಕೆ ತೀರಿಸಿದರು.

ಭೀಮನಕೊಲ್ಲಿ ಶ್ರೀಮಹದೇಶ್ವರ ಸ್ವಾಮಿ ಜಾತ್ರೆ ಮುಗಿದ ಮಾರನೇ ದಿನ ಸರಗೂರಿನ ಸಂತೆಮಾಳದಲ್ಲಿ ತಂಗಳ ಜಾತ್ರೆ ಎಂದೇ ಕರೆಯುವ ಸಂತೆ ಮಾಸ್ತಮ್ಮನವರ ಕೊಂಡೋತ್ಸವ ಪ್ರತಿ ವರ್ಷದಂತೆ ವಿಜೃಂಭಣೆಯಿಂದ ನಡೆಯಿತು. ಕೊಂಡೋತ್ಸವ ಅಂಗವಾಗಿ ದೇವಾಲಯವನ್ನು ತಳಿರು ತೋರಣ, ರಂಗೋಲಿ, ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು ದೇವಾಲಯದಲ್ಲಿ ಮುಂಜಾನೆಯಿಂದಲೇ ಹೋಮ–ಹವನ, ಗಣಪತಿ ಹೋಮ ಪುಣ್ಯಾಹ, ಕಳಸ ಪ್ರತಿಷ್ಠಾಪನೆ, ನವಗ್ರಹ ಹೋಮ, ದುರ್ಗಾ ಹೋಮ, ಕುಂಕುಮಾರ್ಚನೆ ಸೇರಿದಂತೆ ವಿಶೇಷ ಪೂಜೆ ನಡೆದವು.



ಭಕ್ತರು ಕೊಂಡ ಹಾಯ್ದು ಹರಕೆ ತೀರಿಸಿದರು.

ಬಳಿಕ ಕಪಿಲಾ ನದಿಗೆ ತೆರಳಿ ಪೂರ್ಣಕುಂಭ ಕಳಸದೊಂದಿಗೆ ಶಿವ ಪಾರ್ವತಿ ಬೆಳ್ಳಿ ಉತ್ಸವಮೂರ್ತಿಗೆ ವಿಶೇಶ ಪೂಜೆ ಸಲ್ಲಿಸಿ ಮಂಗಳವಾದ್ಯ, ಸತ್ತಿಗೆ, ವೀರಗಾಸೆಯೊಂದಿಗೆ ಮೆರವಣಿಗೆ ನಡೆಸಿ ದೇವಾಲಯದ ಸುತ್ತ ಪ್ರದಕ್ಷಿಣೆ ಹಾಕಿ ದೇವರಿಗೆ ಬೆಳ್ಳಿ ಮುಖವಾಡ ಧರಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಹರಕೆ ಹೊತ್ತ ಭಕ್ತರು ಈಡುಗಾಯಿ ಹೊಡೆದು ಸೇವೆ ಸಲ್ಲಿಸಿದರೇ, ನೂರಾರು ಭಕ್ತರು ಕೆಂಡದ ಮೇಲೆ ನಡೆದು ಭಕ್ತಿ ಸಮರ್ಪಿಸಿದರು. ದೇವಸ್ಥಾನದ ಅರ್ಚಕರಾದ ರವಿಶಾಸ್ತ್ರಿ, ಸುಬ್ಬಣ್ಣ, ವಿರೂಪಾಕ್ಷ ಪೂಜೆ ನೆರವೇರಿಸಿದರು. ಭಕ್ತರಿಗೆ ಅನ್ನದಾನ ಹಮ್ಮಿಕೊಳ್ಳಲಾಗಿತ್ತು.

ವಿದ್ಯಾರ್ಥಿಗಳ ಪ್ರತಿಭೆಗೆ ವಾರ್ಷಿಕೋತ್ಸವ ಉತ್ತಮ ವೇದಿಕೆ



ಖೋಖೋ ವಿಶ್ವಕಪ್ ವಿಜೇತೆ ಚೈತ್ರಾ ಅವರನ್ನು ಸನ್ಮಾನಿಸಲಾಯಿತು.

ನಂಜನಗೂಡು, ಫೆ.16– ವಿದ್ಯಾರ್ಥಿಗಳಲ್ಲಿ ಸಂಕುಚಿತ, ಕೀಳರಿಮೆ ಭಾವನೆ ಹೋಗಲಾಡಿಸಲು ಹಾಗೂ ವಿದ್ಯಾರ್ಥಿಗಳ ಪ್ರತಿಭೆ ಪ್ರದರ್ಶನಕ್ಕೆ ಶಾಲಾ ವಾರ್ಷಿಕೋತ್ಸವ ಉತ್ತಮ ವೇದಿಕೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್ ತಿಳಿಸಿದರು.

ಭಾನುವಾರ ನಗರದ ಶ್ರೀಗುರು ವಿದ್ಯಾವಿಕಾಸ ಶಾಲೆ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಯಲ್ಲೂ ಭಾಗವಹಿಸಬೇಕು. ಆಗಲೇ ಪರಿಪೂರ್ಣ ಶಿಕ್ಷಣ ದೊರಕಲು ಸಾಧ್ಯ. ಶಿಕ್ಷಕರು ವಿದ್ಯಾರ್ಥಿಗಳ ಪ್ರತಿಭೆ ಗುರುತಿಸಿ, ವೇದಿಕೆ ಕಲ್ಪಿಸಿ ಪ್ರೋತ್ಸಾಹ ನೀಡುವ ಮೂಲಕ ಸಾಧನೆಗೆ ಸಹಕಾರ ನೀಡಬೇಕು. ವಿದ್ಯಾರ್ಥಿಗಳು ಸಹ ಸಂಕುಚಿತ ಮನೋಭಾವ ಬಿಟ್ಟು, ಪ್ರಮುಖವಾಗಿ ಮೊಬೈಲ್ ಬಳಕೆಯಿಂದ ದೂರವಿದ್ದು ಸಮಯ ಪಾಲನೆ, ಶಿಸ್ತು, ಕಠಿಣ ಪರಿಶ್ರಮದಿಂದ ಉತ್ತಮ ಗುರಿ ಹೊಂದಿ ಸಾಧನೆಗೆ ಮುಂದಾಗಬೇಕು. ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಸಾಂಸ್ಕೃತಿಕ ಚಟುವಟಿಕೆ ಮತ್ತು ಕ್ರೀಡಾ ಚಟುವಟಿಕೆಯಲ್ಲೂ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ನಗರಸಭಾ ಸದಸ್ಯ ಮಹೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಖೋಖೋ ಆಟಗಾರ್ತಿ ಚೈತ್ರ ಅವರನ್ನು ಸನ್ಮಾನಿಸಲಾಯಿತು. ವಿವಿಧ ಪಂದ್ಯಾವಳಿಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಶಾಲೆ ಅಧ್ಯಕ್ಷ ಸೋಮಶೇಖರ ಸ್ವಾಮೀಜಿ ಆಶೀರ್ವಚನ ನೀಡಿದರು.

ಸಮಾರಂಭದಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸೋಮಶೇಖರ್, ಮುಖ್ಯ ಶಿಕ್ಷಕರಾದ ರಾಜಪ್ಪ, ಸಹ ಶಿಕ್ಷಕರಾದ ಚಂದ್ರಶೇಖರ್, ಮಹದೇವಸ್ವಾಮಿ, ಕುಮಾರಸ್ವಾಮಿ, ಸೇರಿದಂತೆ ವಿದ್ಯಾರ್ಥಿಗಳು ಮತ್ತು ಶಿಕ್ಷಕ ವೃಂದದವರು, ಪೋಷಕರು ಉಪಸ್ಥಿತರಿದ್ದರು.

ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆ

11 ಸ್ಥಾನ ಗೆದ್ದು ಡಣಾಯಕನಪುರ ಮಲ್ಲಣ್ಣ ಬಣದ ಮೇಲುಗೈ

ಕೇವಲ 1 ಸ್ಥಾನ ಗೆದ್ದ ತಿರುಮಕೂಡಲು ಸ್ವಾಮಿನಾಥನ್ ಬಣ



ತಿ.ನರಸೀಪುರ ಕಸಬಾ ಪಿಎಸಿಎಸ್ ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ಡಣಾಯಕನಪುರ ಮಲ್ಲಣ್ಣ ತಂಡದ ಸದಸ್ಯರು ವಿಜಯೋತ್ಸವ ಆಚರಿಸಿದರು.

ತಿ.ನರಸೀಪುರ, ಫೆ.16– ತಾಲೂಕಿನ ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ಡಣಾಯಕನಪುರ ಮಲ್ಲಣ್ಣ ಬಣ ಮೇಲುಗೈ ಸಾಧಿಸಿದ್ದು, 11 ಸ್ಥಾನಗಳನ್ನು ಗೆಲ್ಲುವ ಮೂಲಕ ಭರ್ಜರಿ ಜಯ ಸಾಧಿಸಿದೆ.

ಎದುರಾಳಿ ತಂಡದ ತಿರುಮಕೂಡಲು ಸ್ವಾಮಿನಾಥನ್ ಬಣ ಕೇವಲ ಒಂದೇ ಒಂದು ಸ್ಥಾನ ಗೆಲ್ಲುವ ಮೂಲಕ ಭಾರೀ ಮುಖಭಂಗ ಅನುಭವಿಸಿದೆ. ಸ್ವತಃ ಸ್ವಾಮಿನಾಥನ್ ಕೇವಲ 124 ಮತ ಪಡೆಯುವ ಮೂಲಕ ಸೋಲನುಭವಿಸಿದ್ದಾರೆ. ಒಟ್ಟು 12 ಸದಸ್ಯ ಬಲದ ಸಹಕಾರ ಸಂಘಕ್ಕೆ ತಿರುಮಕೂಡಲು ನಾಗಮ್ಮ, ನಾಗರತ್ನಮ್ಮ ಹಾಗೂ ಪ್ರಕಾಶ್ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಉಳಿದ 9 ಮಂದಿ ನಿರ್ದೇಶಕರ ಆಯ್ಕೆಗಾಗಿ ಸಹಕಾರ ಸಂಘದ ಆವರಣದಲ್ಲಿ ಭಾನುವಾರ ಚುನಾವಣೆ ನಡೆಯಿತು.

ಒಟ್ಟು 642 ಮತದಾರರ ಪೈಕಿ 609 ಮತದಾರರು ತಮ್ಮ ಹಕ್ಕು ಚಲಾಯಿಸಿದರು. 65 ಮತಗಳು ತಿರಸ್ಕೃತಗೊಂಡವು. ಬೆಳಗ್ಗೆ 9 ಗಂಟೆಯಿಂದ ಸಾಯಂಕಾಲ 4 ಗಂಟೆವರೆಗೆ ಮತದಾನಕ್ಕೆ ಅವಕಾಶ ಕಲ್ಪಿಸಿಕೊಡಲಾಗಿತ್ತು. ಸಂಜೆ 4ರ ನಂತರ ಮತ ಎಣಿಕೆ ಆರಂಭವಾಗಿ ರಾತ್ರಿ 9.30 ಗಂಟೆ ವೇಳೆಗೆ ಮತಗಳ ಎಣಿಕೆ ಮುಕ್ತಾಯವಾಗಿ ಫಲಿತಾಂಶ ಪ್ರಕಟಿಸಲಾಯಿತು.


2 ಮತಗಟ್ಟೆಯಲ್ಲಿ ಮತ ಎಣಿಕೆಗೆ ಸ್ವಾಮಿನಾಥನ್ ಬಣ ವಿರೋಧ ವ್ಯಕ್ತಪಡಿಸಿದ್ದರಿಂದ ಒಂದೇ ಮತಗಟ್ಟೆಯಲ್ಲಿ ಮತಗಳ ಎಣಿಕೆ ಕಾರ್ಯ ಆರಂಭಿಸಲಾಯಿತು. ಸಾಲಗಾರರ ಕ್ಷೇತ್ರದಿಂದ ಸ್ಪರ್ಧಿಸಿದ್ದ ಹಾಲಿ ಅಧ್ಯಕ್ಷ ಡಣಾಯಕನಪುರ ಮಲ್ಲಣ್ಣ ಅತಿ ಹೆಚ್ಚು 461 ಮತಗಳನ್ನು ಪಡೆದು ಭರ್ಜರಿ ಹ್ಯಾಟ್ರಿಕ್ ಗೆಲುವು ಸಾಧಿಸಿದರೆ, ಮಲ್ಲಣ್ಣ ಬಣದ ಟಿ.ಸಿ.ಫಣೀಶ್ ಕುಮಾರ್(391), ಎಂ.ಮಹದೇವಯ್ಯ (367), ಬಿ.ಎಂ.ಮಹದೇವಸ್ವಾಮಿ(371), ಮಹಾಲಿಂಗಪ್ಪ (387), ಬಿ.ರಾಘವೇಂದ್ರ(371), ಎನ್.ಶೇಖರ್ (366) ಹಾಗೂ ಬಿ.ಸುಂದರಸ್ವಾಮಿ(387) ಮತ ಪಡೆದು ಗೆಲುವು ಸಾಧಿಸಿದರೆ, ಪಿ.ಸ್ವಾಮಿನಾಥನ್ ಬಣದಿಂದ ಸಾಲಗಾರರ ಕ್ಷೇತ್ರದಿಂದ ಸ್ಪರ್ಧಿಸಿದ್ದ ಬಸವರಾಜು 88 ಮತ ಪಡೆದು ಗೆಲುವು ಸಾಧಿಸಲು ಸಾಧ್ಯವಾಯಿತು. ಇವರ ಪ್ರತಿಸ್ಪರ್ಧಿ ಟಿ.ಎನ್.ಗುರುಪ್ರಸಾದ್ 50 ಮತ ಪಡೆದು 38 ಮತಗಳ ಅಂತರದಿಂದ ಸೋಲನುಭವಿಸಿದರು.

ಉಳಿದಂತೆ ಸಾಲಗಾರರ ಕ್ಷೇತ್ರದಿಂದ ಸ್ಪರ್ಧಿಸಿದ್ದ ಪಿ.ಸ್ವಾಮಿನಾಥನ್ ಬಣದ ಟಿ.ಎಸ್.ಕೃಷ್ಣ(95), ಚಿಕ್ಕೀರೇಗೌಡ (113), ಟೈಲರ್ ಚಂದ್ರು(75), ನಾಗರಾಜಪ್ಪ(ತಾತ) (105), ಆರ್.ಪುಟ್ಟರಾಜು(133), ಎನ್.ಮಹದೇವ(97) ಹಾಗೂ ಎಂ.ರಾಜಾಬುದ್ದಿ 160 ಮತಗಳನ್ನು ಪಡೆದು ಸೋಲನುಭವಿಸಿದರು. ಪಕ್ಷೇತರವಾಗಿ ಸ್ಪರ್ಧಿಸಿದ್ದ ಎನ್.ಲೋಕೇಶ್ 53 ಮತ ಪಡೆದರು.

ಚುನಾವಣಾಧಿಕಾರಿ ಜೆ.ರಮೇಶ್ ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು. ಚುನಾವಣಾ ಫಲಿತಾಂಶ ಪ್ರಕಟಗೊಳ್ಳುತ್ತಿದ್ದಂತೆ ಚುನಾವಣಾ ಕೇಂದ್ರದ ಮುಂದೆ ಜಮಾಯಿಸಿದ್ದ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಈ ವೇಳೆ ಕಸಬಾ ಪಿಎಸಿಎಸ್ ಸಿಇಓ ಶಿವಕುಮಾರ್, ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ಅಂಗಡಿ ನಾಗೇಶ್, ತಿರುಮಕೂಡಲು ಲಕ್ಷ್ಮಣ, ತಾಪಂ ಮಾಜಿ ಸದಸ್ಯ ಚಂದ್ರಶೇಖರ್, ಡೈರಿ ಮಾಜಿ ಅಧ್ಯಕ್ಷ ಮಂಟೇಲಿಂಗಪ್ಪ, ನಾಗರಾಜು, ಪರಶಿವ, ಕಿರಗಸೂರು ಗ್ರಾಪಂ ಅಧ್ಯಕ್ಷ ನಿಂಗರಾಜು, ಮಾಜಿ ಅಧ್ಯಕ್ಷ ರವಿ, ಶಿವರಾಜ್, ಗುತ್ತಿಗೆದಾರ ಬಸವರಾಜು, ಸಾಲೂರು ಸ್ವಾಮಿ, ಬಜ್ಜಿ ನಿಂಗಪ್ಪ, ಮೂಗೂರು ಕುಮಾರ್ ಸ್ವಾಮಿ, ನಿಲಸೋಗೆ ಪ್ರಸಾದ್, ಚೇತನ್ ಸೇರಿದಂತೆ ಇನ್ನಿತರರಿದ್ದರು.

ವೀರ ಮಡಿವಾಳ ಸಮಾಜದ ಪದಾಧಿಕಾರಿಗಳ ಆಯ್ಕೆ



ವೀರ ಮಡಿವಾಳ ಸಮಾಜದ ಪದಾಧಿಕಾರಿಗಳ ಆಯ್ಕೆ ನಡೆಯಿತು.

ಹೆಚ್.ಡಿ.ಕೋಟೆ, ಫೆ.16– ತಾಲೂಕು ವೀರ ಮಡಿವಾಳ ಸಮಾಜದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ತಾಲೂಕು ಅಧ್ಯಕ್ಷರಾಗಿ ರಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಬಿ.ಸಂತೋಷ್ ಕುಮಾರ್, ಖಜಾಂಚಿ ಮಹದೇವ ಶೆಟ್ಟಿ, ಗೌರವಾಧ್ಯಕ್ಷ ಬಸವರಾಜ ಶೆಟ್ಟಿ, ಉಪಾಧ್ಯಕ್ಷ ವೆಂಕಟರಾಜು, ಸಹ ಕಾರ್ಯದರ್ಶಿ ರಾಘವೇಂದ್ರ, ನಿರ್ದೇಶಕರಾಗಿ ಕೆಂಪಶೆಟ್ಟಿ, ಬಸವರಾಜು, ಆಟೋ ರಮೇಶ್, ಶಿವಣ್ಣ ಶೆಟ್ಟಿ, ಬಸವರಾಜು, ಉಮೇಶ್, ವಸಂತ ಕುಮಾರ್, ಸಿದ್ದರಾಜು, ಶಿವು, ಕುಮಾರ್, ಭೈರಶೆಟ್ಟಿ, ಚಂದ್ರು, ಸ್ವಾಮಿ, ಲಕ್ಷ್ಮಣ್, ಮಹದೇವ ಶೆಟ್ಟಿ ಆಯ್ಕೆಯಾಗಿದ್ದಾರೆ. ವೀರ ಮಡಿವಾಳ ಸಮಾಜದ ತಾಲೂಕು ಅಧ್ಯಕ್ಷ ರಂಗಸ್ವಾಮಿ ಮಾತನಾಡಿ, ತಾಲೂಕಿನಲ್ಲಿ ನಮ್ಮ ಸಮುದಾಯ ಅತ್ಯಂತ ಕಡಿಮೆ ಸಂಖ್ಯೆಯಲ್ಲಿದ್ದಾರೆ.ತಾಲೂಕಿನಲ್ಲಿ ನಮ್ಮ ಸಮುದಾಯ ಅತ್ಯಂತ ಕಡಿಮೆ ಸಂಖ್ಯೆಯಲ್ಲಿದ್ದಾರೆ. ಆದರೂ ಶಾಸಕ ಅನಿಲ್ ನಮ್ಮನ್ನು ಗುರುತಿಸಿ ಸಮುದಾಯ ಭವನಕ್ಕೆ ನಿವೇಶನ ನೀಡಿ 25 ಲಕ್ಷ ರೂ. ಅನುದಾನ ನೀಡಿದ್ದಾರೆ. ಸದ್ಯದಲ್ಲೇ ಸಮುದಾಯ ಭವನ ನಿರ್ಮಿಸಲು ಶ್ರಮಿಸಲಾಗುತ್ತದೆ ಎಂದರು.

ಮೈಸೂರು ಮಿತ್ರ

ಕಾವೇರಿ, ಕಬಿನಿ ಕುಡಿಯುವ ನೀರಿನ ಯೋಜನಾ ಸ್ಥಳಕ್ಕೆ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಭೇಟಿ

ಬಿದರಗೂಡು ಕುಡಿಯುವ ನೀರಿನ ಯೋಜನೆ 2 ತಿಂಗಳಲ್ಲಿ ಪೂರ್ಣ

60 ಎಂಎಲ್‌ಡಿ ಹೆಚ್ಚುವರಿ ನೀರು ಸರಬರಾಜು


ಮೈಸೂರಿನ ಬಿದರಗೂಡು ಕುಡಿಯುವ ನೀರಿನ ಯೋಜನಾ ಸ್ಥಳಕ್ಕೆ ಭಾನುವಾರ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪರಿಶೀಲನೆ ನಡೆಸಿದರು. ಶಾಸಕ ಜಿ.ಟಿ.ದೇವೇಗೌಡ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ, ನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಫೆ.16(ಬಿಎಲ್‌ಯು)– ಮೈಸೂರಿನ ಬಿದರಗೂಡು ಕಬಿನಿ ಕುಡಿಯುವ ನೀರಿನ ಉನ್ನತೀಕರಿಸುವ ಯೋಜನೆ ಎರಡು ತಿಂಗಳಲ್ಲಿ ಪೂರ್ಣಗೊಳ್ಳಲಿದ್ದು, 60 ಎಂಎಲ್‌ಡಿ ನೀರನ್ನು ಮೈಸೂರಿಗೆ ಸರಬರಾಜು ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ ನೀಡಿದರು.

ಬಿದರಗೂಡು ಹಾಗೂ ಉಂಡವಾಡಿ ಯೋಜನಾ ಸ್ಥಳಕ್ಕೆ ಅಧಿಕಾರಿಗಳ ಜೊತೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಉನ್ನತೀಕರಿಸುವ ಈ ಯೋಜನೆಯಿಂದ 60 ರಿಂದ 120 ಎಂಎಲ್‌ಡಿ ನೀರು ದೊರೆಯಲಿದೆ ಎಂದು ಹೇಳಿದರು.

ಈಗಾಗಲೇ 60 ಎಂಎಲ್‌ಡಿ ನೀರು ಸರಬರಾಜು ಮಾಡಲಾಗುತ್ತಿದ್ದು, ಇನ್ನೆರಡು ತಿಂಗಳಲ್ಲಿ ಹೆಚ್ಚುವರಿಯಾಗಿ 60 ಎಂಎಲ್‌ಡಿ ನೀರು ದೊರೆಯಲಿದೆ. ಒಟ್ಟಾರೆ 180 ಎಂಎಲ್‌ಡಿ ಸಾಮರ್ಥ್ಯದ ಬಿದರಗೂಡಿನಲ್ಲಿ ಮೊದಲ ಹಾಗೂ ಎರಡನೇ ಹಂತದ ಯೋಜನೆಯಲ್ಲಿ 120 ಎಂಎಲ್‌ಡಿ ನೀರು ಸರಬರಾಜು ಮಾಡಲಾಗುತ್ತದೆ ಎಂದರು.

ಮೈಸೂರಿನ ಕೃಷ್ಣರಾಜ, ಚಾಮರಾಜ ಮಾತ್ರವಲ್ಲದೆ ಚಾಮುಂಡೇಶ್ವರಿ ಹಾಗೂ ವರುಣ ವಿಧಾನಸಭಾ ಕ್ಷೇತ್ರದ ಬಡಾವಣೆಗಳಿಗೆ ಕೂಡ ಸಮರ್ಪಕವಾಗಿ ನೀರು ಸರಬರಾಜು ಮಾಡಲಾಗುವುದು ಎಂದರು.

ಮೈಸೂರಿನಲ್ಲಿ 2011ರ ಜನಗಣತಿಯಂತೆ 9,20,550 ಜನಸಂಖ್ಯೆ ಇದ್ದು, ಹಾಲಿ 13,00,000 ಜನಸಂಖ್ಯೆ ಇದೆ. ಪ್ರಸ್ತುತ ಬೆಳಗೊಳ, ಹೊಂಗಳ್ಳಿ, ಮೇಳಾಪುರ ಮತ್ತು ಕಬಿನಿ ಮೂಲ ಸ್ಥಾವರಗಳಿಂದ ಮೈಸೂರು ಸೇರಿದಂತೆ ಸುತ್ತಮುತ್ತಲ ಗ್ರಾಮಗಳಿಗೆ 306 ಎಂಎಲ್‌ಡಿ ನೀರು ಸರಬರಾಜಾಗುತ್ತಿದೆ.

ಮುಡಾದಿಂದ ರಚಿಸಿರುವ ಬಡಾವಣೆಗಳಲ್ಲಿ 50,613 ನಿವೇಶನಗಳಿದ್ದು, ಮುಡಾದಿಂದ ಅನುಮೋದನೆ ಗೊಂಡಿರುವ ಬಡಾವಣೆಗಳಲ್ಲಿ 53,163 ನಿವೇಶನಗಳು ಸೇರಿ ಒಟ್ಟು 1,03,220 ನಿವೇಶನಗಳಿವೆ. ವಿಶ್ವ ಸಂಸ್ಥೆಯ ಮಾರ್ಗಸೂಚನೆಯಂತೆ ಒಬ್ಬ ವ್ಯಕ್ತಿಗೆ 1.35 ಎಲ್‌ಪಿಸಿಡಿ ಕುಡಿಯುವ ನೀರು ನೀಡಬೇಕು. ಇದನ್ನು ಮೈಸೂರು ನಗರಪಾಲಿಕೆ ಪಾಲಿಸುತ್ತಿದೆ ಎಂದು ಡಾ.ಮಹದೇವಪ್ಪ ವಿವರಿಸಿದರು.

ಉನ್ನತೀಕರಿಸಿರುವ ಕಬಿನಿ ಯೋಜನೆಯಿಂದ ಕಡಕೊಳ ಪಟ್ಟಣ ಪಂಚಾಯಿತಿ, ಶ್ರೀರಾಂಪುರ ಪಟ್ಟಣ ಪಂಚಾಯಿತಿ, ಭಾಗಶಃ ಬೋಗಾದಿ ಪಟ್ಟಣ ಪಂಚಾಯಿತಿ, ಕೆಹೆಚ್ ಬಿ ಬಡಾವಣೆಗಳಿಗೆ ನೀರು ಸರಬರಾಜು ಮಾಡಬಹುದು ಎಂದು ಹೇಳಿದರು.

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ, ನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಈ ವೇಳೆ ಹಾಜರಿದ್ದರು.

ಕೆಆರ್‌ಎಸ್‌ನಲ್ಲಿ 60 ಅಡಿ ನೀರಿದ್ದರೂ ಸರಬರಾಜು ಮಾಡಬಹುದು

ಮೈಸೂರಿನ ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಅಭಾವ ಉಂಟಾಗಿ ಡ್ಯಾಂನಲ್ಲಿ 50 ರಿಂದ 60 ಅಡಿ ಇದ್ದರೂ ನೀರನ್ನು ಮೇಲೆತ್ತಿ ಮೈಸೂರಿಗೆ ಸರಬರಾಜು ಮಾಡಲಾಗುವುದು ಎಂದು ಡಾ.ಮಹದೇವಪ್ಪ ತಿಳಿಸಿದರು. ಹಳೇ ಉಂಡುವಾಡಿಯಲ್ಲಿ ಜಾಕ್‌ವೆಲ್‌ನಿಂದ ನೀರೆತ್ತುವ ಕಾಮಗಾರಿ ನಡೆಯುತ್ತಿದ್ದು, ವರ್ಷಾಂತ್ಯಕ್ಕೆ ಯೋಜನೆ ಪೂರ್ಣಗೊಳ್ಳಲಿದೆ ಎಂದು ಹೇಳಿದರು. ಕುಡಿಯುವ ನೀರಿನ ಶುಲ್ಕ ಪಾವತಿ ಸಂಬಂಧ ನಗರಪಾಲಿಕೆ ಅಭಿಯಾನ ಆರಂಭಿಸಲಿದೆ. ಒಂದೇ ಬಾರಿಗೆ ಅಸಲು ಹಣ ಪಾವತಿ ಮಾಡಿದರೆ ಬಡ್ಡಿ ಮನ್ನಾ ಮಾಡಲಾಗುವುದು. ಆದರೆ ನೀರಿನ ಶುಲ್ಕವನ್ನು ಕಂತಿನಲ್ಲಿ ಪಾವತಿಸಲು ಅವಕಾಶವಿಲ್ಲ ಎಂದು ತಿಳಿಸಿದರು. ಹಾಲಿ ಇರುವ ಕುಡಿಯುವ ನೀರಿನ ಯೋಜನೆ ಜೊತೆಗೆ ಉಂಡುವಾಡಿ ಹಾಗೂ ಬಿದರಗೂಡು ಯೋಜನೆ ಪೂರ್ಣಗೊಂಡರೆ ಮೈಸೂರು ನಗರಕ್ಕೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಮಾಡಬಹುದು. ಇದರಿಂದ ಭವಿಷ್ಯದಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉದ್ಭವಿಸುವುದಿಲ್ಲ ಎಂದು ಡಾ.ಮಹದೇವಪ್ಪ ಹೇಳಿದರು.

ಉಂಡುವಾಡಿ ಯೋಜನೆ ವರ್ಷಾಂತ್ಯಕ್ಕೆ ಪೂರ್ಣ–150 ಎಂಎಲ್‌ಡಿ ನೀರು ಲಭ್ಯ

ಹಳೇ ಉಂಡುವಾಡಿ ಕಾವೇರಿ ಕುಡಿಯುವ ನೀರು ಯೋಜನೆ ವರ್ಷಾಂತ್ಯಕ್ಕೆ ಪೂರ್ಣಗೊಳ್ಳಲಿದ್ದು, ಇದರಿಂದ 150 ಎಂಎಲ್‌ಡಿ ನೀರು ಸರಬರಾಜು ಮಾಡಲಾಗುವುದು ಎಂದು ಡಾ.ಮಹದೇವಪ್ಪ ಭರವಸೆ ನೀಡಿದರು.

ವಿಜಯನಗರದಲ್ಲಿರುವ ಕೇಂದ್ರ ಬೃಹತ್ ಜಲಸಂಗ್ರಹಾಗಾರಕ್ಕೆ ಸಂಪರ್ಕ ಕಲ್ಪಿಸಿ ಭಾಗಶಃ ಚಾಮರಾಜ ಮತ್ತು ಕೃಷ್ಣರಾಜ ವಿಧಾನಸಭಾ ಕ್ಷೇತ್ರಗಳಿಗೆ ನೀರು ಒದಗಿಸಲಾಗುತ್ತದೆ. ಯಾದವಗಿರಿಯಲ್ಲಿರುವ ಹೆಚ್‌ಬಿಆರ್‌ನಿಂದ ಭಾಗಶಃ ಚಾಮರಾಜ, ಕೃಷ್ಣರಾಜ ಮತ್ತು ನರಸಿಂಹರಾಜ ವಿಧಾನಸಭಾ ಕ್ಷೇತ್ರಗಳಿಗೆ ನೀರು ಒದಗಿಸಲಾಗುವುದು ಎಂದು ಹೇಳಿದರು.

ಇದಲ್ಲದೆ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಹೂಟಗಳ್ಳಿ ನಗರಸಭೆ ಮತ್ತು ಭಾಗಶಃ ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಮುಡಾ ವ್ಯಾಪ್ತಿಯ ವಿಜಯನಗರ 3ನೇ ಹಂತ ಮತ್ತು 4ನೇ ಹಂತ ಹಾಗೂ ಸುತ್ತಮುತ್ತಲು ಮುಡಾದಿಂದ ಅನುಮೋದನೆ ಗೊಂಡಿರುವ ಖಾಸಗಿ ಬಡಾವಣೆಗಳಿಗೆ ಕೂಡ ಕುಡಿಯುವ ನೀರು ಸರಬರಾಜು ಮಾಡಲಾಗುವುದು ಎಂದು ತಿಳಿಸಿದರು. ಉಂಡುವಾಡಿ ಯೋಜನೆಗೆ 595 ಕೋಟಿ ವೆಚ್ಚವಾಗುತ್ತಿದ್ದು, ಕಾಮಗಾರಿಯನ್ನು ಇನ್ನು 9 ತಿಂಗಳಲ್ಲಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ತಾಕೀತು ಮಾಡಲಾಗಿದೆ ಎಂದು ಡಾ.ಮಹದೇವಪ್ಪ ತಿಳಿಸಿದರು. ಮೈಸೂರಿನಲ್ಲಿ 2055ನೇ ಇಸವಿ ವೇಳೆಗೆ ಲೆಕ್ಕಿಸುವ ಜನಸಂಖ್ಯೆಗೆ 795 ಎಂಎಲ್‌ಡಿ ನೀರಿನ ಬೇಡಿಕೆ ಇರುತ್ತದೆ ಎಂದು ಡಾ.ಮಹದೇವಪ್ಪ ತಿಳಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ತಂಡೆಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಜು ಜೇಮ್ಸ್ ಬಾಂಡ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸನಮ್ ತೇರಿ ಕಸಮ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರಾಜು ಜೇಮ್ಸ್ ಬಾಂಡ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಿದ್ಲಿಂಗು–2 (ಕ)	4 ಪ್ರದರ್ಶನಗಳು
ರಾಜಕಮಲ್	
ವಿದಾಮುಯರ್ಚಿ (ತ)	4 ಪ್ರದರ್ಶನಗಳು
ಸಂಗಂ	
ಛಾವಾ (ಹಿ)	4 ಪ್ರದರ್ಶನಗಳು
ಲಿಡೋ	
ಭುವನಂ ಗಗನಂ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮ್ಯಾಕ್ಸ್ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂಣನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಸುಪ್ರೀಂ ಕೋರ್ಟ್ ಹಿರಿಯ ವಕೀಲ ಬ್ರಿಜೇಶ್ ಕಾಳಪ್ಪ, ಮಾಜಿ ಸಂಸದ ಎಲ್.ಆರ್. ಶಿವರಾಮೇಗೌಡ ಮರಳಿ ಕಾಂಗ್ರೆಸ್ ಸೇರ್ಪಡೆ



ಬೆಂಗಳೂರು, ಫೆ.16– ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರ ಸಮ್ಮುಖದಲ್ಲಿ ಸುಪ್ರೀಂ ಕೋರ್ಟ್ ಹಿರಿಯ ವಕೀಲ ಬ್ರಿಜೇಶ್ ಕಾಳಪ್ಪ, ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ಭಾನುವಾರ ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಬ್ರಿಜೇಶ್ ಕಾಳಪ್ಪ, ಶಿವರಾಮೇಗೌಡ ಮತ್ತು ಪುತ್ರ ಮಂಜೇಗೌಡ, ಎಲ್.ಎಸ್.ಚೇತನ್ ಗೌಡ ಕಾಂಗ್ರೆಸ್ ಸೇರ್ಪಡೆಯಾದರು. ಎಲ್.ಆರ್. ಶಿವರಾಮೇಗೌಡ ಅವರ ಬೆಂಬಲಿಗರೂ ಕೂಡ ಅಪಾರ ಸಂಖ್ಯೆಯಲ್ಲಿ ಕಾಂಗ್ರೆಸ್ ಸೇರಿದ್ದಾರೆ.

ಕಾಂಗ್ರೆಸ್ ತೊರೆದು ಆಮ್ ಆದ್ಮಿ ಪಕ್ಷ ಸೇರ್ಪಡೆಯಾಗಿದ್ದ ಬ್ರಿಜೇಶ್ ಕಾಳಪ್ಪ, ಇತ್ತೀಚಿಗೆ ಬಿಜೆಪಿ ಸೇರಿದ್ದ ಎಲ್.ಆರ್. ಶಿವರಾಮೇಗೌಡ ಅವರು ಇದೀಗ ಮರಳಿ ಮಾತೃಪಕ್ಷಕ್ಕೆ ವಾಪಸ್ ಆಗಿದ್ದಾರೆ.

ಎಲ್.ಆರ್.ಶಿವರಾಮೇಗೌಡ ಇತ್ತೀಚಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಜೊತೆ ವೇದಿಕೆ ಕಾರ್ಯಕ್ರಮಗಳಲ್ಲಿ ಕಾಣಿಸಿಕೊಂಡಿದ್ದರು. ಚನ್ನಪಟ್ಟಣ ಉಪಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಪರ ಪ್ರಚಾರದಲ್ಲಿ ಪಾಲ್ಗೊಂಡಿದ್ದರು. ಇದು ಎಲ್.ಆರ್.ಶಿವರಾಮೇಗೌಡ ಕಾಂಗ್ರೆಸ್ ಸೇರ್ಪಡೆ ಬಹುತೇಕ ಖಚಿತ ಎಂಬ ಮಾತುಗಳು ರಾಜಕೀಯ ಪಡಸಾಲೆಯಲ್ಲಿ ಕೇಳಿ ಬರುತ್ತಿದ್ದವು.

ಮಾಜಿ ಸಂಸದ ದಿವಂಗತ ಜಿ.ಮಾದೇಗೌಡ ಅವರ ಬಗ್ಗೆ ಹಗುರ ಮಾತನಾಡಿ ಜೆಡಿಎಸ್‌ನಿಂದ ಉಚ್ಚಾಟನೆ ಗೊಂಡಿದ್ದ ಎಲ್.ಆರ್.ಶಿವರಾಮೇಗೌಡ ಅವರು 2023ರಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದರು. ಇದೀಗ ಬಿಜೆಪಿಗೆ ರಾಜೀನಾಮೆ ನೀಡಿ ಮತ್ತೆ ಕಾಂಗ್ರೆಸ್ ಸೇರಿದ್ದಾರೆ.

ದೌರ್ಜನ್ಯ ನಡೆದರೂ ಮೌನ: ಸರ್ಕಾರಕ್ಕೆ 10 ಲಕ್ಷ ದಂಡ ವಿಧಿಸಿದ ಹೈಕೋರ್ಟ್

ಬೆಂಗಳೂರು, ಫೆ.16– ಪರಿಶಿಷ್ಟ ಜಾತಿಗೆ ಸೇರಿದ ಮಾಲೀಕರಿಂದ ಖರೀದಿ ಮಾಡಿರುವುದಾಗಿ ಸುಳ್ಳು ಕ್ರಯಪತ್ರ ಸೃಷ್ಟಿಸಿಕೊಂಡು ಜಮೀನು ಸ್ವಾಧೀನಕ್ಕೆ ಪಡೆದಿದ್ದ ವ್ಯಕ್ತಿಯೊಬ್ಬರಿಗೆ ರೂ.5 ಲಕ್ಷ ದಂಡ ವಿಧಿಸಿರುವ ಹೈಕೋರ್ಟ್, ಅಧಿಕಾರಿಗಳು ಸೂಕ್ತ ಕ್ರಮ ಜರುಗಿಸಿಲ್ಲ ಎಂಬ ಕಾರಣಕ್ಕೆ ರಾಜ್ಯ ಸರ್ಕಾರಕ್ಕೆ ರೂ.10 ಲಕ್ಷ ದಂಡ ವಿಧಿಸಿದೆ.

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಮೀಪದ ಬೆಲೆಬಾಳುವ ಎರಡು ಎಕರೆ ಜಮೀನಿನ ವ್ಯಾಜ್ಯ ಪ್ರಕರಣದಲ್ಲಿ ಈ ಆದೇಶನೀಡಿರುವ ನ್ಯಾಯಪೀಠ ಅಕ್ರಮವಾಗಿ ಸ್ವಾಧೀನದಲ್ಲಿ ಇರಿಸಿಕೊಂಡಿರುವ ಜಮೀನನ್ನು ಕೂಡಲೇ ತೆರವುಗೊಳಿಸಬೇಕು ಎಂದು ಸುಳ್ಳು ಕ್ರಯಪತ್ರ ಹೊಂದಿರುವ ಅರ್ಜಿದಾರ ಸುರೇಶ್ ಎಂಬಾತನಿಗೆ ಆದೇಶಿಸಿದೆ.

ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ಬೆಂಗಳೂರು ನಗರ ಜಿಲ್ಲಾಧಿಕಾರಿ ಮತ್ತು ಬೆಂಗಳೂರು ಉತ್ತರ ವಿಭಾಗದ ಉಪ ವಿಭಾಗಾಧಿಕಾರಿ ಹೊರಡಿಸಿದ್ದ ಆದೇಶವನ್ನು ರದ್ದುಗೊಳಿಸಬೇಕು ಎಂದು ಕೋರಿ ಸದ್ಯ ಜಮೀನಿನ ಸ್ವಾಧೀನ ಹೊಂದಿರುವ ಹೆಚ್.ಆರ್. ಸುರೇಶ್ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿರುವ ನ್ಯಾಯಮೂರ್ತಿ ಎನ್.ಎಸ್. ಸಂಜಯಗೌಡ ಅವರಿದ್ದ ಏಕಸದಸ್ಯ ನ್ಯಾಯಪೀಠ ಆ ಆದೇಶ ನೀಡಿದೆ.

ಇದೇ ವೇಳೆ, ವಿವಾದಿತ ಜಮೀನಿನಲ್ಲಿ ಕಾನೂನುಬದ್ಧ ವಾರಸುದಾರರಾದ ಎ.ಜೆ. ಜೇಮ್ಸ್ ಅವರು ನಿರ್ಮಿಸಿದ್ದ ಫಾರ್ಮ್‌ಹೌಸ್‌ಗೆ ಧಕ್ಕೆ ಉಂಟು ಮಾಡಿದ ಘಟನೆಯನ್ನು ಸಂಬಂಧಿಸಿದ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸದೆ ಸೂಕ್ತ ಕ್ರಮ ಜರುಗಿಸುವಲ್ಲಿ ವಿಫಲವಾಗಿದ್ದಾರೆ ಎಂಬ ಕಾರಣಕ್ಕಾಗಿ ನ್ಯಾಯಪೀಠ, ರಾಜ್ಯ ಸರ್ಕಾರಕ್ಕೂ ದಂಡ ವಿಧಿಸಿದೆ.

ಬೆಂಗಳೂರು ಉತ್ತರ ತಾಲೂಕು ಜಾಲ ಹೋಬಳಿಯ ಬೆಟ್ಟಹಲಸೂರು ಗ್ರಾಮದಲ್ಲಿನ ಸರ್ವೆ ನಂಬರ್ 376ರಲ್ಲಿರುವ ಎರಡು ಎಕರೆ ಜಮೀನಲ್ಲಿ ಎ.ಜೆ.ಜೇಮ್ಸ್ ಮತ್ತು ಅವರ ಪತ್ನಿ ಆನ್ನಿ ಜೇಮ್ಸ್ ಅವರ ಹೆಸರಿನಲ್ಲಿ ಒಂದು ಎಕರೆ ಹಾಗೂ ಬಿ.ಎಂ. ಗೋವಿಂದರಾಜು ಮತ್ತು ಬಿ.ಜಿ. ಮುನಿಯಪ್ಪ ಹೆಸರಿನಲ್ಲಿ ಇನ್ನೊಂದು ಎಕರೆ ಸ್ವಾಧೀನ ಹೊಂದಿದ್ದರು.

ರಿಯಲ್ ಎಸ್ಟೇಟ್ ವ್ಯವಹಾರ ನಡೆಸುವ ಎಚ್.ಆರ್.ಸುರೇಶ್, ಈ ಎರಡು ಎಕರೆ ಜಮೀನನ್ನು ನಾನು ಪರಿಶಿಷ್ಟ ಜಾತಿಗೆ ಸೇರಿದ್ದ ಬೈಲಮ್ಮ ಮತ್ತು ಗೌರಮ್ಮ ಅವರಿಂದ ಖರೀದಿಸಿದ್ದೇನೆ. ಈ ಜಮೀನಿನ ಮಾರಾಟಕ್ಕೆ ಸರ್ಕಾರ ಅನುಮತಿ ನೀಡಿದೆ ಎಂದು ಹೇಳಿ ಸುಳ್ಳು ಕ್ರಯಪತ್ರ ಸೃಷ್ಟಿಸಿಕೊಂಡಿದ್ದರು.

ಈ ಮೊದಲೇ ಜಮೀನನ್ನು ಕಾನೂನು ಬದ್ಧವಾಗಿ ಖರೀದಿ ಮಾಡಿ ಸ್ವಾಧೀನ ಹೊಂದಿದ್ದ ಎ.ಜೆ.ಜೇಮ್ಸ್, ಅವರ ಪತ್ನಿ ಆನ್ನಿ ಜೇಮ್ಸ್ ಹಾಗೂ ಬಿ.ಎಂ.ಗೋವಿಂದರಾಜು ಮತ್ತು ಅವರ ಮಕ್ಕಳು ಕಟ್ಟಿಕೊಂಡಿದ್ದ ಫಾರ್ಮ್‌ಹೌಸ್ ಅನ್ನು ಧ್ವಂಸಗೊಳಿಸಿದ್ದರು. ಅಲ್ಲಿದ್ದ ಜೇಮ್ಸ್ ಹಾಗೂ ಇತರರನ್ನು ಬಲವಂತದಿಂದ ಹೊರಹಾಕಿ ಜಮೀನನ್ನು ಸ್ವಾಧೀನಕ್ಕೆ ಪಡೆದಿದ್ದರು. ಈ ಕುರಿತಂತೆ ಜೇಮ್ಸ್ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದ್ದರೂ ಯಾವುದೇ ಕ್ರಮ ಜರುಗಿಸಿರಲಿಲ್ಲ.

ಏರ್ ಆಂಬುಲೆನ್ಸ್ ಮೂಲಕ ರೈತ ಮುಖಂಡ ಕುರುಬೂರು ಶಾಂತಕುಮಾರ್ ಬೆಂಗಳೂರಿಗೆ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ

ಬೆಂಗಳೂರು, ಫೆ.16– ಪಂಜಾಬಿನ ಪಟಿಯಾಲ ಬಳಿ ಸಂಭವಿಸಿದ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿರುವ ರೈತ ಮುಖಂಡ ಕುರುಬೂರು ಶಾಂತಕುಮಾರ್ ಅವರನ್ನು ಇಂದು ಏರ್ ಆಂಬುಲೆನ್ಸ್ ಮೂಲಕ ಬೆಂಗಳೂರಿಗೆ ಕರೆತರಲಾಯಿತು.

ಚಿಕಿತ್ಸೆಗಾಗಿ ಶಾಂತಕುಮಾರ್ ಅವರನ್ನು ಇದೀಗ ಮಣಿಪಾಲ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಶಾಂತಕುಮಾರ್ ಅವರು ಶೀಘ್ರ ಗುಣಮುಖರಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾರೈಸಿದ್ದಾರೆ. ಮೂರು ದಿನಗಳ ಹಿಂದೆ ಸಂಭವಿಸಿದ ಅಪಘಾತದಲ್ಲಿ ಶಾಂತಕುಮಾರ್ ಅವರು ಗಾಯಗೊಂಡು ಪಟಿಯಾಲದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ವಿಷಯ ತಿಳಿದ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏರ್ ಆಂಬುಲೆನ್ಸ್ ಮೂಲಕ ಶಾಂತಕುಮಾರ್ ಅವರನ್ನು ಬೆಂಗಳೂರಿಗೆ ಕರೆತರುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. ಈ ಮಧ್ಯೆ ದೆಹಲಿ ನಿವಾಸಿ ಆಯುಕ್ತರಾದ ಇಂಕೊಂಗ್ಲ ಜಮೀರ್ ಅವರು ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಪಟಿಯಾಲದ ಆಸ್ಪತ್ರೆ ವೈದ್ಯರ ಜೊತೆ ಸತತ ಸಂಪರ್ಕದಲ್ಲಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ಅಧಿಕಾರಿಗಳು ನಿನ್ನೆ ಏರ್ ಆಂಬುಲೆನ್ಸ್ ಸಜ್ಜುಗೊಳಿಸಿದ್ದರು. ಇಬ್ಬರು ಸಹಾಯಕರು ಹಾಗೂ ವೈದ್ಯರ ತಂಡದೊಂದಿಗೆ ಇಂದು ಶಾಂತಕುಮಾರ್ ಅವರನ್ನು ಬೆಂಗಳೂರಿಗೆ ಕರೆತರಲಾಗಿದೆ.

ಇತ್ತೀಚಿನ ಕವಿತೆಗಳಲ್ಲಿ ಗುಣಮಟ್ಟದ ಕಾವ್ಯ ಮೂಡಿಬರುತ್ತಿಲ್ಲ

ಹಿರಿಯ ವಿಮರ್ಶಕ ಡಾ.ಕಬ್ಬಿನಾಲೆ ವಸಂತ ಭಾರದ್ವಾಜ ವಿಷಾದ


ಬೆಂಗಳೂರಿನ ಮುಕ್ತಕ ಕವಿಯಿತ್ರಿ ವಿಜಯಾ ಪದ್ಮಶಾಲಿ ಅವರಿಗೆ ಡಾ.ಡಿವಿಜಿ ಮುಕ್ತಕ ಸಾಹಿತ್ಯ ಪ್ರಶಸ್ತಿ ಪ್ರದಾನ ಹಾಗೂ ವಿವಿಧ ಕ್ಷೇತ್ರದ ಸಾಧಕರಾದ ಎಚ್.ರಾಮಚಂದ್ರನ್, ಡಾ.ವಿ.ರಂಗನಾಥ್, ಡಾ.ಬಿ.ಆರ್.ಗುರುಪ್ರಸಾದ್, ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ವಿದುಷಿ ಕೋವಿಲಡಿ ಅರ್ಚನಾ ಎಲ್.ರಾವ್, ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕ ಎಸ್.ನಟರಾಜ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಫೆ16(ಎಸ್‌ಪಿಎನ್)–ಇತ್ತೀಚಿನ ಕವಿತೆಗಳಲ್ಲಿ ಗುಣಮಟ್ಟದ ಕಾವ್ಯ ಮೂಡಿಬರುತ್ತಿಲ್ಲ. ಇದರಿಂದ ಕವಿತೆಗಳ ರಚನೆ ಎಂದರೆ, ಎಲ್ಲರೂ ಮೂಗು ಮುರಿಯುವಂತಾಗಿದೆ ಎಂದು ಹಿರಿಯ ವಿಮರ್ಶಕ, ಅಷ್ಟಾವಧಾನಿಗಳಾದ ಡಾ.ಕಬ್ಬಿನಾಲೆ ವಸಂತ ಭಾರದ್ವಾಜ ವಿಷಾದಿಸಿದರು.

ಮೈಸೂರು ಸರಸ್ವತಿಪುರಂನಲ್ಲಿರುವ ರೋಟರಿ ಮೈಸೂರು ಪಶ್ಚಿಮ ಸಭಾಂಗಣದಲ್ಲಿ ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಲೇಖಕ ಕಿರಣ್ ಸಿಡ್ಲೇಹಳ್ಳಿ ರಚಿತ 'ಭೋಗಮುಕ್ತಕ' ಪುಸ್ತಕ ಬಿಡುಗಡೆ ಹಾಗೂ ಮುಕ್ತಕ ಕವಿಯತ್ರಿ ವಿಜಯಾಪದ್ಮಶಾಲಿ ಅವರಿಗೆ ಡಾ.ಡಿವಿಜಿ ಮುಕ್ತಕ ಸಾಹಿತ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಸಮಾಜಕ್ಕೆ ಉಪಯೋಗವಲ್ಲದ ಸಾವಿರಾರು ಮುಕ್ತಕಗಳು ರಚನೆಯಾದರೂ ಯಾವುದೇ ಪ್ರಯೋಜನವಿಲ್ಲ. ಬದಲಾಗಿ ಸಮಾಜದ ಸೂಕ್ಷ್ಮತೆಯನ್ನು ಗುರುತಿಸುವ ಮುಕ್ತಕಗಳು ರಚನೆಯಾದಾಗ ಮಾತ್ರ ಆ ಕವಿ ಸಮಾಜದಲ್ಲಿ ಉಳಿಯಲು ಸಾಧ್ಯ ಎಂದರು.

'ಮೈಸೂರು ಪಾಕ್' ತೆಗೆಯಲು ಆ ರಸಗಳಿಗಾಗಿ ಕಾಯಬೇಕು. ಅದೇ ರೀತಿ, ಒಂದು ಒಳ್ಳೆಯ ಮುಕ್ತಕ ರಚಿಸಲು ಕವಿ ಭಾವಜೀವಿಯಾಗಬೇಕು. ಲೌಕಿಕ ಬದುಕು ಬಿಟ್ಟು ಅಲೌಕಿಕ ಮನಸ್ಥಿತಿಗೆ ಹೊರಳಿದಾಗ ಮಾತ್ರ ಉತ್ತಮ ಮುಕ್ತಕಗಳು ರಚನೆ ಸಾಧ್ಯ. ಹಾಗಾಗಿ ಹೊಸದಾಗಿ ಮುಕ್ತಕಗಳನ್ನು ರಚಿಸುವವರು, ಸಮಾಜಕ್ಕೆ ಉಪಯೋಗವಾಗುವ ಮೈಸೂರು ಪಾಕ್‌ನಂತಹ ಮುಕ್ತಕಗಳನ್ನು ರಚಿಸುವಂತೆ ಸಲಹೆ ನೀಡಿದರು.

ಶಿವಮೊಗ್ಗದ ಖ್ಯಾತ ಕವಿಯತ್ರಿ ಗೀತಾ ಶಾಸ್ತ್ರಿ ರಚಿಸಿದ ಮುಕ್ತಕದ ಸಾಲು ಹೀಗಿದೆ 'ಎಂಥ ಚೆಂದ ಜೋರು ಮಳೆ'.., ನನ್ನ ಜೊತೆ ನಿನ್ನ ನಡೆ.., ಇಬ್ಬರಿಗೂ ಒಂದೇ ಕೊಡೆ.., ಮೂರು ಸಾಲಿನ ಮುಕ್ತ ಕೇಳುವುದಕ್ಕೆ ಇಂಪಾಗಿದೆ. ಅದೇ ರೀತಿ ಅದರ ಅರ್ಥ ನಾನಾ ದಿಕ್ಕುಗಳನ್ನು ಸೂಚಿಸುತ್ತವೆ. ಇಂತಹ ಮುಕ್ತಕಗಳು ಇಂದಿನ ತಲೆಮಾರಿನವರಿಂದ ಬರಬೇಕು ಎಂದು ಸಲಹೆ ನೀಡಿದರು.

ಇದಕ್ಕೂ ಮುನ್ನ ಬೆಂಗಳೂರಿನ ಮುಕ್ತಕ ಕವಿಯಿತ್ರಿ ವಿಜಯಾ ಪದ್ಮಶಾಲಿ ಅವರಿಗೆ ಡಾ.ಡಿವಿಜಿ ಮುಕ್ತಕ ಸಾಹಿತ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ವಿವಿಧ ಕ್ಷೇತ್ರದ ಸಾಧಕರಾದ ಎಚ್.ರಾಮಚಂದ್ರನ್ (ಲೆಕ್ಕಪರಿಶೋಧನೆ, ಧಾರ್ಮಿಕ), ಡಾ.ವಿ.ರಂಗನಾಥ್ (ಆಡಳಿತ,ಸಾಹಿತ್ಯ), ಡಾ.ಬಿ.ಆರ್.ಗುರುಪ್ರಸಾದ್ (ವಿಜ್ಞಾನ), ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್ (ಸಾಹಿತ್ಯ ಕಲಾ ಸಂಘಟನೆ), ವಿದುಷಿ ಕೋವಿಲಡಿ ಅರ್ಚನಾ ಎಲ್.ರಾವ್(ಲೆಕ್ಕ ಪರಿಶೋಧನೆ, ಸಂಗೀತ), ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕ ಎಸ್.ನಟರಾಜ್(ಶಿಕ್ಷಣ) ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ.ಹೆಚ್.ವಿ.ರಾಮಪ್ರಸಾದ್, ಪ್ರಧಾನ ಕಾರ್ಯದರ್ಶಿ ಕಿರಣ್ ಸಿಡ್ಲೇಹಳ್ಳಿ, ಸಂಸ್ಥಾಪಕ ಅಧ್ಯಕ್ಷರಾದ ಎಸ್. ರಾಮಪ್ರಸಾದ್, ಕೋಶಾಧ್ಯಕ್ಷ ಆರ್.ಎ.ಕುಮಾರ್, ರಂಗನಾಥ್ ಮೈಸೂರು, ಮರಿಮಲ್ಲಪ್ಪ ಪ್ರೌಢಶಾಲೆಯ ಶಿಕ್ಷಕ ಬಿ.ಆರ್.ಶಿವಕುಮಾರ್, ಸಹ ಕಾರ್ಯದರ್ಶಿ ಎಂ.ಎಸ್.ರುದ್ರಪ್ಪ ಟ್ರಸ್ಟಿಗಳಾದ ಪ್ರೊ.ಸವಿತಾ ಪಾಂಡೆ, ಪದ್ಮಾ ಚಿಕ್ಕೇಲೂರು, ಎಚ್.ಎಲ್.ನಾಗರಾಜ್‌ರಾವ್ ಡಾ.ಸೌಗಂಧಿಕಾ ವಿ.ಜೋಯಿಸ್ ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಲೇಖಕ ಕಿರಣ್‌ಸಿಡ್ಲೇಹಳ್ಳಿ ರಚಿತ ಭೋಗಮುಕ್ತಕ ಪುಸ್ತಕವನ್ನು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಧರಣೀದೇವಿ ಬಿಡುಗಡೆಗೊಳಿಸಿದರು.

ಮೈಸೂರಲ್ಲಿ ಕದಂಬ ರಂಗಹಬ್ಬಕ್ಕೆ ಚಾಲನೆ


ಮೂರು ದಿನಗಳ 'ಕದಂಬ ರಂಗಹಬ್ಬ'ಕ್ಕೆ ಸಿನಿಮಾ ಪೋಷಕ ನಟ ಶಂಕರ್ ಅಶ್ವಥ್ ಚಾಲನೆ ನೀಡಿದರು.

ಮೈಸೂರು, ಫೆ.16(ಎಸ್‌ಪಿಎನ್)– ಮೈಸೂರು ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಕದಂಬ ರಂಗವೇದಿಕೆ ಹಾಗೂ ಬೆಂಗಳೂರು ಕನ್ನಡ ಮತ್ತು ನಿರ್ದೇಶನಾಲಯ ಸಹಯೋಗದೊಂದಿಗೆ ಏರ್ಪಡಿಸಿದ್ದ ಮೂರು ದಿನಗಳ 'ಕದಂಬ ರಂಗಹಬ್ಬ'ಕ್ಕೆ ಸಿನಿಮಾ ಪೋಷಕ ನಟ ಶಂಕರ್ ಅಶ್ವಥ್ ಚಾಲನೆ ನೀಡಿದರು.

ನಂತರ ಅವರು ಮಾತನಾಡಿ, ಇತ್ತೀಚೆಗೆ ರಂಗಭೂಮಿ ನಾಟಕಗಳಲ್ಲಿ ತೊಡಗಿಸಿಕೊಳ್ಳುವವರ ಸಂಖ್ಯೆ ಅಧಿಕವಾಗಿದೆ. ವೃತ್ತಿ ರಂಗಭೂಮಿ, ಸಣ್ಣಾಟ, ಬಯಲಾಟ, ಯಕ್ಷಗಾನ ಕಲೆಗಳಲ್ಲಿ ಮಕ್ಕಳನ್ನು ತೊಡಗಿಸಬೇಕು. ಇದರಿಂದ ಉತ್ತಮ ಸಮಾಜ ನಿರ್ಮಿಸಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಸಿನಿಮಾಗಳಲ್ಲಿ ಹಿರಿಯ ನಟ ಅಶ್ವಥ್ ಅವರ ಅಭಿನಯ ಮನೋಜ್ಞವಾಗಿತ್ತು. ಅವರ ಕೊಟ್ಟ ಬಳುವಳಿಯಿಂದ ಸಿನಿಮಾ ಕ್ಷೇತ್ರದಲ್ಲಿ ನನ್ನ ಗುರುತಿಸಲಾಗುತ್ತಿದೆ. ನಿರ್ದೇಶಕರು ಕೊಟ್ಟ ಪಾತ್ರಗಳಿಗೆ ಹಿರಿಯ ನಟರು ಜೀವ ತುಂಬುತ್ತಿದ್ದರು. ಮೊದಲು ಆ ಪಾತ್ರಕ್ಕೆ ಬೇಕಾದ ಎಲ್ಲಾ ತರಬೇತಿಗಳನ್ನು ಪಡೆದುಕೊಂಡು ಸಿನಿಮಾ ಶೂಟಿಂಗ್‌ನಲ್ಲಿ ಪಾಲ್ಗೊಳ್ಳುತ್ತಿದ್ದರು. ಹಾಗಾಗಿ ಹಿಂದಿನ ಕಾಲದ ಸಿನಿಮಾಗಳನ್ನು ಜನ ಇಂದಿಗೂ ಮೆಲುಕು ಹಾಕುತ್ತಾರೆ ಎಂದು ತಿಳಿಸಿದರು.

ಹಿರಿಯ ಕಲಾವಿದ ವೈ.ಎಂ.ಪುಟ್ಟಣ್ಣಯ್ಯ ಮಾತನಾಡಿ, ಈ ಹಿಂದೆ ಗ್ರಾಮೀಣ ಪ್ರದೇಶದಲ್ಲಿ ಪೌರಾಣಿಕ ನಾಟಕಗಳನ್ನು ರಾತ್ರಿಯಿಡೀ ಪ್ರದರ್ಶನ ನೀಡುತ್ತಿದ್ದರು. ಇದಕ್ಕೆ ಅಲ್ಲಿನ ಜನರ ಪ್ರೋತ್ಸಾಹ ಇರುತ್ತಿತ್ತು. ಇದೀಗ ಕಾಲ ಬದಲಾಗಿದೆ. ಪೌರಾಣಿಕ ನಾಟಕ ಪ್ರದರ್ಶನ ಮೂರು ಗಂಟೆಗೆ ಸೀಮಿತಗೊಳಿಸಿ, ಪ್ರದರ್ಶಿಸಲಾಗುತ್ತಿದೆ. ಇದಕ್ಕೆ ಪ್ರೇಕ್ಷಕರಿಂದಲೂ ಪ್ರೋತ್ಸಾಹ ಸಿಗುತ್ತಿದೆ. ಹಾಗಾಗಿ ಹಿಂದಿನ ನಾಟಕ ಪರಂಪರೆ ಉಳಿಸಲು ಎಲ್ಲಾ ಸುಧಾರಣೆಗೂ ನಾವು ತೆರೆದುಕೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.

ವೇದಿಕೆ ಕಾರ್ಯಕ್ರಮದ ನಂತರ ವೈ.ಎಂ.ಪುಟ್ಟಣ್ಣಯ್ಯ ತಂಡದ ಕಲಾವಿದರು ಹಲವು ರಂಗಗೀತೆಗಳನ್ನು ಹಾಡಿ, ಪ್ರೇಕ್ಷಕರ ಮನಗೆದ್ದರು. ಚಾಮರಾಜನಗರದ ಶಾಂತಲಾ ತಂಡದ ಕಲಾವಿದರು ಅಭಿನಯದ, ಬಿ.ಎಸ್. ವಿನಯ್ ರಚನೆಯ, ಚಿತ್ರಾ ವೆಂಕಟರಾಜು ನಿರ್ದೇಶನದ 'ಅಶ್ವಘೋಷ' ನಾಟಕ ಪ್ರದರ್ಶನಗೊಂಡಿತು. ವೇದಿಕೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ, ಕದಂಬ ರಂಗವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ರಂಗ ಸಮಾಜದ ಸದಸ್ಯ ಎಚ್.ಎಸ್.ಸುರೇಶ್ ಬಾಬು ಸೇರಿದಂತೆ ಇತರರಿದ್ದರು.

ಐಪಿಎಲ್ ವೇಳಾಪಟ್ಟಿ ಬಿಡುಗಡೆ; ಆರ್‌ಸಿಬಿ–ಕೆಕೆಆರ್ ಮೊದಲ ಫೈಟ್

ನವದೆಹಲಿ: ಇಂಡಿಯನ್ ಪ್ರೀಮಿಯರ್ ಲೀಗ್‌ನ 18ನೇ ಆವೃತ್ತಿಯು ಮಾರ್ಚ್ 22ರಂದು ಆರಂಭವಾಗಲಿದ್ದು, ಒಟ್ಟು 13 ತಾಣಗಳಲ್ಲಿ 74 ಪಂದ್ಯಗಳು ನಿಗದಿಯಾಗಿವೆ. ಮೇ 25ರಂದು ಫೈನಲ್ ಪಂದ್ಯ ನಡೆಯಲಿದೆ.

ಐಪಿಎಲ್ 2025ನೇ ಸಾಲಿನ ಟಿ20 ಕ್ರಿಕೆಟ್ ಟೂರ್ನಿಯ ವೇಳಾಪಟ್ಟಿಯನ್ನು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಭಾನುವಾರ ಬಿಡುಗಡೆಗೊಳಿಸಿದೆ.

ಕೋಲ್ಕತ್ತದ ಈಡನ್ ಗಾರ್ಡನ್‌ನಲ್ಲಿ ಮಾರ್ಚ್ 22ರಂದು ನಡೆಯುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಕೋಲ್ಕತ್ತ ನೈಟ್ ರೈಡರ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಇದೇ ಕ್ರೀಡಾಂಗಣದಲ್ಲಿ ಫೈನಲ್ ಹಣಾಹಣಿ ನಡೆಯಲಿದೆ. 12 ಡಬಲ್ ಹೆಡರ್ (ದಿನಕ್ಕೆ 2 ಪಂದ್ಯ) ಪಂದ್ಯಗಳು ಇರಲಿದೆ. ಒಟ್ಟು 65 ದಿನಗಳು ಪಂದ್ಯಗಳು ನಡೆಯಲಿವೆ. ಮೂರು ಫ್ರಾಂಚೈಸಿಗಳ ಎರಡನೇ ತವರಾದ ಧರ್ಮಶಾಲಾ (ಪಂಜಾಬ್ ಕಿಂಗ್ಸ್), ಗುವಾಹಟಿ (ರಾಜಸ್ಥಾನ ರಾಯಲ್ಸ್), ಮತ್ತು ವಿಶಾಖಪಟ್ಟಣನಲ್ಲಿ (ಡೆಲ್ಲಿ ಕ್ಯಾಪಿಟಲ್ಸ್) ಕೆಲ ಪಂದ್ಯಗಳು ನಿಗದಿಯಾಗಿವೆ.

ಡೆಲ್ಲಿ ಕ್ಯಾಪಿಟಲ್ಸ್ ತಂಡವು ಮಾ.24 ರಂದು ತನ್ನ ಎರಡನೇ ತವರಾದ ವಿಶಾಖಪಟ್ಟಣದಲ್ಲೇ ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಅಭಿಯಾನ ಆರಂಭಿಸಲಿದೆ. ಗುವಾಹಟಿ ಮತ್ತು ವಿಶಾಖಪಟ್ಟಣದಲ್ಲಿ ತಲಾ ಎರಡು ಪಂದ್ಯಗಳು ಮತ್ತು ಧರ್ಮಶಾಲಾದಲ್ಲಿ ಮೂರು ಪಂದ್ಯಗಳು ಇರಲಿವೆ.

ದಿನಾಂಕ	ಸಮಯ	ಪಂದ್ಯಗಳು	ಸ್ಥಳ
ಮಾ.22	ಸಂಜೆ 7.30	ಕೋಲ್ಕೊತ್ತಾ / ಬೆಂಗಳೂರು	ಕೋಲ್ಕೊತ್ತಾ
ಮಾ.23	ಸಂಜೆ 7.30	ಹೈದರಾಬಾದ್ /ರಾಜಸ್ಥಾನ್	ಹೈದರಾಬಾದ್
ಮಾ.23	ಸಂಜೆ 7.30	ಚೆನ್ನೈ /ಮುಂಬೈ	ಚೆನ್ನೈ
ಮಾ.24	ಸಂಜೆ 7.30	ಡೆಲ್ಲಿ /ಲಕ್ನೋ	ವಿಶಾಖಪಟ್ಟಣ
ಮಾ.25	ಸಂಜೆ 7.30	ಗುಜರಾತ್/ಪಂಜಾಬ್	ಅಹಮದಾಬಾದ್
ಮಾ.26	ಸಂಜೆ 7.30	ರಾಜಸ್ಥಾನ್/ಕೋಲ್ಕೊತ್ತಾ	ಗುವಾಹಟಿ
ಮಾ.27	ಸಂಜೆ 7.30	ಹೈದರಾಬಾದ್/ಲಕ್ನೋ	ಹೈದರಾಬಾದ್
ಮಾ.28	ಸಂಜೆ 7.30	ಚೆನ್ನೈ / ಬೆಂಗಳೂರು	ಚೆನ್ನೈ
ಮಾ.29	ಸಂಜೆ 7.30	ಗುಜರಾತ್/ಮುಂಬೈ	ಅಹಮದಾಬಾದ್
ಮಾ.30	ಮ.3.30	ಡೆಲ್ಲಿ /ಹೈದರಾಬಾದ್	ವಿಶಾಖಪಟ್ಟಣ
ಮಾ.30	ಸಂಜೆ 7.30	ರಾಜಸ್ಥಾನ್/ಚೆನ್ನೈ	ಗುವಾಹಟಿ
ಮಾ.31	ಸಂಜೆ 7.30	ಮುಂಬೈ /ಕೋಲ್ಕೊತ್ತಾ	ಮುಂಬೈ
ಏ.1	ಸಂಜೆ 7.30	ಲಕ್ನೋ /ಪಂಜಾಬ್	ಲಖನೌ
ಏ.2	ಸಂಜೆ 7.30	ಬೆಂಗಳೂರು/ಗುಜರಾತ್	ಬೆಂಗಳೂರು
ಏ.3	ಸಂಜೆ 7.30	ಕೋಲ್ಕೊತ್ತಾ /ಹೈದರಾಬಾದ್	ಕೋಲ್ಕೊತ್ತಾ
ಏ.4	ಸಂಜೆ 7.30	ಲಕ್ನೋ /ಮುಂಬೈ	ಲಖನೌ
ಏ.5	ಮ.3.30	ಚೆನ್ನೈ /ಡೆಲ್ಲಿ	ಚೆನ್ನೈ
ಏ.5	ಸಂಜೆ 7.30	ಪಂಜಾಬ್/ರಾಜಸ್ಥಾನ್	ನವ ಚಂಡೀಗಢ
ಏ.6	ಮ.3.30	ಕೋಲ್ಕೊತ್ತಾ /ಲಕ್ನೋ	ಕೋಲ್ಕೊತ್ತಾ
ಏ.6	ಸಂಜೆ 7.30	ಹೈದರಾಬಾದ್ /ಗುಜರಾತ್	ಹೈದರಾಬಾದ್
ಏ.7	ಸಂಜೆ 7.30	ಮುಂಬೈ /ಬೆಂಗಳೂರು	ಮುಂಬೈ
ಏ.8	ಸಂಜೆ 7.30	ಪಂಜಾಬ್/ಚೆನ್ನೈ	ನವ ಚಂಡೀಗಢ
ಏ.9	ಸಂಜೆ 7.30	ಗುಜರಾತ್/ರಾಜಸ್ಥಾನ್	ಅಹಮದಾಬಾದ್
ಏ.10	ಸಂಜೆ 7.30	ಬೆಂಗಳೂರು/ಡೆಲ್ಲಿ	ಬೆಂಗಳೂರು
ಏ.11	ಸಂಜೆ 7.30	ಚೆನ್ನೈ /ಕೋಲ್ಕೊತ್ತಾ	ಚೆನ್ನೈ
ಏ.12	ಮ.3.30	ಲಕ್ನೋ /ಗುಜರಾತ್	ಲಖನೌ
ಏ.12	ಸಂಜೆ 7.30	ಹೈದರಾಬಾದ್/ಪಂಜಾಬ್	ಹೈದರಾಬಾದ್
ಏ.13	ಮ.3.30	ರಾಜಸ್ಥಾನ್ /ಬೆಂಗಳೂರು	ಜೈಪುರ
ಏ.13	ಸಂಜೆ 7.30	ಡೆಲ್ಲಿ/ಮುಂಬೈ	ದಿಲ್ಲಿ
ಏ.14	ಸಂಜೆ 7.30	ಲಕ್ನೋ/ಚೆನ್ನೈ	ಲಖನೌ
ಏ.15	ಸಂಜೆ 7.30	ಪಂಜಾಬ್/ಕೋಲ್ಕೊತ್ತಾ	ನವ ಚಂಡೀಗಢ
ಏ.16	ಸಂಜೆ 7.30	ಡೆಲ್ಲಿ/ರಾಜಸ್ಥಾನ್ ರಾಯಲ್ಸ್	ದಿಲ್ಲಿ
ಏ.17	ಸಂಜೆ 7.30	ಮುಂಬೈ/ಹೈದರಾಬಾದ್	ಮುಂಬೈ
ಏ.18	ಸಂಜೆ 7.30	ಬೆಂಗಳೂರು/ಪಂಜಾಬ್	ಬೆಂಗಳೂರು
ಏ.19	ಮ.3.30	ಗುಜರಾತ್ /ಡೆಲ್ಲಿ	ಅಹಮದಾಬಾದ್
ಏ.19	ಸಂಜೆ 7.30	ರಾಜಸ್ಥಾನ್/ಲಕ್ನೋ	ಜೈಪುರ
ಏ.20	ಮ.3.30	ಪಂಜಾಬ್/ಬೆಂಗಳೂರು	ನವ ಚಂಡೀಗಢ
ಏ.20	ಸಂಜೆ 7.30	ಮುಂಬೈ /ಚೆನ್ನೈ	ಮುಂಬೈ
ಏ.21	ಸಂಜೆ 7.30	ಕೋಲ್ಕೊತ್ತಾ /ಗುಜರಾತ್	ಕೋಲ್ಕೊತ್ತಾ
ಏ.22	ಸಂಜೆ 7.30	ಲಕ್ನೋ/ಡೆಲ್ಲಿ	ಲಖನೌ
ಏ.23	ಸಂಜೆ 7.30	ಹೈದರಾಬಾದ್/ಮುಂಬೈ	ಹೈದರಾಬಾದ್
ಏ.24	ಸಂಜೆ 7.30	ಬೆಂಗಳೂರು/ರಾಜಸ್ಥಾನ್	ಬೆಂಗಳೂರು
ಏ.25	ಸಂಜೆ 7.30	ಚೆನ್ನೈ /ಹೈದರಾಬಾದ್	ಚೆನ್ನೈ
ಏ.26	ಸಂಜೆ 7.30	ಕೋಲ್ಕೊತ್ತಾ /ಪಂಜಾಬ್	ಕೋಲ್ಕೊತ್ತಾ
ಏ.27	ಮ.3.30	ಮುಂಬೈ /ಲಕ್ನೋ	ಮುಂಬೈ
ಏ.27	ಸಂಜೆ 7.30	ಡೆಲ್ಲಿ /ಬೆಂಗಳೂರು	ದಿಲ್ಲಿ
ಏ.28	ಸಂಜೆ 7.30	ರಾಜಸ್ಥಾನ್ /ಗುಜರಾತ್	ಜೈಪುರ
ಏ.29	ಸಂಜೆ 7.30	ಡೆಲ್ಲಿ/ಕೋಲ್ಕೊತ್ತಾ	ದಿಲ್ಲಿ
ಏ.30	ಸಂಜೆ 7.30	ಚೆನ್ನೈ /ಪಂಜಾಬ್	ಚೆನ್ನೈ
ಮೇ 1	ಸಂಜೆ 7.30	ರಾಜಸ್ಥಾನ್ /ಮುಂಬೈ	ಜೈಪುರ
ಮೇ 2	ಸಂಜೆ 7.30	ಗುಜರಾತ್ /ಹೈದರಾಬಾದ್	ಅಹಮದಾಬಾದ್
ಮೇ 3	ಸಂಜೆ 7.30	ಬೆಂಗಳೂರು/ಚೆನ್ನೈ	ಬೆಂಗಳೂರು
ಮೇ 4	ಮ.3.30	ಕೋಲ್ಕೊತ್ತಾ /ರಾಜಸ್ಥಾನ್	ಕೋಲ್ಕೊತ್ತಾ
ಮೇ 4	ಸಂಜೆ 7.30	ಪಂಜಾಬ್ /ಲಕ್ನೋ	ಧರ್ಮಶಾಲಾ
ಮೇ 5	ಸಂಜೆ 7.30	ಹೈದರಾಬಾದ್/ಡೆಲ್ಲಿ	ಹೈದರಾಬಾದ್
ಮೇ 6	ಸಂಜೆ 7.30	ಮುಂಬೈ/ಗುಜರಾತ್	ಮುಂಬೈ
ಮೇ 7	ಸಂಜೆ 7.30	ಕೋಲ್ಕೊತ್ತಾ /ಚೆನ್ನೈ	ಕೋಲ್ಕೊತ್ತಾ
ಮೇ 8	ಸಂಜೆ 7.30	ಪಂಜಾಬ್/ಡೆಲ್ಲಿ	ಧರ್ಮಶಾಲಾ
ಮೇ 9	ಸಂಜೆ 7.30	ಲಕ್ನೋ/ಬೆಂಗಳೂರು	ಲಖನೌ
ಮೇ 10	ಸಂಜೆ 7.30	ಹೈದರಾಬಾದ್/ಕೋಲ್ಕೊತ್ತಾ	ಹೈದರಾಬಾದ್
ಮೇ 11	ಮ.3.30	ಪಂಜಾಬ್ /ಮುಂಬೈ	ಧರ್ಮಶಾಲಾ
ಮೇ 11	ಸಂಜೆ 7.30	ಡೆಲ್ಲಿ /ಗುಜರಾತ್	ದಿಲ್ಲಿ
ಮೇ 12	ಸಂಜೆ 7.30	ಚೆನ್ನೈ /ರಾಜಸ್ಥಾನ್	ಚೆನ್ನೈ
ಮೇ 13	ಸಂಜೆ 7.30	ಬೆಂಗಳೂರು/ಹೈದರಾಬಾದ್	ಬೆಂಗಳೂರು
ಮೇ 14	ಸಂಜೆ 7.30	ಗುಜರಾತ್/ಲಕ್ನೋ	ಅಹಮದಾಬಾದ್
ಮೇ 15	ಸಂಜೆ 7.30	ಮುಂಬೈ /ಡೆಲ್ಲಿ	ಮುಂಬೈ
ಮೇ 16	ಸಂಜೆ 7.30	ರಾಜಸ್ಥಾನ್ /ಪಂಜಾಬ್	ಜೈಪುರ
ಮೇ 17	ಸಂಜೆ 7.30	ಬೆಂಗಳೂರು/ಕೋಲ್ಕೊತ್ತಾ	ಬೆಂಗಳೂರು
ಮೇ 18	ಮ.3.30	ಗುಜರಾತ್ /ಚೆನ್ನೈ	ಅಹಮದಾಬಾದ್
ಮೇ 18	ಸಂಜೆ 7.30	ಲಕ್ನೋ /ಹೈದರಾಬಾದ್	ಲಖನೌ
ಮೇ 20	ಸಂಜೆ 7.30	ಕ್ವಾಲಿಫೈಯರ್ 1/ಕ್ವಾಲಿಫೈಯರ್ 1	ಹೈದರಾಬಾದ್
ಮೇ 21	ಸಂಜೆ 7.30	ಎಲಿಮಿನೇಟರ್/ಎಲಿಮಿನೇಟರ್	ಹೈದರಾಬಾದ್
ಮೇ 23	ಸಂಜೆ 7.30	ಕ್ವಾಲಿಫೈಯರ್ 2/ಕ್ವಾಲಿಫೈಯರ್ 2	ಕೋಲ್ಕೊತ್ತಾ
ಮೇ 25	ಸಂಜೆ 7.30	ಫೈನಲ್/ಫೈನಲ್	ಕೋಲ್ಕೊತ್ತಾ

ಜನಪದ ಕಲೆ ಅನಾವರಣಗೊಳಿಸಿದ ಜನಪದ ಜಂಗಮರ ಉತ್ಸವ



'ಜನಪದ ಜಂಗಮರ ಉತ್ಸವ'ದಲ್ಲಿ ಜನಪದ ಕಲಾವಿದರಿಗೆ 'ಜಿಎಂಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರು, ಫೆ.16(ಎಂಕೆ)– ಮೈಸೂರಿನ ಹಳೇ ಕೆಸರೆ ಮೈದಾನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಜಿ.ಎಂ.ತಂದಾನಿ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಭಾನುವಾರ 'ಜನಪದ ಜಂಗಮರ ಉತ್ಸವ' ನಡೆಯಿತು.

ಹಳೇ ಕೆಸರೆ ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆಯೊಂದಿಗೆ ಆರಂಭವಾದ ಉತ್ಸವದ ಮೆರವಣಿಗೆ ಗೊರವರ ಕುಣಿತ, ಡೊಳ್ಳು ಕುಣಿತ, ಪೂಜಾ ಕುಣಿತ, ವೀರಗಾಸೆ, ತಂಬೂರಿ, ಗೊಂಬೆ ಕುಣಿತ, ಚಂಡೆ, ಪಟ ಕುಣಿತ ಹಾಗೂ ಕಂಸಾಳೆ ನೃತ್ಯ ಕಲಾವಿದರ ಜೊತೆಗೆ ವೈಭವದಿಂದ ವೇದಿಕೆವರೆಗೆ ಸಾಗಿತು. ನಂತರ ಎಲ್ಲಾ ಕಲಾತಂಡಗಳು ತಮ್ಮ ಜನಪದ ನೃತ್ಯ ಕಲೆಯನ್ನು ಪ್ರದರ್ಶನ ನೀಡುವ ಮೂಲಕ ಉತ್ಸವಕ್ಕೆ ಹೊಸ ಮೆರಗು ತಂದರು.

ಬಳಿಕ ನಡೆದ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿದ 'ಅನ್ನ' ಚಿತ್ರದ ಕಥೆಗಾರ ಹನೂರು ಚೆನ್ನಪ್ಪ ಮಾತನಾಡಿ, ಜನಪದ ಕಲಾವಿದರು ನಿಮ್ಮ ಪ್ರೀತಿಯನ್ನೇ ಜನಪದ ಕಲೆಗೆ ಧಾರೆ ಎರೆಯುತ್ತಿದ್ದೀರಿ. ಪ್ರತಿಫಲಕ್ಕಿಂತ ಆತ್ಮತೃಪ್ತಿಗಾಗಿ ದುಡಿಯುತ್ತಿದ್ದೀರಿ. ಬಹುಶಃ ಜನಪದ ಗುಣವೇ ಅದಾಗಿದೆ. ಜನಪದರು ಯಾರಿಗೂ, ಯಾವ ಬಹುಮಾನಕ್ಕೂ ಕಾಯುವವರಲ್ಲ. ತಮ್ಮ ಕಲೆಯನ್ನು ವ್ಯಕ್ತಪಡಿಸುವುದಷ್ಟೇ ಮುಖ್ಯವಾಗಿರುತ್ತದೆ. ಇಂತಹ ವೇದಿಕೆಗಳು ಅರ್ಥಪೂರ್ಣವಾಗಿ ಯಶಸ್ವಿಯಾಗಿ, ಕಲಾವಿದರಿಗೆ ಹೆಚ್ಚೆಚ್ಚು ಅವಕಾಶಗಳು ದೊರೆಯಬೇಕು ಎಂದು ಆಶಿಸಿದರು.

ಜನಪದವನ್ನು ಉಸಿರೆಂದು ಭಾವಿಸಿ, ಜನಪದದಿಂದಲೇ ಗಳಿಸಿರುವುದನ್ನು ಜನಪದ ಸೇವೆಗೆ ಮೀಸಲಿಟ್ಟಿರುವ ಮೈಸೂರು ಗುರುರಾಜ್ ಅವರ ಕಾರ್ಯ ಶ್ಲಾಘನೀಯ. ತಾವೂ ಬೆಳೆಯುತ್ತಾ ತಮ್ಮೊಡನೆ ಅನೇಕ ಕಲಾವಿದರನ್ನು ಬೆಳೆಸಿದ್ದಾರೆ. ಜನಪದರು ನಾಳೆ ಮತ್ತು ನಿನ್ನೆಯ ಬಗ್ಗೆ ಚಿಂತಿಸದೆ ಪ್ರಸ್ತುತವಾಗಿ ಬದುವ ಮನಸ್ಥಿತಿ ಹೊಂದಿರುತ್ತಾರೆ. ಹಾಗಾಗಿ ಜನಪದ ಸಾಹಿತ್ಯ ಉಳಿದು–ಬೆಳೆಯಲು ಸಾಧ್ಯವಾಗಿದೆ ಎಂದರು.

ಜನಪದ ಜಂಗಮರ ಸ್ಮರಿಸುವ ಕಾರ್ಯ: ಜಿ.ಎಂ. ತಂದಾನಿ ಸಾಂಸ್ಕೃತಿಕ ಟ್ರಸ್ಟ್‌ನ ಮುಖ್ಯಸ್ಥರೂ ಆದ ಖ್ಯಾತ ಜನಪದ ಕಲಾವಿದ ಮೈಸೂರು ಗುರುರಾಜ್ ಮಾತನಾಡಿ, ಜನಪದ ಕಲಾವಿದರೂ ತಾವು ಎಷ್ಟೇ ಬಡವರಾದರೂ ಹಳ್ಳಿಗಳ ಮೇಲೆ ತಿರುಗಿ ಜನಪದ ಸಾಹಿತ್ಯವನ್ನು ಎಲ್ಲೆಡೆ ಪರಿಚಯಿಸಿ ಬೆಳೆಸುವ ಮೂಲಕ ಜನಪದ ಸಾಹಿತ್ಯಕ್ಕೆ ಮಹತ್ತರ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಜನಪದ ಕಲಾವಿದರನ್ನು ಸ್ಮರಿಸುವ ನಿಟ್ಟಿನಲ್ಲಿ ಜನಪದ ಜಂಗಮರ ಉತ್ಸವ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

'ಜಿಎಂಶ್ರೀ' ಪ್ರಶಸ್ತಿ ಪ್ರದಾನ: ಅನ್ನ ಚಿತ್ರದ ಕಥೆಗಾರ ಹನೂರು ಚನ್ನಪ್ಪ, ವೈದ್ಯ ಗಾಯಕ ಡಾ.ಮಾದೇಶ್, ತಂಬೂರಿ ಕಲಾವಿದ ಕೆಬ್ಬೆಪುರ ಸಿದ್ದರಾಜು, ಗಾಯಕಿ ಸರ್ವಮಂಗಳ, ಪರಿಸರ ಪ್ರೇಮಿ ಸಾಲುಮರದ ಸಿ.ಎಂ. ವೆಂಕಟೇಶ್, ರಂಗಭೂಮಿ ಸಂಗೀತ ನಿರ್ದೇಶಕ ಚಂದ್ರಶೇಖರ್ ಆಚಾರ್, ಕಂಸಾಳೆ ಕಲಾವಿದ ಮಹದೇವಯ್ಯ, ಸಾಹಸ ಕಲಾವಿದ ಸೋಮಣ್ಣ, ಗಾಯಕಿ ಸೌಮ್ಯ ಶ್ರೀರಾಮ್, ಗಾಯಕ ರಘು ನಾಮನಗರ, ಸಂಗೀತ ನಿರ್ದೇಶಕ ನಾಗೇಶ್ ಕಂದೇಗಾಲ ಅವರಿಗೆ 'ಜಿಎಂಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಿದ್ದಲಿಂಗಪುರ ಗ್ರಾಪಂ ಅಧ್ಯಕ್ಷ ಸಿ.ಮಾದೇಶ್, ಪಿಡಿಓ ಬಸವರಾಜು, ತಾಪಂ ಸದಸ್ಯ ರೇವಣ್ಣ, ಗ್ರಾಪಂ ಸದಸ್ಯರಾದ ಬಿ.ಎ.ಜ್ಯೋತಿ ಶಿವಮಲ್ಲು, ಕೆ.ಎಸ್.ಲಲಿತಮ್ಮ ಯತಿರಾಜ್ ಮತ್ತಿತರರು ಉಪಸ್ಥಿತರಿದ್ದರು.

ಹಾಫ್ ಮ್ಯಾರಥಾನ್: ಉಗಾಂಡಾದ ಜಾಕೋಬ್ ಕಿಪ್ಲಿಮೊ ವಿಶ್ವದಾಖಲೆ



ಪ್ಯಾರಿಸ್, ಫೆ.16– ಉಗಾಂಡಾದ ಜಾಕೋಬ್ ಕಿಪ್ಲಿಮೊ ಅವರು ಹಾಫ್ ಮ್ಯಾರಥಾನ್ ಓಟವನ್ನು 57 ನಿಮಿಷಗಳ ಒಳಗೆ ಕ್ರಮಿಸಿದ ಮೊದಲ ಅಥ್ಲೀಟ್ ಎನಿಸಿದರು. ಬಾರ್ಸಿಲೋನಾದಲ್ಲಿ ಭಾನುವಾರ ನಡೆದ ಈ ಓಟದಲ್ಲಿ ಅವರು 56 ನಿಮಿಷ 42 ಸೆಕೆಂಡುಗಳಲ್ಲಿ ಈ ಕೂರ ಕ್ರಮಿಸಿ ವಿಶ್ವದಾಖಲೆ ಬರೆದರು.

24 ವರ್ಷ ವಯಸ್ಸಿನ ಕಿಪ್ಲಿಮೊ ಎರಡು ಬಾರಿ ವಿಶ್ವ ಕ್ರಾಸ್ ಕಂಟ್ರಿ ಚಾಂಪಿಯನ್ ಆಗಿದ್ದಾರೆ. 2021 ರಿಂದ 2024ರ ಅವಧಿಯಲ್ಲಿ ಎರಡು ಬಾರಿ ದಾಖಲೆ ಹಾಫ್ ಮ್ಯಾರಥಾನ್ ದಾಖಲೆ ಸ್ಥಾಪಿಸಿದ್ದರು. ಇಥಿಯೋಪಿಯಾದ ಯೊಮಿಫ್ ಕೆಜೆಲ್ಚಾ ಹೆಸರಿನಲ್ಲಿದ್ದ (ಕಳೆದ ಅಕ್ಟೋಬರ್ ನಲ್ಲಿ 57ನಿ.30ಸೆ.) ದಾಖಲೆಯನ್ನು ಮುರಿದ ಕಿಪ್ಲಿಮೊ ಮತ್ತೆ ದಾಖಲೆಯ ಒಡೆಯರಾಗಿ ದ್ದಾರೆ. ಹಾಫ್ ಮ್ಯಾರಥಾನ್ ಓಟ 21.1 ಕಿ.ಮೀ. (13.1 ಮೈಲು) ದೂರ ಹೊಂದಿದೆ. ಗಾಳಿಯಿಲ್ಲದ, 13 ಡಿಗ್ರಿ ಸೆಲ್ಸಿಯಸ್‌ನ ತಂಪಾದ ವಾತಾವರಣ ದಲ್ಲಿ ಓಡಿದ ಕಿಪ್ಲಿಪೊ 'ನಾನು ಅತ್ಯುತ್ತಮ ಆರಂಭ ಪಡೆದೆ. ಆದರೆ ವಿಶ್ವದಾಖಲೆಯ ನಿರೀಕ್ಷೆಯಿರಲಿಲ್ಲ' ಎಂದರು. ಅವರು 15ನೇ ವಯಸ್ಸಿನಲ್ಲೇ ರಿಯೊ ಒಲಿಂಪಿಕ್ಸ್‌ನ 5000 ಮೀ. ಓಟದಲ್ಲಿ ಸ್ಪರ್ಧಿಸಿದ್ದರು.

ನಾರಾಯಣ ಆಸ್ಪತ್ರೆಯಿಂದ ಬಾಲ್ಯದ ಕ್ಯಾನ್ಸರ್ ಗೆದ್ದವರ ಸಮ್ಮಿಲನ

ಮೈಸೂರು, ಫೆ.16(ಎಸ್‌ಬಿಡಿ)– ಅಂತರಾಷ್ಟ್ರೀಯ ಬಾಲ್ಯದ ಕ್ಯಾನ್ಸರ್ ದಿನದ ಪ್ರಯುಕ್ತ ಮೈಸೂರಿನ ನಾರಾಯಣ ಆಸ್ಪತ್ರೆ ವತಿಯಿಂದ ಬಾಲ್ಯದ ಕ್ಯಾನ್ಸರ್ ಗೆದ್ದವರ ಸ್ನೇಹ ಸಮ್ಮಿಲನ ಕಾರ್ಯಕ್ರಮ ಆಯೋಜಿಸಲಾಗಿತ್ತು.

ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕ್ಯಾನ್ಸರ್ ಗೆದ್ದ 30ಕ್ಕೂ ಹೆಚ್ಚು ಮಕ್ಕಳು ಮತ್ತು ಅವರ ಕುಟುಂಬ ವರ್ಗದವರು ಪಾಲ್ಗೊಂಡು, ಅನುಭವ ಹಂಚಿಕೊಳ್ಳುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ಸಾರಿದರು.

ಈ ವೇಳೆ ಐಎಪಿ ಮೈಸೂರು ಘಟಕದ ಅಧ್ಯಕ್ಷರೂ ಆದ ಪೀಡಿಯಾಟ್ರಿಕ್ ಕನ್ಸಲ್ಟೆಂಟ್ ಡಾ.ಬಿ.ಹೆಚ್.ಶ್ರೀನಿವಾಸ್, ಮೈಸೂರು ನಾರಾಯಣ ಆಸ್ಪತ್ರೆಯ ಕ್ಲಿನಿಕಲ್ ಡೈರೆಕ್ಟರ್ ಡಾ.ಎಂ.ಎನ್.ರವಿ, ಪೀಡಿಯಾಟ್ರಿಕ್ ಕ್ರಿಟಿಕಲ್ ಕೇರ್ ಮೆಡಿಸಿನ್ ಕನ್ಸಲ್ಟೆಂಟ್ ಡಾ.ಯಶವಂತ್ ರಾಜು ಮತ್ತಿತರರು ಮಕ್ಕಳ ಧೈರ್ಯವನ್ನು ಶ್ಲಾಘಿಸಿದರಲ್ಲದೆ, ಚಿಕಿತ್ಸೆ ಹೊರತಾಗಿ ಭಾವನಾತ್ಮಕ ಔಷಧೀಯ ನೆರವಿನ ಮಹತ್ವದ ಬಗ್ಗೆ ಚರ್ಚಿಸಿದರು.

ಡಾ.ಬಿ.ಹೆಚ್.ಶ್ರೀನಿವಾಸ್ ಮಾತನಾಡಿ, ಮಕ್ಕಳಲ್ಲಿ ಕ್ಯಾನ್ಸರ್ ಕಾಣುವುದು ಬಹಳ ಬೇಸರದ ವಿಷಯ. ಆದರೆ ಈ ಮಕ್ಕಳು ತೋರುವ ಧೈರ್ಯ ಅಸಾಧಾರಣವಾಗಿದೆ. ಅತ್ಯಾಧುನಿಕ ಚಿಕಿತ್ಸೆ ಜೊತೆಗೆ ಭಾವನಾತ್ಮಕ ಮತ್ತು ಸಾಮಾಜಿಕ ಬೆಂಬಲದಿಂದ ಕ್ಯಾನ್ಸರ್‌ನಿಂದ ಗುಣಮುಖವಾಗುವ ಕಡೆಗೆ ಸಾಗಬಹುದಾಗಿದೆ. ಯಾವ ಮಗುವೂ ಒಂಟಿಯಲ್ಲ. ಎಲ್ಲರೂ ಈ ಹೋರಾಟದಲ್ಲಿ ಭಾಗಿಯಾದರೆ ರೋಗದ ವಿರುದ್ಧ ಗೆಲ್ಲಬಹುದಾಗಿದೆ ಎಂದರು.

ಡಾ.ಎಂ.ಎನ್.ರವಿ ಮಾತನಾಡಿ, ಬಾಲ್ಯದ ಕ್ಯಾನ್ಸರ್‌ಗೆ ಚಿಕಿತ್ಸೆ ನೀಡುವುದು ಕೇವಲ ವೈದ್ಯಕೀಯ ಕಾರ್ಯವಲ್ಲ. ಪ್ರತೀ ಹಂತದಲ್ಲೂ ಮಕ್ಕಳಿಗೆ ಸ್ಥೈರ್ಯ ತುಂಬಬೇಕು. ಅದಕ್ಕೆ ಪೂರಕವಾದ ವಾತಾವರಣ ಸೃಷ್ಟಿಸಬೇಕು. ಅವರು ಸಮಸ್ಯೆ ಬಗ್ಗೆ ಚಿಂತಿಸದೆ ನಿರಾಳವಾಗಿ ಇರಬೇಕು. ಆ ನಿಟ್ಟಿನಲ್ಲಿ ನಾರಾಯಣ ಆಸ್ಪತ್ರೆಯು ನೆರವಾಗಿದೆ. ಮಕ್ಕಳು ಮತ್ತು ಅವರ ಕುಟುಂಬಕ್ಕೆ ಧೈರ್ಯ ತುಂಬಿ, ಅವರ ಬೆನ್ನಿಗೆ ನಿಲ್ಲಲು ಬದ್ಧವಾಗಿದೆ ಎಂದು ತಿಳಿಸಿದರು.

ಪೀಡಿಯಾಟ್ರಿಕ್ ಹೆಮಟೋ–ಆಂಕೊಲಾಜಿ ವಿಭಾಗದ ಕನ್ಸಲ್ಟೆಂಟ್ ಡಾ.ತರಂಗಿಣಿ ದುರುಗಪ್ಪ ಮಾತನಾಡಿ, ಸೂಕ್ತ ಸಮಯದಲ್ಲಿ ಕ್ಯಾನ್ಸರ್ ಪತ್ತೆ ಮತ್ತು ಸೂಕ್ತ ಚಿಕಿತ್ಸೆಯಿಂದ ಕ್ಯಾನ್ಸರ್‌ನಿಂದ ಮುಕ್ತಿ ಹೊಂದಬಹುದಾಗಿದೆ. ವ್ಯಾಪಕ ಜಾಗೃತಿ ಹಾಗೂ ವೈದ್ಯಕೀಯ ಕ್ಷೇತ್ರದ ಅಭಿವೃದ್ಧಿ ಪರಿಣಾಮವಾಗಿ ಕ್ಯಾನ್ಸರ್ ಗೆಲ್ಲುವವರ ಸಂಖ್ಯೆ ಹೆಚ್ಚಾಗಿದೆ. ಚಿಕಿತ್ಸೆ ನಂತರ ಭಾವನಾತ್ಮಕ ನೆರವು ಕಲ್ಪಿಸುವ ನಿಟ್ಟಿನಲ್ಲಿ ಇಂತಹ ಸ್ನೇಹ ಸಮ್ಮಿಲನಗಳು ಬಹಳ ಮುಖ್ಯವಾಗಿವೆ ಎಂದರು.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಶ್ರೀ ಮಂಜುನಾಥ್ ಎಸ್. ಮತ್ತು ಮಾನಸ ಸಿ.ಆರ್. ರವರು ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ಕೆ.ಆರ್. ಪೇಟೆ ಟೌನ್, ಚಾಮುಂಡೇಶ್ವರಿ ನಗರ, 9ನೇ ಕ್ರಾಸ್, ಮನೆ ನಂ. ಕೆ/ಟಿ–250 ರಲ್ಲಿ ವಾಸವಾಗಿರುವ ಹಾಗು ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಶ್ರೀಮತಿ ರಾಜೇಶ್ವರಿ ಬಿ ಕೋಂ ಮಂಜುನಾಥ್ ಎಂ. ರವರಿಂದ ಕ್ರಯಕ್ಕೆ ಕೊಂಡುಕೊಳ್ಳಲು ತೀರ್ಮಾನಿಸಿರುತ್ತಾರೆ. ಷೆಡ್ಯೂಲ್ ಸ್ವತ್ತಿನ ಮೇಲೆ ಯಾ–ರಿಗಾದರೂ ಯಾವುದೇ ರೀತಿಯಾ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ತಂಟೆ–ತಕರಾರು, ಸಿವಿಲ್ ವ್ಯಾಜ್ಯ, ಇತ್ಯಾದಿ ಇದ್ದಲ್ಲಿ, ಈ ಪ್ರಕಟಣೆಯ ದಿನದಿಂದ 7 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ನಮ್ಮ ಕಛೇರಿ ವಿಳಾಸಕ್ಕೆ ತಲುಪಿಸತಕ್ಕದ್ದು, ತಪ್ಪಿದ್ದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಕೊಂಡುಕೊಳ್ಳುತ್ತಾರೆ. ಮೇಲ್ಕಂಡ ಅವಧಿಯ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನಮ್ಮ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ :ಮೈಸೂರು ತಾಲ್ಲೂಕು ಕಸಬಾ ಹೋಬಳಿ, ಹೊಸಹುಂಡಿ ಗ್ರಾಮದ ಸರ್ವೆ ನಂ. 41/10 (ಹಳೇ ಸರ್ವೆ ನಂ. 41) ರಲ್ಲಿಯ ವಾಣಿಜ್ಯ ಉದ್ದೇಶಕ್ಕೆ ಅನ್ಯಕ್ರಾಂತವಾಗಿ ಮೈಸೂರು, ಮುಡಾ ಕಛೇರಿಯಲ್ಲಿ ಏಕ ನಿವೇಶನದ ಅನುಮೋದನೆ ಪಡೆದಿರುವ 6 ಗುಂಟೆ (336.92 ಚ.ಮೀ.) ವಿಸ್ತೀರ್ಣವುಳ್ಳದ್ದಕ್ಕೆ ಕಡಕೊಳ ಪಟ್ಟಣ ಪಂಚಾಯಿತಿ ಖಾತಾ ನಂ. 717105036, ನಿರ್ಧರಣಾ ಸಂಖ್ಯೆ 1329/41/10ಕ್ಕೆ ಚೆಕ್ಕುಬಂದಿ: ಪೂರ್ವಕ್ಕೆ ಸರ್ವೆ ನಂ. 41/7, ಪಶ್ಚಿಮಕ್ಕೆ ಸರ್ವೆ ನಂ. 41/1, ಉತ್ತರಕ್ಕೆ ಪಾರ್ಕ್ ಮತ್ತು ರಸ್ತೆ, ದಕ್ಷಿಣಕ್ಕೆ ರಸ್ತೆವುಳ್ಳ ಆಸ್ತಿಯಾಗಿರುತ್ತದೆ.

Sd/- D.K BASAVEGOWDA,
M.Com., LL.B., (Roll No.KAR 706/88)
ADVOCATE , BS LAW CHAMBER
No.3, Shree Venkateshwara Marga, Javare gowda Layout, Bogadi, Mysuru - 570026
Ph: 876 277 1274, kbgowda61@gmail.com